ಸಂಪುಟ: 05 ಸಂಚಿಕೆ: 185 ಪುಟಗಳು: 08 ಗುರುವಾರ 18 ಸೆಪ್ಟೆಂಬರ್ 2025 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಸಾಧಿಸೆ ಸಾಧಿಸುತ್ತೇನೆ ಎಂಬ ಕಿಚ್ಚಿನ ಮನಸ್ಸಿನ ಮುಂದೆ ಯಾವುದೇ ಅಡೆತಡೆ ನಿಲ್ಲಲಾರದು

## ರೈತರ ಪರವಾಗಿ ಕೇಂದ್ರ ಕೃಷಿ ಸಚಿವರಿಗೆ ಸುರ್ಜೇವಾಲ ಪತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ರೈತರ ಸಮಸ್ಯೆಗಳ ಬಗ್ಗೆ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಪತ್ರವನ್ನು ಬರೆದಿದ್ದಾರೆ.

ಕರ್ನಾಟಕಕ್ಕೆ ಪೂರೈಸಬೇಕಿದ್ದ 3.36 ಲಕ್ಷ ಮೆಟ್ರಿಕ್ ಟನ್ ಯೂರಿಯಾ ರಸಗೊಬ್ಬರವನ್ನು ತ್ವರಿತವಾಗಿ ಪೂರೈಸಲು ಪತ್ರದಲ್ಲಿ ಒತ್ತಾಯ ಮಾಡಿದ್ದಾರೆ. ಡಿ2025-26ನೇ ಸಾಲಿನಲ್ಲಿ ರಾಜ್ಯದಲ್ಲಿ 114.40 ಲಕ್ಷ ಹೆಕ್ಟೇರ್ ನಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. 160.68 ಲಕ್ಷ ಟನ್ ಆಹಾರಧಾನ್ಯಗಳು ಮತ್ತು ಎಣ್ಣೆಕಾಳುಗಳ ಉತ್ಪಾದನಾ ಗುರಿ ಹೊಂದಲಾಗಿದೆ. ಮುಂಗಾರು ಹಂಗಾಮಿಗೆ 82.50 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ ಹೊಂದಲಾಗಿದ್ದು 81.85 ಲಕ್ಷ ಹೆಕ್ಟೇರ್ ಬಿತ್ತನೆಯಾಗಿದೆ. ಮುಂಗಾರು ಹಂಗಾಮಿನಲ್ಲಿ 26.77 ಲಕ್ಷ ಮೆಟ್ರಿಕ್ ಟನ್ ವಿವಿಧ ರಸಾಯನಿಕ ರಸಗೊಬ್ಬರಗಳ ಬೇಡಿಕೆ ಅಂದಾಜಿಸಲಾಗಿದೆ. ರಾಜ್ಯಗಳಿಗೆ ಅಗತ್ಯವಿರುವ ರಸಗೊಬ್ಬರ ಪೂರೈಕೆಯ ಸಂಪೂರ್ಣ ಹೊಣೆಗಾರಿಕೆ ಕೇಂದ್ರ ಸರ್ಕಾರದ್ದು ಎಂದರು.

## ಬೆಂಗಳೂರಿನ ರಸ್ತೆಗಳು ಗುಂಡಿಮಯ ಇದಕ್ಕೆ ಬಿಜೆಪಿಯೇ ಕಾರಣ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ರಸ್ತೆಗಳು ಗುಂಡಿಮಯ ಆಗಿರುವುದಕ್ಕೆ ಬಿಜೆಪಿ ಆಡಳಿತವೇ ಕಾರಣ ಎಂದು ಸಚಿವ ಡಾ. ಎಚ್ ಸಿ ಮಹದೇವಪ್ಪ ಆರೋಪ ಮಾಡಿದ್ದಾರೆ. ನಗರದ 69 ರಸ್ತೆಗಳಲ್ಲಿ ಅತಿ ಹೆಚ್ಚು ಗುಂಡಿಗಳು ಬಿದ್ದಿವೆ. ರಸ್ತೆಗಳ ಪರಿಸ್ಥಿತಿಯ ಬಗ್ಗೆ ಚರ್ಚೆಗಳು ನಡೆಯುತ್ತಿದ್ದು, ಉದ್ಯಮಿಗಳು ಆಕ್ಷೇಪ ಎತ್ತಿದ್ದಾರೆ. ಆದರೆ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಬದಲಾಗಿ ಸಚಿವ ಮಹದೇವಪ್ಪ, ಬಿಜೆಪಿ ಆಡಳಿತ ಕಡೆಗೆ ಬೊಟ್ಟು ಮಾಡಿದ್ದಾರೆ. 'ಬಿಜೆಪಿಯವರು ಇದ್ದಾಗ ಏನೂ ಕೆಲಸ ಮಾಡಿಲ್ಲ. ಹೀಗಾಗಿ ರಸ್ತೆಗಳು ಹಾಳಾಗಿವೆ' ಎಂದು ಪ್ರತಿಕ್ರಿಯಿಸಿದ್ದಾರೆ. ಬಿಜೆಪಿಯವರು ಇರೋ ರಸ್ತೆಯನ್ನು ಗುಂಡಿ ಮಾಡಿ ಹೋಗಿದ್ದಾರೆ ಅಂತ ನಾನು ಹೇಳ್ತಿಲ್ಲ. 700 ರಿಂದ 800 ಕಿಮೀ ರಸ್ತೆ ನಾನೇ ಲೋಕೋಪಯೋಗಿ ಸಚಿವನಾಗಿದ್ದಾಗ ಮಾಡಿದ್ದೆ. ಮೂಲಸೌಕರ್ಯವನ್ನು ನಾವು ಹೆಚ್ಚಳ ಮಾಡಿದ್ದೇವೆ ಹಾಗೂ ಮಾಡುತ್ತೇವೆ. ಈಗಾಗಲೇ ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ರಸ್ತೆಗುಂಡಿ ಸಮಸ್ಯೆ ಸರಿಪಡಿಸಲು ಸಭೆ ಮಾಡಿದ್ದಾರೆ, ಕೆಲಸಗಳೂ ನಡೆಯುತ್ತಿವೆ. ಬೆಂಗಳೂರಿನ ವ್ಯವಸ್ಥೆ ಹಾಳಾಗಲು ನಾವು ಬಿಡುವುದಿಲ್ಲ ಎಂದರು.

## ಅರಣ್ಯವಾಸಿಗಳ ಸ್ಥಳಾಂತರ; ಅನರ್ಹರಿಗೆ ಪರಿಹಾರ

• ಉದಯವಾಹಿನಿ, ಬೆಂಗಳೂರು

ಬೆಳಗಾವಿ ಜಿಲ್ಲೆ ಖಾನಾಪುರ ತಾಲ್ಲೂಕು ಭೀಮಗಡ ಅಭಯಾರಣ್ಯದ ಅರಣ್ಯವಾಸಿಗಳ ಸ್ಥಳಾಂತರದಲ್ಲಿ ಅಕ್ರಮ ನಡೆದಿರುವುದು ಅರಣ್ಯ ಇಲಾಖೆ ಪತ್ತೆ ಮಾಡಿದೆ. ಭೀಮಗಡ ಅಭಯಾರಣ್ಯ ವ್ಯಾಪ್ತಿ ಗವಾಳಿ ಗ್ರಾಮದ ತಳೇವಾಡಿ ಮಜಿರೆಯಲ್ಲಿ ಈ ಅಕ್ರಮ ನಡೆದಿದೆ. ಇಲ್ಲಿ ಸ್ಥಳಾಂತರಕ್ಕೆ ಅರ್ಜಿ ಸಲ್ಲಿಸಿದ್ದ 57 ಕುಟುಂಬಗಳ ಪೈಕಿ 32 ಕುಟುಂಬಗಳು ಸ್ಥಳಾಂತರಗೊಳ್ಳಲು ಒಪ್ಪಿಗೆ ನೀಡಿದ್ದು, 27 ಕುಟುಂಬಗಳಿಗೆ ಈಗಾಗಲೇ ಪರಿಹಾರ ವಿತರಿಸಲಾಗಿದೆ.

ಆದರೆ, ಪರಿಹಾರ ಪಡೆದಿರುವ ಕುಟುಂಬಗಳ ಪೈಕಿ ಹಲವು ಕುಟುಂಬಗಳು ಪರಿಹಾರ ಪಡೆಯಲು ಕಾನೂನು ಪ್ರಕಾರ ಅನರ್ಹ ಎಂಬುದು ತಡವಾಗಿ ಇಲಾಖೆಯ ಗಮನಕ್ಕೆ ಬಂದಿದೆ ಎಂದು ಅರಣ್ಯ ಇಲಾಖೆಯ ಮೂಲಗಳು ತಿಳಿಸಿವೆ. ತಳೇವಾಡಿಯ ಸರ್ವೇ ಸಂಖ್ಯೆ 49,49,50,52 ರಲ್ಲಿ 8.17 ಹೆಕ್ಟೇರ್ ಜಮೀನನ್ನು ಹಾಸನ ಜಿಲ್ಲೆಯ ಎಂ.ಎಂ.ಸುರೇಶ್ ಎಂಬುವರಿಗೆ ಪರಿಹಾರಾತ್ಮಕ ಅರಣೀಕರಣ ಉದ್ದೇಶಕ್ಕಾಗಿ ಪರಭಾರೆ ಮಾಡಿದ್ದು, ಈ ಜಮೀನಿನಲ್ಲಿ ವಾಸವಿರುವ ಕುಟುಂಬಗಳಿಗೂ ಪರಿಹಾರದ ಮೊತ್ತ ತಲಾ 10 ಲಕ್ಷ ನೀಡಲಾಗಿದೆ. ಕಾನೂನಿನ ಪ್ರಕಾರ ಇದಕ್ಕೆ ಅವಕಾಶವಿಲ್ಲ ಎಂದು ಮೂಲಗಳು ಹೇಳಿವೆ.

## ಮುಡಾ ಪ್ರಕರಣ: 26ರವರೆಗೆ ಇ.ಡಿ ಕಸ್ಟಡಿಗೆ ದಿನೇಶ್

• ಉದಯವಾಹಿನಿ, ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ಅಕ್ರಮವಾಗಿ ನಿವೇಶನಗಳನ್ನು ಹಂಚಿಕೆ ಮಾಡಿದ್ದ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯದಿಂದ (ಇ.ಡಿ) ಬಂಧನಕ್ಕೆ ಒಳಗಾಗಿರುವ ಮುಡಾ ಆಯುಕ್ತರಾಗಿದ್ದ ಜಿ.ಟಿ.ದಿನೇಶ್ ಕುಮಾರ್ ಅವರನ್ನು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ 9 ದಿನ ಇ.ಡಿ ಕಸ್ಟಡಿಗೆ ನೀಡಿ ಆದೇಶಿಸಿದೆ. ದಿನೇಶ್ ಕುಮಾರ್ ಅವರನ್ನು ಇ.ಡಿ ಅಧಿಕಾರಿಗಳು ಮಂಗಳವಾರ (ಸೆ.16) ಬಂಧಿಸಿದ್ದರು. ಬುಧವಾರ ಸಂಜೆ 4.30ಕ್ಕೆ, 'ಶಾಸಕರು ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆ'ಯ ವಿಶೇಷ ನ್ಯಾಯಾಲಯದ ನ್ಯಾಯಾಧೀಶ ಸಂತೋಷ ಗಜಾನನ ಭಟ್ ಅವರ ಮುಂದೆ ತೆರೆದ ನ್ಯಾಯಾಲಯದಲ್ಲಿ ಹಾಜರುಪಡಿಸಲಾಯಿತು. ಈ ವೇಳೆ ಆರೋಪಿ ಪರ ವಕೀಲರು ಮಧ್ಯಂತರ ಜಾಮೀನಿಗೆ ಮನವಿ ಮಾಡಿದರು. ಆದರೆ, ಇದನ್ನು ತೀವ್ರವಾಗಿ ವಿರೋಧಿಸಿದ ಇ.ಡಿ ಪರ ಹಾಜರಿದ್ದ ಹೈಕೋರ್ಟ್ ವಕೀಲ ಮಧುಕರ ಎಂ.ದೇಶಪಾಂಡೆ, ಆರೋಪಿಯನ್ನು 14 ದಿನ ಕಸ್ಟಡಿಗೆ ನೀಡುವಂತೆ ಮನವಿ ಮಾಡಿದರು.

## ಪರಮಾಣು ಬೆದರಿಕೆಗಳಿಗೆ ಹೆದರುವುದಿಲ್ಲ

# ನಮೋ ನವ ಭಾರತ

ಉಗ್ರರ ಮನೆಗೆ ನುಗ್ಗಿ ಹೊಡೆಯುತ್ತೇವೆ

ಪಾಕಿಸ್ತಾನಕ್ಕೆ ಎಚ್ಚರಿಕೆ ನೀಡಿದ ಮೋದಿ

ಅಣ್ವಸ್ತ್ರ ಬೆದರಿಕೆಗೆ ಅಂಜಲ್ಲ

ನಿರ್ಮಾಣವಾಗಲಿದೆ ಬೃಹತ್ ಪಿಎಂ ಮಿತ್ರ ಪಾರ್ಕ್

**ದೃಢ ಸಂಕಲ್ಪಕ್ಕೆ ಸಾಕ್ಷಿ**
ಪ್ರಧಾನಿ ಮೋದಿ ಅವರು ತಮ್ಮ ಭಾಷಣದಲ್ಲಿ ಹೈದರಾಬಾದ್ ವಿಮೋಚನಾ ದಿನವನ್ನು ಉಲ್ಲೇಖಿಸಿ, ಇಂದು ಸೆಪ್ಟೆಂಬರ್ 17, ದೇಶವು ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ದೃಢ ಸಂಕಲ್ಪಕ್ಕೆ ಸಾಕ್ಷಿಯಾಯಿತು. ಅಂದರೆ ಇಂದು ಭಾರತೀಯ ಸೇನೆ ಹಲವಾರು ದೌರ್ಜನ್ಯಗಳಿಂದ ಹೈದರಾಬಾದ್‌ನನ್ನು ಮುಕ್ತಗೊಳಿಸಿ, ಅವರ ಹಕ್ಕುಗಳನ್ನು ರಕ್ಷಿಸುವ ಮೂಲಕ ಭಾರತದ ಹೆಮ್ಮೆಯನ್ನು ಪುನರ್ ಸ್ಥಾಪಿಸಿತು. ಈ ಕಾರಣಕ್ಕಾಗಿ ನಾವು ಈ ದಿನವನ್ನು 'ಹೈದರಾಬಾದ್ ವಿಮೋಚನಾ ದಿನ'ವೆಂದು ಆಚರಿಸಲು ಆರಂಭಿಸಿದ್ದೇವೆ. ಎಂದರು.

1 ಪರಮಾಣು ಬೆದರಿಕೆಗೆ ನವಭಾರತ ಹೆದರುವುದಿಲ್ಲ

2 ಧಾರ್ ಸಮಾವೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಗುಡುಗು

3 ಭಾರತದ ತಂಟೆಗೆ ಬಂದರೆ ತಕ್ಕ ಶಾಸ್ತಿ. ಈಗಾಗಲೇ ಹಲವು ಬಾರಿ ಸಾಬೀತು

4 ಪೆಹಲ್ಗಾಮ್ ದಾಳಿಗೆ ಆಪರೇಷನ್ ಸಿಂದೂರ್ ಮೂಲಕ ಸೂಕ್ತ ಉತ್ತರ

**ಪಿಎಂ ಮಿತ್ರ ಪಾರ್ಕ್‌ಗಳ ನಿರ್ಮಾಣ**

ಕರ್ನಾಟಕ(ಕಲಬುರಗಿ), ಮಧ್ಯಪ್ರದೇಶ, ತಮಿಳುನಾಡು (ವಿರುಧುನಗರ), ತೆಲಂಗಾಣ, ಗುಜರಾತ್, ಉತ್ತರ ಪ್ರದೇಶ, (ಲಕ್ನೋ) ಮತ್ತು ಮಹಾರಾಷ್ಟ್ರ ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿ ಇಂದು ಪಿಎಂ ಮಿತ್ರ ಪಾರ್ಕ್ ಅನ್ನು ಪ್ರಧಾನಿ ಮೋದಿ ಉದ್ಘಾಟಿಸಿದರು. ಈ ಪಾರ್ಕ್ ಮೂಲಕ ರೈತರು ನ್ಯಾಯಯುತ ಪರಿಹಾರವನ್ನು ಪಡೆಯಲಿದ್ದಾರೆ. ಉದ್ಯಮ ಹೊಸ ವೇಗ ಪಡೆಯಲಿದೆ. ಮುಂದುವರೆದು ಮಾತನಾಡಿ, ಹತ್ತಿ, ರೇಷ್ಮೆಯಂತಹ ಅಗತ್ಯ ವಸ್ತುಗಳು ಪಿಎಂ ಮಿತ್ರ ಪಾರ್ಕ್‌ನಲ್ಲಿ ಲಭ್ಯವಿರುತ್ತವೆ. ಇನ್ಮೇಲೆ ಗುಣಮಟ್ಟದ ಪರಿಶೀಲನೆ ಸುಲಭವಾಗುತ್ತದೆ. ಮಾರುಕಟ್ಟೆಯಲ್ಲಿ ನಿಮ್ಮ ವ್ಯಾಪ್ತಿ ಹೆಚ್ಚುತ್ತದೆ. ನೂಲುವುದು, ವಿನ್ಯಾಸ, ಸಂಸ್ಕರಣೆ ಮತ್ತು ರಫ್ತು ಎಲ್ಲವೂ ಇಲ್ಲಿಂದಲೇ ಆಗುತ್ತದೆ. ಧಾರ್ ಜಾಗತಿಕ ಜವಳಿ ಮಾರುಕಟ್ಟೆಯಲ್ಲಿ ಮಿಂಚಲಿದೆ ಎಂದು ಹೇಳಿದರು.

• ಉದಯವಾಹಿನಿ, ದೆಹಲಿ

ಪೆಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತ ನಡೆಸಿದ ಆಪರೇಷನ್ ಸಿಂದೂರ್ ಕಾರ್ಯಾಚರಣೆಯ ಯಶಸ್ಸನ್ನು ಶ್ಲಾಘಿಸಿದ ಪ್ರಧಾನಿ ಮೋದಿ ದೇಶ ಎಂದಿಗೂ ಪರಮಾಣು ಬೆದರಿಕೆಗಳಿಗೆ ಬಗ್ಗುವುದಿಲ್ಲ ಎಂದು ಪುನರುಚ್ಚರಿಸಿದರು. ಭಾರತ ನಡೆಸಿದ ಆಪರೇಷನ್ ಸಿಂದೂರ್ ಕಾರ್ಯಾಚರಣೆಯ ವೇಳೆ ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿನ ತನ್ನ ಭಯೋತ್ಪಾದಕ ಶಿಬಿರ ಸಾಕಷ್ಟು ಹಾನಿಗೊಳಗಾಗಿದೆ ಎಂದು ಭಯೋತ್ಪಾದಕ ಗುಂಪು ಜೈಶ್-ಎ-ಮೊಹಮ್ಮದ್ ಈಗಾಗಲೇ ಒಪ್ಪಿಕೊಂಡಿದ್ದು, ಇದು ಉಗ್ರ ಪೋಷಕ ಪಾಕ್‌ನ ಬಣ್ಣ ಬಯಲು ಮಾಡಿದೆ ಎಂದು ಅವರು ಗುಡುಗಿದರು.

75ನೇ ಹುಟ್ಟುಹಬ್ಬದ ಸಂದರ್ಭದಲ್ಲಿ ಮಧ್ಯಪ್ರದೇಶದ ಧಾರ್‌ನಲ್ಲಿ ಹಲವು ಯೋಜನೆಗಳಿಗೆ ಚಾಲನೆ ನೀಡಿದ ಬಳಿಕ ಅವರು ಸಭೆಯನ್ನುದ್ದೇಶಿಸಿ ಮಾತನಾಡಿದರು. ಇದು ಹೊಸ ಭಾರತ. ಯಾವುದೇ ದುಷ್ಟ ಶಕ್ತಿಗೆ ಹೆದರುವುದಿಲ್ಲ. ಭಾರತೀಯ ಸೇನೆ ಶತ್ರುಗಳ ಮನೆಗೆ ನುಗ್ಗಿ ಅವರನ್ನು ಹೊಡೆದುರುಳಿಸಿವ ಸಾಮರ್ಥ್ಯ ಹೊಂದಿದೆ. ಹೊಸ ಭಾರತ ಪರಮಾಣು ಬೆದರಿಕೆಗೆ ಹೆದರುವುದಿಲ್ಲ ಎಂದು ಗುಡುಗಿದರು. ಪಾಕಿಸ್ತಾನ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಈ ಹಿಂದೆ ಹಾಕಿದ್ದ ಪರಮಾಣು ಶಸ್ತ್ರಾಸ್ತ್ರ ಬಳಕೆಯ ಬೆದರಿಕೆಯನ್ನು ಉಲ್ಲೇಖಿಸಿ ಮೋದಿ ಈ ಹೇಳಿಕೆ ನೀಡಿದರು. ಈ ಹಿಂದೆ ಅಸಿಮ್ ಮುನೀರ್, ಭಾರತದೊಂದಿಗೆ ನಡೆಯುವ ಭವಿಷ್ಯದ ಯುದ್ಧದಲ್ಲಿ ಇಸ್ಲಾಮಾಬಾದ್ ಅಸ್ತಿತ್ವಕ್ಕೆ ಬೆದರಿಕೆ ಉಂಟಾದರೆ ಅರ್ಧ ಪ್ರಪಂಚವನ್ನು ನಾಶಮಾಡುವುದಾಗಿ ಹೇಳಿದ್ದರು. ಪಾಕಿಸ್ತಾನಿ ಭಯೋತ್ಪಾದಕನೊಬ್ಬ ಭಾರತದ ಆಪರೇಷನ್ ಸಿಂಧೂರ್‌ನಿಂದ ಹೇಗೆ ಜೈಶ್ ಸಂಘಟನೆಯ ಮುಖ್ಯಸ್ಥನ ಕುಟುಂಬ ಛಿದ್ರವಾಯಿತು ಎಂಬುದನ್ನು ವಿವರಿಸಿದ್ದಾನೆ. ಈ ಮೂಲಕ ಪಾಕಿಸ್ತಾನದಲ್ಲಿ ಭಾರತ ಉಗ್ರರ ನೆಲೆಗಳನ್ನು ಧ್ವಂಸ ಮಾಡಿದ್ದಕ್ಕೆ ಸಾಕ್ಷಿ ನುಡಿದಿದ್ದಾನೆ. ಇದು ಹೊಸ ಭಾರತ. ಈ ಭಾರತ ಯಾವುದೇ ಪರಮಾಣು ಬೆದರಿಕೆಗಳಿಗೆ ಹೆದರದ ದೇಶ. ಇದು ಶತ್ರುಗಳ ಮನೆ ಬಾಗಿಲಿಗೆ ಹೋಗಿ ಉಗ್ರರನ್ನು ಸದೆಬಡಿಯುವ ದೇಶ ಎಂದು ಮೋದಿ ಹೇಳಿದ್ದಾರೆ.

ಭಾರತ ಮಾತೆಯ ಭದ್ರತೆಗೆ ರಾಷ್ಟ್ರವು ಅತ್ಯಂತ ಆದ್ಯತೆ ನೀಡುತ್ತದೆ. ಪಾಕಿಸ್ತಾನಿಯ ಭಯೋತ್ಪಾದಕರು ನಮ್ಮ ಸಹೋದರಿಯರು ಮತ್ತು ಹೆಣ್ಣುಮಕ್ಕಳ ಸಿಂಧೂರವನ್ನು ಅಳಿಸಿದರು. ನಾವು ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಡೆಸಿ, ಭಯೋತ್ಪಾದಕ ಶಿಬಿರಗಳನ್ನು ನಾಶಪಡಿಸಿದ್ದೇವೆ. ನಮ್ಮ ಕೆಚ್ಚೆದೆಯ ಸಶಸ್ತ್ರ ಪಡೆಗಳು ಕಣ್ಣು ಮಿಟುಕಿಸುವುದರೊಳಗೆ ಪಾಕಿಸ್ತಾನವನ್ನು ಮಂಡಿಯೂರಿ ನಿಲ್ಲಿಸಿದವು. ಇದು ನವ ಭಾರತ. ಇದು ಯಾರ ಪರಮಾಣು ಬೆದರಿಕೆಗಳಿಗೂ ಹೆದರುವುದಿಲ್ಲ'' ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಸೆಪ್ಟೆಂಬರ್ 22ರ ನವರಾತ್ರಿಯ ಮೊದಲ ದಿನದಿಂದ ಹೊಸ ಜಿಎಸ್‌ಟಿ ಸುಧಾರಣೆಗಳನ್ನು ಜಾರಿಗೆ ತರಲಾಗುವುದು. ಭಾರತೀಯ ಉತ್ಪನ್ನಗಳನ್ನು ಖರೀದಿಸುವ ಮೂಲಕ ನಾವು ಅವುಗಳ ಲಾಭವನ್ನು ಪಡೆದುಕೊಳ್ಳಬೇಕು. ಪ್ರತಿ ಅಂಗಡಿಯಲ್ಲಿ 'ಇದು ಸ್ವದೇಶಿ ವಸ್ತು ಎಂದು ಹೆಮ್ಮೆಯಿಂದ ಹೇಳಿ' ಎಂದು ಬರೆದಿರುವ ಫಲಕ ಇರಬೇಕು. ರಾಜ್ಯ ಸರ್ಕಾರಗಳು ಇದಕ್ಕಾಗಿ ಅಭಿಯಾನವನ್ನು ನಡೆಸಬೇಕು'' ಎಂದು ಮೋದಿ ಕರೆನೀಡಿದ್ದಾರೆ. ಜೈಶ್‌ನ ಉನ್ನತ ಕಮಾಂಡರ್ ಮಸೂದ್ ಇಲಿಯಾಸ್ ಕಾಶ್ಮೀರಿ, ಮೇ 7ರಂದು ಬಹಾವಲ್ಪುರ್ ಪ್ರಧಾನ ಕಚೇರಿ ಜಾಮಿಯಾ ಮಸೀದಿ ಸುಭಾನ್ ಅಲ್ಲಾ ಮೇಲೆ ನಡೆದ ಭಾರತದ ದಾಳಿಯಲ್ಲಿ ಜೈಶ್ ಮುಖ್ಯಸ್ಥ ಮಸೂದ್ ಅಜರ್ ಅವರ ಕುಟುಂಬ ಸದಸ್ಯರು ಸಾವನ್ನಪ್ಪಿದ್ದಾರೆ ಎಂದು ಒಪ್ಪಿಕೊಂಡಿರುವ ವಿಡಿಯೋ ವೈರಲ್ ಆಗಿತ್ತು. ಏಪ್ರಿಲ್ 22ರಂದು ಪೆಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಈ ಕಾರ್ಯಾಚರಣೆಯನ್ನು ಪ್ರಾರಂಭಿಸಲಾಯಿತು, ಇದರಲ್ಲಿ 25 ಪ್ರವಾಸಿಗರು ಸಾವನ್ನಪ್ಪಿದರು.



**ಆಧುನಿಕ ಭಾರತದ ಅಭಿವೃದ್ಧಿಗೆ ನಾಲ್ಕು ಬಲವಾದ ಸ್ತಂಭಗಳು**

ಆಧುನಿಕ ಭಾರತದ ಅಭಿವೃದ್ಧಿಗೆ ನಾಲ್ಕು ಬಲವಾದ ಸ್ತಂಭಗಳಿವೆ: ಅದುವೇ, ಮಹಿಳಾ ಶಕ್ತಿ, ಯುವ ಶಕ್ತಿ, ಬಡವರು ಮತ್ತು ರೈತರು. ಈ ನಾಲ್ಕು ಸ್ತಂಭಗಳನ್ನು ಬಲಪಡಿಸುವ ದಿಸೆಯಲ್ಲಿ ನಾವು ನಿರಂತರ ಕೆಲಸ ಮಾಡುತ್ತಿದ್ದೇವೆ ಎಂದು ಹೇಳಿದರು. ಧಾರ್‌ನಲ್ಲಿ 'ಆರೋಗ್ಯ ಮಹಿಳಾ ಸಬಲೀಕರಣ ಕುಟುಂಬ ಅಭಿಯಾನಕ್ಕೆ ಚಾಲನೆ ನೀಡಿದ ಅವರು, ಈ ಅಭಿಯಾನವು ಧಾರ್‌ನಲ್ಲಿ ಆರಂಭಗೊಂಡಿದ್ದು, ಇಡೀ ದೇಶದ ಹಿತಕ್ಕಾಗಿ ರೂಪುಗೊಂಡಿದೆ. ಅದ್ರಂತೆ, ಈ ಅಭಿಯಾನದ ಅಂಗವಾಗಿ ಶಿಬಿರಗಳನ್ನು ಸ್ಥಾಪಿಸಲಾಗುತ್ತದೆ, ಅಲ್ಲಿ ಆರೋಗ್ಯ ಪರೀಕ್ಷೆಗಳು ಮತ್ತು ಔಷಧಿಗಳನ್ನೆಲ್ಲ ಉಚಿತವಾಗಿ ನೀಡಲಾಗುತ್ತದೆ. ಈ ಶಿಬಿರಗಳು ಅ.2ರಂದು, ವಿಜಯದಶಮಿಯ ವಿಶೇಷ ಸಂದರ್ಭದಲ್ಲಿ ಪ್ರಾರಂಭವಾಗಲಿವೆ.

**ಮಸೂದ್ ಅಜರ್ ಕುಟುಂಬದ ಎಲ್ಲರೂ ಹತ ಎಂದು ಕಾಶ್ಮೀರಿ**

ಜೈಶ್‌ನ ಉನ್ನತ ಕಮಾಂಡರ್ ಮಸೂದ್ ಇಲಿಯಾಸ್ ಕಾಶ್ಮೀರಿ, ''ಮೇ 7ರಂದು ಬಹಾವಲ್ಪುರ್ ಪ್ರಧಾನ ಕಚೇರಿಯಾದ ಜಾಮಿಯಾ ಮಸೀದಿ ಸುಭಾನ್ ಅಲ್ಲಾ ಮೇಲೆ ನಡೆದ ದಾಳಿಯಲ್ಲಿ ಜೈಶ್ ಮುಖ್ಯಸ್ಥ ಮಸೂದ್ ಅಜರ್ ಅವರ ಕುಟುಂಬ ಸದಸ್ಯರು ಸಾವನ್ನಪ್ಪಿದ್ದಾರೆ ಎಂದು ಒಪ್ಪಿಕೊಂಡಿದ್ದ''. ಇನ್ನು ಏಪ್ರಿಲ್ 22 ರಂದು ಪೆಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರವಾಗಿ ಭಾರತದ ಭದ್ರತಾ ಪಡೆಗಳು ಈ ಕಾರ್ಯಾಚರಣೆಯನ್ನು ಪ್ರಾರಂಭಿಸಿದ್ದವು.

## ಯತ್ನಾಳ್‌ಗೆ ಹೈಕೋರ್ಟ್‌ನಿಂದ ಬಿಗ್ ರಿಲೀಫ್

• ಉದಯವಾಹಿನಿ, ಬೆಂಗಳೂರು

ಮೈಸೂರು ದಸರಾ ಉದ್ಘಾಟನೆಗೆ ಲೇಖಕಿ ಬಾನು ಮುಷ್ತಾಕ್ ಅವರನ್ನು ಅಹ್ವಾನಿಸುವುದನ್ನು ಖಂಡಿಸುವ ಭರಾಟೆಯಲ್ಲಿ ದಲಿತ ಮಹಿಳೆಗೆ ಅವಮಾನ ಮಾಡಿದ್ದ ಆರೋಪದ ಮೇರೆಗೆ ಬಿಜೆಪಿಯ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ದಾಖಲಾಗಿದ್ದ ಪ್ರಕರಣದಲ್ಲಿ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಕೊಪ್ಪಳ ನಗರ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ವಜಾಗೊಳಿಸಬೇಕೆಂದು ಕೋರಿ ಯತ್ನಾಳ್ ಸಲ್ಲಿಸಿರುವ ಅರ್ಜಿ ಕುರಿತು ನ್ಯಾಯಮೂರ್ತಿ ಎಂ.ಐ. ಅರುಣ್ ಅವರಿದ್ದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ವಾದ-ಪ್ರತಿವಾದ ಆಲಿಸಿದ ನ್ಯಾಯಾಲಯ ಪೊಲೀಸರು ಯತ್ನಾಳ್ ವಿರುದ್ಧ ಬಲವಂತದ ಕ್ರಮ ಕೈಗೊಳ್ಳಬಾರದು. ಆದರೆ, ಯತ್ನಾಳ್ ತನಿಖೆಗೆ ಸಹಕರಿಸಬೇಕು ಎಂದು ಆದೇಶಿಸಿ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿತು. ಯತ್ನಾಳ್ ಪರ ವಾದ ಮಂಡಿಸಿದ ವಕೀಲ ವೆಂಕಟೇಶ್ ದಳವಾಯಿ, ಅರ್ಜಿದಾರರು ನೀಡಿದ್ದಾರೆನ್ನಲಾದ ಹೇಳಿಕೆಯ ಪೆನ್‌ಡ್ರೈವ್ ಸಲ್ಲಿಸಿದ್ದೇನೆ. ಮೊಬೈಲ್‌ನಲ್ಲೂ ಯತ್ನಾಳ್ ಹೇಳಿಕೆಯನ್ನು ಪೀಠ ಪರಿಶೀಲಿಸಬಹುದು. ಅವರ ಹೇಳಿಕೆ ತಿರುಚಲಾಗಿದೆ, ತಪ್ಪಾಗಿ ಭಾವಿಸಿ, ಪ್ರಕರಣ ದಾಖಲಿಸಲಾಗಿದೆ, ಎಂದರು.

ಅದಕ್ಕೆ ಆಕ್ಷೇಪಿಸಿದ ವಿಶೇಷ ಸರಕಾರಿ ಅಭಿಯೋಜಕ ಬಿ.ಎ. ಬೆಳ್ಳಿಯಪ್ಪ ಮತ್ತು ಹೆಚ್ಚುವರಿ ಸರಕಾರಿ ಅಭಿಯೋಜಕ ಬಿ.ಎನ್. ಜಗದೀಶ್, ಇಡೀ ಜಗತ್ತು ಜಾಗತಿಕ ಗ್ರಾಮವಾಗಿದೆ. ಮನುಷ್ಯರನ್ನು ಮನುಷ್ಯರು ಎಂದು ಪರಿಗಣಿಸುವುದನ್ನು ಅವರು ಕಲಿಯಬೇಕಿದೆ ಎಂದರು.



ಜಗದೀಶ್ ಮತ್ತು ದಳವಾಯಿ ಅವರನ್ನು ನ್ಯಾಯಪೀಠದ ಮುಂದೆ ಆಹ್ವಾನಿಸಿ, ಅವರ ಸಮ್ಮುಖದಲ್ಲಿ ಮೊಬೈಲ್‌ನಲ್ಲಿ ಯತ್ನಾಳ್ ಹೇಳಿಕೆಯನ್ನು ಪೀಠ ಆಲಿಸಿತು. ಕೆಲ ಕಾಲ ಗೌಪ್ಯವಾಗಿಯೂ ವಿಚಾರಣೆ ನಡೆಸಿತು. ಬಳಿಕ ಸನಾತನ ಧರ್ಮ ಅನುಯಾಯಿಗಳು ಮಾತ್ರ ದಸರಾ ಉದ್ಘಾಟಿಸಬೇಕು. ದಲಿತ ಮಹಿಳೆಯೂ ಅದನ್ನು ಉದ್ಘಾಟಿಸಲಾಗದು. ಹೀಗಿರುವಾಗ, ಬೇರೆ ಧರ್ಮದವರು ಅದನ್ನು ಉದ್ಘಾಟಿಸಲಾಗದು ಎಂದು ತಪ್ಪಾಗಿ ವರದಿ ಮಾಡಿದ್ದು, ಸನಾತನ ಧರ್ಮಕ್ಕೆ ಸೇರಿದ ವ್ಯಕ್ತಿ ಮಾತ್ರ ದಸರಾ ಉದ್ಘಾಟಿಸಬೇಕು. ದಲಿತ ಸಮುದಾಯಕ್ಕೆ ಸೇರಿದ ಮಹಿಳೆ ದಸರಾ ಉದ್ಘಾಟಿಸುವಂತಿಲ್ಲ ಎಂದು ಹೇಳಿಕೆ ತಪ್ಪಾಗಿ ವರದಿ ಮಾಡಲಾಗಿದೆ, ಎಂದು ಆದೇಶಿಸಿತು. ಯಾವುದೇ ರಾಜಕೀಯ ಪಕ್ಷವಾಗಿರಲಿ, ಸಮಾಜದ ಒಂದು ಸಮುದಾಯದ ಜನರನ್ನು ಓಲೈಸುತ್ತಿರುವುದರಿಂದ ಈ ಸಮಸ್ಯೆಯಾಗುತ್ತಿದೆ. ಭಾರತೀಯರನ್ನು ಭಾರತೀಯ ಎಂದು ನೋಡದೆ, ಆ ಜಾತಿ-ಈ ಜಾತಿ ಎಂದು ನೋಡುವುದರಿಂದ ಹೀಗಾಗುತ್ತಿದೆ. ಇದು ನಮ್ಮ ದೈನಂದಿನ ಬದುಕಿಗೆ ಹಾನಿ ಮಾಡುತ್ತಿದೆ ಎಂಬುದನ್ನು ಅರ್ಥಮಾಡಿಕೊಳ್ಳುತ್ತಿಲ್ಲ, ಎಂದು ಪೀಠ ಮೌಖಿಕವಾಗಿ ಬೇಸರ ವ್ಯಕ್ತಪಡಿಸಿತು.

ಯತ್ನಾಳ್ ನಿರಂತರವಾಗಿ ಪ್ರಚೋದನಕಾರಿ ಹಾಗೂ ಕೋಮು ಸಂಘರ್ಷ ಉಂಟು ಮಾಡುವ ಹೇಳಿಕೆಗಳನ್ನು ನೀಡುತ್ತಿದ್ದು, ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಪೂಜಾರ ತಮ್ಮ ದೂರಿನಲ್ಲಿ ವಿವರಿಸಿದ್ದರು. ಆ ದೂರಿನ ಅನ್ವಯ ಕೊಪ್ಪಳ ಪೊಲೀಸರು ಯತ್ನಾಳ್ ವಿರುದ್ಧ ಎಫ್‌ಐಆರ್ ದಾಖಲಿಸಿಕೊಂಡು ತನಿಖೆ ಆರಂಭಿಸಿದ್ದರು.


## ಪೋಕ್ಸೋ ಪ್ರಕರಣ: ಬಿಎಸ್ ಯಡಿಯೂರಪ್ಪ ಮತ್ತೆ ಸಂಕಷ್ಟ!

### ಯಡಿಯೂರಪ್ಪಗೆ ಇಷ್ಟು ವಯಸ್ಸಾಗಿದೆ. ಅನಗತ್ಯವಾಗಿ ಸಮನ್ಸ್ ನೀಡಬಾರದೆಂದು ಕೇಳಿದರೆ ಏನಾದರೂ ಮಾಡಬಹುದು

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧದ ಪೋಕ್ಸೊ ಪ್ರಕರಣವು ಮೇಲ್ನೋಟಕ್ಕೆ ವಿಚಾರಣೆಗೆ ಅರ್ಹವಾಗಿದೆ. ಆರೋಪವೇ ಇಲ್ಲ ಎಂಬ ಪ್ರಕರಣ ಇದಲ್ಲ ಎಂದು ಹೈಕೋರ್ಟ್ ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿದೆ. ಹಾಗಾಗಿ, ಬಿಎಸ್‌ವೈಗೆ ಸಂಕಷ್ಟ ಎದುರಾಗುವ ಸಾಧ್ಯತೆಯಿದೆ.

ಪೋಕ್ಸೊ ಪ್ರಕರಣದಲ್ಲಿ ವಿಚಾರಣಾಧೀನ ನ್ಯಾಯಾಲಯ ಸಂಜ್ಞೆ ಪರಿಗಣಿಸಿರುವುದನ್ನು ಪ್ರಶ್ನಿಸಿ ಯಡಿಯೂರಪ್ಪ ಮತ್ತಿತರರು ಸಲ್ಲಿಸಿರುವ ಅರ್ಜಿ ಕುರಿತು ನ್ಯಾಯಮೂರ್ತಿ ಎಂ.ಐ.ಅರುಣ್ ಅವರಿದ್ದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಮೇಲ್ನೋಟಕ್ಕೆ ಇದು ವಿಚಾರಣೆಗೆ ಅರ್ಹವಾದ ಪ್ರಕರಣ. ನಿಮ್ಮ ವಾದ ಆಲಿಸಲಾಗುವುದು. ಯಡಿಯೂರಪ್ಪಗೆ ಇಷ್ಟು ವಯಸ್ಸಾಗಿದೆ. ಅನಗತ್ಯವಾಗಿ ಸಮನ್ಸ್ ನೀಡಬಾರದೆಂದು ಕೇಳಿದರೆ ಏನಾದರೂ ಮಾಡಬಹುದು. ಯಡಿಯೂರಪ್ಪ ಪ್ರತಿ ಪಕ್ಷದಲ್ಲಿದ್ದಾರೆ. ಅನಗತ್ಯವಾಗಿ ಕಿರುಕುಳ ನೀಡುತ್ತಾರೆಂದು ಹೇಳಬಹುದು. ಕಿರುಕುಳ ತಪ್ಪಿಸಿ, ನ್ಯಾಯಯುತ ವಿಚಾರಣೆಗೆ ಸಂಬಂಧಿಸಿದಂತೆ ರಕ್ಷಣೆ ಮಾಡಬಹುದು. ಅಂತಹ ಅಂಶವನ್ನು ಉಲ್ಲೇಖಿಸಿ, ಮೆರಿಟ್ ಮೇಲೆ ಯಾವುದೇ ಅಭಿಪ್ರಾಯ ವ್ಯಕ್ತಪಡಿಸುವುದಿಲ್ಲ ಎಂದು ಮೌಖಿಕವಾಗಿ ಹೇಳಿತು. ಅಲ್ಲದೆ, ಹಿಂದೆ ಸಲ್ಲಿಕೆ ಮಾಡಿದ್ದ ಅರ್ಜಿಯಲ್ಲಿ ನ್ಯಾಯಪೀಠ ಉಲ್ಲೇಖಿಸಿರುವ ವಿಚಾರಗಳ ಬಗ್ಗೆ ನಿಮ್ಮ ಆತಂಕ ಇರಬಹುದು. ನಿಮ್ಮ ಹಿರಿಯ ವಕೀಲರನ್ನು ಕೇಳಿ. ಇದು ವಿಚಾರಣೆಗೆ ಅರ್ಹವಾದ ಪ್ರಕರಣ. ಇಲ್ಲವಾದಲ್ಲಿ ಈ ಪ್ರಕರಣವನ್ನು ಒಂದು ವಾರ ವಿಚಾರಣೆ ನಡೆಸಬೇಕಾಗುತ್ತದೆ.



**ವಿಚಾರಣೆಗೆ ಅರ್ಹವಾದ ಪ್ರಕರಣ**

**ಅನಗತ್ಯವಾಗಿ ಎಲ್ಲರ ಸಮಯ ವ್ಯರ್ಥ ಬೇಡ**

ವಾಸ್ತವವಾಗಿ ಅರ್ಜಿದಾರರ ಆತಂಕಗಳೇನು, ಅಲ್ಲಿ ನಿಮಗೆ ಕಿರುಕುಳ ನೀಡಬಹುದು, ವಿಚಾರಣೆ ವೇಳೆ ಕಿರುಕುಳ ತಪ್ಪಿಸಲು ನಿಮಗೆ ಯಾವ ಅಬ್ಸರ್ವೇಶನ್ ಬೇಕು. ಅದಕ್ಕೆ ಸಲಹೆ ನೀಡಿದರೆ ಅದನ್ನು ತೀರ್ಪಿನಲ್ಲಿ ಸೇರಿಸಬಹುದು. ಹಾಗಾದರೆ ಅರ್ಧ ಗಂಟೆಯಲ್ಲಿ ಪ್ರಕರಣ ಮುಗಿಯುತ್ತದೆ. ತುರ್ತು ವಿಚಾರಣೆಯೂ ಅವರಿಗೆ ಇಷ್ಟವಿಲ್ಲದಿರಬಹುದು. ನಾವು ವಾದಿಸುತ್ತೇವೆ ಎಂದರೆ ಅದನ್ನು ಕೇಳಬೇಕಾಗುತ್ತದೆ. ಮುಕ್ತ ಮನಸ್ಸನ್ನು ಇಟ್ಟುಕೊಂಡು ಇದನ್ನು ಹೇಳುತ್ತಿದ್ದೇನೆ. ಪ್ರಕರಣ ರದ್ದತಿ ಆಗಿಯೇ ಆಗುತ್ತದೆ ಎಂಬ ಸ್ಪಷ್ಟತೆ ನಿಮಗೆ ಇದ್ದರೆ, ವಾದ ಮುಂದುವರಿಸಬಹುದು. ಕಡತವನ್ನು ನೋಡಿ ನಾನು ಹೇಳುತ್ತಿರುವುದು. ಇದು ನನ್ನ ಪ್ರಾಮಾಣಿಕ ಅಭಿಪ್ರಾಯವಾಗಿದೆ. ಅನಗತ್ಯವಾಗಿ ಎಲ್ಲರ ಸಮಯ ವ್ಯರ್ಥವಾಗುವುದು ಬೇಡ, ಎಂದು ನ್ಯಾಯಪೀಠ ಸಲಹೆ ನೀಡಿತು.
ಆಗ ಬಿಎಸ್‌ವೈ ಪರ ವಕೀಲ ಸಂದೀಪ್ ಪಾಟೀಲ್, ನ್ಯಾಯಾಲಯದ ಅಭಿಪ್ರಾಯ ಏನಿದೆ ಎಂಬುದು ಅರ್ಥವಾಗುತ್ತದೆ. ಈ ಕುರಿತು ಅರ್ಜಿದಾರರೊಂದಿಗೆ ಚರ್ಚಿಸಿ, ವಿಚಾರ ತಿಳಿಸಲಾಗುವುದು ಎಂದು ಹೇಳಿದರು. ಹಾಗಾಗಿ, ನ್ಯಾಯಾಲಯ ವಿಚಾರಣೆಯನ್ನು ಶುಕ್ರವಾರಕ್ಕೆ ಮುಂದೂಡಿತು.

ಇಲ್ಲಿ ಆರೋಪವೇ ಇಲ್ಲ ಎಂಬ ಪ್ರಕರಣ ಇದಲ್ಲ, ಎಂದಿತು. ಪೋಕ್ಸೊ ಪ್ರಕರಣದಲ್ಲಿ ಸಂತ್ರಸ್ತೆಯ ಹೇಳಿಕೆಯೊಂದೇ ಆರೋಪಿಗೆ ಶಿಕ್ಷೆ ವಿಧಿಸಲು ಕೆಲವೊಮ್ಮೆ ಸಾಕಾಗುತ್ತದೆ. ಸಂತ್ರಸ್ತೆಯ ಹೇಳಿಕೆ ಪರಿಶೀಲನೆಗೆ ಒಳಪಡಿಸಬೇಕಿದೆ. ವಿಚಾರಣೆಯಲ್ಲಿ ಆಕೆಯ ತಾಯಿಗೆ ದೂರು ನೀಡುವುದು ಹವ್ಯಾಸವಾಗಿತ್ತು, ಆಕೆ ಇಷ್ಟೆಲ್ಲಾ ಪ್ರಕರಣ ದಾಖಲಿಸಿದ್ದಾರೆ, ಆಕೆಯ ಮೇಲೆ ಇಷ್ಟೆಲ್ಲಾ ಕ್ರಿಮಿನಲ್ ಪ್ರಕರಣ ಇವೆ, ಈ ಹುಡುಗಿಯೇ ಎರಡು ಪೋಕ್ಸೊ ಪ್ರಕರಣ ದಾಖಲಿಸಿದ್ದಾರೆಂದು ಹೇಳಲಾಗುತ್ತಿದೆ. ಅವರು ಏಕೆ ಅರ್ಜಿದಾರರ ಮನೆಗೆ ಬಂದಿದ್ದರು, ಯಡಿಯೂರಪ್ಪ ಸಂತ್ರಸ್ತೆಗೆ ಏಕೆ ದುಡ್ಡು ನೀಡಲು ಮುಂದಾಗಿದ್ದರು? ಇವೆಲ್ಲವೂ ವಿಚಾರಣೆಗೆ ಅರ್ಹವಾದ ಪ್ರಕರಣವನ್ನಾಗಿಸಿವೆ ಅದಕ್ಕೆ ಕನಿಷ್ಠ ಐದು ದಿನಗಳ ಮಧ್ಯಾಹ್ನದ ಸಂಪೂರ್ಣ ಕಲಾಪ ವ್ಯಯಿಸಬೇಕಾಗುತ್ತದೆ ಎಂದು ಹೇಳಿತು.

## ಭರತನಾಟ್ಯ ಪ್ರದರ್ಶನ

• ಉದಯವಾಹಿನಿ, ಬೆಂಗಳೂರು

ಅಖಿಲ ಭಾರತ ಯುವ ಸಂಗೀತ ನೃತ್ಯ ಕಲಾವಿದರ ಒಕ್ಕೂಟದ ವತಿಯಿಂದ ಸೆಪ್ಟೆಂಬರ್ 19, ಶುಕ್ರವಾರ ಸಂಜೆ 6-30ಕ್ಕೆ ವಿದುಷಿ ಶ್ರೀಮತಿ ಬಿ.ಯು. ಓಜಸ್ವಿನಿ ಶ್ರೇಯಸ್ ಅವರ ನಿರ್ದೇಶನದಲ್ಲಿ ಕಲಾ ಸುಸಂಸ್ಕೃತಿ ಅಕಾಡೆಮಿ ಟ್ರಸ್ಟಿನ ವಿದ್ಯಾರ್ಥಿಗಳಿಂದ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಎಐಎಂಡಿಎ ಸಂಚಾಲಕಿ ಶ್ರೀಮತಿ ಚೈತ್ರಾ ಪ್ರವರ್ಧನ ಅವರು ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಸ್ಥಳ : ಶ್ರೀ ಸರ್ಕಲ್ ಮಾರಮ್ಮ ದೇವಿ ದೇವಸ್ಥಾನ, 18ನೇ ಅಡ್ಡರಸ್ತೆ (ಭಾರತೀಯ ವಿಜ್ಞಾನ ಮಂದಿರದ ಪಕ್ಕ) ಮಲ್ಲೇಶ್ವರಂ, ಬೆಂಗಳೂರು. ಸರ್ವರಿಗೂ ಆತ್ಮೀಯ ಸುಸ್ವಾಗತ

## ಇಎಸ್‌ಐಸಿ ಆಸ್ಪತ್ರೆಯಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವಿಕೆ ದಿನಾಚರಣೆ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ರಾಜಾಜಿನಗರ ಇ.ಎಸ್.ಐಸಿ ವೈದ್ಯಕೀಯ ಕಾಲೇಜುನಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ವಿಶ್ವ ಆತ್ಮಹತ್ಯೆ ತಡೆಗಟ್ಟುವಿಕೆ ದಿನವನ್ನು ಆಚರಿಸಲಾಯಿತು. ಇ.ಎಸ್.ಐಸಿ ಮೆಡಿಕಲ್ ಕಾಲೇಜುನ ಡಾ. ಜೆ. ಎಂ. ಜೀತೇಂದ್ರ ಕುಮಾರ್, ವೈದ್ಯಕೀಯ ಅಧೀಕ್ಷಕರಾದ ಸಿಜಿಎಸ್ ಪ್ರಸಾದ್, ಜಿಬಿಎ ಮುಖ್ಯ ಆರೋಗ್ಯಾಧಿಕಾರಿ ಡಾ. ಸಯೀದ್ ಸಿರಾಜುದ್ದೀನ್ ಮದ್ನಿ ಅವರು ಆತ್ಮಹತ್ಯೆ ಕುರಿತು ನೈಜ ಮಾತು ಸಂವಾದವನ್ನು ಪ್ರಾರಂಭಿಸೋಣ ಕಾರ್ಯಕ್ರಮ ಉದ್ಘಾಟಿಸಿದರು. ಆತ್ಮಹತ್ಯೆ ತಡೆಗೆ ವಾಕ್‌ಥಾನ್, ಈ ಬಗ್ಗೆ ವಿಶೇಷ ಉಪನ್ಯಾಸಗಳು, ಮಾನಸಿಕ ಆರೋಗ್ಯ ಸಹಾಯವಾಣಿ ಕಾರ್ಡ್‌ಗಳ ವಿತರಣೆ, ಆತ್ಮಹತ್ಯೆ ಜಾಗೃತಿ ನಾಟಕ ಪ್ರದರ್ಶನ, ವಿದ್ಯಾರ್ಥಿಗಳ ಜೀವನ ಪ್ರತಿಜ್ಞೆ ಕಾರ್ಯಕ್ರಮಗಳು ನಡೆದವು.

ಮುಖ್ಯ ಅತಿಥಿಗಳಾಗಿ ಮಾನಸಿಕ ಆರೋಗ್ಯ ಉಪ ನಿರ್ದೇಶಕರು, ಡಾ. ರಜನಿ ಪಿ, ಡಾ. ಪ್ರಸಾದ್, ಡಾ. ಮನೋರಂಜನ್ ಹೆಗ್ಡೆ, ಡಾ.ಸಂಘಮಿತ್ರ, ಡಾ.ಕಲಾವತಿ ದೇವಿ ಎ.ಎಲ್, ಡಾ. ಎಚ್ ಚಂದ್ರಶೇಖರ್, ಡಾ. ರಾಮು ಜಿ, ಡಾ. ನವೀನ್, ಡಾ. ವಿಕ್ರಮ್ ಅರುಣಾಚಲಂ, ಡಾ. ಸುಚಿತ್ರಾ, ಡಾ ವಿಜಯಕುಮಾರಿ ವಿ. ಡಾ ಶಾಂತಿನಿ, ಡಾ ಧನಂಜಯ, ಡಾ ಗಿರೀಶ್ ಎಂ ಎಸ್ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ವೈದ್ಯಕೀಯ ತಜ್ಞರು, ಮಾನಸಿಕ ಆರೋಗ್ಯ ತಜ್ಞರು, ಸಾರ್ವಜನಿಕ ಆರೋಗ್ಯ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಯಾವ್ದೇ ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನ ರದ್ದು ಮಾಡಲ್ಲ: ಕೆ.ಹೆಚ್ ಮುನಿಯಪ್ಪ

• ಉದಯವಾಹಿನಿ, ಬೆಂಗಳೂರು

ಯಾವುದೇ ಅನರ್ಹ ಬಿಪಿಎಲ್ ಕಾರ್ಡ್‌ಗಳನ್ನ ರದ್ದು ಮಾಡಲ್ಲ, ಎಲ್ಲವನ್ನು ಪರಿಷ್ಕರಣೆ ಮಾಡುತ್ತೇವೆ ಎಂದು ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ಸ್ಪಷ್ಟನೆ ನೀಡಿದ್ದಾರೆ. ನಗರದಲ್ಲಿ ಮಾಧ್ಯಮದವರೊಂದಿಗೆ ಅನರ್ಹ ರೇಷನ್ ಕಾರ್ಡ್‌ಗಳ ರದ್ದು ವಿಚಾರವಾಗಿ ಮಾತನಾಡಿದ ಅವರು, ಬಿಪಿಎಲ್‌ನಲ್ಲಿರುವ ಅನರ್ಹರನ್ನು ನಿಯಮಗಳ ಪ್ರಕಾರ ಪರಿಷ್ಕರಣೆ ಮಾಡಿ, ಎಪಿಎಲ್‌ಗೆ ವರ್ಗಾವಣೆ ಮಾಡುತ್ತೇವೆ. ಯಾವ ಕಾರ್ಡನ್ನು ರದ್ದು ಮಾಡಲ್ಲ, ಎಲ್ಲಾ ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡುತ್ತೇವೆ. ವರ್ಗಾವಣೆ ಸಂದರ್ಭದಲ್ಲಿ ಏನಾದರೂ ಸಣ್ಣಪುಟ್ಟ ಸಮಸ್ಯೆಯಾದರೆ 24 ಗಂಟೆಯೊಳಗೆ ಅದನ್ನು ಸರಿಪಡಿಸಿ ಆಹಾರ ಧಾನ್ಯ ಕೊಡುವ ಕೆಲಸ ಮಾಡುತ್ತೇವೆ ಎಂದು ತಿಳಿಸಿದ್ದಾರೆ.

ಇನ್ನೂ ಇದೇ ವೇಳೆ ಯಾದಗಿರಿಯಲ್ಲಿ ಅನ್ನಭಾಗ್ಯ ಅಕ್ಕಿ ಅಕ್ರಮ ಸಾಗಣೆ ವಿಚಾರವಾಗಿ ಮಾತನಾಡಿ, ಪ್ರಕರಣವನ್ನು ವಿವರವಾಗಿ ತನಿಖೆ ನಡೆಸಬೇಕು. ದೊಡ್ಡಮಟ್ಟದಲ್ಲಿ ನಡೆದಿದೆ. ಅಧಿಕಾರಿಗಳು ತನಿಖೆ ನಡೆಸುತ್ತಾರೆ. ಯಾರೇ ತಪ್ಪು ಮಾಡಿದ್ದರೂ ಅವರ ವಿರುದ್ಧ ಕ್ರಮ ಆಗುತ್ತದೆ ಎಂದಿದ್ದಾರೆ.

## ರಸ್ತೆ ಅಪಘಾತ ಸಂತ್ರಸ್ತರ ಚಿಕಿತ್ಸಾ ವೆಚ್ಚ 2.5 ಲಕ್ಷಕ್ಕೆ ಹೆಚ್ಚಿಸಿದ ರಾಜ್ಯ ಸರ್ಕಾರ

• ಉದಯವಾಹಿನಿ, ಬೆಂಗಳೂರು

ರಸ್ತೆ ಅಪಘಾತ ಸಂತ್ರಸ್ತರಿಗೆ ನೀಡುತ್ತಿದ್ದ ನಗದು ರಹಿತ ಚಿಕಿತ್ಸೆ ವೆಚ್ಚವನ್ನು ರಾಜ್ಯ ಸರ್ಕಾರ ಇದೀಗ 2.5 ಲಕ್ಷ ರೂ.ಗೆ ಏರಿಕೆ ಮಾಡಿದೆ. ರಸ್ತೆ ಅಪಘಾತದಲ್ಲಿ ಗಂಭೀರವಾಗಿ ಗಾಯಗೊಂಡವರಿಗೆ ಕೇಂದ್ರ ಸರ್ಕಾರ 1.5 ಲಕ್ಷ ರೂ.ವರೆಗೂ ನಗದು ರಹಿತ ಚಿಕಿತ್ಸೆಯನ್ನು ನೀಡುತ್ತಿತ್ತು. ಅಪಘಾತ ಸಂಭವಿಸಿದ ಏಳು ದಿನಗಳವರೆಗೂ ಈ ಸೌಲಭ್ಯ ಇತ್ತು. ಈಗ ರಾಜ್ಯ ಸರ್ಕಾರ ಅಪಘಾತ ಆಗಿ ಬಹುಅಂಗಾಂಗಗಳ ವೈಫಲ್ಯ ಆದರೆ ಚಿಕಿತ್ಸೆಗಾಗಿ 1 ಲಕ್ಷ ರೂ. ಟಾಪ್ ಅಪ್ ನೀಡೋದಾಗಿ ಘೋಷಣೆ ಮಾಡಿದೆ. ಕೇಂದ್ರ, ರಾಜ್ಯ ಸರ್ಕಾರದ ಅಪಘಾತ ಸಂತ್ರಸ್ತ ಯೋಜನೆ ಅಡಿ ಸಂತ್ರಸ್ತರಿಗೆ 2.5 ಲಕ್ಷ ರೂ.ವರೆಗೂ ಚಿಕಿತ್ಸಾ ನೆರವು ಸಿಗಲಿದೆ. ರಸ್ತೆ ಅಪಘಾತದಿಂದ ಆಗುವ ಸಾವುಗಳನ್ನ ತಡೆಗಟ್ಟಲು ಚಿಕಿತ್ಸಾ ವೆಚ್ಚದ ಅನುದಾನ ಹೆಚ್ಚಳ ಮಾಡಲಾಗಿದೆ. ಕರ್ನಾಟಕ ರಾಜ್ಯದಲ್ಲಿ ಪ್ರತಿ ವರ್ಷಕ್ಕೆ ಸುಮಾರು 40 ಸಾವಿರ ರಸ್ತೆ ಅಪಘಾಗಳು ದಾಖಲಾಗ್ತಿವೆ. ಪ್ರತಿ ವರ್ಷ ಸುಮಾರು 11 ಸಾವಿರ ಜನರು ರಸ್ತೆ ಅಪಘಾತದಿಂದ ಸಾವನ್ನಪ್ಪುತ್ತಿದ್ದಾರೆ. ಪ್ರತಿ ಗಂಟೆಗೆ 4 ರಿಂದ 5 ರಸ್ತೆ ಅಪಘಾತಗಳು ದಾಖಲಾಗ್ತಿವೆ ಎಂದು ತಿಳಿದುಬಂದಿದೆ.

## 2.69 ಲಕ್ಷ ಕೇಸ್, 13 ಕೋಟಿ ದಂಡ ಫೈನ್ ಮನ್ನಾಗೆ ಸಾರಿಗೆ ಸಚಿವರ ಪತ್ರ

• ಉದಯವಾಹಿನಿ, ಬೆಂಗಳೂರು

ಕೆಎಸ್‌ಆರ್‌ಟಿಸಿ ಬಸ್‌ಗಳ ಮೇಲಿನ ಟ್ರಾಫಿಕ್ ಫೈನ್ ಮನ್ನಾ ಮಾಡುವಂತೆ ಗೃಹ ಸಚಿವರಿಗೆ ಸಾರಿಗೆ ಸಚಿವರು ಪತ್ರ ಬರೆದಿದ್ದಾರೆ. ಕೆಎಸ್‌ಆರ್‌ಟಿಸಿ ಬಸ್‌ಗಳಿಗೆ 13 ಕೋಟಿಗೂ ಹೆಚ್ಚು ದಂಡ ವಿಧಿಸಲಾಗಿದೆ. ಬಸ್‌ಗಳ ಮೇಲೆ ಒಟ್ಟು 2,69,198 ಪ್ರಕರಣಗಳಿವೆ. ಶೇ.50 ರಿಯಾಯಿತಿ ದರದಲ್ಲಿ ಕೆಎಸ್‌ಆರ್‌ಟಿಸಿ ಫೈನ್ 6,64,96,400 ರೂ. ಆಗುತ್ತದೆ. ಆದರೆ, ಈ ದಂಡವನ್ನು ಮನ್ನಾ ಮಾಡುವಂತೆ ಗೃಹ ಸಚಿವರಿಗೆ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಪತ್ರ ಬರೆದು ಮನವಿ ಮಾಡಿದ್ದಾರೆ.

**ಪತ್ರದಲ್ಲಿ ಏನಿದೆ:** ರಾಜ್ಯದಲ್ಲಿ ಒಟ್ಟು 24,000 ಬಸ್‌ಗಳಿವೆ. ಕೆಲ ವೇಳೆ ಸಿಸಿಟಿವಿಯಲ್ಲಿ ತಪ್ಪಾಗಿ ರೆಕಾರ್ಡ್ ಆಗಿದೆ. ಒಟ್ಟು ಪ್ರಕರಣಗಳನ್ನು ಪರಿಶೀಲಿಸಿದಾಗ, 1,95,009 ಪ್ರಕರಣಗಳು ಸಂಬಂಧಿಸಿದ್ದು. ವಾಹನಗಳು ಲೇನ್‌ನಲ್ಲಿ ಚಲಿಸುವಾಗ ಲೇನ್ ಪಟ್ಟಿಗಳನ್ನು ಸ್ವಲ್ಪ ತಾಗಿದರೂ ಸಹ ಸದರಿ ಸ್ಥಳದಲ್ಲಿ ಅಳವಡಿಸಿರುವ ಕ್ಯಾಮೆರಾದಲ್ಲಿ ಲೇನ್ ಉಲ್ಲಂಘನೆ ಎಂದು ದಂಡ ವಿಧಿಸಲಾಗುತ್ತಿದೆ. 58,499 ಪ್ರಕರಣಗಳು ಸೀಟ್ ಬೆಲ್ಟ್ ಧರಿಸದೇ ಇರುವ ಬಗ್ಗೆ ದಾಖಲಾಗಿದೆ. ಸೀಟ್ ಬೆಲ್ಟ್ ಹಾಕಿದ್ದರೂ ಪ್ರಕರಣಗಳು ದಾಖಲಾಗುತ್ತಿವೆ. ನಿಯಮದಂತೆ ಒಂದು ಅಪರಾಧಕ್ಕೆ ಸಂಬಂಧಪಟ್ಟಂತೆ 24 ಗಂಟೆಯ ಅವಧಿಯಲ್ಲಿ ಒಂದು ಬಾರಿ ದಂಡ ವಿಧಿಸಿ ರಶೀದಿ ಪಡೆದಿದ್ದಲ್ಲಿ ಬೇರೊಂದು ಕಡೆ ಸದರಿ ರಸೀದಿ ತೋರಿದಲ್ಲಿ ಪುನಃ ವಿಧಿಸಿರುವ ದಂಡದಿಂದ ವಿನಾಯಿತಿ ಇರುತ್ತಿತ್ತು. ಆದರೆ, ಪ್ರಸ್ತುತ ಹೈವೇಯಲ್ಲಿ ಜಿಲ್ಲಾವಾರು ಪ್ರಕರಣಗಳು ದಾಖಲಾಗುತ್ತಿವೆ. ಉದಾಹರಣೆಗೆ, ಒಂದೇ ದಿನದಲ್ಲಿ ರಾಮನಗರ, ಮಂಡ್ಯ, ಮೈಸೂರು ಜಿಲ್ಲಾವಾರು ಒಂದೇ ವಾಹನಕ್ಕೆ ಒಂದೇ ತರಹದ ಉಲ್ಲಂಘನೆಗೆ ದಂಡಗಳನ್ನು ಹಾಕಲಾಗಿದೆ. ಒಟ್ಟು 2,69,198 ಪ್ರಕರಣಗಳ ಪೈಕಿ 2,53,508 ಪ್ರಕರಣಗಳು ಮೇಲಿನ 2 ವಿಧವಾದ ಪ್ರಕರಣಗಳಿಂದ ಕೂಡಿರುತ್ತದೆ.

# ಬೆಂಗಳೂರು ರಸ್ತೆಗುಂಡಿ ಬಗ್ಗೆ ಛೀಮಾರಿ

### ಬೆಂಗಳೂರು ಬಿಟ್ಟು ಹೊರಗೆ ಹೋಗ್ತೀವಿ ಎಂದ ಖಾಸಗಿ ಕಂಪನಿ ಸಿಇಒ ಟ್ವೀಟ್ ವೈರಲ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ಕಳಪೆ ರಸ್ತೆಗಳಿಂದಾಗಿ ಸಾವು-ನೋವು ರಸ್ತೆ ಅಪಘಾತ ಒಂದೆಡೆಯಾದ್ರೆ, ಸರಿಪಡಿಸದ ರಸ್ತೆಯಿಂದ ಬೇಸತ್ತ ಬೆಂಗಳೂರಿನ ಕಂಪನಿಗಳು ನಗರ ತೊರೆದು ಹೊರಗೆ ಹೋಗಲು ನಿರ್ಧರಿಸಿವೆ.

ಈ ಬಗ್ಗೆ ಬ್ಲಾಕ್ ಬಕ್ ಕಂಪನಿ ಸಿಇಒ ರಾಜೇಶ್ ಯಾಬಾಜಿ ಟ್ವೀಟ್ ಮಾಡಿದ್ದಾರೆ. ಕಂಪನಿಯ ಉದ್ಯೋಗಿಗಳಿಗೆ ಓಡಾಡಲು ಕಷ್ಟವಾಗುತ್ತಿದೆ. 9 ವರ್ಷಗಳಿಂದ ಬೆಳ್ಳಂದೂರು ನಮ್ಮ ಕಚೇರಿ ಹಾಗೂ ಮನೆ ಆಗಿದೆ. ಆದ್ರೀಗ ಈ ಏರಿಯಾದಲ್ಲಿ ಮುಂದುವರಿಯುವುದು ತುಂಬಾ ಕಷ್ಟ. ನಾವು ಇಲ್ಲಿಂದ ಹೊರಗೆ ಹೋಗಲು ನಿರ್ಧರಿಸಿದ್ದೇವೆ. ನಮ್ಮ ಸಹೋದ್ಯೋಗಿಗಳಿಗೆ ಸಂಚಾರ ಮಾಡುವುದು ಕಷ್ಟವಾಗಿದೆ. ಒಂದು ಸೈಡ್ ಪ್ರಯಾಣಕ್ಕೇ ಒಂದೂವರೆ ಗಂಟೆ ಸಮಯ ಬೇಕಾಗಿದೆ. ಬೆಂಗಳೂರಿನ ರಸ್ತೆಗಳು ಗುಂಡಿ , ಧೂಳಿನಿಂದ ತುಂಬಿದೆ. ಅವುಗಳನ್ನು ಸರಿಪಡಿಸುವ ಉದ್ದೇಶವೂ ಇಲ್ಲ.


ಉದಯವಾಹಿನಿ ಚಿತ್ರ

5 ವರ್ಷದಲ್ಲಿ ಯಾವುದೇ ಬದಲಾವಣೆ ಆಗಿಲ್ಲ ಎಂದು ಬೇಸರ

ಐದು ವರ್ಷದಲ್ಲಿ ಯಾವುದೇ ಬದಲಾವಣೆ ಆಗಿಲ್ಲ ಎಂದು ಟ್ವೀಟ್ ಮಾಡಿದ್ದಾರೆ. ಈ ಟ್ವೀಟ್ ಬೆನ್ನಲ್ಲೇ ಸರ್ಕಾರವನ್ನು ಪ್ರಶ್ನಿಸಿ, ಡಿಕೆ ಶಿವಕುಮಾರ್ ಅವರನ್ನು ಟ್ಯಾಗ್ ಮಾಡಿ ಕಿರಣ್ ಮಜುಂದಾರ್ ಶಾ, ಮೋಹನ್ ದಾಸ್ ಪೈ ಮೊದಲಾದವರು ರಿ ಟ್ವೀಟ್ ಮಾಡಿ ಸಮಸ್ಯೆ ಸರಿಪಡಿಸುವಂತೆ ಅಲರ್ಟ್ ಮಾಡಿದ್ದಾರೆ.

ಇದು ಗಂಭೀರ ಸಮಸ್ಯೆ, ತುರ್ತಾಗಿ ಈ ಸಮಸ್ಯೆ ಸರಿಪಡಿಸಬೇಕೆಂದು ಕಿರಣ್ ಮಜುಂದಾರ್ ಷಾ ಟ್ವೀಟ್ ಮಾಡಿದ್ದಾರೆ. ಇನ್ನು ಉದ್ಯಮಿ ಮೋಹನ್ ದಾಸ್ ಪೈ ಕೂಡಾ ಟ್ವೀಟ್ ಮಾಡಿ, ಬೆಂಗಳೂರಲ್ಲಿ ಆಡಳಿತದ ದೊಡ್ಡ ದೊಡ್ಡ ವೈಫಲ್ಯಗಳಾಗಿವೆ. ಕಂಪನಿಗಳ ಸಿಇಒಗಳು ಹೊರ ಹೋಗುತ್ತಿದ್ದಾರೆ. ಔಟರ್ ರಿಂಗ್ ರೋಡ್ ಪರಿಸ್ಥಿತಿ ಸರಿಯಿಲ್ಲ. ಡಿಸಿಎಂ ಡಿಕೆ ಶಿವಕುಮಾರ್ ಅವರೇ ದಯವಿಟ್ಟು ಮಧ್ಯಪ್ರವೇಶ ಮಾಡಿ ಎಂದಹ ಹೇಳಿದ್ದಾರೆ.

### ಡಿಕೆಶಿ ಪ್ರತಿಕ್ರಿಯೆ ಏನು?

**ಬೆಂಗಳೂರು ಉಸ್ತುವಾರಿ ಸಚಿವರೂ ಆಗಿರುವ ಡಿಕೆ ಶಿ ಎಲ್ಲಾ ರಸ್ತೆಗುಂಡಿಗಳನ್ನು ಮುಚ್ಚಲು ಗಡುವು ಕೊಡಲಾಗಿದೆ. ಯಾವ ಯದಲ್ಲಿಮುಚ್ಚುತ್ತೀರಿ ಎಂದು ಕೇಳಿದ್ದೇನೆ. ಎಲ್ಲಾ ಸಭೆ ನಡೆಸಿ, ಬರವಣಿಗೆಯಲ್ಲಿ ಕೊಡುವಂತೆ ಹೇಳಿದ್ದೇನೆ. ಟ್ರಾಫಿಕ್ ಪೊಲೀಸರಿಂದ ಜನರಿಂದಲೂ ಮಾಹಿತಿ ಪಡೆಯಬೇಕು ಎಂದಿದ್ದೇನೆ. ಜತೆಗೆ ಆಯುಕ್ತರು ಪ್ರತೀ ದಿನ ಬೆಳಗ್ಗೆ ರೌಂಡ್ಸ್ ಮಾಡಿ, ಗುಣಮಟ್ಟದ ಕಾಮಗಾರಿ ನಡೆಯುವಂತೆ ನೋಡೊಕೊಳ್ಳಲು ತಿಳಿಸಿದ್ದಾಗಿ ಹೇಳಿದ್ದಾರೆ. ಒಂದೂ ಕೆಲಸದಲ್ಲಿಯೂ ಸುಳ್ಳು ಲೆಕ್ಕ, ಬೋಗಸ್ ಲೆಕ್ಕ ಕೊಡಬಾರದು ಎಂದಿದ್ದಾರೆ. ಇನ್ನು ನಗರದ ಕಸದ ಸಮಸ್ಯೆ ಇತ್ಯರ್ಥಕ್ಕೆ ಕೂಡಾ ಗಡುವು ಕೊಟ್ಟಿದ್ದೇನೆ. ಹೊಸ ಜಂಟಿ ಆಯುಕ್ತರು, ಆಯುಕ್ತರಿಗೆ ಟೈಂ ಲೈನ್ ಕೊಡಲಾಗಿದೆ. ಬೆಂಗಳೂರು ನಗರ ಎಲ್ಲಾ ಸ್ವಚ್ಛಗೊಳಿಸಬೇಕು. ಪೊಲೀಸ್ ಅಧಿಕಾರಿಗಳು ಕೂಡಾ ಕಸ ಎಸೆದು ಹೋಗುವವರನ್ನು ಪತ್ತೆಹಚ್ಚಬೇಕು ಎಂದು ಹೇಳಿದ್ದಾರೆ.**

## ಮಾಜಿ ಸಿಎಂ ಡಿ.ವಿ ಸದಾನಂದಗೌಡ ಬ್ಯಾಂಕ್ ಖಾತೆ ಹ್ಯಾಕ್



• ಉದಯವಾಹಿನಿ, ಬೆಂಗಳೂರು

ಸಿಎಂ ಸದನಾಂದ ಗೌಡ ಅವರ ಬ್ಯಾಂಕ್ ಖಾತೆಯನ್ನು ಹ್ಯಾಕ್ ಮಾಡಿ ಸೈಬರ್ ಕಳ್ಳರು 3 ಲಕ್ಷ ರೂ. ಹಣವನ್ನು ಕದ್ದಿದ್ದಾರೆ. ಪ್ರಧಾನಿ ನರೇಂದ್ರ ಮೋದಿ 75ನೇ ಜನ್ಮ ದಿನಾಚರಣೆ ಹಿನ್ನೆಲೆಯಲ್ಲಿ ಬಿಜೆಪಿ 75 ಪೌರ ಕಾರ್ಮಿಕರರಿಗೆ ಆರ್ ಎಂವಿ ಎಕ್ಸ್‌ಟೆನ್ಷನ್‌ನ ಬಿಬಿಎಂಪಿ ಪಾರ್ಕ್‌ನಲ್ಲಿ ಸನ್ಮಾನ ಕಾರ್ಯಕ್ರಮ ಆಯೋಜಿಸಿದೆ. ಈ ಕಾರ್ಯಕ್ರಮಕ್ಕೆ ಆಗಮಿಸಿದ ಡಿವಿಎಸ್ ಮಾಧ್ಯಮಗಳ ಜೊತೆ ಮಾತನಾಡಿ, ನಿನ್ನೆ ನನ್ನ 3 ಅಕೌಂಟ್ ಹ್ಯಾಕ್ ಮಾಡಿದ್ದಾರೆ. ಅದರಲ್ಲಿದ್ದ ತಲಾ ಒಂದೊಂದು ಲಕ್ಷ ಹಣ ಎಗರಿಸಿದ್ದಾರೆ. ಸುಮಾರು 3 ಲಕ್ಷ ರೂ. ಹಣ ಹೋಗಿದೆ ಎಂದು ತಿಳಿಸಿದರು. ಹೆಚ್‌ಡಿಎಫ್‌ಸಿ, ಎಸ್‌ಬಿಐ ಹಾಗೂ ಆಕ್ಸಿಸ್ ಬ್ಯಾಂಕಿನ ಖಾತೆಯಲ್ಲಿದ್ದ ಹಣ ಕಳ್ಳತನವಾಗಿದೆ. ಯುಪಿಐ ಮೂಲಕ ಹ್ಯಾಕ್ ಮಾಡಿ ಹಣ ಕಳ್ಳತನ ಮಾಡಿದ್ದು ಸೈಬರ್ ಕ್ರೈಮ್‌ಗೆ ದೂರು ನೀಡುತ್ತೇನೆ ಎಂದು ಹೇಳಿದರು.

## ಹಣ ವರ್ಗಾವಣೆ, ಅಕ್ರಮ ನಿವೇಶನ ಹಂಚಿಕೆ ಆರೋಪ: ಮುಡಾ ಆಯುಕ್ತ ದಿನೇಶ್ ಕುಮಾರ್ ಬಂಧನ

• ಉದಯವಾಹಿನಿ, ಬೆಂಗಳೂರು

ಹಣ ವರ್ಗಾವಣೆ, ಅಕ್ರಮ ನಿವೇಶನ ಹಂಚಿಕೆಗೆ ಸಂಬಂಧಿಸಿದ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ (ಇಡಿ) ಮುಡಾ ಮಾಜಿ ಆಯುಕ್ತ ದಿನೇಶ್ ಕುಮಾರ್ ಅವರನ್ನು ಮಂಗಳವಾರ ಬಂಧನಕ್ಕೊಳಪಡಿಸಿದೆ.

ಮುಡಾ ಕೇಸ್‌ನಲ್ಲಿ ವಿಚಾರಣೆಗೆಂದು ಸೆಪ್ಟೆಂಬರ್ 16ರಂದು ಬೆಂಗಳೂರಿನ ಶಾಂತಿನಗರದಲ್ಲಿ ಇಡಿ ಕಚೇರಿಗೆ ದಿನೇಶ್ ಕುಮಾರ್ ಆಗಮಿಸಿದ್ದರು. ಈ ವೇಳೆ ಇಡಿ ಅಧಿಕಾರಿಗಳು ವಿಚಾರಣೆ ಮಾಡಿ, ದಿನೇಶ್ ಅವರನ್ನ ಬಂಧನಕ್ಕೊಳಪಡಿಸಿದ್ದಾರೆ.

ನಕಲಿ ದಾಖಲೆಗಳನ್ನು ಸೃಷ್ಟಿ ಮಾಡಿ, ಈ ದಾಖಲೆಗಳ ಮೂಲಕ ಸೈಟ್‌ಗಳನ್ನು ಮರುಹಂಚಿಕೆ ಮಾಡಿ ದಿನೇಶ್ ಕುಮಾರ್ ಅವರು ಲಾಭ ಮಾಡಿದ್ದಾರೆಂದು ಹೇಳಲಾಗುತ್ತಿದೆ. ಈ ಹಣದಿಂದ ಆಸ್ತಿ ಗಳಿಕೆ ಮಾಡಿರುವುದಕ್ಕೆ ದಾಖಲೆ ಪತ್ತೆಯಾಗಿದೆ ಎಂದು ವರದಿ ಆಗಿದೆ. ಈ ಹಿಂದೆ, ಕರ್ನಾಟಕ ಲೋಕಾಯುಕ್ತ ಪೊಲೀಸರು ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಚ್.ವಿ. ರಾಜೀವ್ ಮತ್ತು ದಿನೇಶ್ ಕುಮಾರ್ ಇಬ್ಬರ ವಿರುದ್ಧವೂ ತನಿಖೆ ನಡೆಸಲು ಸರ್ಕಾರದಿಂದ ಪ್ರಾಸಿಕ್ಯೂಷನ್ ಅನುಮತಿಯನ್ನು ಕೋರಿದ್ದರು. ಆದರೆ, ದಿನೇಶ್ ವಿರುದ್ಧ ಮಾತ್ರ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಲಾಗಿತ್ತು. ಇದರಂತೆ ತನಿಖಾ ಸಂಸ್ಥೆಗಳು ತನಿಖೆಯನ್ನು ಮುಂದುವರೆಸಿತ್ತು.


ಉದಯವಾಹಿನಿ ಚಿತ್ರ

ಹಣ ಅಕ್ರಮ ವರ್ಗಾವಣೆ ತಡೆ ಕಾಯ್ದೆ (ಪಿಎಂಎಲ್‌ಎ) ಅಡಿಯಲ್ಲಿ ಇಡಿ ಈಗಾಗಲೇ ದಿನೇಶ್ ಅವರಿಗೆ ಸೇರಿದ ಹಲವಾರು ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿದೆ. ದಿನೇಶ್ ಕುಮಾರ್ ಸುದ್ದಿಗೆ ಬರುತ್ತಿರುವುದು ಇದೇ ಮೊದಲಲ್ಲ. ಕಳೆದ ವರ್ಷ ಅಕ್ಟೋಬರ್ 28 ರಂದು, ಇಡಿ ಅಧಿಕಾರಿಗಳು ಬಾಣಸವಾಡಿಯ ದೀಪಿಕಾ ರಾಯಲ್ ಅಪಾರ್ಟ್‌ಮೆಂಟ್‌ನಲ್ಲಿರುವ ಅವರ ನಿವಾಸದ ಮೇಲೆ ದಾಳಿ ಮಾಡಿದ್ದರು ಈ ವೇಳೆ ವಾಕಿಂಗ್ ಹೋಗಿದ್ದ ದಿನೇಶ್ ಅವರು ಮನೆಗೆ ಹಿಂತಿರುಗಿರಲಿಲ್ಲ ಎಂದು ಆರೋಪಿಸಲಾಗಿದೆ. ನಂತರ ವಿಚಾರಣೆಗಾಗಿ ಇಡಿ ಮುಂದೆ ಹಾಜರಾಗಿದ್ದರು ಎಂದು ತಿಳಿದುಬಂದಿದೆ.

**2022ರಲ್ಲಿ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಆಯುಕ್ತರಾಗಿ ಜಿ.ಟಿ.ದಿನೇಶ್ ಕುಮಾರ್ ಅಧಿಕಾರ ಸ್ವೀಕರಿಸಿದ್ದರು. ದಿನೇಶ್ ಕುಮಾರ್ ವಿರುದ್ಧ ಮುಡಾದಲ್ಲಿ 50:50 ಅನುಪಾತದಡಿ ಸೈಟ್ ಹಂಚಿಕೆಯಲ್ಲಿ ಅಕ್ರಮ ಆರೋಪ ಕೇಳಿ ಬಂದ ಹಿನ್ನೆಲೆ ಸರ್ಕಾರ ಅವರನ್ನು ವರ್ಗಾವಣೆ ಮಾಡಿತ್ತು. ನಂತರ ಹಾವೇರಿ ವಿಶ್ವವಿದ್ಯಾಲಯದಲ್ಲಿ ರಿಜಿಸ್ಟ್ರಾರ್ ಆಗಿ ನೇಮಿಸಲಾಯಿತು, ಆದರೆ, ಸಾರ್ವಜನಿಕ ಟೀಕೆಗಳ ನಂತರ ಆದೇಶವನ್ನು ರದ್ದುಗೊಳಿಸಲಾಗಿತ್ತು.**

## 144 ಕೋಟಿಗೂ ಅಧಿಕ ದಂಡ ಸಂಗ್ರಹ, 53.11ಲಕ್ಷ ಪ್ರಕರಣ ಇತ್ಯರ್ಥ

• ಉದಯವಾಹಿನಿ, ಬೆಂಗಳೂರು

ಸಂಚಾರ ನಿಯಮ ಉಲ್ಲಂಘನೆ ಬಗ್ಗೆ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ 50ರಷ್ಟು ರಿಯಾಯಿತಿಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿದ್ದು, ಆಗಸ್ಟ್ 23 ರಿಂದ ಸೆ. 12 ರವರೆಗೆ 144 ಕೋಟಿಗೂ ಅಧಿಕ ದಂಡ ಸಂಗ್ರಹಿಸಲಾಗಿದೆ.

ಕೆಎಸ್‌ಎಲ್‌ಎಸ್‌ಎ ಕಾರ್ಯನಿರ್ವಾಹಕ ಅಧ್ಯಕ್ಷರೂ ಆಗಿರುವ ಹಿರಿಯ ನ್ಯಾಯಮೂರ್ತಿ ಅನು ಶಿವರಾಮನ್ ಅವರು ಅದಾಲತ್‌ನಲ್ಲಿ ರಾಜಿಯಾದ ಪ್ರಕರಣಗಳು ಹಾಗೂ ಪರಿಹಾರದ ಅಂಕಿ-ಅಂಶಗಳ ಕುರಿತು ಮಾಹಿತಿ ನೀಡಿದರು. ರಾಜ್ಯಾದ್ಯಂತ ಸೆ.13ರಂದು ನಡೆದ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿಯಿರುವ 2,31,251, ವ್ಯಾಜ್ಯ ಪೂರ್ವ 1,08,63,667 ಪ್ರಕರಣಗಳು ಸೇರಿ ಒಟ್ಟು 1,11,04,918 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ ಪಡಿಸಲಾಗಿದೆ ಎಂದು ಹೇಳಿದರು.

ಲೋಕ ಅದಾಲತ್‌ಗಾಗಿ ಹೈಕೋರ್ಟ್‌ನ ಬೆಂಗಳೂರು ಪ್ರಧಾನ ಪೀಠ, ಧಾರವಾಡ, ಕಲಬುರ್ಗಿಯ ಪೀಠಗಳು ಹಾಗೂ ಜಿಲ್ಲಾ ಮತ್ತು ತಾಲ್ಲೂಕು ನ್ಯಾಯಾಲಯಗಳೂ ಸೇರಿ ಒಟ್ಟು 989 ಪೀಠಗಳನ್ನು ಸ್ಥಾಪಿಸಲಾಗಿತ್ತು.


ಉದಯವಾಹಿನಿ ಚಿತ್ರ

ಹೈಕೋರ್ಟ್‌ನ ಮೂರೂ ಪೀಠಗಳಲ್ಲಿ ಬಾಕಿ ಇದ್ದ ಒಟ್ಟು 1,042 ಪ್ರಕರಣಗಳು, ಜಿಲ್ಲಾ ಮತ್ತು ತಾಲ್ಲೂಕು ನ್ಯಾಯಾಲಯಗಳಲ್ಲಿದ್ದ 2,41,251 ಪ್ರಕರಣಗಳು ಸೇರಿ ನ್ಯಾಯಾಲಯಗಳಲ್ಲಿ ಬಾಕಿ ಇದ್ದ ಒಟ್ಟು 2,42,293 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಇದಲ್ಲದೆ, 1,08,63,667 ವ್ಯಾಜ್ಯಪೂರ್ವ ಪ್ರಕರಣಗಳನ್ನೂ ಅದಾಲತ್‌ನಲ್ಲಿ ವಿಲೇವಾರಿ ಮಾಡಲಾಗಿದ್ದು, ಒಟ್ಟಾರೆ 1,11,05,960 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ.

**ಟ್ರಾಫಿಕ್ ನಿಯಮ ಉಲ್ಲಂಘನೆಗೆ ಸಂಬಂಧಿಸಿದ ಪ್ರಕರಣಗಳನ್ನೂ ಲೋಕ ಅದಾಲತ್‌ನಲ್ಲಿ ರಾಜಿ ಸಂಧಾನಕ್ಕೆ ನಿಗದಿಪಡಿಸಲಾಗಿತ್ತು. ಅದರಂತೆ, 53,11,589 ಪ್ರಕರಣಗಳನ್ನು ವ್ಯಾಜ್ಯಪೂರ್ವ ಪ್ರಕರಣಗಳಾಗಿ ವಿಲೇವಾರಿ ಮಾಡಲಾಗಿದ್ದು, 144 ಕೋಟಿ ರೂ. ಗಳಿಗೂ ಅಧಿಕ ಮೊತ್ತದ ದಂಡ ಸಂಗ್ರಹಿಸಲಾಗಿದೆ. ಈ ರೀತಿಯ ಟ್ರಾಫಿಕ್ ಚಲನ್ ಪ್ರಕರಣಗಳ ಇತ್ಯರ್ಥವು ಪ್ರಾಧಿಕಾರದ ಐತಿಹಾಸಿಕ ಸಾಧನೆಯಾಗಿದೆ. ಇದರಿಂದ, ರಾಜ್ಯ ಸರ್ಕಾರದ ಬೊಕ್ಕಸಕ್ಕೆ ದಾಖಲೆ ಮೊತ್ತದ ಆದಾಯ ಸಂದಾಯವಾಗುವ ಜತೆಗೆ, ಸಾರ್ವಜನಿಕರಲ್ಲಿ ಸಂಚಾರ ಜಾಗೃತಿಯನ್ನೂ ಸೃಷ್ಟಿಸಿದೆ ಎಂದು ಸಂತಸ ವ್ಯಕ್ತಪಡಿಸಿದರು.**

## ಶಾರ್ಟ್ ಸರ್ಕ್ಯೂಟ್‌ನಿಂದ ಮನೆಯಲ್ಲಿ ಅಗ್ನಿ ಅವಘಡ

• ಉದಯವಾಹಿನಿ, ಬೆಂಗಳೂರು

ಮನೆಯೊಂದರಲ್ಲಿ ಶಾರ್ಟ್ ಸರ್ಕ್ಯೂಟ್‌ನಿಂದ ಅಗ್ನಿ ಅವಘಡ ಸಂಭವಿಸಿ ಒಂದೇ ಕುಟುಂಬದ ನಾಲ್ವರು ಗಾಯಗೊಂಡಿರುವ ಘಟನೆ ಬೇಗೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಕೃಷ್ಣಾ ಲೇಔಟ್‌ನ 3 ನೇ ಕ್ರಾಸ್ ಬಳಿಯ 3 ಅಂತಸ್ತಿನ ಕಟ್ಟಡದಲ್ಲಿ ಅಗ್ನಿ ಅವಘಡ ಸಂಭವಿಸಿದ್ದು, ಘಟನೆ ವೇಳೆ ಮೊದಲ ಮಹಡಿಯಲ್ಲಿ ಮಲಗಿದ್ದ ಶೀಲಾ (44), ಗೋಪಿ (49), ಅಭಿಷೇಕ್ (18) ಮತ್ತು ರಮ್ಯಾ (28) ಎಂಬ ನಾಲ್ವರು ಗಾಯಗೊಂಡಿದ್ದಾರೆ. ಬೆಳಗಿನ ಜಾವ 2.40 ರ ಸುಮಾರಿಗೆ ನೆಲ ಮಹಡಿಯಲ್ಲಿರುವ ಮೀಟರ್ ಬೋರ್ಡ್‌ನಲ್ಲಿ ಬೆಂಕಿ ಕಾಣಿಸಿಕೊಂಡಿದೆ. ನೆಲ ಮಹಡಿಯಲ್ಲಿ ನಿಲ್ಲಿಸಿದ್ದ ಎರಡು ವಾಹನಗಳಿಗೂ ಬೆಂಕಿ ಹೊತ್ತಿಕೊಂಡಿದ್ದು, ಕಟ್ಟಡದಾದ್ಯಂತ ದಟ್ಟ ಹೊಗೆ ಆವರಿಸಿದೆ.


ಉದಯವಾಹಿನಿ ಚಿತ್ರ

ಕೂಡಲೇ ನೆರೆಹೊರೆಯವರು, ಗೋಪಿ ಕುಟುಂಬದವರಿಗೆ ಕರೆ ಮಾಡಿ ಎಚ್ಚರಿಸಿದ್ದಾರೆ.

ಆದರೆ, ಕೆಳಮಹಡಿಯಲ್ಲಿ ಮನೆಯಲ್ಲಿದ್ದ ಗೋಪಿ ಕುಟುಂಬದವರು, ಹೊಗೆ ಸೇವಿಸಿ ತೀವ್ರವಾಗಿ ಅಸ್ವಸ್ಥರಾಗಿದ್ದು, ಹೊರ ಬರಲಾಗದೆ ಸಂಕಷ್ಟಕ್ಕೆ ತುತ್ತಾಗಿದ್ದರು.

ಈ ಘಟನೆ ಬಗ್ಗೆ ಮಾಹಿತಿ ಪಡೆದ ಬೇಗೂರು ಠಾಣೆ ಹೊಯ್ಸಳ ವಾಹನದ ಪೊಲೀಸರು, ತಕ್ಷಣವೇ ಘಟನಾ ಸ್ಥಳಕ್ಕೆ ತೆರಳಿ, ಸ್ಥಳೀಯರ ನೆರವಿನಿಂದ ಗೋಪಿ ಕುಟುಂಬವನ್ನು ರಕ್ಷಿಸಿದ್ದಾರೆ.

## ಮಹಿಳೆಯ ಕುತ್ತಿಗೆಗೆ ಲಾಂಗ್ ಹಿಡಿದು ಸರ ಕಿತ್ತ ದರೋಡೆ ಕೋರರು

• ಉದಯವಾಹಿನಿ, ಬೆಂಗಳೂರು

ಸಿಲಿಕಾನ್ ಸಿಟಿಯಲ್ಲಿ ಬೈಕಿನಲ್ಲಿ ಆಗಮಿಸಿ ಸರಗಳ್ಳತನ ಮಾಡುತ್ತಿದ್ದ ದುಷ್ಕರ್ಮಿಗಳು ಇದೀಗ ಮಹಿಳೆಯರ ಕುತ್ತಿಗೆಗೆ ಲಾಂಗ್ ಇಟ್ಟು ಸರ ಕಸಿದು ಪರಾರಿಯಾಗುತ್ತಿದ್ದಾರೆ. ಕೈಯಲ್ಲಿ ಲಾಂಗ್ ಹಿಡಿದು ಮಹಿಳೆಯರನ್ನು ಬೆದರಿಸಿ ಚಿನ್ನದ ಸರ ಕಳ್ಳತನ ಮಾಡುವ ಇವರ ಕೃತ್ಯ ನೋಡಿದರೆ ಎಂಥವರಿಗೂ ಭಯ ಹುಟ್ಟುತ್ತೆ. ಗಿರಿನಗರ, ಕೋಣನಕುಂಟೆಯ ಆರ್‌ಬಿಐ ಲೇಔಟ್‌ನಲ್ಲಿ ಲಾಂಗ್ ಹಿಡಿದು ಸರಗಳ್ಳರು ಕಳ್ಳತನ ಮಾಡಿದ್ದಾರೆ. ರಾತ್ರಿ ಗಿರಿನಗರದಲ್ಲಿ ಲಾಂಗ್ ಬೀಸಿ ವರಲಕ್ಷ್ಮೀ ಎಂಬವರ ಕೈ ಬೆರಳು ತುಂಡರಿಸಿ ಚಿನ್ನದ ಸರ ಕಸಿದು ಪರಾರಿಯಾಗಿದ್ದರು. ದಿನ ಕೋಣನಕುಂಟೆಯ ಆರ್‌ಬಿಐ ಲೇಔಟ್‌ನಲ್ಲೂ ಲಾಂಗ್ ತೋರಿಸಿ ನಡೆದುಕೊಂಡು ಬರುತ್ತಿದ್ದ ಇಬ್ಬರು ಮಹಿಳೆಯರಿಗೆ ಬೆದರಿಸಿ ಸರ ಕಸಿದು ಪರಾರಿಯಾಗಿದ್ದಾರೆ.

ಮಹಿಳೆಗೆ ಲಾಂಗ್ ಹಿಡಿದು ಬೆದರಿಸುವ ವೀಡಿಯೊ ಲಭ್ಯವಾಗಿದ್ದ ದರೋಡೆಕೋರರ ಅಟ್ಟಹಾಸ ಭಯ ಹುಟ್ಟಿಸುವಂತಿದೆ. ಸದ್ಯ ಆರೋಪಿಗಳ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

## ಕೊಲೆ ಪ್ರಕರಣದಲ್ಲಿ ಜಾಮೀನು ಪಡೆಯಲು ಅಧಿಕಾರಿಯ ಮನೆಯಲ್ಲಿ ದರೋಡೆ

• ಉದಯವಾಹಿನಿ, ಬೆಂಗಳೂರು

ಕೊಲೆ ಪ್ರಕರಣದಲ್ಲಿ ಜಾಮೀನು ಪಡೆಯಲು ತೆಗೆದುಕೊಂಡ ಸಾಲ ಮರು ಪಾವತಿಸಲು ಸರ್ಕಾರಿ ಅಧಿಕಾರಿಯ ಮನೆಯಲ್ಲಿ ದರೋಡೆ ಮಾಡಿದ್ದಕ್ಕಾಗಿ ಇಬ್ಬರು ರೌಡಿಶೀಟರ್‌ಗಳು ಸೇರಿದಂತೆ ಮೂವರನ್ನು ಜ್ಞಾನಭಾರತಿ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ. ಬಂಧಿತನ್ನು ಅಬ್ರಹಾಂ ಅಲಿಯಾಸ್ ಅಭಿ (24)ಧನುಷ್ ಅಲಿಯಾಸ್ ದಡಿಯಾ (25), ಎಂ ಕೆ ನಿಖಿಲ್ (25) ಎಂದು ಗುರ್ತಿಸಲಾಗಿದೆ. ಧನುಷ್, ಅಬ್ರಹಾಂ ಇಬ್ಬರೂ ರೌಡಿಶೀಟರ್‌ಗಳಾಗಿದ್ದು, ನಿಖಿಲ್ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ ನಾಲ್ಕು ಪ್ರಕರಣಗಳಿರುವುದಾಗಿ ತಿಳಿದುಬಂದಿದೆ.

ಕೊಲೆ ಪ್ರಕರಣದಲ್ಲಿ ಧನುಷ್, ಅಬ್ರಹಾಂ ಜೈಲು ಸೇರಿದ್ದರು, ಸಾಲ ಪಡೆದು ಜಾಮೀನಿನ ಮೇಲೆ ಹೊರ ಬಂದಿದ್ದರು. ಸಾಲ ಮರುಪಾವತಿಗಾಗಿ ಇಬ್ಬರೂ ಸರ್ಕಾರಿ ಅಧಿಕಾರಿಯ ಮನೆಯೊಂದಕ್ಕೆ ನುಗ್ಗಿದ್ದು ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನಾಭರಣಗಳು, ಬೆಳ್ಳಿ ವಸ್ತುಗಳು, ನಗದು ಮತ್ತು ಕೈಗಡಿಯಾರಗಳನ್ನು ಕದ್ದಿದ್ದಾರೆ. ಧಾರ್ಮಿಕ ಕಾರ್ಯಕ್ರಮಕ್ಕಾಗಿ ಅಧಿಕಾರಿ ಊರಿಗೆ ತೆರಳಿದ್ದಾಗ ದರೋಡೆ ನಡೆಸಲಾಗಿದೆ ಎಂದು ತಿಳಿದುಬಂದಿದೆ.



ಘಟನೆ ಬಳಿಕ ಪೊಲೀಸರು 50 ಕ್ಕೂ ಹೆಚ್ಚು ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿಗಳು, ಇತರ ತಾಂತ್ರಿಕ ಪುರಾವೆಗಳನ್ನು ಪರಿಶೀಲಿಸಿದ ನಂತರ ಆಕತರೋಪಿಗಳನ್ನು ಬಂಧಿಸಿದ್ದಾರೆ.

ನ್ಯಾಯಾಂಗ ಬಂಧನದಲ್ಲಿದ್ದ ಅಭಿ, ಧನುಷ್ ಜಾಮೀನು ಪಡೆಯಲು ಸಾಲ ಪಡೆದಿದ್ದರು ಎಂದು ತನಿಖೆಯಿಂದ ತಿಳಿದುಬಂದಿದೆ. ಆರೋಪಿಗಳಿಂದ ಪೊಲೀಸರು 423 ಗ್ರಾಂ ಚಿನ್ನಾಭರಣಗಳು, 710 ಗ್ರಾಂ ಬೆಳ್ಳಿ ವಸ್ತುಗಳು ಮತ್ತು 4,000 ರೂ. ನಗದು ವಶಪಡಿಸಿಕೊಂಡಿದ್ದು, ಒಟ್ಟು 50 ಲಕ್ಷ ರೂ. ಮೌಲ್ಯದ ಹಣ ವಶಪಡಿಸಿಕೊಂಡಿದ್ದಾರೆ.

**ಸಾಲವನ್ನು ಮರುಪಾವತಿಸಲು, ಇಬ್ಬರು ನಿಖಿಲ್ ಜೊತೆಗೆ ಕಳ್ಳತನಕ್ಕೆ ಯೋಜನೆ ರೂಪಿಸಿದ್ದಾರೆ. ಕದ್ದ ಕೆಲವು ಚಿನ್ನದ ಆಭರಣಗಳನ್ನು ಮಾರಾಟ ಮಾಡಿದ ನಂತರ, ಆರೋಪಿಗಳು ಗೋವಾ ಮತ್ತು ಕೇರಳಕ್ಕೆ ಪರಾರಿಯಾಗಿದ್ದರು. ಪೊಲೀಸರ ಕೈಗೆ ಸಿಕ್ಕಿಹಾಕಿಕೊಳ್ಳದಂತೆ ಪ್ರತಿದಿನ ಹೊಸ ಇನ್ ಸ್ಟಾಗ್ರಾಮ್ ಖಾತೆಗಳನ್ನು ರಚಿಸಿ, ಫೋನ್ ಕರೆಗಳ ಬದಲಿಗೆ ಆಡಿಯೋ ಮತ್ತು ವಿಡಿಯೋ ಕರೆಗಳ ಮೂಲಕ ಆಪ್ತರೊಂದಿಗೆ ಮಾತುಕತೆ ನಡೆಸುತ್ತಿದ್ದರು ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ.**

# ಬೆಳ್ಳಂದೂರು ತೊರೆಯುವುದಾಗಿ ಹೇಳಿದ ಟೆಕ್ ಕಂಪನಿ

### ಗ್ರೇಟರ್ ಬೆಂಗಳೂರು ಐಟಿ ಕಂಪನಿಗಳು, ಕಾರ್ಖಾನೆಗಳ ಸಂಘದ ಪ್ರಧಾನ ಕಾರ್ಯದರ್ಶಿ ಕೃಷ್ಣಕುಮಾರ್ ಗೌಡ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಭಾರಿ ಸಂಚಾರ ದಟ್ಟಣೆ, ಕಳಪೆ ರಸ್ತೆಯ ಸ್ಥಿತಿಯಿಂದಾಗಿ ಹೊರ ವರ್ತುಲ ರಸ್ತೆಯ ಕಾಡುಬೀಸನಹಳ್ಳಿಯ ವಸ್ವಾನಿ ಪ್ರೆಸಿಡೊದಿಂದ ಸ್ಥಳಾಂತರಗೊಳ್ಳುವುದಾಗಿ ಬೆಂಗಳೂರು ಮೂಲದ ಲಾಜಿಸ್ಟಿಕ್ ಕಂಪನಿ ಬ್ಲ್ಯಾಕ್‌ಬಕ್ ಹೇಳಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಕಂಪನಿಯ ಸಹ ಸಂಸ್ಥಾಪಕ, ಸಿಇಒ ರಾಜೇಶ್ ಯಬಾಜಿ, ಹೊರವರ್ತುಲ ರಸ್ತೆಯ ಬೆಳ್ಳಂದೂರು ಕಳೆದ 9 ವರ್ಷಗಳಿಂದ ನಮ್ಮ ಮನೆಯೂ ಕಚೇರಿಯೂ ಆಗಿತ್ತು. ಆದರೆ ಈಗ ಅಲ್ಲಿ ಮುಂದುವರಿಯಲು ಭಾರಿ ಕಷ್ಟವಾಗುತ್ತಿದೆ. ನನ್ನ ಸಹೋದ್ಯೋಗಿಗಳಿಗೆ ಪ್ರಯಾಣ ಸಮಯ ಒಂದೂವರೆ ಗಂಟೆ ತಗುಲುತ್ತದೆ. ಹೀಗಾಗಿ ನಾವು ಸ್ಥಳಾಂತರಗೊಳ್ಳಲು ನಿರ್ಧರಿಸಿದ್ದೇವೆ. ರಸ್ತೆ ತುಂಬಾ ಗುಂಡಿಗಳಿವೆ. ದೂಳು ಆವರಿಸಿಕೊಂಡಿದೆ. ಅದನ್ನು ಸರಿ ಮಾಡುವ ಕನಿಷ್ಠ ಉಮೇದು ಕೂಡ ಕಾಣಿಸುತ್ತಿಲ್ಲ ಎಂದು ಅವರು ಬೇಸರ ವ್ಯಕ್ತಪಡಿಸಿದ್ದಾರೆ. ಸದ್ಯ ಇರುವ ಸಮಸ್ಯೆಗಳು 5 ವರ್ಷವಾದರೂ ಪರಿಹಾರವಾ ಭರವಸೆ ಇಲ್ಲ ಎಂದು ಹೇಳಿದ್ದಾರೆ.ಆದರೆ ಎಲ್ಲಿಗೆ ಸ್ಥಳಾಂತರಗೊಳ್ಳಲಿದ್ದಾರೆ ಎನ್ನುವುದನ್ನು ಯಬಾಜಿ ತಿಳಿಸಿಲ್ಲ.

1500ಕ್ಕೂ ಅಧಿಕ ಉದ್ಯೋಗಿಗಳಿರುವ ಈ ಕಂಪನಿಯಲ್ಲಿ ಬಿ ಕ್ಯಾಪಿಟಲ್, ಅಸೀಲ್ ಹಾಗೂ ಗೋಲ್ಡ್ ಮ್ಯಾನ್ ಸಾಚ್ ಮುಂತಾದ ಸಂಸ್ಥೆಗಳು ಹೂಡಿಕೆ ಮಾಡಿವೆ. ಸ್ಥಳಾಂತರಗೊಳ್ಳುವ ಬಗ್ಗೆ ಯಾಬ್ಬಿಯವರ ಘೋಷಣೆ ಬೇಸರ ತಂದಿದೆ. ಬ್ಲಾಕ್‌ಕ್ ಬೆಂಗಳೂರು ತೊರೆಯದಂತೆ ಪ್ರಯತ್ನಿಸುತ್ತೇವೆ. ಬೇರೆ ಸಂಸ್ಥೆಗಳು ಇದೇ ನಿರ್ಧಾರ ತಾಳುವ ಸಾಧ್ಯತೆ ಇದೆ ಎಂದು ಗ್ರೇಟರ್ ಬೆಂಗಳೂರು ಐಟಿ ಕಂಪನಿಗಳು ಹಾಗೂ ಕಾರ್ಖಾನೆಗಳ ಸಂಘದ ಪ್ರಧಾನ ಕಾರ್ಯದರ್ಶಿ ಕೃಷ್ಣಕುಮಾರ್ ಗೌಡ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

ಹಲವು ಸ್ಟಾರ್ಟಪ್ ಹಾಗೂ ಕಾರ್ಪೊರೇಟ್ ಸಂಸ್ಥೆಗಳ ಉದ್ಯೋಗಿಗಳು ಈ ಸಮಸ್ಯೆಗಳನ್ನೇ ಸಾಮಾಜಿಕ ಜಾಲತಾಣಗಳಲ್ಲಿ ಹಂಚಿಕೊಳ್ಳುತ್ತಿದ್ದಾರೆ. ಮಂಗಳವಾರ ಹಾಗೂ ಬುಧವಾರ ಸಂಚಾರ ದಟ್ಟಣೆ ಉಳಿದ ದಿನಗಳಿಗಿಂತ ಹೆಚ್ಚಾಗಿರುತ್ತದೆ ಎಂದು ಕಾರ್ಪೊರೇಟ್ ಉದ್ಯೋಗಿಗಳು ಅಭಿಪ್ರಾಯ ಹಂಚಿಕೊಂಡರು, 'ಸಂಚಾರ ದಟ್ಟಣೆಯಿಂದಾಗಿ ನಾನು 2 ಗಂಟೆ ರಸ್ತೆಯಲ್ಲೇ ಕಳೆದ ದಿನಗಳಿವೆ. ಇದರಿಂದ ಭಾರಿ ಬಳಲುವಿಕೆ ಉಂಟಾಗುತ್ತದೆ. ಬೆಳಗಿನ ಅವಧಿಯಲ್ಲೂ ಪರಿಸ್ಥಿತಿ ಭಿನ್ನವಾಗಿಲ್ಲ. ಹೈಬ್ರಿಡ್ ಮಾದರಿಯನ್ನು ಬಿಟ್ಟು ಪ್ರತಿದಿನ ಕಚೇರಿಗೆ ಬನ್ನಿ ಎಂದು ಕಂಪನಿಗಳು ಒತ್ತಾಯಿಸುತ್ತಿರುವುದು ನಮ್ಮ ಪರಿಸ್ಥಿತಿಯನ್ನು ಇನ್ನಷ್ಟು ಬಿಗಡಾಯಿಸುವಂತೆ ಮಾಡಿದೆ. ಆದರೆ ಸಂಚಾರ ದಟ್ಟಣೆ ಸಮಸ್ಯೆಯಿಂದಾಗಿ ನಾವು ಅದನ್ನು ವಿರೋಧಿಸುತ್ತಿದ್ದೇವೆ. ನಮ್ಮ ಕೆಲಸದ ಮೇಲೆಯೂ ಪರಿಣಾಮ ಬೀರುತ್ತದೆ ಎಂದು ಬೆಳ್ಳಂದೂರಿನ ಕಂಪನಿಯನ್ನು ಕೆಲಸ ಮಾಡುತ್ತಿರುವ ಸ್ನೇಹ ಹೇಳಿದರು. ಎಕ್ಸ್‌ಲ್ಲೂ ಇಂಥಹದ್ದೇ ಪ್ರತಿಕ್ರಿಯೆಗಳು ವ್ಯಕ್ತವಾಗಿವೆ.

ಬೆಳ್ಳಂದೂರು ನರಕದಂತೆ ಅನುಭವವಾಗುತ್ತಿದೆ. ರಸ್ತೆಗಳು ಕಳಪೆಯಾಗಿವೆ. ಪಾದಾಚಾರಿ ಸೌಲಭ್ಯಗಳು ಅರೆಬರೆಯಾಗಿವೆ. ದೂಳು ಸೇರಿ ಗಾಳಿ ದಪ್ಪವಾಗಿದೆ, ಹಸಿರು ಎನ್ನುವುದು ದೂರದ ಮಾತಾಗಿದೆ, ಪಾರ್ಕಿಂಗ್ ಮಾಡುವುದು ದುಃಸ್ವಪ್ನವಾಗಿ ಪರಿಣಮಿಸಿದೆ ಎಂದು ಶಂಕರ್ ಮೈಸೂರು ಎಂಬವರು ಬರೆದುಕೊಂಡಿದ್ದಾರೆ.

ಈ ಸಮಸ್ಯೆಗಳ ಪರಿಹಾರಕ್ಕೆ ಬೆಂಗಳೂರಿನ ಸಾರ್ವಜನಿಕ ಸಾರಿಗೆ ಉತ್ತಮ ಪಡಿಸುವ ಪ್ರಾಮುಖ್ಯತೆಯನ್ನು ಪೊಲೀಸ್ ಮಹಾನಿರ್ದೇಶಕರಾದ ಎಂ.ಎ ಸಲೀಂ ಪ್ರತಿಪಾದಿಸಿದ್ದಾರೆ.


**ಹೊರವರ್ತುಲ ರಸ್ತೆಯಲ್ಲ 40-45 ನಿಮಿಷ ಕಳೆಯುತ್ತೇನೆ. ಅದೂ ಸಂಚಾರ ದಟ್ಟಣೆ ಅವಧಿ ಅಲ್ಲದ ಬೆಳಿಗ್ಗೆ 11.30ರವೇಳೆಗೆ, ಅದೇ ದೂರವನ್ನು ಬೆಳಿಗ್ಗೆ 6 ಗಂಟೆಗೆ 20 ನಿಮಿಷದಲ್ಲಿ ತಲುಪಬಹುದು' ಎಂದು ಬ್ರೂಕ್ ಫೀಲ್ಡ್‌ನ ನಾರ್ತನ್ ಟ್ರಸ್ಟ್ ಎನ್ನುವ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ಕಲ್ಯಾಣ ನಗರದ ನಿವಾಸಿ ಸುಹಾಸ್ ರೆಡ್ಡಿ ಹೇಳಿದರು.**

**'ಸಂಚಾರ ದಟ್ಟಣೆ, ರಸ್ತೆ ಗುಂಡಿಗಳು, ಹೆಚ್ಚಿದ ಪ್ರಯಾಣ ಸಮಯ ಹೀಗೆ ಹೊರವರ್ತುಲ ರಸ್ತೆಯಲ್ಲಿ ಮೂಲಭೂತ ಸೌಕರ್ಯದ ಬಗ್ಗೆ ಅಸಡ್ಡೆ ತೋರಿಸುತ್ತಿರುವ ಬಗ್ಗೆ ನಮಗೆ ತೀವ್ರ ಕಳವಳವಾಗುತ್ತಿದೆ. ಸಂಸ್ಥೆಗಳು ಸ್ಥಳಾಂತರಗೊಳ್ಳುವ ಬಗ್ಗೆ ಮಾತನಾಡುತ್ತಿರುವುದು, ಸರ್ಕಾರ ತ್ವರಿತವಾಗಿ ಮಧ್ಯಪ್ರವೇಶ ಮಾಡಬೇಕು ಎನ್ನುವುದನ್ನು ಸೂಚಿಸುತ್ತಿದೆ. ರಸ್ತೆ ಅಭಿವೃದ್ಧಿ, ಮೆಟ್ರೊ ಸಂಪರ್ಕ, ಸಾರ್ವಜನಿಕ ಸೌಲಭ್ಯ ನೀಡಲು ಪಾರದರ್ಶಕ ವ್ಯವಸ್ಥೆ ಮಾಡಬೇಕು ಎಂದು ನಾವು ಆಗ್ರಹಿಸುತ್ತೇವೆ ಎಂದು ಅವರು ಹೇಳಿದ್ದಾರೆ.**

# ಮುಡಾದಲ್ಲಿನ ನೂರಾರು ಕೋಟಿ ರೂಪಾಯಿಗಳ ಅಕ್ರಮ ಹಣ ವ್ಯವಹಾರ

• ಉದಯವಾಹಿನಿ, ಮೈಸೂರು

ಮುಡಾದಲ್ಲಿ ಅಕ್ರಮವಾಗಿ ನಿವೇಶನ ಪಡೆದ ಎಲ್ಲರಿಗೂ ಶಿಕ್ಷೆ ಆಗುವುದು ಖಚಿತ ಎಂದು ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಹೇಳಿದರು. ಮೈಸೂರಿನಲ್ಲಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಇನ್ನೂ ಸಾಕಷ್ಟು ಜನರನ್ನು ಬಂಧಿಸುವ ಸಾಧ್ಯತೆಗಳಿವೆ. ಯಾರುಯಾರು ಅಕ್ರಮ ಮಾಡಿದ್ದಾರೂ ಅವರೆಲ್ಲರಿಗೂ ಶಿಕ್ಷೆಯಾಗುವುದು ಖಚಿತ ಎಂದು ಈಗಾಗಲೇ ಹೇಳಿದ್ದೇನೆ. ನಿವೇಶನಗಳ ಅಕ್ರಮದಲ್ಲಿ ನೂರಾರು ಕೋಟಿ ಅವ್ಯವಹಾರ ನಡೆದಿರುವ ಕಾರಣಕ್ಕೆ ಜಾರಿ ನಿರ್ದೇಶನಾಲಯದವರು ದಿನೇಶ್ ಅವರನ್ನು ಬಂಧಿಸಿದ್ದಾರೆ, ಎಂದರು. ಮುಡಾ ಪ್ರಕರಣದಲ್ಲಿ ನಾನು ಆರೋಪ ಮಾಡಿದ್ದಕ್ಕೆ ಸಂಬಂಧಪಟ್ಟಂತೆ ಸಾಕಷ್ಟು ಸಾಕ್ಷ್ಯಾಧಾರಗಳಿವೆ.



ತನಿಖೆ ಪ್ರಕ್ರಿಯೆಯಲ್ಲಿ ಸ್ವಲ್ಪ ವಿಳಂಬವಾಯಿತು ಎಂಬ ಕಾರಣಕ್ಕೆ ಮತ್ತು ಸಿದ್ದರಾಮಯ್ಯನವರು ತಮ್ಮ ಪ್ರಭಾವ ಬೀರಿ ಇವತ್ತು ಸುಳ್ಳು ವರದಿಯನ್ನು ಕೊಡಿಸಿದ್ದಾರೆ. ಹೀಗಾಗಿ ಪ್ರಕರಣ ಮುಚ್ಚಿ ಹೋಯಿತು ಎಂದು ಜನಸಾಮಾನ್ಯರಲ್ಲಿ ತಪ್ಪು ಭಾವನೆ ಮೂಡಿತ್ತು. ಆದರೆ, ಆರೋಪಕ್ಕೆ ಪೂರಕವಾಗಿ ನಾನು ಕೊಟ್ಟಿರುವ ಸಾಕ್ಷ್ಯಾಧಾರಗಳು ಮುಂದೊಂದು ದಿನ ಸತ್ಯವಾಗುತ್ತದೆ ಎಂದು ನಾನು ಪ್ರಾರಂಭದಲ್ಲೇ ಹೇಳಿದ್ದೇನೆ. ಅದೇ ರೀತಿ ಆಗಿದೆ, ಎಂದರು.

**ಸಿಎಂ ಪರ ವರದಿ ಕೊಟ್ಟಿದ್ದಾರೆ:** ಅಕ್ರಮ ವಿಚಾರದಲ್ಲಿ ಯಾರಿಗೂ ಕ್ಲೀನ್ ಚಿಟ್ ಕೊಟ್ಟಿಲ್ಲ, ಆದರೆ, ಮುಡಾ ಅಕ್ರಮಕ್ಕೆ ಸಿಎಂ ಸಿದ್ದರಾಮಯ್ಯನವರ ಕುಟುಂಬವೂ ಕಾರಣ ಎಂಬುದಕ್ಕೆ ಸಾಕ್ಷಿ ಇಲ್ಲವೆಂದು ಹೇಳುತ್ತಾರೆ. ಅವರ ಪರವಾಗಿ ವರದಿ ಕೊಟ್ಟಿದ್ದಾರೆ ಅಷ್ಟೇ.

ತೀರ್ಪು ಕೊಟ್ಟಿಲ್ಲ, ನ್ಯಾಯಾಲಯ ತೀರ್ಪು ಕೊಟ್ಟರಷ್ಟೇ ಅಂತಿಮವಾಗಲಿದೆ. ಅಕ್ರಮದಲ್ಲಿ ಸಾಕಷ್ಟು ಆರೋಪಿಗಳು ಭಾಗಿಯಾಗಿದ್ದಾರೆ. ಸಾಕಷ್ಟು ಜನ ಪ್ರಭಾವ ಬಳಸಿ ಅಕ್ರಮವಾಗಿ ನಿವೇಶನ ಪಡೆದಿದ್ದಾರೆ. ಅವರೆಲ್ಲರೂ ಹಂತಹಂತವಾಗಿ ಬಂಧನಕ್ಕೆ ಒಳಗಾಗುತ್ತಾರೆ, ಎಂದು ತಿಳಿಸಿದರು.

ಮುಡಾದಲ್ಲಿ ನೂರಾರು ಕೋಟಿ ರೂ. ಅಕ್ರಮ ಹಣ ವ್ಯವಹಾರ ನಡೆದಿರುವುದು ಸಾಬೀತಾಗಿದೆ. ಹೀಗಾಗಿ ಕೆಲವರ ಆಸ್ತಿಗಳನ್ನು ಜಪ್ತಿ ಮಾಡಿದ್ದಾರೆ ಎಂಬ ಮಾಹಿತಿ ಬಂದಿದೆ.

ಮುಂದಿನ ದಿನಗಳಲ್ಲಿ ಅವರೆಲ್ಲಾ ಖಂಡಿತವಾಗಿಯೂ ಶಿಕ್ಷೆಯಾಗುತ್ತದೆ. ಇದು ಅಕ್ರಮ ಮಾಡುವಂತಹ ಪ್ರಭಾವಿ ವ್ಯಕ್ತಿಗಳಿಗೆ ಒಂದು ಎಚ್ಚರಿಕೆಯಾಗಲಿದೆ. ಎಷ್ಟೇ ದೊಡ್ಡ ಪ್ರಭಾವಿ ಸ್ಥಾನದಲ್ಲಿದ್ದರೂ ಅಪರಾಧ ಕೃತ್ಯ ಎಸಗಿದಾಗ ನನ್ನಂತಹ ಸಾಮಾನ್ಯ ವ್ಯಕ್ತಿ ದೂರು ಅರ್ಜಿ ಕೊಟ್ಟರೂ ಶಿಕ್ಷೆಯಾಗುತ್ತದೆ ಎಂಬುದಕ್ಕೆ ಇದು ಸಾಕ್ಷಿ, ಎಂದು ಹೇಳಿದರು.

## ಇಬ್ಬರು ರೈತರ ಮೇಲೆ ಕರಡಿ ದಾಳಿ



• ಉದಯವಾಹಿನಿ, ಚಿಕ್ಕಬಳ್ಳಾಪುರ

ಒಂದೇ ದಿನ ಒಂದೇ ಕರಡಿ ಇಬ್ಬರು ರೈತರ ಮೇಲೆ ದಾಳಿ ಮಾಡಿರುವ ಘಟನೆ ತಾಲ್ಲೂಕಿನ ಪೋಶೆಟ್ಟಿಹಳ್ಳಿ ಬಳಿಯ ಗುರುಕಲನಾಗೇನಹಳ್ಳಿಯಲ್ಲಿ ನಡೆದಿದೆ. ಕರಡಿಯಿಂದ ದಾಳಿಗೆ ಒಳಗಾದ ಗಾಯಾಳುಗಳನ್ನು ತಾಲ್ಲೂಕಿನ ಬಾಲಕುಂಟಹಳ್ಳಿಯ ಕೃಷ್ಣಪ್ಪ ಹಾಗೂ ಗುರುಕಲನಾಗೇನಹಳ್ಳಿ ಗ್ರಾಮದ ನರಸಿಂಹಮೂರ್ತಿ ಎಂದು ಗುರುತಿಸಲಾಗಿದೆ.

ಗುರುಕಲನಾಗೇನಹಳ್ಳಿ ಗ್ರಾಮದ ನರಸಿಂಹಮೂರ್ತಿ ತಮ ತೋಟದಲ್ಲಿ ಕೆಲಸ ಮಾಡುತ್ತಿದ್ದಾಗ ಏಕಾಏಕಿ ಪ್ರತ್ಯಕ್ಷವಾದ ಕರಡಿ ಅವರ ಮೇಲೆ ದಾಳಿ ನಡೆಸಿದೆ. ಕರಡಿಯ ದಾಳಿಗೆ ನರಸಿಂಹಮೂರ್ತಿಯ ಎಡಗಣ್ಣು, ಹಣೆ, ಮುಖ ಮತ್ತು ಕೈ-ಕಾಲುಗಳಿಗೆ ಗಂಭೀರ ಗಾಯಗಳಾಗಿವೆ. ದಾಳಿಯಿಂದ ಕಂಗಾಲಾದ ನರಸಿಂಹಮೂರ್ತಿ ಕಿರುಚಾಟ ಕೇಳಿ ಅಕ್ಕಪಕ್ಕದ ತೋಟಗಳಲ್ಲಿ ಕೆಲಸ ಮಾಡುತ್ತಿದ್ದವರು ಬಂದು ಕರಡಿಯನ್ನು ಓಡಿಸಿದ್ದಾರೆ. ಅಲ್ಲಿಂದ ಕಾಲ್ಕಿತ್ತ ಕರಡಿ ಬಾಳೆ ತೋಟವೊಂದರಲ್ಲಿ ಸೇರಿಕೊಂಡಿದೆ.

ಬಾಲಕುಂಟಹಳ್ಳಿ ಗ್ರಾಮದ ಕೃಷ್ಣಪ್ಪ ಗುರುಕುಲನಾಗೇನಹಳ್ಳಿ ಬಳಿಯ ತಮ ತೋಟದಲ್ಲಿ ಕೆಲಸ ಮಾಡುತ್ತಿದ್ದ ವೇಳೆ ಪಕ್ಕದ ಬಾಳೆ ತೋಟದಿಂದ ಏಕಾಏಕಿ ಬಂದ ಕರಡಿಯು ಅವರ ಎಡಗೈ ಕಚ್ಚಿ ಹಿಡಿದು ಪರಚಿ ಮೇಲೆ ದಾಳಿ ನಡೆಸಿದೆ. ಈ ವೇಳೆ ಅವರು ಕೂಗಿಕೊಂಡಾಗ ಅಕ್ಕಪಕ್ಕದ ಜನತೆ ಬಂದಿದ್ದಾರೆ. ಜನ ಬಂದ ಹಿನ್ನೆಲೆಯಲ್ಲಿ ಕರಡಿ ಅವರನ್ನು ಬಿಟ್ಟು ಅಲ್ಲಿಂದ ಪಲಾಯನ ಮಾಡಿದೆ. ಸ್ಥಳೀಯರು ಕೂಡಲೆ ಗಾಯಾಳುಗಳನ್ನು ಚಿಕ್ಕಬಳ್ಳಾಪುರ ಜಿಲ್ಲಾಸ್ಪತ್ರೆಗೆ ತಂದು ಚಿಕಿತ್ಸೆಗೆ ದಾಖಲು ಮಾಡಿದ್ದಾರೆ. ಸದ್ಯ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೈತರಿಬ್ಬರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಸ್ಥಳಕ್ಕೆ ಚಿಕ್ಕಬಳ್ಳಾಪುರ ಅರಣ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಮರು ಮತ ಎಣಿಕೆಯಲ್ಲಿ ಬಿಜೆಪಿ ಗೆದ್ರೆ, ರಾಜಕೀಯ ನಿವೃತ್ತಿ ನಂಜೇಗೌಡ ಸವಾಲು

## ಹೈಕೋರ್ಟ್ ಆದೇಶದಂತೆ ಮರು ಮತ ಎಣಿಕೆ

• ಉದಯವಾಹಿನಿ, ಕೋಲಾರ

ನಾನು 1986ರಿಂದ ಮಾಲೂರು ತಾಲ್ಲೂಕಿನಲ್ಲಿರಾಜಕಾರಣದಲ್ಲಿದ್ದೇನೆ. ಯಾರು ಏನು ಎಂಬುದು ನನಗೆ ಚೆನ್ನಾಗಿ ಗೊತ್ತಿದೆ. ಈ ಪ್ರಕರಣದಿಂದಾಗಿ ಜನರಲ್ಲಿ ನನ್ನ ಬಗ್ಗೆ ಕನಿಕರ ಬಂದಿದ್ದು, ಮುಂದಿನ ಚುನಾವಣೆಗಳಲ್ಲಿ ಕ್ಷೇತ್ರದ ಜನರು ಗೆಲುವಿನ ಅಂತರವನ್ನು ಹೆಚ್ಚಿಸಲಿದ್ದಾರೆ.
-ಕೆ.ವೈ.ನಂಜೇಗೌಡ, ಮಾಲೂರು ಶಾಸಕರು

**ಇಡೀ ಆದೇಶ ಮೇಲೆ ಮೇಲ್ಮನವಿ**

ಸುಪ್ರೀಂ ಕೋರ್ಟ್‌ನಲ್ಲಿ ಮೇಲ್ಮನವಿ ಮರು ಮತ ಎಣಿಕೆಗೆ ನನ್ನದೇನೂ ಅಭ್ಯಂತರವಿಲ್ಲ. ಈ ಹಿಂದೆಯೂ ಮರು ಮತ ಎಣಿಕೆಗೆ ತಡೆಯಾಜ್ಞೆ ತರುವುದಿಲ್ಲವೆಂದು ಹೇಳಿದ್ದೇನೆ. ಆದರೆ, ಹೈಕೋರ್ಟ್ ನನ್ನ ಶಾಸಕ ಸ್ಥಾನವನ್ನು ಅಸಿಂಧುಗೊಳಿಸಿದೆ. ಹೀಗಾಗಿ ನಾನು ಸುಪ್ರೀಂ ಕೋರ್ಟ್ ಮೊರೆ ಹೋಗುತ್ತಿದ್ದು, ಇಡೀ ಆದೇಶ ಮೇಲೆ ಮೇಲ್ಮನವಿ ಸಲ್ಲಿಸಲಾಗುವುದು ಎಂದರು.

ಹೈಕೋರ್ಟ್ ಆದೇಶದಂತೆ ಮಾಲೂರು ವಿಧಾನಸಭಾ ಕ್ಷೇತ್ರದ ಚುನಾವಣೆಯ ಮರು ಮತ ಎಣಿಕೆಯಲ್ಲಿ ಬಿಜೆಪಿ ಅಭ್ಯರ್ಥಿ ಕೆಎಸ್ ಮಂಜುನಾಥಗೌಡ ಗೆಲುವು ಸಾಧಿಸಿದರೆ ರಾಜಕೀಯ ನಿವೃತ್ತಿ ಸ್ವೀಕರಿಸುತ್ತೇನೆ ಎಂದು ಶಾಸಕ ಕೆವೈ ನಂಜೇಗೌಡ ಸವಾಲು ಹಾಕಿದರು. ತಾಲ್ಲೂಕಿನ ರಾಮಸಂದ್ರ ಗಡಿಭಾಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮರು ಮತ ಎಣಿಕೆಯ ಹೈಕೋರ್ಟ್ ಆದೇಶಕ್ಕೆ ನನ್ನದೇನು ಅಭ್ಯಂತರವಿಲ್ಲ. ಆದರೆ, ಮತ ಎಣಿಕೆ ಪ್ರಕ್ರಿಯೆಯನ್ನು ಅಸಿಂಧುಗೊಳಿಸಿರುವುದಕ್ಕೆ ಬೇಸರವಿದ್ದು, ಮತ್ತೊಮ್ಮೆ ಮತ ಎಣಿಕೆ ನಡೆದರೂ ಗೆಲ್ಲುವುದು ನಾನೇ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಮಂಜುನಾಥಗೌಡರನ್ನು ನಾನೇ ಹೊಸ ಕೋಟೆಯಿಂದ ಕರೆತಂದು ಮಾಲೂರು ಕ್ಷೇತ್ರದಿಂದ ಗೆಲ್ಲಿಸಿಕೊಂಡು ಬಂದಿದ್ದೆ. ಆದರೆ, ನಾನು ಚುನಾವಣೆಯಲ್ಲಿ ಗೆಲುವು ಸಾಧಿಸಿದ ಬಳಿಕ ಆತನಿಗೆ ಹುಚ್ಚು ಹಿಡಿದಿದ್ದು, ತಿಕ್ಲನ ರೀತಿ ಆಡುತ್ತಾ ಶಾಸಕನಾಗುವ ಭ್ರಮೆಯಲ್ಲಿದ್ದಾನೆ ಎಂದು ಲೇವಡಿ ಮಾಡಿದರು. ಹೈಕೋರ್ಟ್ ಆದೇಶದ ಬೆನ್ನಲ್ಲೇ ಆತನ ಕಡೆಯ ಕೆಲವರು ಪಟಾಕಿ ಸಿಡಿಸಿ ಸಂಭ್ರಮಾಚರಣೆ ಮಾಡುವ ಮೂಲಕ ಹಗಲು ಕನಸು ಕಾಣುತ್ತಿದ್ದಾರೆ. ಮರು ಮತ ಎಣಿಕೆಯಾಗಲಿ, ಹೊಸದಾಗಿ ಚುನಾವಣೆ ನಡೆದರೂ ಆತನಿಗೆ ಸೋಲು ಕಟ್ಟಿಟ್ಟ ಬುತ್ತಿಯಾಗಿರುತ್ತದೆ ಎಂದು ಭವಿಷ್ಯ ನುಡಿದರು.



**ಮತಗಳ್ಳತನ ಏಕೆ ತಡೆಯಲಿಲ್ಲ?:** ಮಾಲೂರು ಕ್ಷೇತ್ರದಲ್ಲಿ ಮತಗಳ್ಳತನವಾಗಿದೆ ಎಂಬ ಮಂಜುನಾಥ ಗೌಡರ ಆರೋಪಕ್ಕೆ ಪ್ರತಿಕ್ರಿಯಿಸಿದ ನಂಜೇಗೌಡರು, ವಿಧಾನಸಭೆ ಚುನಾವಣೆಯ ಸಂದರ್ಭದಲ್ಲಿ ರಾಜ್ಯದಲ್ಲಿ ಬಿಜೆಪಿ ಸರಕಾರ ಅಧಿಕಾರದಲ್ಲಿತ್ತು. ಅವರಿಗೆ ಯಾರು ಬೇಕೋ ಅಂತಹ ಅಧಿಕಾರಿಗಳನ್ನು ನಿಯೋಜನೆ ಮಾಡಿಕೊಂಡಿದ್ದರು. ಮತಗಳ್ಳತನ ನಡೆದಿದ್ದರೆ ಯಾಕೆ ತಡೆಯಲಿಲ್ಲ? ಎಂದು ಪ್ರಶ್ನಿಸಿದರು. ಚುನಾವಣಾ ಫಲಿತಾಂಶದ ದಿನ ತಾನು ಮನೆಯಲ್ಲಿ ಟಿ.ವಿ.ನೋಡುತ್ತಾ ಕುಳಿತಿದ್ದೆ. ಚುನಾವಣಾ ಫಲಿತಾಂಶ ಘೋಷಣೆ ವೇಳೆಗೆ ತಾನು ಮತಗಟ್ಟೆ ಬಳಿಗೆ ಬಂದಿದ್ದೆ. ಫಲಿತಾಂಶಕ್ಕೆ ಆತ ಆಕ್ಷೇಪ ವ್ಯಕ್ತಪಡಿಸಿದಾಗ ಜಿಲ್ಲಾ ಚುನಾವಣಾಧಿಕಾರಿಗಳು ಲಾಟರಿ ಮೂಲಕ ಇವಿಎಂ, ವಿ.ವಿ. ಪ್ಯಾಟ್‌ಗಳನ್ನು ತಾಳೆ ಮಾಡಿ ಫಲಿತಾಂಶ ಸರಿಯಾಗಿ ಬಂದ ಹಿನ್ನೆಲೆಯಲ್ಲಿ ಗೆದ್ದಿರುವುದಾಗಿ ಘೋಷಿಸಿದ್ದರು. ಆದರೀಗ ಏನೇನೋ ಮಾತನಾಡುತ್ತಿದ್ದಾರೆ ಎಂದು ಕಿಡಿಕಾರಿದರು.

**ನಾನು ಮಾಜಿಯಲ್ಲ ಹಾಲಿ ಶಾಸಕ:** ಹೈಕೋರ್ಟ್ ತನ್ನ ಆದೇಶಕ್ಕೆ 30 ದಿನಗಳ ತಡೆಯಾಜ್ಞೆ ನೀಡಿದ್ದು, ನಾನು ಈಗಲೂ ಶಾಸಕನೇ ಆಗಿದ್ದೇನೆ. ಅವರಂತೆ ನಾನು ಮಾಜಿ ಶಾಸಕನಲ್ಲ ಎಂದು ತಿರುಗೇಟು ನೀಡಿದ ಅವರು, ಮತ ಎಣಿಕೆಯ ವಿಡಿಯೋ ಕಳ್ಳತನ ನಾನೇಕೆ ಮಾಡಲಿ. ಅದನ್ನು ಸಂಗ್ರಹಿಸಿಡುವುದು ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳೇನು ನನ್ನ ಸಂಬಂಧಿಕರೇ? ಎಂದು ಪ್ರಶ್ನಿಸಿದರು.


**ಸಿಎಂ ಕಾರ್ಯಕ್ರಮ ಮುಂದೂಡಲ್ಲ:** ನಂಜೇಗೌಡ ಮಾಲೂರು ಕ್ಷೇತ್ರದಲ್ಲಿ ನಿಗದಿಯಾಗಿರುವಂತಹ ಮುಖ್ಯಮಂತ್ರಿಗಳ ಕಾರ್ಯಕ್ರಮ ಯಾವುದೇ ಕಾರಣಕ್ಕೂ ಮುಂದೂಡುವುದಿಲ್ಲ. ನಿಗದಿಯಂತೆ ಕಾರ್ಯಕ್ರಮ ನಡೆಯಲಿದ್ದು, ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿಗಳು ಚಾಲನೆ ನೀಡಲಿದ್ದಾರೆ. ಹೈಕೋರ್ಟ್ ಆದೇಶದ ಬಳಿಕ ಮುಖ್ಯಮಂತ್ರಿಗಳು ಸೇರಿದಂತೆ ಹಲವಾರು ನಾಯಕರು ಮಾತನಾಡಿದ್ದಾರೆ ಎಂದು ನಂಜೇಗೌಡ ತಿಳಿಸಿದರು.

## ಮಂಡ್ಯ ಜಿಲ್ಲೆಯಲ್ಲಿ 103 ಡೆಂಗಿ ಪ್ರಕರಣ

• ಉದಯವಾಹಿನಿ, ಮಂಡ್ಯ

ಡೆಂಗಿ ಒಂದು ಸಾಂಕ್ರಾಮಿಕ ರೋಗವಾಗಿದ್ದು, ಇದನ್ನು ನಿಯಂತ್ರಣ ಮಾಡಲು ಸಹಕರಿಸದಿದ್ದರೆ ದಂಡ ವಿಧಿಸಿ ಸೂಕ್ತ ಕ್ರಮ ಕೈಗೊಳ್ಳಿ ಎಂದು ಜಿಲ್ಲಾಧಿಕಾರಿ ಕುಮಾರ ತಿಳಿಸಿದರು. ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ, ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ಜಿಲ್ಲಾಧಿಕಾರಿ ಕಚೇರಿಯಲ್ಲಿ ಆಯೋಜಿಸಿದ್ದ ಡೆಂಗಿ ನಿಯಂತ್ರಣ ಸಹಕರಿಸದವರಿಗೆ ದಂಡ ವಿಧಿಸುವ ಕುರಿತು ನಡೆದ ಜಿಲ್ಲಾ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಸ್ತುತ 103 ಡೆಂಗಿ, 11 ಚಿಕ್ಕನ್‌ಗುನ್ಯಾ ಪ್ರಕರಣಗಳು ದಾಖಲಾಗಿವೆ. ಹೆಚ್ಚಾಗಿ ವಲಸಿ ಗರಲ್ಲಿ ಸಾಂಕ್ರಾಮಿಕ ರೋಗಗಳು ಹೆಚ್ಚು ಕಂಡು ಬರುತ್ತಿವೆ. ಕಬ್ಬು ಕಟ್ಟಾವು ಮಾಡಲು ಸರಿಸುಮಾರು 25 ಸಾವಿರಕ್ಕೂ ಹೆಚ್ಚಿನ ಜನರು ಜಿಲ್ಲೆಗೆ ಆಗಮಿಸಿದ್ದಾರೆ.


ಉದಯವಾಹಿನಿ ಚಿತ್ರ

ಅವರೆಲ್ಲರಿಗೂ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ, ಸೊಳ್ಳೆ ಪರದೆ ಹಾಗೂ ಇನ್ನಿತರ ಮೂಲಭೂತ ಸೌಕರ್ಯ ಕಲ್ಪಿಸಬೇಕು ಎಂದು ಈಗಾಗಲೇ ಸಂಬಂಧಪಟ್ಟ ಕಾರ್ಖಾನೆಗಳಿಗೆ ಸೂಚಿಸಲಾಗಿದೆ ಎಂದರು. ಆರೋಗ್ಯ ಇಲಾಖಾ ಅಧಿಕಾರಿಗಳು ವಲಸಿಗರಿರುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ, ವಲಸಿಗರಿಗೆ ಸರಿಯಾದ ಮೂಲಭೂತ ಸೌಕರ್ಯ ನೀಡದಿರುವ ಕಾರ್ಖಾನೆಗಳ ವಿರುದ್ಧ ಸ್ವಯಂ ಪ್ರೇರಿತ ಪ್ರಕರಣ ದಾಖಲು ಮಾಡಿ. ಜಿಲ್ಲೆಯಲ್ಲಿ ಡೆಂಗ್ಯೂ ನಂತಹ ಸಾಂಕ್ರಾಮಿಕ ರೋಗಗಳು ಹರಡದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಿ, ವಿಶೇಷ ಶಿಬಿರಗಳನ್ನು ಆಯೋಜಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಿ ಎಂದು ತಿಳಿ ಹೇಳಿದರು.

**ನೋಟಿಸ್ ಜಾರಿಗೊಳಿಸಿ: ಡಿ.ಸಿ**

ಮನೆ ವಾಣಿಜ್ಯ ಸಂಸ್ಥೆಗಳು ಶಾಲಾ ಕಾಲೇಜು ಹೋಟೆಲ್ ಕಟ್ಟಡ ನಿರ್ಮಾಣ ಕಾರ್ಯ ಪಾಳು ಬಿದ್ದ ನಿವೇಶನ ಖಾಲಿ ನಿವೇಶನಗಳಿಗೆ ಭೇಟಿ ನೀಡಿ ಅಧಿಕಾರಿಗಳು ಪರಿಶೀಲನೆ ನಡೆಸಲಿದ್ದಾರೆ. ಎಲ್ಲಾದರೂ ನೀರು ನಿಂತು ಸೊಳ್ಳೆಗಳು ಉತ್ಪತ್ತಿಯಾಗುವ ಸಾಧ್ಯತೆ ಇರುವ ಜಾಗಗಳು ಇದ್ದಲ್ಲಿ ಮಾಲೀಕರಿಗೆ ಸೊಳ್ಳೆಗಳ ನಿಯಂತ್ರಣ ಮಾಡಲು ಸೂಕ್ತ ಕ್ರಮ ಕೈಗೊಳ್ಳುವಂತೆ ನೋಟಿಸ್ ಜಾರಿಗೊಳಿಸಿ ಎಂದು ಜಿಲ್ಲಾಧಿಕಾರಿ ಕುಮಾರ ಹೇಳಿದರು. ನೋಟಿಸ್ ಜಾರಿ ಮಾಡಿದ ನಂತರವು ನಿರ್ದಿಷ್ಟ ಸಮಯದೊಳಗೆ ಸೊಳ್ಳೆಗಳ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳದಿದ್ದಲಿ ಅಂತಹ ಮಾಲೀಕರಿಗೆ ದಂಡ ವಿಧಿಸಲಾಗುವುದು. ಮನೆಗಳ ಹೊರಾಂಗಣದಲ್ಲಿ ಸೊಳ್ಳೆಗಳ ಸಂತಾನೋತ್ಪತ್ತಿ ಕಂಡು ಬಂದರೆ ನಗರ ಪ್ರದೇಶದಲ್ಲಿ 800 ಗ್ರಾಮೀಣ ಪ್ರದೇಶದಲ್ಲಿ 400 ವಾಣಿಜ್ಯ ಸಂಸ್ಥೆಗಳು ಹಾಗೂ ಕಚೇರಿಗಳಲ್ಲಿ ಕಂಡು ಬಂದರೆ ನಗರ ಪ್ರದೇಶದಲ್ಲಿ 2000 ಗ್ರಾಮೀಣ ಪ್ರದೇಶದಲ್ಲಿ ರೂ 1000. ನಿರ್ಮಾಣ ಕಾರ್ಯದಲ್ಲಿ ಕಂಡು ಬಂದರೆ ನಗರ ಪ್ರದೇಶದಲ್ಲಿ 4000 ಗ್ರಾಮೀಣ ಪ್ರದೇಶದಲ್ಲಿ 2000 ದಂಡವನ್ನು ವಿಧಿಸಲಾಗುವುದು ಅದಾಗ್ಯೂ ದಂಡದ ಮೊತ್ತ ಪಾವತಿಸದಿದಲ್ಲಿ ಪ್ರತಿ ದಿನಕ್ಕೆ ಶೇ 50ರಷ್ಟು ಹೆಚ್ಚುವರಿ ದಂಡ ವಿಧಿಸಲಾಗುವುದು ಎಂದು ತಿಳಿಸಿದರು.

## ಶಾಸಕರದ್ದು ಎಫ್‌ಐಆರ್ ಸಂಸ್ಕೃತಿ ಜೆಡಿಎಸ್ ಮುಖಂಡರ ಆರೋಪ

• ಉದಯವಾಹಿನಿ, ಮಾಗಡಿ


ಉದಯವಾಹಿನಿ ಚಿತ್ರ

ರಾಜಕೀಯ ವಿರೋಧಿಗಳ ಧೈರ್ಯ ಕುಂದಿಸಲು ವಿನಾಕಾರಣ ಎಫ್‌ಐಆರ್ ದಾಖಲಿಸುವ ಹಿಂದಿನ ಚಾಳಿಯನ್ನು ಶಾಸಕ ಎಚ್.ಸಿ.ಬಾಲಕೃಷ್ಣ ಮುಂದುವರಿಸಿದ್ದಾರೆ. ಈಗ ಮತ್ತೆ ಎಫ್‌ಐಆರ್ ಸಂಸ್ಕೃತಿಯನ್ನು ತಾಲ್ಲೂಕಿನಲ್ಲಿ ಪರಿಚಯ ಮಾಡುತ್ತಿದ್ದಾರೆ ಎಂದು ಪುರಸಭೆ ಸದಸ್ಯ ಎಂ.ಎನ್.ಮಂಜು ಆರೋಪಿಸಿದರು.

ಪಟ್ಟಣದ ಜೆಡಿಎಸ್ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎನ್‌ಇಎಸ್ ವೃತ್ತದ ಬಳಿ ಸರ್ಕಲ್ ಅಭಿವೃದ್ಧಿ ನೆಪ ಮಾಡಿ ಮಾಜಿ ಶಾಸಕ ಎ. ಮಂಜುನಾಥ್ ಅವರು ನಿರ್ಮಾಣ ಮಾಡಿದ್ದ ಗಾಂಧಿ ಪುತ್ಥಳಿ ತೆರವು ಮಾಡಲು ಹೊರಟಾಗ 20 ದಿನ ನಂತರ ಗಾಂಧೀಜಿ ಜಯಂತಿ ಬರಲಿದೆ. ಅಲ್ಲಿವರೆಗೂ ಪುತ್ಥಳಿ ತೆರವು ಮಾಡದಂತೆ ಅಧಿಕಾರಿಗಳನ್ನು ಪ್ರಶ್ನೆ ಮಾಡಿರುವ ವಿರುದ್ಧ ಸರ್ಕಾರಿ ಕೆಲಸಕ್ಕೆ ಅಡ್ಡಿ, ಅವಾಚ್ಯ ಶಬ್ದಗಳಿಂದ ನಿಂದನೆ ಆರೋಪ ಹೊರೆಸಿ ಅಧಿಕಾರಿಗಳು ಪ್ರಕರಣ ದಾಖಲಿಸಿದ್ದಾರೆ. ಇದಕ್ಕೆ ಶಾಸಕ ಬಾಲಕೃಷ್ಣ ಕುಮ್ಮಕ್ಕು ನೀಡಿದ್ದಾರೆ ಎಂದು ದೂರಿದರು.


ಸಾಮಾನ್ಯ ಸಭೆಯಲ್ಲಿ ಶಾಸಕರು ತಮಗೆ ಬೇಕಾದ ರೀತಿ ನಡವಳಿಕೆ ಪುಸ್ತಕದಲ್ಲಿ ಬರೆದುಕೊಂಡು ತಮ್ಮ ಇಚ್ಛೆಯಂತೆ ನಡೆದುಕೊಳ್ಳುತ್ತಿದ್ದಾರೆ. ಸಭೆಯಲ್ಲಿ ನಡೆದ ವಿಷಯಗಳಿಗೆ ಜಿಲ್ಲಾಧಿಕಾರಿಯಿಂದ ಅನುಮತಿ ಪಡೆಯಬೇಕು. ಆದರೆ, ನಿಯಮ ಪಾಲಿಸುತ್ತಿಲ್ಲ. ರಾಜಕೀಯ ಉದ್ದೇಶಕ್ಕಾಗಿ ದೂರು ದಾಖಲಿಸಲಾಗಿದೆ.

ಕಾನೂನು ಹೋರಾಟಕ್ಕೆ ಸಿದ್ಧರಿದ್ದೇವೆ ಎಂದು ಎಂ.ಎನ್.ಮಂಜುನಾಥ್ ಹಾಗೂ ಜೆಡಿಎಸ್ ಯುವ ಘಟಕದ ಅಧ್ಯಕ್ಷ ವಿಜಯಕುಮಾರ್ ಹೇಳಿದರು.

ಶಿಕ್ಷಕರ ದಿನಾಚರಣೆ ತಾಲ್ಲೂಕು ಆಡಳಿತದಿಂದ ಆಚರಿಸಲಾಗಿದೆ. ಶಾಸಕ ಬಾಲಕೃಷ್ಣ ಅವರ ಭಾವಚಿತ್ರ ಒಳಗೊಂಡಂತೆ ಕಾಂಗ್ರೆಸ್ ಹಲವು ಮುಖಂಡರು ಭಾವಚಿತ್ರ ಹಾಕಲಾಗಿದೆ. ಬೆಂಗಳೂರು ಗ್ರಾಮಾಂತರ ಲೋಕಸಭಾ ಸಂಸದ ಡಾ.ಸಿ.ಎನ್.ಮಂಜುನಾಥ್ ಅವರ ಭಾವಚಿತ್ರ ಹಾಕದೆ ಅವರಿಗೆ ಅವಮಾನ ಮಾಡಲಾಗಿದೆ ಎಂದು ಜೆಡಿಎಸ್ ಹಿರಿಯ ಮುಖಂಡ ಮಾಡಬಾಳ್ ಕೆಂಪೇಗೌಡ ಇದೇ ಸಂದರ್ಭದಲ್ಲಿ ಆರೋಪಿಸಿದರು.

## ಧರ್ಮದ ಕಾಲಂನಲ್ಲಿ ವೀರಶೈವ ಲಿಂಗಾಯತವೆಂದು ಬರೆಸಲು ಒತ್ತಾಯ

• ಉದಯವಾಹಿನಿ, ಮಡಿಕೇರಿ



ರಾಜ್ಯ ಸರ್ಕಾರದ ವತಿಯಿಂದ ಸೆ. 22ರಿಂದ ಆರಂಭ ಆಗಲಿರುವ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಜನಗಣತಿಯ ಸಮಯದಲ್ಲಿ ವೀರಶೈವ ಲಿಂಗಾಯತ ಸಮುದಾಯಕ್ಕೆ ಸೇರಿದವರು ಧರ್ಮದ ಕಾಲಂನಲ್ಲಿ ವೀರಶೈವ ಲಿಂಗಾಯತ ಎಂದೇ ಬರೆಸಬೇಕು ಎಂದು ಅಖಿಲ ಭಾರತ ವೀರಶೈವ ಮಹಾಸಭಾ ಕೊಡಗು ಜಿಲ್ಲಾ ಘಟಕ ಒತ್ತಾಯಿಸಿದೆ.

'ಸಮೀಕ್ಷೆ ಅನುಸೂಚಿಯ 8ರ ಧರ್ಮದ ಕಾಲಂನಲ್ಲಿ ನೀಡಿರುವ 11ನೇ ಕೋಡ್‌ನ ಇತರೆ ಎಂದಿರುವ ಸ್ಥಳದಲ್ಲಿ ವೀರಶೈವ ಲಿಂಗಾಯತ ಎಂದು, 9ರ ಜಾತಿ ಕಾಲಂನಲ್ಲಿ ಲಿಂಗಾಯತ ಅಥವಾ ವೀರಶೈವ ಎಂದು ನಿಗದಿತ ಸಂಕೇತ ಸಂಖ್ಯೆಯನ್ನು ನೀಡಿ ನಮೂದಿಸಿ ಹಾಗೆಯೇ 10ರ ಉಪಜಾತಿ ಕಾಲಂನಲ್ಲಿ ತಮ್ಮ ಉಪಜಾತಿಗಳನ್ನು ಕೋಡ್ ಸಮೇತ ಮಾಹಿತಿಗಳನ್ನು ತಪ್ಪಿಲ್ಲದಂತೆ ನೀಡಬೇಕು ಎಂದು ಘಟಕದ ಅಧ್ಯಕ್ಷ ಎಚ್.ವಿ.ಶಿವಪ್ಪ ಇಲ್ಲಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಸರ್ಕಾರವು ಮುಂದಿನ ದಿನಗಳಲ್ಲಿ ಆರ್ಥಿಕ ಅಭಿವೃದ್ಧಿ ಯೋಜನೆಗಳನ್ನು ರೂಪಿಸುವಾಗ ಜಾತಿ ಗಣತಿಯ ದತ್ತಾಂಶಗಳನ್ನು ಉಪಯೋಗಿಸಿಕೊಳ್ಳಲು ಅನುಕೂಲವಾಗುತ್ತದೆ. ಆದ ಕಾರಣ ವೀರಶೈವ ಲಿಂಗಾಯತ ಸಮುದಾಯದವರು ನಿಖರವಾದ ಮಾಹಿತಿಯನ್ನು ನೀಡುವುದು, ನಮ್ಮ ಸಮುದಾಯದ ಶೈಕ್ಷಣಿಕ ಉದ್ಯೋಗ ಆಸ್ತಿ, ಆರ್ಥಿಕ ಪರಿಸ್ಥಿತಿ ಈ ಮಾಹಿತಿಗಳನ್ನು ನೀಡಬೇಕು ಎಂದು ಹೇಳಿದರು.

## ಸುಗ್ಗಿಕಟ್ಟೆಗಳ ಅಭಿವೃದ್ಧಿಗೆ ಅನುದಾನ: ಶಾಸಕ ಮಂತರ್ ಗೌಡ

• ಉದಯವಾಹಿನಿ, ಸೋಮವಾರಪೇಟೆ


ಉದಯವಾಹಿನಿ ಚಿತ್ರ

ತಾಲ್ಲೂಕಿನ ಸುಗ್ಗಿಕಟ್ಟೆಗಳ ಅಭಿವೃದ್ಧಿಗೆ ಅನುದಾನ ಒದಗಿಸುವುದರೊಂದಿಗೆ, ಮೂಲಸೌಲಭ್ಯ ಕಲ್ಪಿಸುವುದಾಗಿ ಶಾಸಕ ಮಂತರ್ ಗೌಡ ತಿಳಿಸಿದರು. ತಾಲ್ಲೂಕಿನ ವಿವಿಧ ಸುಗ್ಗಿಕಟ್ಟೆಗಳಿಗೆ ಭೇಟಿ ನೀಡಿದ ಶಾಸಕ ಮಂತರ್ ಗೌಡ ಅವರು, ಇದರೊಂದಿಗೆ ಗ್ರಾಮೀಣ ಭಾಗಗಳಲ್ಲಿ ಆಗಬೇಕಿರುವ ರಸ್ತೆ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದರು. ಪಟ್ಟಣ ಹೊಂದಿಕೊಂಡಂತಿರುವ ಚೌಡ್ಲು ಗ್ರಾಮದ ಸುಗ್ಗಿ ಕಟ್ಟೆಗೆ ಭೇಟಿ ನೀಡಿದ ಶಾಸಕರು, ಸುಗ್ಗಿಕಟ್ಟೆಯ ಸುತ್ತಲೂ ಸಾರ್ವಜನಿಕರಿಗೆ ಕುಳಿತುಕೊಳ್ಳಲು ಅನುಕೂಲವಾಗುವಂತೆ ಗ್ಯಾಲರಿ ನಿರ್ಮಾಣ, ನೆಲಕ್ಕೆ ಇಂಟರ್ ಲಾಕ್ ಸೇರಿದಂತೆ ಇನ್ನಿತರ ಕಾಮಗಾರಿ ಕೈಗೊಳ್ಳಲು ಶಾಸಕರ ನಿಧಿಯಿಂದ 10 ಲಕ್ಷ ಅನುದಾನ ಒದಗಿಸುವುದಾಗಿ ತಿಳಿಸಿದರು.

ಗ್ರಾಮದ ಈಶ್ವರ ಹಾಗೂ ಚೌಡ್ಲಯ್ಯ-ಮೂಡ್ಡಯ್ಯ ದೇವಾಲಯಗಳ ಅಭಿವೃದ್ಧಿಗೆ ತಲಾ 5 ಲಕ್ಷದಂತೆ ಒಟ್ಟು 10 ಲಕ್ಷ ಅನುದಾನ ನೀಡುವುದಾಗಿ ಇದೇ ಸಂದರ್ಭ ಭರವಸೆ ನೀಡಿದರು. ಪಟ್ಟಣದ ಚನ್ನಬಸಪ್ಪ ಸಭಾಂಗಣದಿಂದ ಚೌಡ್ಲು ಗ್ರಾಮ ಸಂಪರ್ಕ ರಸ್ತೆಯನ್ನು ಕಾಂಕ್ರಿಟೀಕರಣಗೊಳಿಸಲು ಈಗಾಗಲೇ 50 ಲಕ್ಷ ಅನುದಾನ ನೀಡಲಾಗಿದೆ. ಸದ್ಯದಲ್ಲೇ ಕಾಮಗಾರಿ ಆರಂಭಗೊಳ್ಳಲಿದೆ ಎಂದು ಶಾಸಕರು ತಿಳಿಸಿದರು. ಗ್ರಾಮಾಧ್ಯಕ್ಷ ಬನ್ನಳ್ಳಿ ಸತೀಶ್ ಮಾತನಾಡಿ, ಗ್ರಾಮದ ಸಮುದಾಯ ಭವನದ ಅಡುಗೆ ಮನೆ, ತಡೆಗೋಡೆ, ಚೌಡ್ಲು-ಕಲ್ಕಂದೂರು ಸಂಪರ್ಕ ರಸ್ತೆಗೆ ಅನುದಾನ ಒದಗಿಸುವಂತೆ ಮನವಿ ಮಾಡಿದರು. ಶೀಘ್ರವೇ ಯೋಜನಾ ಪಟ್ಟಿ ತಯಾರಿಸಿ ಕಾಮಗಾರಿ ಆರಂಭಿಸುವಂತೆ ಜಿಲ್ಲಾ ಪಂಚಾಯತ್ ಸಹಾಯಕ ಕಾರ್ಯಪಾಲಕ ಎಂಜಿನಿಯರ್ ನಾರಾಯಣಮೂರ್ತಿ ಅವರಿಗೆ ಶಾಸಕ ಡಾ. ಮಂತರ್ ಗೌಡ ಸೂಚಿಸಿದರು.

ಹಾನಗಲ್ಲು ಶೆಟ್ಟಳ್ಳಿ ಸುಗ್ಗಿ ಕಟ್ಟೆಗೆ ಭೇಟಿ ನೀಡಿದ ಶಾಸಕರು ಸಬ್ಬಮ್ಮ ದೇವರ ಸುಗ್ಗಿ ಬನದ ಅಭಿವೃದ್ಧಿಗೆ 10 ಲಕ್ಷ ಅನುದಾನ ಒದಗಿಸುವುದಾಗಿ ತಿಳಿಸಿದರು. ನಂತರ ತರೆಶೆಟ್ಟಳ್ಳಿ ಸುಗ್ಗಿಕಟ್ಟೆ, ಕುಮಾರಳ್ಳಿ, ನಗರಳ್ಳಿ, ತೋಳೂರುಶೆಟ್ಟಳ್ಳಿ ಸುಗ್ಗಿ ಕಟ್ಟೆಗಳಿಗೆ ಭೇಟಿ ನೀಡಿ ಆಗಬೇಕಿರುವ ಕಾಮಗಾರಿಗಳ ಬಗ್ಗೆ ಮಾಹಿತಿ ಪಡೆದು, ಅನುದಾನ ಒದಗಿಸುವ ಭರವಸೆ ನೀಡಿದರು.


# ವಿದ್ಯಾರ್ಥಿಗಳ ಪಾಲಿನ ಒಂದು ಟನ್ ಗೋಧಿ ಮಣ್ಣುಪಾಲು

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೈಫಲ್ಯ | ನಿರ್ಲಕ್ಷ್ಯ ಆರೋಪದ ಮೇರೆಗೆ ವಾರ್ಡನ್ ಅಮಾನತು**

• ಉದಯವಾಹಿನಿ, ರಾಮನಗರ

ಬಡ ವಿದ್ಯಾರ್ಥಿಗಳ ಹೊಟ್ಟೆ ತುಂಬಿಸಬೇಕಿದ್ದ ಸಾವಿರಾರು ಕೆ.ಜಿ. ಗೋಧಿ ಮಣ್ಣುಪಾಲಾಗಿರುವ ಘಟನೆ ರಾಮನಗರದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದಲ್ಲಿ ನಡೆದಿರುವುದು ಬೆಳಕಿಗೆ ಬಂದಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ರಾಮನಗರದ ಹೊರವಲಯದಲ್ಲಿರುವ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಮಾದರಿ ಮೆಟ್ರಿಕ್ ನಂತರದ ಬಾಲಕರ ಹಾಸ್ಟೆಲ್ ವಾರ್ಡನ್ ಯೋಗೀಶ್ ಅವರನ್ನು ಕರ್ತವ್ಯ ನಿರ್ಲಕ್ಷ್ಯದ ಆರೋಪದ ಮೇರೆಗೆ ಸೇವೆಯಿಂದ ಅಮಾನತುಗೊಳಿಸಿ, ತನಿಖೆಗೆ ಒಳಪಡಿಸಿದೆ. ಸೂಕ್ತ ಪ್ರಮಾಣದಲ್ಲಿ ಗೋದಿಯನ್ನು ವಿದ್ಯಾರ್ಥಿಗಳಿಗೆ ಬಳಸದಿರುವುದು, ಆಹಾರ ಪದಾರ್ಥಗಳನ್ನು ನಿರ್ವಹಣೆ ಮಾಡದ ಕಾರಣ ಸಾವಿರಾರು ಕೆ.ಜಿ. ಗೋಧಿ ಹಾಸ್ಟೆಲ್ ವಾರ್ಡನ್ ನಿರ್ಲಕ್ಷ್ಯದಿಂದ ಹಾಳಾಗಿದೆ ಎಂದು ಆರೋಪ ಕೇಳಿಬಂದಿದೆ. ಸೇವನೆಗೆ ಯೋಗ್ಯವಲ್ಲದ ಹುಳು ಬಿದ್ದಿದ್ದ ಸುಮಾರು 1 ಟನ್‌ನಷ್ಟು ಗೋಧಿಯನ್ನು ಹಾಸ್ಟೆಲ್ ಆವರಣದ ಹಿಂಬದಿಯಲ್ಲಿ

**ಹಾಸ್ಟೆಲ್ ವಾರ್ಡನ್ ಸಸ್ಪೆಂಡ್**


ಉದಯವಾಹಿನಿ ಚಿತ್ರ

ಮಣ್ಣು ಮಾಡಲಾಗಿತ್ತು. ವಿಷಯ ತಿಳಿದ ಅಧಿಕಾರಿಗಳು ಜೆಸಿಬಿ ಮೂಲಕ 18ಕ್ಕೂ ಅಧಿಕ ಗೋಧಿ ಮೂಟೆಯನ್ನು ಹೊರತೆಗೆದಿದ್ದಾರೆ.

**ಸ್ಟಾಕ್ ಇದೆ ಎಂದ್ರು, ಕೊಡ್ತಿದ್ರು:** ಆರೋಪ ಸಂಬಂಧ ಪ್ರತಿಕ್ರಿಯಿಸಿದ ವಾರ್ಡನ್, ನಮ್ಮ ಹಾಸ್ಟೆಲ್‌ನಲ್ಲಿಅಧಿಕ ಪ್ರಮಾಣದಲ್ಲಿ ಗೋಧಿ ಸ್ಟಾಕ್ ಇತ್ತು. ನನಗೆ ಬೇಡ ಅಂತ ಹೇಳಿದರೂ ಅಗತ್ಯಕ್ಕಿಂದ ಹೆಚ್ಚಿನ ದಾಸ್ತಾನು ನೀಡಿದ್ದರು.

**ಹಳೆ ಗೋಧಿ ಮಣ್ಣುಪಾಲು**

ತಿನ್ನಲು ಯೋಗ್ಯವಲ್ಲದ 2 ವರ್ಷ ಹಳೆಯದಾದ ಗೋಧಿಗೆ ಹುಳು ಬಿದ್ದಿತ್ತು. ಅದನ್ನು ಬಿಸಿಲಿಗೆ ಹಾಕಿ ಸ್ವಚ್ಛ ಮಾಡಲು ಕಳೆದ 20 ದಿನಗಳಿಂದ ಬಿಸಿಲಿನ ವಾತಾವರಣ ಇಲ್ಲ. ಮಳೆ ಬರುತ್ತಲೇ ಇದೆ. ಹುಳುಗಳ ಪ್ರಮಾಣ ಹೆಚ್ಚಾಯ್ತು. ಹಾಸ್ಟೆಲ್‌ನಲ್ಲಿ ವಿದ್ಯಾರ್ಥಿಗಳು ಇದರ ಬಗ್ಗೆ ಗಲಾಟೆ ಮಾಡಿದ್ದರು. ಹಾಸಿಗೆ, ಮಕ್ಕಳ ಬಟ್ಟೆಗಳಲ್ಲಿ ಹುಳುಗಳು ಕಾಣಿಸಿಕೊಂಡಿತ್ತು. ಅನಿವಾರ್ಯವಾಗಿ ಅಡುಗೆ ಸಿಬ್ಬಂದಿ ಹಾಳಾದ ಗೋಧಿಯನ್ನು ಮಣ್ಣಿಗೆ ಹಾಕಿದ್ದಾರೆ ಎಂದಿದ್ದಾರೆ.

ರಾಮನಗರದ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಸಾವಿರಾರು ಕೆ.ಜಿ ಗೋಧಿ ಮಣ್ಣುಪಾಲಾದ ಘಟನೆ ನಡೆದಿದೆ. ಹಾಸ್ಟೆಲ್ ವಾರ್ಡನ್ ಯೋಗೀಶ್ ಅವರನ್ನು ಕರ್ತವ್ಯ ಲೋಪದ ಮೇಲೆ ಅಮಾನತು ಮಾಡಲಾಗಿದೆ. ವಿದ್ಯಾರ್ಥಿಗಳಿಗೆ ನೀಡಲು ಯೋಗ್ಯವಿಲ್ಲದ ಗೋಧಿಯನ್ನು ಸರಿಯಾಗಿ ನಿರ್ವಹಿಸದ ಕಾರಣ ಈ ದುರ್ಘಟನೆ ಸಂಭವಿಸಿದೆ ಎಂದು ಆರೋಪಿಸಲಾಗಿದೆ. ಸುಮಾರು 1 ಟನ್ ಗೋಧಿಯನ್ನು ಜೆಸಿಬಿ ಮೂಲಕ ಹೊರತೆಗೆಯಲಾಗಿದೆ ಈ ಬಗ್ಗೆ ವಾರ್ಡನ್ ಮಾತನಾಡಿದ್ದು ಸ್ಟಾಕ್ ಹೆಚ್ಚಿತ್ತು. ಹಳೆಯ ಗೋಧಿಯಲ್ಲಿ ಹುಳುವಿದ್ದ ಕಾರಣ ಮಣ್ಣಿಗೆ ಹಾಕಲಾಯಿತು ಎಂದರು.

ಎಷ್ಟು ಮಕ್ಕಳು ಹಾಜರಿರುತ್ತಾರೋ ಅಷ್ಟೇ ಪ್ರಮಾಣದಲ್ಲಿ ಗೋಧಿಯನ್ನು ಬಳಸಿದ್ದೇನೆ. ಹಿಂದಿನ ದಾಸ್ತಾನು ವರ್ಗೀಕರಣದಲ್ಲಿ 6 ತಿಂಗಳು ನಾನು ಗೋಧಿಯನ್ನು ಪಡೆದೇ ಇಲ್ಲ. ಕಳೆದ ಎರಡು ತಿಂಗಳು ಮಾತ್ರ ಪಡೆದಿದ್ದೇನೆ. ಮೂರು ವರ್ಷದಿಂದ ಗೋಧಿ ಸ್ಟಾಕ್ ಇತ್ತು. ಈ ಬಗ್ಗೆ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದೆ. ಅವರಿಂದ ಪ್ರತಿಕ್ರಿಯೆ ಬಂದಿರಲಿಲ್ಲ. ಹಾಗಾಗಿ ಸ್ಟಾಕ್ ಇದ್ದ ಗೋಧಿ ಹಾಳಾಗಿತ್ತು. ಅದನ್ನು ಅಡುಗೆಯವರು ಮಣ್ಣಿನಲ್ಲಿ ಹಾಕಿದ್ದಾರೆ.

## ಮಿನಿ ನ್ಯೂಸ್

### ಕಬ್ಬಿನ ಲಾರಿಗೆ ಗೂಡ್ಸ್ ಆಟೋ ಡಿಕ್ಕಿ ಇಬ್ಬರು ಸ್ಥಳದಲ್ಲೇ ಸಾವು

• ಉದಯವಾಹಿನಿ, ಚಾಮರಾಜನಗರ

ಬೆಳ್ಳಂಬೆಳಗ್ಗೆ ಭೀಕರ ಅಪಘಾತಕ್ಕೆ ಇಬ್ಬರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕಬ್ಬಿನ ಲಾರಿಗೆ ಗೂಡ್ಸ್ ಆಟೋ ಡಿಕ್ಕಿ ಹೊಡೆದು ದುರ್ಘಟನೆ ನಡೆದಿದೆ. ಕೊಳ್ಳೇಗಾಲದ ಯಳಂದೂರು ಮಾರ್ಗಮಧ್ಯದ ಎಳೆ ಪಿಳ್ಳಾರಿ ದೇವಸ್ಥಾನದ ಬಳಿ ಘಟನೆ ನಡೆದಿದೆ. ಸುಮಂತ್ (22), ನಿತಿನ್ ಕುಮಾರ್ (16) ಸಾವನ್ನಪ್ಪಿದ ದುರ್ದೈವಿಗಳು. ಲಾರಿಗೆ ಟೊಮ್ಯಾಟೊ ತುಂಬಿಕೊಂಡು ಹೋಗುತ್ತಿದ್ದ ಆಟೋ ಡಿಕ್ಕಿ ಹೊಡೆದಿದೆ. ಅಪಘಾತವಾಗುತ್ತಿದ್ದಂತೆ ರಸ್ತೆಗೆ ಟೊಮ್ಯಾಟೊ ಬಾಕ್ಸ್‌ಗಳು ಚೆಲ್ಲಾಪಿಲ್ಲಿಯಾಗಿ ಬಿದ್ದಿವೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಯಳಂದೂರು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

### ಮೋದಿ ನಿವೃತ್ತಿಯಾಗಲ್ಲ, ಅವರ ಸೇವೆ ಇನ್ನೂ ದೇಶಕ್ಕೆ ಬೇಕು: ಸೋಮಣ್ಣ



• ಉದಯವಾಹಿನಿ, ತುಮಕೂರು

ಮೋದಿ ಅವರು ನೂರು ವರ್ಷ ಬಾಳಬೇಕು, ಅವರ ಸೇವೆ ಭಾರತಕ್ಕೆ ಇನ್ನೂ ಬೇಕಾಗಿದೆ ಎಂದು ಕೇಂದ್ರ ಸಚಿವ ವಿ.ಸೋಮಣ್ಣ ಹೇಳಿದರು. ಪ್ರಧಾನಿ ನರೇಂದ್ರ ಮೋದಿ ಅವರ 75ನೇ ಹುಟ್ಟುಹಬ್ಬವನ್ನು ತುಮಕೂರಿನಲ್ಲಿ ಬುಧವಾರ ಅತ್ಯಂತ ಅರ್ಥಪೂರ್ಣವಾಗಿ ಆಚರಿಸಲಾಗಿದೆ. ಮೋದಿ ಹುಟ್ಟುಹಬ್ಬ ಹಿನ್ನೆಲೆ ಸೋಮಣ್ಣರ ನೇತೃತ್ವದಲ್ಲಿ ಪ್ರವಾಸಿ ಮಂದಿರದ ಅವರ ಕಚೇರಿ ಆವರಣದಲ್ಲಿ ವಿವಿಧ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಆರೋಗ್ಯ ತಪಾಸಣೆ ಶಿಬಿರ, ರಕ್ತದಾನ ಶಿಬಿರ ಆಯೋಜನೆ ಮಾಡಲಾಗಿತ್ತು. ಸ್ವತಃ ಸಚಿವ ಸೋಮಣ್ಣ ಬಿ.ಪಿ. ಹಾಗೂ ಶುಗರ್ ಚೆಕ್ ಮಾಡಿಸಿಕೊಂಡರು. ಅದಕ್ಕೂ ಮುನ್ನ ಕ್ಯಾತಸಂದ್ರದ ಸರ್ಕಾರಿ ಮಾದರಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ ಮಾಡಿದರು. ತುಮಕೂರು ಲೋಕಸಭಾ ವ್ಯಾಪ್ತಿಯ 40 ಸಾವಿರ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ ಮಾಡಲಾಯಿತು. ಈ ವೇಳೆ ಮಾಧ್ಯಮದವರ ಜೊತೆ ಮಾತನಾಡಿದ ವಿ ಸೋಮಣ್ಣ, ಪ್ರಧಾನಿ ಮೋದಿ ಭಾರತವನ್ನು ವಿಶ್ವಗುರುವನ್ನಾಗಿ ಮಾಡಿಸಿದ್ದಾರೆ. ಮೋದಿ ಅವರ ನಾಯಕತ್ವ ಇಡೀ ವಿಶ್ವ ಒಪ್ಪಿಕೊಳ್ಳುತ್ತಿದೆ. ಕಳೆದ 11 ವರ್ಷದಲ್ಲಿ ಭಾರತ ಹಿಂದೆಂದೂ ಕಂಡಿರದಂತಹ ಅಭಿವೃದ್ಧಿ ಕಂಡಿದೆ ಎಂದರು. ಇದೇ ವೇಳೆ ಮೋದಿ ಅವರ ನಿವೃತ್ತಿ ಬಗ್ಗೆ ಮಾತನಾಡಿ, ಈಗಾಗಲೇ ಆರ್‌ಎಸ್‌ಎಸ್ ಮುಖ್ಯಸ್ಥರು ಅದರ ಬಗ್ಗೆ ಸ್ಪಷ್ಟಪಡಿಸಿದ್ದಾರೆ. ಮೋದಿ ಅವರ ಸೇವೆ ಇನ್ನೂ ದೇಶಕ್ಕೆ ಬೇಕು ಎಂದು ತಿಳಿಸಿದರು.

### ಸಮೀಕ್ಷೆಯಿಂದ ಕೈ ಬಿಡಲು ಆಶಾ ಕಾರ್ಯಕರ್ತೆಯರ ಆಗ್ರಹ

• ಉದಯವಾಹಿನಿ, ತುಮಕೂರು

ಹಿಂದುಳಿದ ವರ್ಗಗಳ ಆಯೋಗ ಕೈಗೊಂಡಿರುವ ಶೈಕ್ಷಣಿಕ, ಸಾಮಾಜಿಕ ಸಮೀಕ್ಷೆಯಲ್ಲಿ ಭಾಗವಹಿಸದಿರಲು ಆಶಾ ಕಾರ್ಯಕರ್ತೆಯರು ನಿರ್ಧರಿಸಿದ್ದಾರೆ. ನಗರದಲ್ಲಿ ರಾಜ್ಯ ಸಂಯುಕ್ತ ಆಶಾ ಕಾರ್ಯಕರ್ತೆಯರ ಸಂಘ ಎಐಯುಟಿಯುಸಿ ವತಿಯಿಂದ ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಮೋಹನ್ ಅವರಿಗೆ ಮನವಿ ಸಲ್ಲಿಸಿ, ಸಮೀಕ್ಷೆಯಿಂದ ಕೈ ಬಿಡುವಂತೆ ಒತ್ತಾಯಿಸಲಾಯಿತು. ಆಶಾ ಕಾರ್ಯಕರ್ತೆಯರು ಸಮೀಕ್ಷೆಗೆ ಪೂರ್ವಭಾವಿಯಾಗಿ ಪ್ರತಿ ಮನೆಗೆ ತೆರಳಿ ನಮೂನೆ ವಿತರಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ. ಈ ಹಿಂದೆ ಸಮೀಕ್ಷೆ ನಡೆಸಿದ್ದಕ್ಕೆ ನಿಗದಿಪಡಿಸಿದ ಗೌರವ ಧನದಲ್ಲಿ ಒಂದು ಪೈಸೆಯನ್ನೂ ನೀಡಿಲ್ಲ. ಈ ವರ್ಷ ಗೌರವ ಧನವೂ ಹೆಚ್ಚಿಸಿಲ್ಲ. ಸಮೀಕ್ಷೆಗೆ ಸ್ವಂತ ಹಣ ಖರ್ಚು ಮಾಡಿ, ಬರಿಗೈನಲ್ಲಿ ಮನೆಗೆ ಬರುವಂತಾಗಿದೆ ಎಂದು ಕಾರ್ಯಕರ್ತೆಯರು ಅಳಲು ತೋಡಿಕೊಂಡರು. ಸಮೀಕ್ಷೆಯಲ್ಲಿ ಭಾಗವಹಿಸುವ ಆಶಾ ಕಾರ್ಯಕರ್ತೆಯರಿಗೆ ಗ್ರಾಮೀಣ ಭಾಗದಲ್ಲಿ 5 ಸಾವಿರ, ನಗರದಲ್ಲಿ 10 ಸಾವಿರ ಗೌರವಧನ ನಿಗದಿ ಮಾಡಬೇಕು. ಇಲ್ಲವೇ ಸಮೀಕ್ಷೆ ಕಾರ್ಯದಿಂದ ಕೈಬಿಡಬೇಕು. ಈ ಹಿಂದೆ ನಡೆಸಿದ್ದ ಗ್ಯಾರಂಟಿ ಸಮೀಕ್ಷೆಯ ಬಾಕಿ ಗೌರವಧನ 1 ಸಾವಿರ ಕೂಡಲೇ ವಿತರಿಸಬೇಕು. ಪರಿಶಿಷ್ಟ ಜಾತಿಗಳ ಸಮಗ್ರ ಸಮೀಕ್ಷೆ ನಡೆಸಿದವರಿಗೆ ನಿಗದಿಯಾಗಿದ್ದ ಬಾಕಿ ಸಂಭಾವನೆ ನೀಡಬೇಕು ಎಂದು ಒತ್ತಾಯಿಸಿದರು.

### 1.25 ಕೋಟಿ ವೆಚ್ಚದಲ್ಲಿ ನವೀಕರಣಗೊಂಡ ಖಾಸಗಿ ಬಸ್ ನಿಲ್ದಾಣ ಉದ್ಘಾಟನೆ



• ಉದಯವಾಹಿನಿ, ಶಿರಾ

ನಗರದ ಮಲ್ಲಿಕ್ ರೆಹಾನ್ ದರ್ಗಾ ವೃತ್ತದಿಂದ ಅಂಬೇಡ್ಕರ್ ವೃತ್ತದವರೆಗೆ 12 ಕೋಟಿ ವೆಚ್ಚದಲ್ಲಿ ರಸ್ತೆ ವಿಸ್ತರಣೆ ಮಾಡಲಾಗುವುದು ಎಂದು ಶಾಸಕ ಟಿ.ಬಿ.ಜಯಚಂದ್ರ ಹೇಳಿದರು. ನಗರದಲ್ಲಿ 1.25 ಕೋಟಿ ವೆಚ್ಚದಲ್ಲಿ ನವೀಕರಣಗೊಳಿಸಿರುವ ಖಾಸಗಿ ಬಸ್ ನಿಲ್ದಾಣವನ್ನು ಉದ್ಘಾಟಿಸಿ ಮಾತನಾಡಿದರು. ಮಲ್ಲಿಕ್ ರೆಹಾನ್ ದರ್ಗಾದಿಂದ ಐಬಿ ವೃತ್ತದವರೆಗೆ ರಸ್ತೆ ಬದಿಯಲ್ಲಿ ಓಡಾಡಲು ಸಾಧ್ಯವಾಗುತ್ತಿಲ್ಲ. ಬೀದಿ ಬದಿ ವ್ಯಾಪಾರಿಗಳು ಪಾದಚಾರಿ ಮಾರ್ಗವನ್ನು ಅಕ್ರಮಿಸಿಕೊಂಡಿದ್ದಾರೆ. ಒಂದು ವೇಳೆ ಏನಾದರೂ ಅವಘಡ ಸಂಭವಿಸಿ ಅಪಘಾತವಾದರೆ ಏನಾಗುವುದು ಎನ್ನುವುದನ್ನು ಊಹೆ ಮಾಡಲು ಸಾಧ್ಯವಾಗುತ್ತಿಲ್ಲ.

ಅದ್ದರಿಂದ ರಸ್ತೆ ವಿಸ್ತರಣೆ ಮಾಡಲಾಗುವುದು ಎಂದರು. ನಗರದ ಖಾಸಗಿ ಬಸ್ ನಿಲ್ದಾಣಕ್ಕೆ ಶಿರಾ ನಗರ ನಿರ್ಮಾತೃ ಕಸ್ತೂರಿ ರಂಗಪ್ಪನ ನಾಯಕನ ಹೆಸರು ಇಡುವಂತೆ ವಾಲ್ಮೀಕಿ ಸಮುದಾಯದ ಮುಖಂಡರು ಮನವಿ ಮಾಡಿದರು. ಜೊತೆಗೆ ವೇದಿಕೆಯಲ್ಲಿ ಮಾತನಾಡಿದ ನಗರಸಭೆ ಸದಸ್ಯ ಉಮಾ ವಿಜಯರಾಜು, ಪೂಜಾ ಅವರು ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣಕ್ಕೆ ಕಸ್ತೂರಿ ರಂಗಪ್ಪನಾಯಕರ ಹೆಸರನ್ನು, ಖಾಸಗಿ ಬಸ್ ನಿಲ್ದಾಣಕ್ಕೆ ಮಾಜಿ ಶಾಸಕ ಪಿ.ಎಂ.ರಂಗನಾಥಪ್ಪ ಅವರ ಹೆಸರನ್ನು ಇಡುವಂತೆ ಶಾಸಕರಿಗೆ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಶಾಸಕ ಜಯಚಂದ್ರ, ಈ ಬಗ್ಗೆ ಚರ್ಚಿಸಿ, ಸೂಕ್ತ ಸಮಯದಲ್ಲಿ ಎಲ್ಲರಿಗೂ ತೃಪ್ತಿಯಾಗುವಂತಹ ಹೆಸರನ್ನು ತೀರ್ಮಾನ ಮಾಡಲಾಗುವುದು ಎಂದರು.

ಅಂತರಾಳದಿಂದ... EDITORIAL

# ಹಾಸನದ ದುರಂತ: ಯಾರು ಹೊಣೆ?

ವಿಘ್ನನಿವಾರಕನ ಹಬ್ಬ ಮನುಷ್ಯನ ಸ್ವಯಂಕೃತಾಪರಾಧದಿಂದ ಹತ್ತು ಹಲವು ವಿಘ್ನಗಳಿಗೆ ಕಾರಣವಾಗಿರುವುದು ನಿಜಕ್ಕೂ ವಿಷಾದನೀಯವಾಗಿದೆ. ಗಣೇಶ ಮೆರವಣಿಗೆಯ ಸಂದರ್ಭದಲ್ಲಿ ಹಾಸನ ಜಿಲ್ಲೆಯ ಮೊಸಳೆ ಹೊಸಹಳ್ಳಿಯಲ್ಲಿ ಸಂಭವಿಸಿದ ದುರಂತದಿಂದ ರಾಜ್ಯ ಇನ್ನೂ ಚೇತರಿಸಿಲ್ಲ. ಗಣಪತಿ ವಿಸರ್ಜನಾ ಮೆರವಣಿಗೆಯ ಮೇಲೆ ಟ್ರಕ್ಕೊಂದು ಹರಿದ ಈ ಅವಘಡದಲ್ಲಿ 10 ಜನರು ಸಾವಿಗೀಡಾಗಿದ್ದು 20ಕ್ಕೂ ಅಧಿಕ ಮಂದಿ ಗಾಯಗೊಂಡಿದ್ದಾರೆ. ಘಟನೆ ನಡೆದ ಬೆನ್ನಿಗೇ ರಾಜಕಾರಣಿಗಳು ಆರೋಪ, ಪ್ರತ್ಯಾರೋಪಗಳನ್ನು ಮಾಡುತ್ತಾ ತಮ್ಮ ರಾಜಕೀಯ ದುರುದ್ದೇಶಗಳನ್ನು ಸಾಧಿಸಲು ಪ್ರಯತ್ನಿಸಿದರು. ಆದರೆ ಈ ದುರಂತದಿಂದ ತಮ್ಮ ಮನೆಮಕ್ಕಳನ್ನು ಕಳೆದುಕೊಂಡವರ ಸ್ಥಿತಿ ಹೃದಯವಿದ್ರಾವಕವಾಗಿದೆ. ಸರಕಾರವೂ ಸೇರಿದಂತೆ ಕೆಲವು ರಾಜಕೀಯ ಪಕ್ಷಗಳು ಪರಿಹಾರವನ್ನು ಘೋಷಿಸಿವೆಯಾದರೂ, ತಾಯಂದಿರ ಹೃದಯಕ್ಕಾದ ಗಾಯಗಳನ್ನು ಶಮನ ಪಡಿಸುವ ಔಷಧೀಯ ಶಕ್ತಿ ಆ ಪರಿಹಾರ ಧನಕ್ಕಿಲ್ಲ. ಆರೋಪಿ ಟ್ರಕ್ ಚಾಲಕನನ್ನು ಬಂಧಿಸಲಾಗಿದೆಯಾದರೂ, ಅಷ್ಟರಿಂದ ಸಂತ್ರಸ್ತರಿಗೆ ನ್ಯಾಯ ಸಿಗುತ್ತದೆ ಎಂದು ಸಮಾಧಾನ ಪಡುವಂತಿಲ್ಲಮೃತಪಟ್ಟವರಲ್ಲಿ ಹೆಚ್ಚಿನವರು ಯುವಕರೇ ಆಗಿದ್ದಾರೆ. ಮೂವರು ಅಪ್ರಾಪ್ತ ವಯಸ್ಸಿನವರು. ಎಲ್ಲರೂ ಬಡ ಹಿಂದುಳಿದ ಕುಟುಂಬಕ್ಕೆ ಸೇರಿದವರಾಗಿರುವುದು ಕಾಕತಾಳೀಯವಲ್ಲ. ಇಂತಹ ಸಮೂಹಸನ್ನಿ ಮೆರವಣಿಗೆಯಲ್ಲಿ ಮೇಲ್ಜಾತಿಯ, ಶ್ರೀಮಂತ ವರ್ಗಕ್ಕೆ ಸೇರಿದ ಯುವಕರು ಯಾಕೆ ಗುರುತಿಸಲ್ಪಡುವುದಿಲ್ಲ. ಕೇವಲ ಬಡ, ಹಿಂದುಳಿದವರ್ಗಕ್ಕೆ ಸೇರಿದ ಯುವಕರೇ ನೇರ ಬಲಿಪಶುಗಳಾಗುತ್ತಿರುವುದು ಯಾಕೆ ಎನ್ನುವುದು ಅಧ್ಯಯನಕ್ಕೆ ಯೋಗ್ಯವಾಗಿದೆ ಮದ್ದೂರಿನಲ್ಲಿ ಮೆರವಣಿಗೆಯ ಸಂದರ್ಭದಲ್ಲಿ ನಡೆದ ದಾಂಧಲೆಗಳಲ್ಲಿ ಗುರುತಿಸಿಕೊಂಡವರೂ ಹಿಂದುಳಿದ ಬಡವರ್ಗಕ್ಕೆ ಸೇರಿದ ಜನರೇ ಆಗಿರುವುದನ್ನು ಇಲ್ಲಿ ಗಮನಿಸಬಹುದು. ಹಾಸನದ ಅವಘಡದಲ್ಲಿ ಮೃತಪಟ್ಟ ಗೋಕುಲ್ ಎಂಬಾತ ಇಂಜಿನಿಯರ್ ಕಲಿಯುವ ಗುರಿಯನ್ನು ಹೊಂದಿದ್ದ ಈತನ ತಾಯಿ ಕಸಗುಡಿಸುವ ಕೆಲಸವನ್ನು ಮಾಡಿ ಮಗನನ್ನು ಓಡಿಸುತ್ತಿದ್ದರು. ಆತನ ಸಾವಿನೊಂದಿಗೆ ಆ ತಾಯಿಯ ಬದುಕೇ ಮುಗಿದಂತಾಗಿದೆ. ಮೃತರಲ್ಲಿ ಇಬ್ಬರು ಬಿಳಿ ಕಲಿಯುತ್ತಿದ್ದ ವಿದ್ಯಾರ್ಥಿಗಳು, ಒಂದೆರಡು ವರ್ಷಗಳಲ್ಲಿ ವಿದ್ಯಾಭ್ಯಾಸ ಮುಗಿಸಿ ಇಡೀ ಕುಟುಂಬಕ್ಕೆ ಆಸರೆಯಾಗಬೇಕಾದವರು ಈ ದುರಂತದಲ್ಲಿ ಏಕಾಏಕಿ ಇಲ್ಲವಾಗಿದ್ದಾರೆ. ಅವರನ್ನು ಕಳೆದುಕೊಂಡ ಕುಟುಂಬಗಳ ನೋವು ಸಂಕಟಗಳನ್ನು ಯಾವ ಪರಿಹಾರವೂ ತುಂಬಿಸಿ ಕೊಡಲಾರವು ಬಲಿಯಾದ ಯುವಕರ ತಾಯಂದಿರು ಮಾಧ್ಯಮಗಳ ಜೊತೆಗೆ ಮಾತನಾಡುವಾಗ, ಇಂತಹ ಮೆರವಣಿಗೆಗಳು ಯಾಕೆ ಬೇಕು? ಎಂದು ಆಕ್ರೋಶ ಭರಿತವಾಗಿ ಕೇಳಿದ್ದಾರೆ. ಅವರ ಈ ಪ್ರಶ್ನೆಯೂ ನಮ್ಮೆಲ್ಲರ ಆತ್ಮವಿಮರ್ಶೆಗೆ ಕಾರಣವಾಗಬೇಕಾಗಿದೆ.

> **ದುರಂತಗಳನ್ನು ತಡೆಯಲು ಕಾನೂನುಗಳನ್ನು ಬಿಗಿ ಮಾಡಿದಾಗಲೆಲ್ಲ ಹಿಂದೂಗಳ ಹಬ್ಬ ಆಚರಣೆಗೆ ಸರಕಾರದಿಂದ ಅಡ್ಡಿ ಎಂದು ಇದೇ ಬಿಜೆಪಿಯ ನಾಯಕರು ಬೀದಿಯಲ್ಲಿ ಅರಚಾಡತೊಡಗುತ್ತಾರೆ. ಹಬ್ಬದ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಗಳನ್ನು ಉಂಟು ಮಾಡುವ ಪಟಾಕಿಗಳನ್ನು ನಿಷೇಧಿಸಿದರೆ ಅದಕ್ಕೂ ತಕರಾರು ತೆಗೆಯುತ್ತಾರೆ. ಕಂಡಕಂಡ ಕೆರೆ, ನದಿಗಳಲ್ಲಿ ವಿಗ್ರಹಗಳನ್ನು ವಿಸರ್ಜಿಸುವುದರ ವಿರುದ್ಧ ಕಾನೂನುಗಳನ್ನು ತಂದರೆ ಅದರಲ್ಲೂ ರಾಜಕೀಯ ನಡೆಸುತ್ತಾರೆ.**

ಮುಖ್ಯವಾಗಿ ಈ ದುರಂತಕ್ಕೆ ಯಾರು ಹೊಣೆ ಎನ್ನುವುದರ ಬಗ್ಗೆ ರಾಜಕೀಯ ನಾಯಕರು ಚರ್ಚೆ ನಡೆಸುತ್ತಿದ್ದಾರೆ. ಸರಕಾರ ಸೂಕ್ತ ಭದ್ರತೆಯನ್ನು ನೀಡದೆ ಇರುವುದೇ ದುರಂತಕ್ಕೆ ಕಾರಣ ಎಂದು ಬಿಜೆಪಿ ಆರೋಪಿಸುತ್ತಿದೆ.

ಆದರೆ ಇಂತಹ ಕಾರ್ಯಕ್ರಮದ ಸಂಘಟಕರಿಗೂ ಹೊಣೆಗಾರಿಕೆಗಳು ಇರುತ್ತವೆ. ಅವರು ತಮ್ಮ ಹೊಣೆಗಾರಿಕೆಯನ್ನು ಎಷ್ಟರ ಮಟ್ಟಿಗೆ ನಿರ್ವಹಿಸಿದ್ದಾರೆ ಎನ್ನುವುದೂ ಮುಖ್ಯವಾಗುತ್ತದೆ. ಗಣೇಶೋತ್ಸವದ ಹಿನ್ನೆಲೆಯಲ್ಲಿ ರಾಜ್ಯದ ಎಲ್ಲೆಡೆ ಗಲ್ಲಿಗಲ್ಲಿಗಳಲ್ಲಿ ಗಣೇಶನನ್ನು ಕೂರಿಸುವ ಕಾರ್ಯಕ್ರಮಗಳು ನಡೆಯುತ್ತವೆ. ಅದುದರಿಂದ ಸರಕಾರ ಮಾಡುವ ಬಿಗಿ ಬಂದೋಬಸ್ತಿಗೆ ಮಿತಿಗಳಿರುತ್ತವೆ. ಇಂತಹ ಸಂದರ್ಭದಲ್ಲಿ ಸಂಘಟಕರ ಹೊಣೆಗಾರಿಕೆ ಹೆಚ್ಚಿರುತ್ತದೆ. ಭಾರೀ ಅನಾಹುತಗಳನ್ನು ತಡೆಯಲು ಈ ಬಾರಿ ಡಿಜೆಯ ಬಳಕೆಯನ್ನು ಸರಕಾರ ತಡೆದಿದೆ. ಆದರೆ ಇದಕ್ಕೆ ಬಿಜೆಪಿ ಮತ್ತು ಸಂಘಪರಿವಾರದ ನಾಯಕರೇ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಹಬ್ಬದ ಹೆಸರಿನಲ್ಲಿ ಪರಿಸರವನ್ನು ಕೆಡಿಸುವುದರ ವಿರುದ್ಧ ಮೆರವಣಿಗೆಯ ನೆಪದಲ್ಲಿ ರಸ್ತೆಗಳಲ್ಲಿ ಇಡೀ ದಿನ ಸಂಚಾರಕ್ಕೆ ಅಡ್ಡಿಯುಂಟು ಮಾಡುವುದರ ವಿರುದ್ಧ ಕ್ರಮ ತೆಗೆದುಕೊಳ್ಳಲು ಮುಂದಾದರೆ ಬಿಜೆಪಿ ನಾಯಕರೇ ಅದಕ್ಕೆ ಆಕ್ಷೇಪ ವ್ಯಕ್ತಪಡಿಸುತ್ತಾರೆ. ಒಂದು ರೀತಿಯಲ್ಲಿ ಹಾಸನದ ದುರಂತಕ್ಕೆ ಇಂತಹ ರಾಜಕೀಯ ನಾಯಕರ ಕೊಡುಗೆಯೂ ಬಹುದೊಡ್ಡದಿದೆ. ಪಟಾಕಿ ನಿಷೇಧದ ಬಗ್ಗೆ ಈಗಾಗಲೇ ಸುಪ್ರೀಂಕೋರ್ಟ್ ಮಾತನಾಡಿದೆ. ದಿಲ್ಲಿಯಲ್ಲಿ ಅನ್ವಯವಾದ ನಿಷೇಧ ಯಾಕೆ ಇಡೀ ದೇಶಕ್ಕೆ ಅನ್ವಯವಾಗಬಾರದು ಎಂದು ಅದು ಕೇಳಿದೆ ಹಾಗೆಯೇ ಹಬ್ಬದ ಹೆಸರಿನಲ್ಲಿ ತಡ ರಾತ್ರಿಯವರೆಗೆ ರಸ್ತೆಯುದ್ದಕ್ಕೂ ಮೆರವಣಿಗೆ ನಡೆಸುವುದರ ಬಗ್ಗೆಯೂ ಸರಕಾರ ಕಠಿಣ ಕಾನೂನು ಜಾರಿಗೊಳಿಸುವ ಅಗತ್ಯವಿದೆ. ಈ ಕಾನೂನು ಎಲ್ಲಾ ಧರ್ಮೀಯರಿಗೂ ಅನ್ವಯವಾಗಬೇಕು.

ಮುಸ್ಲಿಮರು, ಹಿಂದೂಗಳು, ಕ್ರಿಶ್ಚಿಯನ್ನರು ತಮ್ಮ ತಮ್ಮ ಹಬ್ಬಗಳನ್ನು ಸಾರ್ವಜನಿಕ ಮೈದಾನಗಳಲ್ಲಿ ದೇವಸ್ಥಾನ, ಮಸೀದಿ, ಚರ್ಚುಗಳ ಆವರಣದಲ್ಲಿ ಅರ್ಥಪೂರ್ಣವಾಗಿ ಆಚರಿಸುವ ಅವಕಾಶವಿದೆ. ಹಬ್ಬದ ಹೆಸರಿನಲ್ಲಿ ಇಡೀ ದಿನ ರಸ್ತೆ ತಡೆಗಳನ್ನು ಮಾಡಿ ಸಾರ್ವಜನಿಕರಿಗೆ ತೊಂದರೆಯನ್ನುಂಟು ಮಾಡುವುದರಿಂದ ಹಬ್ಬಗಳ ಮೌಲ್ಯಗಳಿಗೆ ಧಕ್ಕೆಯುಂಟು ಮಾಡುತ್ತದೆ. ಗಣಪತಿಯನ್ನು ವಿದ್ಯಾರ್ಥಿದೇವತೆ, ವಿಘ್ನನಿವಾರಕನೆಂದು ಕರೆಯುತ್ತಾರೆ. ಆದರೆ ಹಾಸನದಲ್ಲಿ ವಿದ್ಯೆ ಕಲಿಯುವ ವಿದ್ಯಾರ್ಥಿಗಳೇ ಭೀಕರದುರಂತಕ್ಕೆ ಬಲಿಯಾಗುವಂತಾಯಿತು. ಯಾವ ಹಬ್ಬ ನಮ್ಮ ಬದುಕಿನ ವಿಘ್ನಗಳನ್ನೆಲ್ಲ ದೂರ ಮಾಡಿ ಹೊಸ ಬೆಳಕನ್ನು ನೀಡಬೇಕಾಗಿತ್ತೋ ಅದೇ ಹಬ್ಬದ ಹೆಸರಿನಲ್ಲಿ ವಿಘ್ನಗಳನ್ನು ನಾವಾಗಿಯೇ ಆಹ್ವಾನಿಸಿಕೊಂಡಿದ್ದೇವೆ. ಹಾಸನದ ಅವಘಡದಲ್ಲಿ ಟ್ರಕ್ ಚಾಲಕನ ತಪ್ಪು ಇದೆ ನಿಜ. ಇದೇ ಸಂದರ್ಭದಲ್ಲಿ ಚಾಲಕ ರಸ್ತೆಯಲ್ಲಿ ಸಾಗುತ್ತಿದ್ದ ರಸ್ತೆಗಳಿರುವುದು



## ರಾಮಾಯಣ

**ಶ್ರೀರಾಮನು ಖರನ ಹದಿನಾಲ್ಕು ಮಂದಿ ಸೇನಾಪತಿಗಳನ್ನು ಸಂಹರಿಸಿದ್ದು**

• ಹಿಂದಿನ ಸಂಚಿಕೆಯಿಂದ — 119 ನೆಯ ಅಧ್ಯಾಯ

ಕಂದಮೂಲ ಫಲಾಹಾರಗಳನ್ನು ಮಾಡಿಕೊಂಡು ಜಿತೇಂದ್ರಿಯರಾಗಿ ತಪಸ್ವಿಗಳಾಗಿದ್ದಾರೆ. ಅವರು ದಶರಥರಾಜನ ಕುಮಾರರಂತೆ. ಅವರ ಹೆಸರು ರಾಮಲಕ್ಷ್ಮಣರಂತೆ. ಅವರಿಬ್ಬರೂ ಅಣ್ಣತಮ್ಮಂದಿರು. ರೂಪದಲ್ಲಿ ಗಂಧರ್ವರಿಗೆ ಸಮಾನರು. ಅವರಲ್ಲಿ ಹಿರಿಯವನಿಗೆ ರೂಪ ಲಾವಣ್ಯ ಸೌಂದರ್ಯಸಂಪನ್ನೆಯಾಗಿ ಸರ್ವಾಭರಣಭೂಷಿತೆಯಾಗಿ ಯೌವನವತಿಯಾದ ಸ್ತ್ರೀ ಇದ್ದಾಳೆ. ಆ ನಿಮಿತ್ತವಾಗಿ ಅವರಿಬ್ಬರೂ ಕೂಡಿ ನನಗೆ ಈ ಅವಸ್ಥೆಯನ್ನು ಮಾಡಿದರು. ನಾನು ದಿಕ್ಕಿಲ್ಲದವಳಂತೆ ಅನಾಥೆಯಾಗಿ ಇಂಥ ಅವಸ್ಥೆಯನ್ನು ಪಡೆದನು. ಆ ದುಷ್ಟೆಯಾದ ಸ್ತ್ರೀಯ ರಕ್ತವನ್ನು ಅವರಿಬ್ಬರ ರಕ್ತದೊಡನೆ ರಣರಂಗದಲ್ಲಿ ಪಾನಮಾಡಬೇಕೆಂದು ನನ್ನ ಮನಸ್ಸಿನಲ್ಲಿದೆ. ಈ ನನ್ನ ಇಷ್ಟಾರ್ಥವನ್ನು ನೀನೇ ಸಲ್ಲಿಸಿಕೊಡಬೇಕು ಎಂದು ನುಡಿದಳು. ಆ ಮಾತನ್ನು ಕೇಳಿ ಖರನು ಅತ್ಯಂತ ಕೋಪಯುಕ್ತನಾಗಿ ಕಾಲಯಮನಂತೆ ಕೋಪಾಟೋಪವುಳ್ಳ ಹದಿನಾಲ್ಕು ಮಂದಿ ಸೇನಾಪತಿಗಳನ್ನು ಕರೆದು ಎಲೈ ಭಟರುಗಳಿರಾ, ದಂಡಕಾರಣ್ಯಕ್ಕೆ ಇಬ್ಬರು ಮನುಷ್ಯರು ಬಂದಿದ್ದಾರಂತೆ. ಅವರು ನಾರುಬಟ್ಟೆಯನ್ನುಟ್ಟು ಕೃಷ್ಣಾಜಿನಗಳನ್ನು ಹೊದ್ದುಕೊಂಡು ಆಯುಧಪಾಣಿಗಳಾಗಿ ಒಬ್ಬ ಸ್ತ್ರೀಸಮೇತರಾಗಿದ್ದಾರಂತೆ. ಅಲ್ಲಿಗೆ ಹೋಗಿ ಅವರಿಬ್ಬರನ್ನೂ ರಣರಂಗದಲ್ಲಿ ಕೊಂದು ಆ ಸ್ತ್ರೀಯನ್ನು ಹಿಡಿದು ತನ್ನಿ. ಅವರ ರಕ್ತವನ್ನು ಪಾನಮಾಡಬೇಕೆಂದು ನನ್ನ ಒಡಹುಟ್ಟಿದವಳಾದ ಶೂರ್ಪಣಖೆಯು ಬಯಸಿದ್ದಾಳೆ. ನೀವು ಶೀಘ್ರವಾಗಿ ಹೋಗಿ ಬನ್ನಿರಿ ಎಂದು ಆಜ್ಞಾಪಿಸಿದನು. ಅದನ್ನು ಕೇಳಿ ಆ ಹದಿನಾಲ್ಕು ಮಂದಿ ಸೇನಾನಾಯಕರು ವಾಯುವಿನಿಂದ ಓಡುವ ಮೇಘಗಳಂತೆ ರಾಮಲಕ್ಷ್ಮಣರ ಬಳಿಗೆ ಧಾವಿಸಿದರು.

**ಶ್ರೀರಾಮನು ಖರನ ಹದಿನಾಲ್ಕು ಮಂದಿ ಸೇನಾಪತಿಗಳನ್ನು ಸಂಹರಿಸಿದ್ದು:** ಆಮೇಲೆ ಘೋರಸ್ವರೂಪಿಯಾದ ಶೂರ್ಪಣಖೆಯು ಆ ರಾಕ್ಷಸರನ್ನು ಕರೆದುಕೊಂಡು ಹೋಗಿ ರಾಮನಿದ್ದ ಪರ್ಣಶಾಲೆಯನ್ನು ತೋರಿಸಲು, ಅವರು ಸೀತಾಲಕ್ಷ್ಮಣ ಸಮೇತನಾಗಿ ಪರ್ಣಶಾಲೆಯಲ್ಲಿ ಕುಳಿತಿದ್ದ ಶ್ರೀರಾಮನನ್ನು ಕಂಡರು. ಶ್ರೀ ರಾಮನು ಕಿವಿಮೂಗುಗಳನ್ನು ಕೊಯಿಸಿ ಕೊಂಡು ಹೋದ ಶೂರ್ಪಣಖೆಯನ್ನೂ ಅವಳ ಹಿಂದೆ ಬಂದ ರಾಕ್ಷಸರನ್ನೂ ಕಂಡು ಲಕ್ಷ್ಮಣನನ್ನು ಕುರಿತು ಎಲೈ ಲಕ್ಷ್ಮಣ, ನೀನು ಸೀತಾದೇವಿಯನ್ನು ರಕ್ಷಿಸಿಕೊಂಡು ಕ್ಷಣಮಾತ್ರವಿರು. ನಾನು ಈ ರಾಕ್ಷಸರನ್ನು ಕೊಂದು ಬರುತ್ತೇನೆ ಎಂದು ನುಡಿದನು. ಆ ಮಾತನ್ನು ಕೇಳಿ ಲಕ್ಷ್ಮಣನು ಸೀತಾದೇವಿಯ ಸಮೀಪದಲ್ಲಿ ಅವಳನ್ನು ರಕ್ಷಿಸಿಕೊಂಡಿದ್ದನು. ಶ್ರೀರಾಮನು ಚಿನ್ನದ ಕಟ್ಟುಗಳಿಂದ ಅಲಂಕರಿಸಲ್ಪಟ್ಟ ಬಿಲ್ಲನ್ನು ತೆಗೆದುಕೊಂಡು ಹೆದೆಯನ್ನೇರಿಸಿ ಆ ರಾಕ್ಷಸರನ್ನು ಕುರಿತು ಎಲೇ ರಾಕ್ಷಸರುಗಳಿರಾ, ನಾವು ದಶರಥರಾಜನ ಪುತ್ರರು.

ಮುಂದುವರಿಯುವುದು...

# ಪಿತೃಪಕ್ಷ: ಶ್ರದ್ಧೆ, ಸಂಸ್ಕಾರ, ವೈಜ್ಞಾನಿಕ ಮಹತ್ವ



■ ಅನಿಲ್ ಕುಮಾರ್ ತೇಲಂಗಿ
ಮುದ್ದೇಬಿಹಾಳ

ನಮ್ಮ ಭಾರತೀಯ ಸಂಸ್ಕೃತಿಯಲ್ಲಿ ಹಬ್ಬಗಳು ಮತ್ತು ಆಚರಣೆಗಳಿಗೆ ಅದರದ್ದೇ ಆದ ಮಹತ್ವವಿದೆ. ಈ ಆಚರಣೆಗಳು ಧಾರ್ಮಿಕ, ಆಧ್ಯಾತ್ಮಿಕ ಹಾಗೂ ವೈಜ್ಞಾನಿಕ ಹಿನ್ನೆಲೆಯನ್ನು ಒಳಗೊಂಡಿರುತ್ತವೆ. ಭಾದ್ರಪದ ಮಾಸದ ಶುಕ್ಲಪಕ್ಷದ ಹುಣ್ಣಿಮೆಯಿಂದ ಅಮಾವಾಸ್ಯೆಯವರೆಗಿನ ಹದಿನೈದು ದಿನಗಳ ಅವಧಿಯನ್ನು ಪಿತೃಪಕ್ಷ ಎಂದು ಕರೆಯಲಾಗುತ್ತದೆ. ಈ ಅವಧಿಯಲ್ಲಿ ನಮ್ಮ ಪೂರ್ವಜರಾದ ಪಿತೃಗಳನ್ನು ನೆನಪು ಮಾಡಿಕೊಂಡು ಅವರಿಗೆ ಶ್ರದ್ಧೆಯಿಂದ ಶ್ರಾದ್ಧ ಮತ್ತು ತರ್ಪಣಗಳನ್ನು ಸಲ್ಲಿಸಲಾಗುತ್ತದೆ.

**ಪಿತೃಪಕ್ಷದ ಹಿನ್ನೆಲೆ, ಮಹತ್ವ:** ಪಿತೃಪಕ್ಷ ಆಚರಣೆಯ ಹಿನ್ನೆಲೆಯಲ್ಲಿ ಕೆಲವು ಪೌರಾಣಿಕ ಕಥೆಗಳು ಸೇರಿಕೊಂಡಿವೆ. ಗರುಡ ಪುರಾಣದ ಪ್ರಕಾರ, ಮರಣ ಹೊಂದಿದ ವ್ಯಕ್ತಿಯ ಆತ್ಮವು ಕೆಲಕಾಲ ಭೂಮಿಯಲ್ಲಿ ಇರುತ್ತದೆ. ನಂತರ ಯಮಲೋಕಕ್ಕೆ ತೆರಳುವ ಮುನ್ನ ಅದು ಪಿತೃಗಳ ಲೋಕದಲ್ಲಿ ನೆಲೆಸುತ್ತದೆ ಎಂದು ಹೇಳಲಾಗುತ್ತದೆ. ಮಹಾಭಾರತದ ಕಥೆಯ ಪ್ರಕಾರ, ದಾನಶೂರ ಕರ್ಣ ಮರಣಾನಂತರ ಸ್ವರ್ಗಕ್ಕೆ ಹೋದಾಗ, ಅಲ್ಲಿ ಅವನಿಗೆ ತಿನ್ನಲು ಆಹಾರದ ಬದಲಾಗಿ ಬಂಗಾರ ಮತ್ತು ವಜ್ರಗಳನ್ನು ನೀಡಲಾಗುತ್ತದೆ. ಆಗ ಕರ್ಣ ಯಮಧರ್ಮನನ್ನು ಇದರ ಕಾರಣ ಕೇಳಿದಾಗ, ನೀನು ನಿನ್ನ ಜೀವನದುದ್ದಕ್ಕೂ ಬಂಗಾರ, ವಜ್ರಗಳನ್ನು ಮಾತ್ರ ದಾನ ಮಾಡಿದೆ. ನೀನು ಎಂದಿಗೂ ನಿನ್ನ ಪೂರ್ವಜರಿಗೆ ಆಹಾರವನ್ನು ದಾನ ಮಾಡಲಿಲ್ಲ. ಹಾಗಾಗಿ ನಿನಗೆ ಈ ಫಲ ಸಿಕ್ಕಿದೆ ಎಂದು ಉತ್ತರಿಸುತ್ತಾನೆ. ಆಗ ಕರ್ಣ ತಾನು ಮಾಡಿದ ತಪ್ಪಿಗೆ ಪಶ್ಚಾತ್ತಾಪಗೊಂಡು, ಯಮಧರ್ಮನನ್ನು ಬೇಡಿಕೊಳ್ಳುತ್ತಾನೆ. ಯಮನು ಕರ್ಣನಿಗೆ 15 ದಿನಗಳ ಕಾಲ ಭೂಮಿಗೆ ಹಿಂತಿರುಗಿ ತನ್ನ ಪೂರ್ವಜರಿಗೆ ಆಹಾರ ನೀಡಲು ಅವಕಾಶ ಕಲ್ಪಿಸುತ್ತಾನೆ. ಆ ಹದಿನೈದು ದಿನಗಳೇ ಪಿತೃಪಕ್ಷದ ದಿನಗಳು ಎಂದು ನಂಬಲಾಗಿದೆ. ಪಿತೃಪಕ್ಷದಲ್ಲಿ ಪೂರ್ವಜರಿಗೆ ಮಾಡುವ ಶ್ರಾದ್ಧ, ತರ್ಪಣ ಮತ್ತು ಬ್ರಾಹ್ಮಣರಿಗೆ ಅನ್ನದಾನವು ಪೂರ್ವಜರ ಆತ್ಮಕ್ಕೆ ಶಾಂತಿ ನೀಡುತ್ತದೆ ಎಂದು ಹಿಂದೂ ಧರ್ಮದಲ್ಲಿ ನಂಬಲಾಗಿದೆ. ಈ ಕ್ರಿಯೆಗಳು ಪಿತೃ ಋಣವನ್ನು ತೀರಿಸುವ ಒಂದು ವಿಧಾನ. **ಮನುಷ್ಯನ ಜೀವನದಲ್ಲಿ ಮೂರು ರೀತಿಯ ಋಣಗಳಿರುತ್ತವೆ:** ದೇವ ಋಣ, ಪಿತೃ ಋಣ, ಮತ್ತು ಗುರು ಋಣ. ಈ ಮೂರೂ ಋಣಗಳಿಂದ ಮುಕ್ತಿ ಪಡೆದಾಗ ಮಾತ್ರ ಮನುಷ್ಯನಿಗೆ ಮುಕ್ತಿ ಸಿಗುತ್ತದೆ ಎಂದು ಪುರಾಣಗಳು ಹೇಳುತ್ತವೆ.

### ಮಾನಸಿಕ ಆರೋಗ್ಯ


ಪಿತೃಪಕ್ಷವು ಪೂರ್ವಜರನ್ನು ಸ್ಮರಿಸಲು, ಅವರ ಬಗ್ಗೆ ಕೃತಜ್ಞತೆಯನ್ನು ವ್ಯಕ್ತಪಡಿಸಲು ಒಂದು ಸುಂದರ ಸಂದರ್ಭ. ನಮ್ಮ ಬದುಕು, ಸಾಧನೆ, ಸುಖಗಳು ಅವರ ತ್ಯಾಗದ ಫಲ ಎಂದು ಅರಿತುಕೊಳ್ಳುವುದು ನಮ್ಮಲ್ಲಿ ವಿನಯ ಮತ್ತು ಕೃತಜ್ಞತಾ ಭಾವನೆಯನ್ನು ಬೆಳೆಸುತ್ತದೆ. ಇದು ಮಾನಸಿಕ ನೆಮ್ಮದಿಗೆ ಸಹಾಯಕವಾಗಿದೆ. ಒಟ್ಟಾರೆಯಾಗಿ ಹೇಳುವುದಾದರೆ, ಪಿತೃಪಕ್ಷವು ಕೇವಲ ಒಂದು ಧಾರ್ಮಿಕ ಆಚರಣೆಯಲ್ಲ. ಇದು ಪೂರ್ವಜರಿಗೆ ಗೌರವ ಸಲ್ಲಿಸುವ, ಪ್ರಕೃತಿಯನ್ನು ಗೌರವಿಸುವ,ಕೌಟುಂಬಿಕ ಸಂಬಂಧಗಳನ್ನು ಬಲಪಡಿಸುವ ಒಂದು ಸುಂದರ ಆಚರಣೆಯಾಗಿದೆ. ಇದು ನಮ್ಮ ಸಂಸ್ಕೃತಿಯಲ್ಲಿನ ವಸುಧೈವ ಕುಟುಂಬಕಂ ಎಂಬ ತತ್ವಕ್ಕೆ ಒಂದು ಉತ್ತಮ ನಿದರ್ಶನವಾಗಿದೆ. ನಮ್ಮ ಹಿರಿಯರಿಗೆ ಶ್ರಾದ್ಧ ಮಾಡುವುದರಿಂದ ಅವರ ಆತ್ಮಕ್ಕೆ ಶಾಂತಿ ದೊರೆಯುತ್ತದೆ, ನಮಗೆ ಅವರ ಆಶೀರ್ವಾದ ಸಿಗುತ್ತದೆ ಮತ್ತು ಈ ಸಂಸ್ಕೃತಿಯನ್ನು ಮುಂದಿನ ಪೀಳಿಗೆಗೆ ತಲುಪಿಸಿದಂತಾಗುತ್ತದೆ.

**ಪಿತೃಪಕ್ಷದಲ್ಲಿ ಆತ್ಮ ಮತ್ತು ಪಿತೃಗಳು:** ಪಿತೃಪಕ್ಷದಲ್ಲಿ ಸಾಮಾನ್ಯವಾಗಿ ಆತ್ಮ ಮತ್ತು ಪಿತೃಗಳಿಗೆ ಸಂಬಂಧಿಸಿದ ವಿಚಾರಗಳನ್ನು ಚರ್ಚಿಸಲಾಗುತ್ತದೆ. ಪುರಾಣಗಳ ಪ್ರಕಾರ ಆತ್ಮವು ದೇಹವನ್ನು ಬಿಟ್ಟ ನಂತರ ಸೂಕ್ಷ್ಮ ಶರೀರವಾಗಿ ಪರಿವರ್ತನೆಯಾಗುತ್ತದೆ. ನಂತರ ಅದು ಪೂರ್ವಜರ ಲೋಕಕ್ಕೆ ಸೇರುತ್ತದೆ. ಅಲ್ಲಿ ವಾಸಿಸುವ ಸೂಕ್ಷ್ಮ ಶರೀರಗಳು ನಮ್ಮ ಹಿರಿಯರ ಆತ್ಮಗಳಾಗಿರುತ್ತವೆ. ಅವುಗಳಿಗೆ ನಾವು ನೀಡಿದ ತರ್ಪಣ, ಬಲಿ, ಆಹಾರವು ನೇರವಾಗಿ ತಲುಪುತ್ತದೆ ಎಂದು ನಂಬಲಾಗಿದೆ. ಹಾಗಾಗಿ ಈ ಸಮಯದಲ್ಲಿ ನಾವು ಮಾಡುವ ಪೂಜೆ, ಪುನಸ್ಕಾರಗಳು ನಮ್ಮ ಪೂರ್ವಜರ ಆತ್ಮಗಳಿಗೆ ಶಾಂತಿ ನೀಡುತ್ತವೆ. ಪಿತೃಪಕ್ಷದ ಅವಧಿಯಲ್ಲಿ ನಮ್ಮ ಪೂರ್ವಜರು ಭೂಮಿಗೆ ಬಂದು ತಮ್ಮ ವಂಶದವರನ್ನು ನೋಡುತ್ತಾರೆ ಮತ್ತು ಆಶೀರ್ವದಿಸುತ್ತಾರೆ ಎಂದು ಹಲವು ಗ್ರಂಥಗಳಲ್ಲಿ ಉಲ್ಲೇಖವಿದೆ.



**ವೈಜ್ಞಾನಿಕ ಮಹತ್ವ:** ಧಾರ್ಮಿಕ ನಂಬಿಕೆಗಳ ಜೊತೆಗೆ, ಪಿತೃಪಕ್ಷಕ್ಕೆ ವೈಜ್ಞಾನಿಕ ಹಿನ್ನೆಲೆಯೂ ಇದೆ.


**ಪರಿಸರ ಸ್ವಚ್ಛತೆ ಮತ್ತು ಆರೋಗ್ಯ:** ಪಿತೃಪಕ್ಷದಲ್ಲಿ ಜನರು ಕಾಗೆಗಳಿಗೆ ಅನ್ನವನ್ನು ಹಾಕುವುದು ಸಾಮಾನ್ಯ. ಕಾಗೆಗಳು ಪರಿಸರವನ್ನು ಸ್ವಚ್ಛಗೊಳಿಸುವ ಕೆಲಸ ಮಾಡುತ್ತವೆ. ಇವು ಪ್ರಕೃತಿಯ ಸಹಜ ಸ್ವಚ್ಛತಾ ಕಾರ್ಯಕರ್ತರು scavengers ಎಂದು ಕರೆಯಲಾಗುತ್ತದೆ. ಅವುಗಳು ಸತ್ತ ಪ್ರಾಣಿಗಳು, ಜೀವಿಗಳು ಮತ್ತು ಕೊಳಕಾದ ಆಹಾರವನ್ನು ಸೇವಿಸಿ ಪರಿಸರವನ್ನು ಸ್ವಚ್ಛವಾಗಿಡಲು ಸಹಾಯ ಮಾಡುತ್ತವೆ. ಸಾಮಾಜಿಕ ಬಂಧಗಳ ಬಲವರ್ಧನೆ: ಪಿತೃಪಕ್ಷದ ಸಮಯದಲ್ಲಿ ಕುಟುಂಬದ ಸದಸ್ಯರೆಲ್ಲರೂ ಒಟ್ಟಾಗಿ ಸೇರಿ ಪೂಜೆ ಮಾಡುತ್ತಾರೆ. ಈ ಸಮಯದಲ್ಲಿ ಹಿರಿಯರು ಕಿರಿಯರಿಗೆ ಸಂಪ್ರದಾಯ ಮತ್ತು ಜೀವನದ ಮೌಲ್ಯಗಳನ್ನು ಹೇಳಿಕೊಡುತ್ತಾರೆ. ಇದು ಕುಟುಂಬದ ಬಂಧಗಳನ್ನು ಗಟ್ಟಿಗೊಳಿಸುತ್ತದೆ ಮತ್ತು ಪರಸ್ಪರ ಸಹಕಾರ, ಗೌರವ, ಮತ್ತು ಸಂಬಂಧಗಳನ್ನು ಬಲಪಡಿಸುತ್ತದೆ.



# ಈ ವರ್ಷದ ಕೊನೆಯ ಸೂರ್ಯ ಗ್ರಹಣ

ಭೂಮಿಯ ಮೇಲೆ ತನ್ನ ನೆರಳನ್ನು ಬೀಳಿಸಿ ಸೂರ್ಯನ ಬೆಳಕನ್ನು ಭಾಗಶಃ ಅಥವಾ ಸಂಪೂರ್ಣವಾಗಿ ನಿರ್ಬಂಧಿಸುತ್ತದೆ. ಈ ಅಪರೂಪದ ಆಕಾಶ ಘಟನೆಯನ್ನು ಚಂದ್ರನ ನೆರಳು ಮಾರ್ಗದಲ್ಲಿ ನಿರ್ದಿಷ್ಟ ಪ್ರದೇಶಗಳಿಂದ ಮತ್ತು ಅಮಾವಾಸ್ಯೆಯ ಸಮಯದಲ್ಲಿ ಮಾತ್ರ ಕಾಣಬಹುದು. ಚಂದ್ರನು ಭೂಮಿ ಮತ್ತು ಸೂರ್ಯನ ನಡುವೆ ಚಲಿಸಿದಾಗ ಸೂರ್ಯಗ್ರಹಣ ಸಂಭವಿಸುತ್ತದೆ. ಸೆ. 21 ರಂದು ಭಾಗಶಃ ಸೂರ್ಯಗ್ರಹಣ ನಡೆಯಲಿದೆ. ಇದು 2025 ರ ಅಂತಿಮ ಸೂರ್ಯಗ್ರಹಣವಾಗಲಿದೆ ಮತ್ತು ಸೂರ್ಯನನ್ನು ಸಂಪೂರ್ಣವಾಗಿ ನಿರ್ಬಂಧಿಸುವ ಒಟ್ಟು ಗ್ರಹಣಕ್ಕಿಂತ ಭಿನ್ನವಾಗಿ, ಇದು ಭಾಗಶಃ ಸೂರ್ಯಗ್ರಹಣವಾಗಿರುತ್ತದೆ, ಅಲ್ಲಿ ಚಂದ್ರನು ಸೂರ್ಯನ ಒಂದು ಭಾಗವನ್ನು ಮಾತ್ರ ಮರೆಮಾಡುತ್ತಾನೆ. ಇದರ ಫಲಿತಾಂಶವು ಅರ್ಧಚಂದ್ರಾಕಾರದ ಸೂರ್ಯನಾಗಿರುತ್ತದೆ, ಇದು ಬೆರಗುಗೊಳಿಸುವ ಆಕಾಶ ದೃಶ್ಯವನ್ನು ಸೃಷ್ಟಿಸುತ್ತದೆ.

**ಸಮಯ, ವಲಯ ಮತ್ತು ಅವಧಿ:** ಭಾಗಶಃ ಸೂರ್ಯಗ್ರಹಣವು 17:29 UTC (10:59 PM IST ಸೆಪ್ಟೆಂಬರ್ 21) ಕ್ಕೆ ಪ್ರಾರಂಭವಾಗುತ್ತದೆ, ಗರಿಷ್ಠ 19:41 UTC (1:11 AM IST ಸೆಪ್ಟೆಂಬರ್ 22) ಕ್ಕೆ ತಲುಪುತ್ತದೆ ಮತ್ತು 21:53 UTC (3:23 AM IST, ಸೆಪ್ಟೆಂಬರ್ 22) ಕ್ಕೆ ಕೊನೆಗೊಳ್ಳುತ್ತದೆ. ಈ ಇಡೀ ಘಟನೆಯು ನಾಲ್ಕು ಗಂಟೆಗಳಿಗೂ ಹೆಚ್ಚು ಕಾಲ ನಡೆಯುತ್ತದೆ, ನ್ಯೂಜಿಲೆಂಡ್, ಆಸ್ಟ್ರೇಲಿಯಾದ ಕೆಲವು ಭಾಗಗಳು, ದಕ್ಷಿಣ ಪೆಸಿಫಿಕ್ ಮತ್ತು ಅಂಟಾರ್ಕ್ಟಿಕಾ ಸೇರಿದಂತೆ ದಕ್ಷಿಣ ಗೋಳಾರ್ಧದಿಂದ ಗೋಚರಿಸುತ್ತದೆ. ರಾತ್ರಿಯಲ್ಲಿ ಸಂಭವಿಸುವುದರಿಂದ ಭಾರತದಲ್ಲಿ ಗ್ರಹಣ ಗೋಚರಿಸುವುದಿಲ್ಲ.



### ಗ್ರಹಣದ ಸಮಯದಲ್ಲಿ ಅಡುಗೆ ಮಾಡಬಾರದು ಯಾಕೆ?

**ಸೂರ್ಯ ಗ್ರಹಣದ ಸಮಯದಲ್ಲಿ ಏನನ್ನು ತಿನ್ನಬೇಕು:** ಭಾರತದಲ್ಲಿನ ಜನಪ್ರಿಯ ನಂಬಿಕೆಗಳ ಪ್ರಕಾರ, ಸೂರ್ಯ ಗ್ರಹಣದ ಅವಧಿಯನ್ನು ಗರ್ಭಿಣಿ ಮಹಿಳೆಯರಿಗೆ ಹಾನಿಕಾರಕವೆಂದು ಪರಿಗಣಿಸಲಾಗುತ್ತದೆ, ಅವರು ಗ್ರಹಣದ ಸಮಯದಲ್ಲಿ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ತೆಗೆದುಕೊಳ್ಳಬೇಕಾಗುತ್ತದೆ. ಅನೇಕ ಸಂಸ್ಕೃತಿಗಳು, ಸಂಪ್ರದಾಯಗಳು ಸೂರ್ಯಗ್ರಹಣದ ಸಮಯದಲ್ಲಿ ಉಪವಾಸವನ್ನು ಆಧ್ಯಾತ್ಮಿಕ ಶುದ್ಧೀಕರಣದ ಒಂದು ರೂಪವಾಗಿ ಪ್ರತಿಪಾದಿಸುತ್ತವೆ.

**ಗ್ರಹಣ ಸಮಯದಲ್ಲಿ ಅಡುಗೆ ಮಾಡುವುದನ್ನು ಏಕೆ ತಪ್ಪಿಸಬೇಕು:** ಸೂರ್ಯ ಗ್ರಹಣದ ಸಮಯದಲ್ಲಿ, ಅಡುಗೆ ಮಾಡುವುದರಿಂದ ಆಹಾರದ ಶುದ್ಧತೆ ಮತ್ತು ಶಕ್ತಿಯ ಮೇಲೆ ಪರಿಣಾಮ ಬೀರುತ್ತದೆ ಎಂದು ನಂಬಲಾಗಿರುವುದರಿಂದ ಅಡುಗೆ ಮಾಡುವುದನ್ನು ತಪ್ಪಿಸುವುದು ಒಳ್ಳೆಯದು. ಸಾಂಪ್ರದಾಯಿಕ ನಂಬಿಕೆಗಳ ಪ್ರಕಾರ, ಗ್ರಹಣದ ಕಾಸ್ಮಿಕ್ ಪ್ರಭಾವವು ಊಟದ ಪೌಷ್ಟಿಕಾಂಶದ ಮೌಲ್ಯ ಮತ್ತು ಆಧ್ಯಾತ್ಮಿಕ ಸಾರವನ್ನು ಬದಲಾಯಿಸಬಹುದು.

**ಉಪವಾಸದ ವೇಳೆ ಏನನ್ನು ಸೇವಿಸಬಹುದು:** ಉಪವಾಸವು ದೇಹ ಮತ್ತು ಮನಸ್ಸನ್ನು ಶುದ್ಧೀಕರಿಸುತ್ತದೆ ಎಂದು ನಂಬಲಾಗಿದೆ. ಈ ಸಮಯದಲ್ಲಿ ಪ್ರಾರ್ಥನೆ, ಧ್ಯಾನ ಮತ್ತು ಆತ್ಮಾವಲೋಕನದ ಮೇಲೆ ಕೇಂದ್ರೀಕರಿಸಲು ಅನುವು ಮಾಡಿಕೊಡುತ್ತದೆ. ಉಪವಾಸವನ್ನು ಆಚರಿಸುವವರು ನೀರನ್ನು ಮಾತ್ರ ಸೇವಿಸಲು ಅಥವಾ ಹಣ್ಣುಗಳು ಮತ್ತು ಬೀಜಗಳಂತಹ ಸರಳ, ಸುಲಭವಾಗಿ ಜೀರ್ಣವಾಗುವ ಆಹಾರಗಳನ್ನು ಆರಿಸಿಕೊಳ್ಳಬಹುದು.

ಸರಿ ಇದು ಮಾತ್ರವಲ್ಲ, ಸೂರ್ಯ ಗ್ರಹಣದೊಂದಿಗೆ ಸಂಬಂಧಿಸಿದ ಹಲವಾರು ಇತರ ನಂಬಿಕೆಗಳಿವೆ. ಒಬ್ಬರು ಸೇವಿಸಬಹುದಾದ, ತಪ್ಪಿಸಬಹುದಾದ ಆಹಾರಗಳ ಪಟ್ಟಿ ಇಲ್ಲಿದೆ.

**ಎಳ ನೀರು:** ಎಳ ನೀರು ಗ್ರಹಣಗಳ ಸಮಯದಲ್ಲಿ ಹೆಚ್ಚಾಗಿ ಸೇವಿಸುವ ಹೈಡ್ರೇಟಿಂಗ್ ಮತ್ತು ರಿಫ್ರೆಶ್ ಪಾನೀಯವಾಗಿದೆ. ಎಲೆಕ್ಟ್ರೋಲೈಟ್‌ಗಳು ಮತ್ತು ಪೋಷಕಾಂಶಗಳಲ್ಲಿ ಸಮೃದ್ಧವಾಗಿರುವ ಎಳ ನೀರು ದೇಹವನ್ನು ಹೈಡ್ರೀಕರಿಸುವ ಮತ್ತು ಸಮತೋಲನದಲ್ಲಿಡಲು ಸಹಾಯ ಮಾಡುತ್ತದೆ, ಇದು ಗ್ರಹಣ ಸಮಯದಲ್ಲಿ ಶಕ್ತಿಯ ಮಟ್ಟವನ್ನು ಕಾಪಾಡಿಕೊಳ್ಳಲು ಅತ್ಯುತ್ತಮ ಆಯ್ಕೆಯಾಗಿದೆ. ಅವು ಜೀರ್ಣಕ್ರಿಯೆಯನ್ನು ಸುಧಾರಿಸುವ ಮತ್ತು ಹೊಟ್ಟೆ ಉಬ್ಬುವುದನ್ನು ತಡೆಯುವ ಜೈವಿಕ ಸಕ್ರಿಯ ಕಿಣ್ವಗಳನ್ನು ಹೊಂದಿರುತ್ತವೆ. ಎಳ ನೀರು ಮಲಬದ್ಧತೆಯನ್ನು ನಿವಾರಿಸಲು ಸಹಾಯ ಮಾಡುತ್ತದೆ ಮತ್ತು ಚರ್ಮವನ್ನು ಒಳಗಿನಿಂದ ಹೈಡ್ರೇಟ್ ಮಾಡುತ್ತದೆ. ನೈಸರ್ಗಿಕ ಮೂತ್ರವರ್ಧಕವಾಗಿ ಕಾರ್ಯನಿರ್ವಹಿಸುತ್ತದೆ.

**ಸಾತ್ವಿಕ ಆಹಾರಗಳು:** ಹಿಂದೂ ಧರ್ಮದಲ್ಲಿ, ಗ್ರಹಣಗಳ ಸಮಯದಲ್ಲಿ, ವಾತಾವರಣವು ನಕಾರಾತ್ಮಕ ಶಕ್ತಿಯಿಂದ ತುಂಬಿರುತ್ತದೆ ಮತ್ತು ಇದನ್ನು ಎದುರಿಸಲು ಸಾತ್ವಿಕ (ಶುದ್ಧ) ಆಹಾರವನ್ನು ಸೇವಿಸುವುದನ್ನು ಪ್ರೋತ್ಸಾಹಿಸಲಾಗುತ್ತದೆ . ಸಾತ್ವಿಕ ಆಹಾರಗಳಲ್ಲಿ ತಾಜಾ ಹಣ್ಣುಗಳು, ತರಕಾರಿಗಳು, ಧಾನ್ಯಗಳು, ಬೀಜಗಳು ಮತ್ತು ಡೈರಿ ಉತ್ಪನ್ನಗಳು ಸೇರಿವೆ. ಈ ಆಹಾರಗಳು ಹಗುರ, ಪೌಷ್ಟಿಕ ಮತ್ತು ಸ್ಪಷ್ಟ ಮತ್ತು ಶಾಂತ ಮನಸ್ಸನ್ನು ಕಾಪಾಡಿಕೊಳ್ಳಲು ಅನುಕೂಲಕರವಾಗಿದೆ. ಸಾತ್ವಿಕ ಆಹಾರವು ಜೀರ್ಣಕ್ರಿಯೆಯನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಸಾತ್ವಿಕ ಆಹಾರಗಳು ಹಗುರವಾಗಿರುತ್ತವೆ ಜೀರ್ಣಿಸಿಕೊಳ್ಳಲು ಸುಲಭ ಮತ್ತು ಉಬ್ಬುವುದು ಅಥವಾ ಆಮ್ಲೀಯತೆಯನ್ನು ತಡೆಯುತ್ತದೆ. ತಾಜಾ ಹಣ್ಣುಗಳು, ತರಕಾರಿಗಳು ಗಿಡಮೂಲಿಕೆಗಳ ಬಳಕೆಯು ರೋಗನಿರೋಧಕ ಶಕ್ತಿಯನ್ನು ಬಲಪಡಿಸುತ್ತದೆ ಮತ್ತು ಧಾನ್ಯಗಳು, ಬೀಜಗಳು, ಡೈರಿ ಉತ್ಪನ್ನಗಳ ಬಳಕೆಯು ನಿರಂತರ ಶಕ್ತಿಯನ್ನು ಒದಗಿಸುತ್ತದೆ. ತಾಜಾ ಆಹಾರಗಳು ಒತ್ತಡ ಮತ್ತು ಆತಂಕವನ್ನು ಕಡಿಮೆ ಮಾಡಲು ಮತ್ತು ಮನಸ್ಸನ್ನು ಶಾಂತವಾಗಿಡಲು ಸಹಾಯ ಮಾಡುತ್ತದೆ.

# ಪಿತೃತರ್ಪಣ ಏಕೆ, ಯಾವಾಗ ಕೊಡಬೇಕು ?

● ಶ್ರೀ. ವಿನೋದ ಕಾಮತ್,



ಪಿತೃಗಳನ್ನು ಉದ್ದೇಶಿಸಿ ನೀಡಿದ ನೀರಿಗೆ ಪಿತೃತರ್ಪಣ ಎನ್ನುತ್ತಾರೆ. ತಂದೆಯು ಜೀವಂತವಿರುವಾಗ ಮಗನಿಗೆ ಪಿತೃತರ್ಪಣ ನಿಷಿದ್ಧವಾಗಿದೆ. ಪಿತೃಗಳಿಗೆ ತನ್ನ ವಂಶಜರಿಂದ ಪಿಂಡದ ಮತ್ತು ಬ್ರಾಹ್ಮಣ ಭೋಜನದ ಅಪೇಕ್ಷೆಯಿರುವಂತೆ ನೀರಿನ ಅಪೇಕ್ಷೆಯೂ ಇರುತ್ತದೆ. ತರ್ಪಣವನ್ನು ಕೊಡುವುದರಿಂದ ಪಿತೃಗಳು ಸಂತುಷ್ಟರಾಗುತ್ತಾರೆ. ಅಲ್ಲದೇ ತರ್ಪಣ ಕೊಟ್ಟವರಿಗೆ ಆಯುಷ್ಯ, ತೇಜಸ್ಸು, ಬ್ರಹ್ಮವರ್ಚಸ್ಸು, ಸಂಪತ್ತು, ಯಶಸ್ಸು, ಅನ್ನಾದ್ಯ ಅಂದರೆ ಭಕ್ಷಿಸಿದ ಅನ್ನವನ್ನು ಜೀರ್ಣ ಮಾಡುವ ಶಕ್ತಿಯನ್ನು ಕೊಟ್ಟು ತೃಪ್ತಗೊಳಿಸುತ್ತಾರೆ. ದೇವರು ಋಷಿ, ಪಿತೃಗಳನ್ನು ಉದ್ದೇಶಿಸಿ ಪ್ರತಿದಿನ ತರ್ಪಣವನ್ನು ಕೊಡಬೇಕು. ಮುಂಜಾನೆ ಸ್ನಾನದ ನಂತರ ತರ್ಪಣವನ್ನು ಕೊಡಬೇಕು. ಪಿತೃಗಳಿಗೆ ಪ್ರತಿದಿನ ಶ್ರಾದ್ಧವನ್ನು ಮಾಡಲು ಆಗದಿದ್ದರೆ ಕನಿಷ್ಟಪಕ್ಷ ತರ್ಪಣವನ್ನಾದರೂ ಕೊಡಬೇಕು. ಪಾರ್ವಣ ಶ್ರಾದ್ಧ ಮಾಡಿದ ಮರುದಿನ ಪಿತೃತರ್ಪಣ ಕೊಡಬೇಕು.

**ಎಳ್ಳುತರ್ಪಣ :** ಪಿತೃತರ್ಪಣಕ್ಕೆ ಎಳ್ಳನ್ನು ತೆಗೆದುಕೊಳ್ಳಬೇಕು. ಎಳ್ಳಿನಲ್ಲಿ ಕಪ್ಪು ಮತ್ತು ಬಿಳಿ ಹೀಗೆ ಎರಡು ಪ್ರಕಾರಗಳಿವೆ. ಶ್ರಾದ್ಧಕ್ಕೆ ಕಪ್ಪು ಎಳ್ಳನ್ನು ಉಪಯೋಗಿಸಬೇಕು. ಎಳ್ಳು ಸಿಗದಿದ್ದರೆ ಬೆಳ್ಳಿ ಅಥವಾ ಬಂಗಾರವನ್ನು ಉಪಯೋಗಿಸಬಹುದು. ಎಳ್ಳು ಮಿಶ್ರಿತ ನೀರಿನಿಂದ ಪಿತೃಗಳಿಗೆ ತರ್ಪಣ ಕೊಡುವುದನ್ನು ಎಳ್ಳುತರ್ಪಣ ಎನ್ನುತ್ತಾರೆ.

ಎಷ್ಟು ಜನ ಪಿತೃಗಳನ್ನು ಉದ್ದೇಶಿಸಿ ಶ್ರಾದ್ಧವನ್ನು ಮಾಡಿರುತ್ತಾರೆಯೋ ಅಷ್ಟು ಜನರಿಗೆ ಮಾತ್ರ ಶ್ರಾದ್ಧಾಂಗ ಎಳ್ಳುತರ್ಪಣವನ್ನು ಕೊಡಬೇಕು. ದರ್ಶಶ್ರಾದ್ಧವಿದ್ದಲ್ಲಿ ಅದಕ್ಕಿಂತ ಮುಂಚೆ, ವಾರ್ಷಿಕ ಶ್ರಾದ್ಧವಿದ್ದಲ್ಲಿ ಅದರ ಮರುದಿನ ಎಳ್ಳುತರ್ಪಣ ಮಾಡುತ್ತಾರೆ. ಇತರ ಶ್ರಾದ್ಧಗಳಲ್ಲಿ ಎಳ್ಳುತರ್ಪಣವನ್ನು ಶ್ರಾದ್ಧದ ನಂತರ ಕೂಡಲೇ ಮಾಡುತ್ತಾರೆ. ನಾಂದಿಶ್ರಾದ್ಧ, ಸಪಿಂಡಿಶ್ರಾದ್ಧ ಮುಂತಾದ ಶ್ರಾದ್ಧಗಳಲ್ಲಿ ಎಳ್ಳುತರ್ಪಣ ಮಾಡುವುದಿಲ್ಲ.

**ಎಳ್ಳುತರ್ಪಣದ ಮಹತ್ವ:** ಪಿತೃಗಳಿಗೆ ಎಳ್ಳು ಪ್ರಿಯವಾಗಿರುತ್ತವೆ. ಎಳ್ಳನ್ನು ಉಪಯೋಗಿಸುವುದರಿಂದ ಅಸುರರು ಶ್ರಾದ್ಧವಿಧಿಗಳಲ್ಲಿ ತೊಂದರೆಗಳನ್ನು ಕೊಡುವುದಿಲ್ಲ. ಶ್ರಾದ್ಧದ ದಿನ ಮನೆಯಲ್ಲಿ ಎಲ್ಲಾ ಕಡೆಗಳಲ್ಲಿ ಎಳ್ಳನ್ನು ಹರಡಬೇಕು.ಆಮಂತ್ರಿತ ಬ್ರಾಹ್ಮಣರಿಗೆ ಎಳ್ಳು ಮಿಶ್ರಿತ ನೀರನ್ನು ಕೊಡಬೇಕು ಎಳ್ಳನ್ನು ದಾನ ಮಾಡಬೇಕು. ಜೈಮಿನೀಗೃಹ್ಯಸೂತ್ರ ಉತ್ತರಭಾಗ, ಖಂಡ 1, ಬೌಧಾಯನಧರ್ಮಸೂತ್ರ (ಪ್ರಶ್ನೆ 2, ಅಧ್ಯಾಯ 8, ಅಂಶ 8) ಮತ್ತು ಬೌಧಾಯನಗೃಹ್ಯಸೂತ್ರ.

# ಬಾಯಲ್ಲಿ ನೀರು ತರಿಸುವ ರಸ್ತೆ ಬದಿಯ ಮಸಾಲ ಪೂರಿ!

### ಮಸಾಲ ಪೂರಿ ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು?

- ಒಣ ಬಟಾಣಿ – 1 ಕಪ್
- ಆಲೂಗಡ್ಡೆ – 4
- ಟೊಮೆಟೊ
- ಈರುಳ್ಳಿ
- ಕೆಂಪು ಮೆಣಸಿನ ಪುಡಿ – 1 ಟೀಸ್ಪೂನ್
- ಅರಿಶಿನ ಪುಡಿ
- ಗರಂ ಮಸಾಲ ಪುಡಿ
- ಕರಿಮೆಣಸಿನ ಪುಡಿ
- ಕಡಲೆ ಹಿಟ್ಟು
- ಪಾನಿ ಪುರಿ ಮಸಾಲ ಪುಡಿ
- ಜೀರಿಗೆ ಪುಡಿ
- ಬೆಳ್ಳುಳ್ಳಿ
- ಹಸಿರು ಮೆಣಸಿನಕಾಯಿ
- ಶುಂಠಿ
- ಕೊತ್ತಂಬರಿ ಸೊಪ್ಪು
- ಪುದೀನ ಸೊಪ್ಪು
- ಚೌಚೌ
- ಪೂರಿ
- ಕ್ಯಾರೆಟ್
- ಕೊತ್ತಂಬರಿ ಸೊಪ್ಪು
- ಉಪ್ಪು , ಅಡುಗೆ ಎಣ್ಣೆ

ಪಾನಿಪೂರಿ, ಮಸಾಲ ಪೂರಿ ಅಂದ್ರೆ ಎಲ್ಲರ ಬಾಯಲ್ಲೂ ನೀರು ಬರುತ್ತೆ. ಅದ್ರಲ್ಲೂ ರಸ್ತೆ ಬದಿಯ ಪಾನಿಪೂರಿ ಅಂಗಡಿಗಳ ಮುಂದೆ ಸರದಿ ಸಾಲಿನಲ್ಲಿ ನಿಂತು ಪಾನಿಪೂರಿ ಮಸಾಲ ಪೂರಿ ಸವಿಯೋದು ನೋಡಬಹುದು. ಇದರ ರುಚಿ ಹಿಡಿದ ಮಂದಿ ನಿತ್ಯವೂ ಸವಿಯೋದು ನೋಡಬಹುದು. ಹಾಗೆ ಬಹುತೇಕರು ವಾರದಲ್ಲಿ 3 ರಿಂದ 4 ಬಾರಿ ಆದರೂ ಸವಿಯುವವರು ಕೂಡ ಇದ್ದಾರೆ. ಇನ್ನು ರಸ್ತೆ ಬದಿಯ ಪಾನಿಪೂರಿ ಸವಿಯುವ ಮಂದಿ ಮನೆಯಲ್ಲೂ ಮಾಡಿ ಸವಿಯಲು ಮುಂದಾಗೋದು ಕಾಮನ್. ಆದ್ರೆ ಬಹಳ ವಸ್ತುಗಳ ಬಳಸಿ ಇದನ್ನು ಮಾಡಬೇಕು ಎಂಬ ಕಾರಣಕ್ಕೆ ಹಲವರು ಮಾಡಲು ಹಿಂದೇಟು ಹಾಕುತ್ತಾರೆ. ಆದ್ರೆ, ನಾವಿಂದು ಮನೆಯಲ್ಲಿ ಮಸಾಲ ಪೂರಿ ಮಾಡೋದು ಹೇಗೆ ಅನ್ನೋದನ್ನು ಹೇಳಲಿದ್ದೇವೆ. ಅದ್ರಲ್ಲು ಸುಲಭವಾಗಿ ಮನೆಯಲ್ಲೇ ಈ ಮಸಾಲ ಪೂರಿ ಮಾಡುವುದು ಹೇಗೆ? ಮನೆ ಮಂದಿಯಲ್ಲ ಸಂಜೆ ಸಮಯದಲ್ಲಿ ಕುಳಿತು ಸವಿಯುವಂತೆ



ಮನೆಯಲ್ಲೇ ನಾವು ಮಾಡಬಹುದು.

ಕೆಲವೇ ವಸ್ತುಗಳ ಬಳಸಿಕೊಂಡು ಕೆಲವೇ ನಿಮಿಷದಲ್ಲಿ ರಸ್ತೆ ಬದಿಸಿಗುವಂತಹ ರುಚಿಯಲ್ಲೇ ನಾವು ಮನೆಯಲ್ಲಿ ಮಾಡಬಹುದು. ಹಾಗಾದ್ರೆ, ಮನೆಯಲ್ಲಿ ಮಸಾಲ ಪೂರಿ ಮಾಡುವುದು ಹೇಗೆ? ಮಾಡಲು ಯಾವೆಲ್ಲಾ ಪದಾರ್ಥಗಳು ಬೇಕು? ಮಾಡುವ ಸುಲಭದ ವಿಧಾನವೇನು? ಎಷ್ಟು ಸಮಯ ಹಿಡಿಯಲಿದೆ ಎಂಬುದನ್ನು ಇಲ್ಲಿ ತಿಳಿದುಕೊಳ್ಳಿ.

**ಮಸಾಲ ಪೂರಿ ಮಾಡುವುದು ಹೇಗೆ**

ಇದನ್ನು ಮಾಡಲು ಮೊದಲು ಬಟಾಣಿ, ಆಲೂಗಡ್ಡೆಯನ್ನು 8 ಗಂಟೆಗಳ ಕಾಳ ನೆನೆಸಿಟ್ಟು ಬಳಿಕ ಕುಕ್ಕರ್‌ಗೆ ಹಾಕಿಕೊಂಡು ನೀರು ಹಾಕಿ 2 ಸೀಟಿ ಹೊಡೆಸಿ ತೆಗೆದು ಇಟ್ಟುಕೊಳ್ಳಿ. ಈಗ ಬಾಣಲೆ ಒಲೆ ಮೇಲೆ ಇಟ್ಟು ಎಣ್ಣೆ ಹಾಕಿ ಸಣ್ಣದಾಗಿ ಹೆಚ್ಚಿದ ಈರುಳ್ಳಿ, ಟೊಮೆಟೋ ಹಾಕಿ ಉಪ್ಪು ಸಹ ಹಾಕಿ ಫ್ರೈ ಮಾಡಿಕೊಳ್ಳಿ. ನಿಮಿಷ ಫ್ರೈ ಮಾಡಿಕೊಳ್ಳಿ. ಈಗ ಒಂದು ಮಿಕ್ಸಿ ಜಾರ್ ತೆಗೆದುಕೊಂಡು ಅದಕ್ಕೆ ಹಸಿ ಮೆಣಸು, ಬೆಳ್ಳುಳ್ಳಿ, ಶುಂಠಿ, ಕೊತ್ತಂಬರಿ, ಪುದಿನ ಸೊಪ್ಪು, 1 ಬೇಯಿಸಿದ ಆಲೂಗಡ್ಡೆ, ಅರ್ಧ ಮುಷ್ಠಿ ಬೇಯಿಸಿದ ಬಟಾಣಿ ಹಾಕಿ, ನಂತರ ಸ್ವಲ್ಪ ನೀರು ಹಾಕಿ ರುಬ್ಬಿಕೊಳ್ಳಿ. ಇದು ನುಣ್ಣಗೆ ರುಬ್ಬಿ ನಂತರ ಒಲೆ ಮೇಲಿನ ಟೊಮೆಟೋ ಜೊತೆಗೆ ಹಾಕಿಕೊಂಡು ಮಿಕ್ಸ್ ಮಾಡಿಕೊಳ್ಳಿ. ಈಗ ಬೇಯಿಸಿಕೊಂಡಿದ್ದ ಆಲೂ ಬಟಾಣಿಯನ್ನು ಸ್ವಲ್ಪ ಪುಡಿ ಮಾಡಿಕೊಳ್ಳಿ. ಈಗ ಈ ಪುಡಿ ಮಾಡಿದ ಆಲೂ ಬಟಾಣಿಯನ್ನು ಒಲೆ ಮೇಲಿನ ಬಾಣಲೆಗೆ ಹಾಕಿ ಮಿಕ್ಸ್ ಮಾಡಿಕೊಳ್ಳಿ. ಇದು ಪೂರಿ ಮಸಾಲ ಆಗಿರಲಿದೆ. ಇದಕ್ಕೆ ಪಾನಿಪೂರಿ ಮಸಾಲ ಅಥವಾ ಚಾಟ್ ಮಸಾಲ, ಖಾರದ ಪುಡಿ, ಜೀರಿಗೆ ಪುಡಿ, 2 ಸ್ಪೂನ್ ಕಡಲೆ ಹಿಟ್ಟು ಕೂಡ ಹಾಕಿಕೊಂಡು ಸ್ವಲ್ಪ ನೀರು ಹಾಕಿ ಮಿಕ್ಸ್ ಮಾಡಿ 5 ನಿಮಿಷ ಕುದಿಬರಲು ಬಿಡಿ. ಇದಾದರೆ ಮಸಾಲ ರೆಡಿಯಾಗುತ್ತೆ. ಈಗ ಅಂಗಡಿಯಿಂದ ತಂದಿರುವ ಪೂರಿಯನ್ನು 1 ಪ್ಲೇಟ್‌ಗೆ ಹಾಕಿಕೊಂಡು ಅದರ ಮೇಲೆ ಈ ಮಸಾಲೆ ಹಾಕಿಕೊಳ್ಳಿ. ಹಾಗೆ ಹಸಿ ಈರುಳ್ಳಿ, ಟೊಮೆಟೋ, ಚೌಚೌ, ತುರಿದ ಕ್ಯಾರೆಟ್ ಕೊತ್ತಂಬರಿ ಸೊಪ್ಪು, ಸೇವ್ ಇದ್ದರೆ ಹಾಕಿಕೊಂಡರೆ ನಿಮ್ಮ ಮುಂದೆ ರಸ್ತೆ ಬದಿ ಸವಿಯುವ ಮಸಾಲ ಪೂರಿ ರೆಡಿಯಾಗುತ್ತೆ. ನೀವು ಕೂಡ ಇದನ್ನು ಮಾಡಿ ಸವಿದು ನೋಡಿ.

### ಶಾಸಕ ಶಿವಲಿಂಗೇಗೌಡರು ಮತ್ತು ನನ್ನ ಬಗ್ಗೆ ನಿರಂತರ ತೇಜೋವಧೆ ಸರಿಯಲ್ಲ : ನಗರಸಭೆ ಅಧ್ಯಕ್ಷ ಎಮ್ ಸಮೀವುಲ್ಲಾ

# ಕ್ಷೇತ್ರದ ಜನರೇ ನಿಮಗೆ ತಕ್ಕ ಉತ್ತರ ನೀಡುವ ಪರಿಸ್ಥಿತಿ ಎದುರಾಗುತ್ತದೆ

• ಉದಯವಾಹಿನಿ ಹಾಸನ

ಅರಸೀಕೆರೆ ಕ್ಷೇತ್ರದ ಜನತೆ ಸೂಕ್ಷ್ಮವಾಗಿ ಗಮನಿಸುತ್ತಿದ್ದು ಇತ್ತೀಚೆಗೆ ಕಾರ್ಯಕ್ರಮ ಒಂದರಲ್ಲಿ ನಾಲ್ಕನೇ ಬಾರಿ ಶಾಸಕರಾಗಿರುವ ಶಿವಲಿಂಗೇಗೌಡರ ಬಗ್ಗೆ ಅಗೌರವವಾಗಿ ಮಾತನಾಡಿದ್ದು ಆ ಸಮಯದಲ್ಲಿ ಸಾರ್ವಜನಿಕರೇ ಎನ್ ಆರ್ ಸಂತೋಷ್ ವಿರುದ್ಧ ಗಲಾಟೆ ನಡೆಸಿದ ಪ್ರಸಂಗವು ಇತ್ತೀಚೆಗೆ ಜರುಗಿದೆ .

ಅರಸೀಕೆರೆ ಕ್ಷೇತ್ರದಲ್ಲಿ ಅಭಿವೃದ್ಧಿಯನ್ನು ಗಮನಿಸಿ ಶಾಸಕ ಕೆಎಂ ಶಿವಲಿಂಗೇಗೌಡರನ್ನು ನಾಲ್ಕು ಬಾರಿ ಗೆಲ್ಲಿಸಿದ್ದಾರೆ ಮತ್ತೆ ನಾವು ಅರಸೀಕೆರೆ ನಗರಸಭೆಯಲ್ಲಿ ಮೂರು ಬಾರಿ ಅಧ್ಯಕ್ಷರಾಗಿದ್ದು ಅದು ಜನಕ್ಕೆ ಮತ್ತು ನಗರಸಭೆ ಸದಸ್ಯರ ಸಹಕಾರದಿಂದ ನಾವು ಅಧಿಕಾರಕ್ಕೆ ಬಂದು ಉತ್ತಮ ಆಡಳಿತ ನೀಡುತ್ತಿದ್ದೇವೆ ಇದನ್ನು ಸಹಿಸದ ನೀವು ನಿರಂತರವಾಗಿ ಅಭಿವೃದ್ಧಿ ಕೆಲಸಗಳಿಗೆ ಅಡ್ಡಗಾಲು ಹಾಕುತ್ತಿದ್ದು ಶಾಸಕರ ಮೇಲೂ ಸಹ ಪದೇ ಪದೇ ಏಕವಚನದಲ್ಲಿ ಮಾತನಾಡುತ್ತಿರುವುದು ಕಂಡು ಬರುತ್ತಿದೆ ಎಂದು ಇದು ಹೀಗೆ ಮುಂದುವರೆದರೆ ಸರಿಯಲ್ಲ ಇಲ್ಲಿಗೆ ಇದು ಕೊನೆಯಾಗಬೇಕು ಎಂದು ನಗರಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ ತಿಳಿಸಿದರು.

**ಉತ್ತಮ ಆಡಳಿತ ನೀಡುತ್ತಿದ್ದೇವೆ**

ಇದು ಹೀಗೆ ಮುಂದುವರೆದರೆ ಅರಸೀಕೆರೆ ಕ್ಷೇತ್ರದ ಜನರೇ ನಿಮಗೆ ತಕ್ಕ ಉತ್ತರ ನೀಡುವ ಪರಿಸ್ಥಿತಿ ಎದುರಾಗುತ್ತದೆ ಎಂದರು. ಅರಸೀಕೆರೆ ಕ್ಷೇತ್ರದಲ್ಲಿ ವಿಧಾನಸಭಾ ಚುನಾವಣೆಯಲ್ಲಿ 80000 ಮತಗಳನ್ನು ಪಡೆದಿದ್ದು ಎನ್ ಆರ್ ಸಂತೋಷವರೇ ನೀವು ಮಾತನಾಡಿದ ರೀತಿಯಲ್ಲಿ ನಾವು ಏಕವಚನದಲ್ಲಿ ಪದಬಳಕೆ ಮಾಡಿದರೆ ನಿಮಗೆ ನಮಗೆ ವ್ಯತ್ಯಾಸ ಇರುವುದಿಲ್ಲ ನಿಮ್ಮ ವಿಧಾನಸಭೆಯ ಚುನಾವಣೆಯಲ್ಲಿ ಜೊತೆಗಿದ್ದ ಮುಖಂಡರು ನಿಮ್ಮಿಂದ ಖಾಲಿಯಾಗಿದ್ದಾರೆ ಈಗ ನಿಮ್ಮ ಜೊತೆ ಯಾರಿದ್ದಾರೆ ಎಂದು ಮೊದಲು ನೀವು ಅರ್ಥ ಮಾಡಿಕೊಳ್ಳಿ ಎಂದರು.

ಅರಸೀಕೆರೆಯಲ್ಲಿ ಇತ್ತೀಚೆಗೆ ನಡೆದ ಗಲಾಟೆ ವೇಳೆಯಲ್ಲಿ ಅನಾವಶ್ಯಕವಾಗಿ ನೀವು ಮೂಗು ತೂರಿಸುತ್ತಿದ್ದು ಸರಿಯಲ್ಲ ಈ ವಿಚಾರದಲ್ಲಿ ಸಲದ ವಿಚಾರಗಳನ್ನು ತಾವು ಸೃಷ್ಟಿಸುತ್ತಿರುವುದರಿಂದ ಈ ಬಗ್ಗೆ ಕ್ರಮ ಕೈಗೊಳ್ಳಲು ಶೀಘ್ರದಲ್ಲೇ ಹಾಸನ ಜಿಲ್ಲೆಯ


ಉದಯವಾಹಿನಿ ಚಿತ್ರ

ಪೊಲೀಸ್ ಅಧಿಕಾರಿಗಳಿಗೆ ಮತ್ತು ಅರಸೀಕೆರೆ ಡಿವೈಎಸ್ಪಿ ಅವರಿಗೆ ಒತ್ತಾಯ ಮಾಡುವುದಾಗಿ ತಿಳಿಸಿದರು

ರಾಜ್ಯ ಕಂಡ ಧೀಮಂತ ನಾಯಕ ಮಾಜಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪನವರಿಗೆ ಅವರ ಕುಟುಂಬದಲ್ಲಿ ಇದ್ದು ಅವರಿಗೆ ಯಾವ ರೀತಿ ನಡೆದುಕೊಂಡಿದ್ದೀರಿ ಎಂಬುದು ಸಮಯ ಬಂದಾಗ ಹತ್ತಾರು ವಿಚಾರಗಳು ಚರ್ಚೆಗೆ ಬರಲಿವೆ ಎಂದು ನಗರಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ ಮಾರ್ಮಿಕವಾಗಿ ನುಡಿದರು.

ದೇಶದ ಮಾಜಿ ಪ್ರಧಾನಿ ನರೇಂದ್ರ ಮೋದಿಜಿ ಅವರಿಗೆ ಶುಭ ಕೋರಿದ ನಗರಸಭೆಯ ಅಧ್ಯಕ್ಷ.

> ಸಂತೋಷವರೇ ಮೊದಲು ನೀವು ಯಾವ ರಾಜಕೀಯ ಪಕ್ಷದಲ್ಲಿ ಇದ್ದೀರಿ ಅರ್ಥ ಮಾಡಿಕೊಳ್ಳಿ ಅದನ್ನು ಬಿಟ್ಟು ಅಭಿವೃದ್ಧಿ ಕೆಲಸ ಮಾಡುತ್ತಿರುವ ವಿಚಾರದಲ್ಲಿ ಅಡ್ಡ ಪಡಿಸುವುದು ಸರಿಯಲ್ಲ ನಾನು ಸಹ ಇದುವರೆಗೆ ಮಾಧ್ಯಮಗಳ ಮುಖಾಂತರ ನನ್ನ ಬಗ್ಗೆ ಅವಹೇಳನಕಾರಿಯಾಗಿ ಹೇಳಿಕೆ ನೀಡುತ್ತಿರುವುದಕ್ಕೆ ನಾನು ಸಹ ಪ್ರತ್ಯುತ್ತರ ನೀಡಿದ್ದು ನೀವು ರಾಜಕೀಯವಾಗಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿಯಾಗಿ ಕೆಲಸ ನಿರ್ವಹಿಸಿದ್ದು ಹುದ್ದೆಗೆ ಸರಿಯಾಗಿ ಹೇಳಿಕೆಗಳನ್ನು ನೀಡಬೇಕು. -ಎಮ್ ಸಮೀವುಲ್ಲಾ ,ನಗರಸಭೆ ಅಧ್ಯಕ್ಷ

## ಒಳ್ಳೆಯ ಉದ್ದೇಶದಿಂದ ರಾಜಕಾರಣ ಮಾಡಿ

ತಮ್ಮ ನಿರಂತರವಾಗಿ ಸುದ್ದಿಗಾರರೊಂದಿಗೆ ಮಾತನಾಡಿದ ನಗರಸಭೆಯ ಅಧ್ಯಕ್ಷ ಎಮ್ ಸಮೀವುಲ್ಲಾ ಇಷ್ಟು ದಿನಗಳ ಕಾಲ ನಿರಂತರವಾಗಿ ಎನ್‌ಆರ್ ಸಂತೋಷ್ ತೇಜೋವಧೆ ಮಾಡುತ್ತಿದ್ದರು ಸಹ ಎಮ್ ಸಮೀವುಲ್ಲಾ ಗೌರವದೊಂದಿಗೆ ಮಾತನಾಡಿ ನಿಮ್ಮ ವಯಸ್ಸಿನ ಮಕ್ಕಳು ನನ್ನ ಮಕ್ಕಳಿದ್ದಾರೆ ನಾನು ಹಿರಿಯ ವ್ಯಕ್ತಿಯಾಗಿ ರಾಜಕೀಯ ಮಾಡುವ ಉದ್ದೇಶವಿದ್ದರೆ ಅಭಿವೃದ್ಧಿ ವಿಚಾರಗಳನ್ನು ಮುಂದಿಟ್ಟುಕೊಂಡು ಒಳ್ಳೆಯ ಉದ್ದೇಶದಿಂದ ರಾಜಕಾರಣ ಮಾಡಿ ಎಂದು ನಗರಸಭೆ ಅಧ್ಯಕ್ಷರಾದ ಎಮ್ ಸಮೀವುಲ್ಲಾ ಹೇಳಿದರು.

ಎಮ್ ಸಮೀವುಲ್ಲಾ ಮಾಧ್ಯಮ ದವರೊಂದಿಗೆ ಮಾತನಾಡುವ ಮೊದಲು ದೇಶ ಕಂಡ ಜನ ಮೆಚ್ಚಿದ ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳು ಕೋರಿ ತಮ್ಮ ಮಾತುಗಳನ್ನು ಪ್ರಾರಂಭಿಸಿದರು.

ನಗರಸಭೆ ಉಪಾಧ್ಯಕ್ಷರಾದ ಮನೋಹರ್ ಮೇಸ್ತ್ರಿ ನಗರಸಭಾ ಸದಸ್ಯರಾದ ಹರೀಶ್ ಸೇರಿದಂತೆ ಹಲವಾರು ಮುಖಂಡರು ಉಪಸ್ಥಿತರಿದ್ದರು.

## ಮಿನಿ ನ್ಯೂಸ್

### ಟಿಸಿ ಆಯಿಲ್ ದುರ್ಬಳಕೆ: ಬೆಸ್ಕಾಂ ಸ್ಟೋರ್ ಕೀಪರ್ ಅಮಾನತು

• ಉದಯವಾಹಿನಿ ಹರಿಹರ

ಪರಿವರ್ತಕ (ಟಿಸಿ) ಆಯಿಲ್ ದುರ್ಬಳಕೆ ಮಾಡಿಕೊಂಡ ಆರೋಪದ ಮೇರೆಗೆ ನಗರದ ಬೆಸ್ಕಾಂ ವಿಭಾಗೀಯ ಕಚೇರಿಯ ವಿಭಾಗೀಯ ಉಗ್ರಾಣದ ಸಹಾಯಕ ಉಗ್ರಾಣ ಪಾಲಕ (ಅಸಿಸ್ಟೆಂಟ್ ಸ್ಟೋರ್ ಕೀಪರ್) ಅರುಣ್ ಕುಮಾರ್ ಜಿ.ಎಂ. ಅವರನ್ನು ಸೇವೆಯಿಂದ ಅಮಾನತು ಮಾಡಲಾಗಿದೆ. ಬೆಸ್ಕಾಂನ ಲೆಕ್ಕಪತ್ರ ವಿಭಾಗದ ಅಧಿಕಾರಿಗಳು ಈ ಹಿಂದೆ ಉಗ್ರಾಣಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಉಗ್ರಾಣದಲ್ಲಿ ಭೌತಿಕ ಪರಿಮಾಣಕ್ಕೂ ಲೆಕ್ಚರ್ ಪರಿಮಾಣಕ್ಕೂ 56.67 ಲಕ್ಷ ಮೌಲ್ಯದ 89,270 ಲೀಟರ್ ಟಿಸಿ ಆಯಿಲ್ ವ್ಯತ್ಯಾಸವಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿತ್ತು.

ವಿಚಾರಣೆಯನ್ನು ಕಾಯ್ದಿರಿಸಿ ನೌಕರರ ಸೇವಾ ನಡತೆ ನಿಬಂಧನೆಗಳ ಅನ್ವಯ ಬೆಸ್ಕಾಂ ಆಡಳಿತ ಮತ್ತು ಮಾನವ ಸಂಪನ್ಮೂಲ ವಿಭಾಗದ ಪ್ರಧಾನ ವ್ಯವಸ್ಥಾಪಕ ಬಿ.ಆರ್.ದಯಾನಂದ ಅವರು ಅಮಾನತು ಮಾಡಿ ಆದೇಶಿಸಿದ್ದಾರೆ.

### ರಸ್ತೆ ಗುಂಡಿಗಳೊಂದಿಗೆ ಸೆಲ್ಫಿ ಅಭಿಯಾನ

• ಉದಯವಾಹಿನಿ ಉಡುಪಿ

ರಸ್ತೆ ಗುಂಡಿಗಳನ್ನು ತಕ್ಷಣ ಮುಚ್ಚುವಂತೆ ರಾಜ್ಯ ಸರ್ಕಾರವನ್ನು ಆಗ್ರಹಿಸಿ ಉಡುಪಿ ಜಿಲ್ಲಾ ಬಿಜೆಪಿ ಹಮ್ಮಿಕೊಂಡಿರುವ 'ರಸ್ತೆ ಗುಂಡಿಗಳ ಜೊತೆ ಸೆಲ್ಫಿ' ಅಭಿಯಾನಕ್ಕೆ ಬಿಜೆಪಿ ಉಡುಪಿ ಜಿಲ್ಲಾ ಘಟಕ ಅಧ್ಯಕ್ಷ ಕುತ್ಯಾರು ನವೀನ್ ಶೆಟ್ಟಿ ಅವರು ಚಾಲನೆ ರಸ್ತೆ ಗುಂಡಿಗಳ ಜೊತೆಗಿನ ಸೆಲ್ಫಿಯನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಳ್ಳುವ ಮೂಲಕ ಅವರು ಚಾಲನೆ ನೀಡಿದರು. ಕೇವಲ ಸ್ವಯಂ ಘೋಷಿತ ಗ್ಯಾರಂಟಿಗಳಿಗೆ ಹಣ ಹೊಂದಿಸಲು ಪರದಾಡುತ್ತಿರುವ ಕಾಂಗ್ರೆಸ್ ನೇತೃತ್ವದ ರಾಜ್ಯ ಸರ್ಕಾರ ರಸ್ತೆಗಳ ಗುಂಡಿ ಮುಚ್ಚಲೂ ಹಣವಿಲ್ಲದೇ ನೈಜ ದಿವಾಳಿತನ ಪ್ರದರ್ಶಿಸಿದೆ ಎಂದು ಅವರು ಹೇಳಿದ್ದಾರೆ.

ರಸ್ತೆಗಳ ಗುಂಡಿಗಳನ್ನು ಮುಚ್ಚಲೂ ರಾಜ್ಯ ಸರ್ಕಾರ ಯಾವುದೇ ಅನುದಾನವನ್ನು ನೀಡದೇ ಇರುವ ಬಗ್ಗೆ ಕಾಂಗ್ರೆಸ್ ಶಾಸಕರೇ ಅನೇಕ ಸಂದರ್ಭಗಳಲ್ಲಿ ಬಹಿರಂಗವಾಗಿ ತಮ್ಮ ಅಸಹಾಯಕತೆಯನ್ನು ವ್ಯಕ್ತಪಡಿಸಿದ್ದಾರೆ ಎಂದು ಕುತ್ಯಾರು ನವೀನ್ ಶೆಟ್ಟಿ ತಿಳಿಸಿದ್ದಾರೆ.

## ವಿಶ್ವಕ್ಕೆ ವಿಶ್ವಕರ್ಮರ ಕೊಡುಗೆ ಅಪಾರ: ಮುದ್ದೇಬಿಹಾಳದಲ್ಲಿ ವಿಶ್ವಕರ್ಮ ಜಯಂತಿ

• ಉದಯವಾಹಿನಿ ಮುದ್ದೇಬಿಹಾಳ

ಭಾರತೀಯ ಸಂಸ್ಕೃತಿಗೆ ವಿಶ್ವಕರ್ಮ ಸಮುದಾಯದ ಕೊಡುಗೆ ಅಪಾರವಾಗಿದ್ದು, ಅನೇಕ ದೇವಾಲಯಗಳು ಹಾಗೂ ಪ್ರಾಚೀನ ಸ್ಮಾರಕಗಳ ನಿರ್ಮಾಣದಿಂದಾಗಿ ಸಮುದಾಯದ ಕಲೆ ಮತ್ತು ಸಂಸ್ಕೃತಿ ಪ್ರಸಿದ್ಧಿ ಪಡೆದಿವೆ ಎಂದು ಮುರನಾಳ ಮಳೆರಾಜೇಂದ್ರಸ್ವಾಮಿಮಠದ ಶ್ರೀ ಜಗನ್ನಾಥ ಮಹಾಸ್ವಾಮಿಗಳು ಹೇಳಿದರು.

ಅವರು ಪಟ್ಟಣದ ಶಿರವಾಳ ಬಡಾವಣೆಯಲ್ಲಿ ವಿಶ್ವಕರ್ಮ ಸಮಾಜದಿಂದ ಆಯೋಜಿಸಲಾಗಿದ್ದ ಶ್ರೀ ವಿಶ್ವಕರ್ಮ ಜಯಂತ್ಯುತ್ಸವದ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದರು.

**ಶಿಕ್ಷಣ, ಉದ್ಯಮಕ್ಕೆ ಒತ್ತು:** ವಿಶೇಷ ಉಪನ್ಯಾಸ ನೀಡಿದ ಗಣಿ ಆರ್.ಸಿ. ಸರ್ಕಾರಿ ಪದವಿಪೂರ್ವ ಕಾಲೇಜಿನ ಉಪನ್ಯಾಸಕ ಭೀಮರಾವ ಬಡಿಗೇರ, ಜಗತ್ತನ್ನು ಸೃಷ್ಟಿ ಮಾಡಿದ ವಿಶ್ವಕರ್ಮ ಪರಬ್ರಹ್ಮನ ವಂಶಸ್ಥರು ನಾವು. ರಾಮಸೇತು ನಿರ್ಮಾಣ ಮಾಡಿದ ನಳ ನಮ್ಮ ವಂಶದವನು ಎಂದು ಹೇಳಿದರು. ಇಂದಿನ ಕಾಲಘಟ್ಟದಲ್ಲಿ ನಮ್ಮ ಕಲಾಕೃತಿಗಳನ್ನು ವಿದೇಶಕ್ಕೆ ರಫ್ತು ಮಾಡಲು ಸೂಕ್ತ ಮಾರುಕಟ್ಟೆ ನಿರ್ಮಿಸಬೇಕು. ಇದಕ್ಕಾಗಿ ನಮ್ಮ ಸಮಾಜವನ್ನು ಶಿಕ್ಷಣವಂತರನ್ನಾಗಿಸಬೇಕು.



ಉದಯವಾಹಿನಿ ಚಿತ್ರ

> ಜಾತಿ ಸಮೀಕ್ಷೆಯಲ್ಲಿ ಪ್ರತಿಯೊಬ್ಬರು ವಿಶ್ವಕರ್ಮ ಎಂದು ಬರೆಯಿಸಬೇಕು. - ಶ್ರೀ ಜಗನ್ನಾಥ ಮಹಾಸ್ವಾಮಿಗಳು

ಎಲ್ಲರೂ ಸರ್ಕಾರಿ ನೌಕರಿ ಮಾಡಲು ಸಾಧ್ಯವಿಲ್ಲ, ಹಾಗಾಗಿ ಗುಡಿ ಕೈಗಾರಿಕೆಗಳ ಮೂಲಕ ಸ್ವತಂತ್ರ ಉದ್ಯಮ ಆರಂಭಿಸಿ ಮಹತ್ತರ ಸಾಧನೆ ಮಾಡಬೇಕು ಹಾಗೂ ರಾಜಕೀಯ ಮೀಸಲಾತಿಗಾಗಿ ಎಲ್ಲರೂ ಒಂದಾಗಬೇಕು ಎಂದು ಕರೆ ನೀಡಿದರು. ಇದೇ ವೇಳೆ ಮಾತನಾಡಿದ ವಿಶ್ವಕರ್ಮ ಮಹಾಸಭಾದ ತಾಲ್ಲೂಕು ಅಧ್ಯಕ್ಷ ಮಲ್ಲಣ್ಣ ಪತ್ತಾರ (ತಾರನಾಳ) ಮತ್ತು ಶಿಕ್ಷಕಿ ಗೀತಾ ವಿ. ಶಿರವಾಳ ಅವರು, ಭಾರತೀಯ ಸಂಸ್ಕೃತಿಯಲ್ಲಿ ವಿಶ್ವಕರ್ಮ ಸಮುದಾಯದ ಕೊಡುಗೆ ಅನನ್ಯವಾಗಿದೆ ಎಂದು ತಿಳಿಸಿದರು.

**ಮೆರವಣಿಗೆಯ ಮೆರುಗು:** ಕಾರ್ಯಕ್ರಮಕ್ಕೂ ಮುನ್ನ ತಹಶೀಲ್ದಾರ್ ಕಚೇರಿಯಲ್ಲಿ ತಾಲ್ಲೂಕು ಆಡಳಿತದಿಂದ ವಿಶ್ವಕರ್ಮ ಜಯಂತಿ ಆಚರಿಸಲಾಯಿತು. ನಂತರ ಪಟ್ಟಣದ ಶ್ರೀ ಕಾಳಿಕಾದೇವಿ ಮಂದಿರದಿಂದ ಶಿರವಾಳ ಬಡಾವಣೆಯವರೆಗೆ ಶ್ರೀ ವಿಶ್ವಕರ್ಮರ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ಸಕಲ ಮಂಗಳವಾದ್ಯಗಳೊಂದಿಗೆ ನಡೆಸಲಾಯಿತು.

ಕಾರ್ಯಕ್ರಮದ ವೇದಿಕೆಯಲ್ಲಿ ನಾಲತವಾಡ ಬ್ರಹ್ಮಾಂಡ ಭೇರಿಮಠದ ಶ್ರೀ ಪಂಪಾಪತಿ ಮಹಾಸ್ವಾಮಿಗಳು, ಕಾಳಿಕಾದೇವಿ ಮಂದಿರದ ಅರ್ಚಕ ಸುರೇಶ ಹೇಮಾದ್ರಿ, ತಾಲ್ಲೂಕು ಅಧ್ಯಕ್ಷ ಮಲ್ಲಣ್ಣ ಪತ್ತಾರ ಉಪಸ್ಥಿತರಿದ್ದರು.

ಸಮಾಜದ ಮುಖಂಡರಾದ ಚಂದ್ರಶೇಖರ ಪತ್ತಾರ, ಕರಣೇಶ ಪತ್ತಾರ, ವಿಜಯಕುಮಾರ್ ಬಡಿಗೇರ, ಮೌನೇಶ ಪತ್ತಾರ, ಕಾಳಪ್ಪ ಬಡಿಗೇರ, ವಿರೂಪಾಕ್ಷಿ ಪತ್ತಾರ, ನಾರಾಯಣ ದೂಟಿಹಾಳ, ಕಾಶಿಪತಿ ಪತ್ತಾರ, ಪುರಸಭೆ ಸದಸ್ಯೆ ಸಹನಾ ಬಡಿಗೇರ ಸೇರಿದಂತೆ ಸಮಾಜದ ಅನೇಕ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಎಂಎಲ್‌ಸಿ ಬಸನಗೌಡ ಬಾದರ್ಲಿ ರಾಷ್ಟ್ರೀಯ ಹೆದ್ದಾರಿ 150ಎ ಕಾಮಗಾರಿ ವೀಕ್ಷಣೆ

• ಉದಯವಾಹಿನಿ ಸಿಂಧನೂರು

ರಾಷ್ಟ್ರೀಯ ಹೆದ್ದಾರಿ 150ಎ ರಸ್ತೆಯ ಅಭಿವೃದ್ಧಿ ಕಾಮಗಾರಿಯನ್ನು ಶಾಸಕರು ಹಾಗೂ ಎಂಎಲ್ಸಿ ಬಸನಗೌಡ ಬಾದರ್ಲಿ ಅವರು ವೀಕ್ಷಣೆ ಮಾಡಿದರು. ನಂತರ ಮಾತನಾಡಿದ ಅವರು ಬೀದರ್ ಹಾಗೂ ಹೈದರಾಬಾದ್ ಬೆಂಗಳೂರು ಚಾಮರಾಜನಗರ ಜಿಲ್ಲೆಯ ಹಾಯ್ದು ಹೋಗುವ ರಾಷ್ಟ್ರೀಯ ಹೆದ್ದಾರಿ 150ಎ ಕಾಮಗಾರಿ ಗುಲ್ಬರ್ಗ ರಸ್ತೆಯಲ್ಲಿ ಬರುವ ಬೂತಲದಿನ್ನಿ ಗ್ರಾಮದ ಹತ್ತಿರ 150ಎ ರಸ್ತೆಯ ಕಿರು ಸೇತುವೆ ಅದೆಷ್ಟು ಬೇಗ ಸೇತುವೆ ನಿರ್ಮಾಣ ಕಾಮಗಾರಿ ಮುಗಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರಾಜ್ಯದಲ್ಲಿ ಒಂದು ವಾರದಿಂದ ಪ್ರತಿ ದಿನ ವರಣನ ಹೆಚ್ಚಾಗುತ್ತಿದ್ದು ರಾಷ್ಟ್ರೀಯ ಹೆದ್ದಾರಿಯಲ್ಲಿ ಪ್ರತಿ ದಿನಕ್ಕೆ ನೂರಾರು ವಾಹನಗಳು ಹಾಗೂ ಬೈಕ್ ಸಂಚರಿಸುವ ಸಾರ್ವಜನಿಕರಿಗೆ ಓಡಾಟ ಬಹಳಷ್ಟು ತೊಂದರೆಯಾಗಿದ್ದು . ಈಗಾಗಲೇ 15 ದಿನಗಳಿಂದ ಮಳೆ ಸುರಿಯುತ್ತಿದ್ದು ರಾಷ್ಟ್ರೀಯ


ಉದಯವಾಹಿನಿ ಚಿತ್ರ

ಹೆದ್ದಾರಿ ರಸ್ತೆಯ ಮೇಲೆ ನೀರು ಹರಿದು ಬಂದು ಟ್ರಾಫಿಕ್ ಜಾಮ್ ಸಂಭವಿಸಿದೆ ಎನ್ನಲಾಗಿದೆ ಹಾಗಾಗಿ ನಗರದಿಂದ ಮಸ್ಕಿಗೆ ಸಂಪರ್ಕ ಕಲ್ಪಿಸುವ ಮಾರ್ಗದಲ್ಲಿನ ಬೂತಲದಿನ್ನಿ ಗ್ರಾಮದ ಹತ್ತಿರ ರಾಷ್ಟ್ರೀಯ ಹೆದ್ದಾರಿ 150ಎ ಅಧಿಕಾರಿಗಳಿಗೆ ಕರೆ ಮಾಡಿ, ಅತಿಶೀಘ್ರದಲ್ಲಿ ಪೂರ್ಣಗೊಳಿಸಿ ಎಂದು ಹೇಳಿದರು. ಈ ಸಂದರ್ಭದಲ್ಲಿ. ಶರಣಯ್ಯ ಸ್ವಾಮಿ ಕೋಟೆ, ಶ್ಯಾಮಿದ ಸಬ್ ಮುಳ್ಳೂರು, ಸಂತೋಷ್ ಹುಡಾ, ಪ್ರದೀಪ್ ಪಗಡದಿನ್ನಿ, ಪ್ರಭು ದೇವರಗುಡಿ ಇತರರು ಉಪಸ್ಥಿತರಿದ್ದರು.

## ಸೆ.24ರಂದು ಮ್ಯಾರಥಾನ್ ಸ್ಪರ್ಧೆ

• ಉದಯವಾಹಿನಿ, ಚಿತ್ರದುರ್ಗ

ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ವತಿಯಿಂದ ಯುವಜನೋತ್ಸವದ ಅಂಗವಾಗಿ ಕಾಲೇಜು ವಿದ್ಯಾರ್ಥಿಗಳಿಗೆ ಇದೇ ಸೆಪ್ಟೆಂಬರ್ 24ರಂದು ಬೆಳಿಗ್ಗೆ 6.30ಕ್ಕೆ 5 ಕಿ.ಮೀ ಮ್ಯಾರಥಾನ್ (Red Ribbon Run-Youth for HIV/AIDS) ಸ್ಪರ್ಧೆ ಏರ್ಪಡಿಸಲಾಗಿದೆ. ಮ್ಯಾರಥಾನ್ ಸ್ಪರ್ಧೆಯು ಕನಕ ವೃತ್ತ, ಮುಖ್ಯವೃತ್ತ, ಪ್ರವಾಸಿ ಮಂದಿರ, ಆಸ್ಪತ್ರೆ ವೃತ್ತ ಮಾರ್ಗವಾಗಿ ಒನಕೆ ಓಬವ್ವ ಸ್ಟೇಡಿಯಂ ತಲುಪಲಿದೆ.

**ಮ್ಯಾರಥಾನ್ ಮಾರ್ಗಸೂಚಿಗಳು:** 17 ರಿಂದ 25 ವರ್ಷದ ಕಾಲೇಜು ವಿದ್ಯಾರ್ಥಿಗಳು ಮಾತ್ರ ಮ್ಯಾರಥಾನ್‌ನಲ್ಲಿ ಭಾಗವಹಿಸಬೇಕು. ಕಾಲೇಜು ಮುಖ್ಯಸ್ಥರು ನೀಡಿರುವ ಐಡಿ ಕಾರ್ಡ್, ಲೆಟರ್ ಕಡ್ಡಾಯವಾಗಿರುತ್ತದೆ. ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯು ರಾಜ್ಯ ಮಟ್ಟದ ಸ್ಪರ್ಧೆಯಲ್ಲಿ ಭಾಗವಹಿಸಬೇಕಾಗುತ್ತದೆ.

**ಬಹುಮಾನದ ವಿವರ:** ವಿದ್ಯಾರ್ಥಿಗಳಿಗೆ ಹಾಗೂ ವಿದ್ಯಾರ್ಥಿನಿಯರಿಗೆ ಪ್ರತ್ಯೇಕವಾಗಿ ಬಹುಮಾನ ನೀಡಲಾಗುವುದು. ಮೊದಲನೇ ಬಹುಮಾನ ರೂ.5000/-, ದ್ವಿತೀಯ ಬಹುಮಾನ ರೂ.3500/- ಹಾಗೂ ತೃತೀಯ ಬಹುಮಾನ ರೂ.2500/-ಬಹುಮಾನ ನೀಡಲಾಗುವುದು. ಸೆ.22 ರೊಳಗೆ ನೊಂದಾಯಿಸಿಕೊಳ್ಳುವುದು ಹಾಗೂ ನೊಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9845674099, 9964525258, 97393943687 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿಗಳು ತಿಳಿಸಿದ್ದಾರೆ.

## ಅನಾರೋಗ್ಯವನ್ನು ಗುರುತಿಸಿ ಸಕಾಲದಲ್ಲಿ ಚಿಕಿತ್ಸೆ ಹಾಗೂ ಪೌಷ್ಟಿಕ ಆಹಾರ ನೀಡಲು ಸಲಹೆ

• ಉದಯವಾಹಿನಿ, ಚಿಂಚೋಳಿ

ಅಪೌಷ್ಟಿಕತೆಯಿಂದ ಬಳಲುವ ಮಕ್ಕಳು, ಗರ್ಭಿಣಿಯರು, ಬಾಣಂತಿಯರು, ಕಿಶೋರಿಯರಿಗಾಗಿ ಪೋಷಣ ಮಾಸ ಆಚರಿಸಲಾಗುತ್ತದೆ ಎಂದು ತಾಲ್ಲೂಕಾ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಕಸ್ತೂರಿಬಾಯಿ ತಿಳಿಸಿದರು.

ತಾಲ್ಲೂಕಿನ ಮಿರಿಯಾಣ ಅಂಗನವಾಡಿ 01ರ ಕೇಂದ್ರದಲ್ಲಿ ಹಮ್ಮಿಕೊಂಡ ಜಿಲ್ಲಾಡಳಿತ, ಜಿಪಂ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ವಿವಿಧ ಇಲಾಖೆಗಳ ಸಹಯೋಗದಲ್ಲಿ ಪೋಷಣ ಮಾಸಾಚರಣೆ ಹಾಗೂ ಬೊಜ್ಜು ನಿವಾರಣಾ, ಸಕ್ಕರೆ, ಎಣ್ಣೆ ಸೇವಿಸುವುದು ತಡೆಗಟ್ಟುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅಪೌಷ್ಟಿಕತೆಯಿಂದ ಬಳಲುವವರು ವಿವಿಧ ರೋಗಗಳಿಗೆ ಈಡಾಗುತ್ತಿದ್ದಾರೆ. ಮೊದಲು ಅವರಲ್ಲಿರುವ ಅನಾರೋಗ್ಯವನ್ನು ಗುರುತಿಸಿ ಸಕಾಲದಲ್ಲಿ ಚಿಕಿತ್ಸೆ


ಉದಯವಾಹಿನಿ ಚಿತ್ರ

ಹಾಗೂ ಪೌಷ್ಟಿಕ ಆಹಾರ ನೀಡಬೇಕು ಎಂದರು. ಅಂಗನವಾಡಿ ಮೇಲ್ವಿಚಾರಕಿ ಸುಜಾತ ಮಾತನಾಡಿ ಕಿಶೋರಿಯರಿಂದ ಹಿಡಿದು ಗರ್ಭಿಣಿಯರು ಸೇರಿದಂತೆ ಮಹಿಳೆಯರು ಮತ್ತು ಮಕ್ಕಳನ್ನು ಅಪೌಷ್ಟಿಕತೆಯಿಂದ ಮುಕ್ತಗೊಳಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದರು. ಸರಕಾರಿ ಶಾಲೆಯ ಮುಖ್ಯ ಶಿಕ್ಷಕ ಪಾಂಡುರಂಗ ಶರ್ಮಾ, ಶಿಕ್ಷಕಿಯರಾದ ನಿಲಂಬಿಕಾ, ಅಶ್ವಿನಿ, ಶೋಭಾರಾಣಿ, ಅನುಸೂಯಾ, ಅಂಗನವಾಡಿ ಕಾರ್ಯಕರ್ತೆಯರು ಸುಜಾತಾ, ಗಂಗೂಭಾಯಿ, ಲಲಿತಾ, ನೇಹಾ, ಗ್ರಾಮಸ್ಥರು ಇನ್ನಿತರರು ಇದ್ದರು.

## ಮೂಲಸೌಲಭ್ಯ ವಂಚಿತ ಅಶ್ವಿನಿ ನಗರ: ಗ್ರಾಮಸ್ಥರ ಆಕ್ರೋಶ

• ಉದಯವಾಹಿನಿ ಮುಳಗುಂದ

ಇಲ್ಲಿನ ಅಶ್ವಿನಿ ನಗರದಲ್ಲಿ ಮೂಲಸೌಲಭ್ಯಗಳ ಕೊರತೆ ಹಾಗೂ ಸ್ವಚ್ಛತೆ ಇಲ್ಲದರ ನಡುವೆ ಸಾರ್ವಜನಿಕರು ಜೀವನ ಸಾಗಿಸುವ ಪರಿಸ್ಥಿತಿ ಮುಂದುವರಿದಿದೆ.

ಅಶ್ವಿನಿ ನಗರದಲ್ಲಿ 150ಕ್ಕೂ ಹೆಚ್ಚು ಮನೆಗಳಿದ್ದು, ಮುಖ್ಯ ರಸ್ತೆಗಳನ್ನು ಮಾತ್ರ ಅಭಿವೃದ್ಧಿಪಡಿಸಲಾಗಿದೆ. ನಗರದಲ್ಲಿರುವ 10ಕ್ಕೂ ಹೆಚ್ಚು ಕಚ್ಚಾ ಅಡ್ಡರಸ್ತೆಗಳಿದ್ದು, ಮಳೆಗಾಲದಲ್ಲಿ ಕೆಸರು ಗದ್ದೆಯಂತಾಗುತ್ತಿವೆ. ವೃದ್ಧರು, ಮಕ್ಕಳು ಕೆಸರಿನಲ್ಲಿ ನಡೆದು ಹೋಗುವಾಗ ಜಾರಿ ಬಿದ್ದ ಅನೇಕ ಘಟನೆಗಳು ಸಂಭವಿಸಿವೆ. ಸೂಕ್ತ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ಮಳೆ ನೀರು ಮನೆಯೊಳಗೆ ನುಗ್ಗಿ ಸಾರ್ವಜನಿಕರು ತೊಂದರೆ ಎದುರಿಸುವಂತಾಗಿದೆ.

ಕೆಲವು ಭಾಗದಲ್ಲಿ ಮಳೆ ನೀರು ನಿಂತು ದುರ್ವಾಸನೆ ಹಾಗೂ ಸೊಳ್ಳೆಗಳ ಕಾಟ ಅಧಿಕವಾಗಿದ್ದು, ರೋಗ ಹರಡುವ ಭೀತಿ ಎದುರಾಗಿದೆ. ಮುಖ್ಯರಸ್ತೆ ಪಕ್ಕದಲ್ಲಿ ನಿರ್ಮಿಸಿದ ಚರಂಡಿಗಳು ಕಸ ಬಿದ್ದು ಹೂಳು ತುಂಬಿವೆ. ಕೊಳಚೆ ನೀರು ಮುಂದೆ ಸಾಗದೆ ನಗರದ ಮನೆಗಳ


ಉದಯವಾಹಿನಿ ಚಿತ್ರ

ಮುಂದೆ ನಿತ್ಯ ದುರ್ನಾತ ಉಂಟಾಗುತ್ತಿದೆ. ಅರ್ಧ ಊರಿನ ಚರಂಡಿ ನೀರು ನಗರದಲ್ಲಿ ಹಾಯ್ದು ಹಳ್ಳ ಸೇರುತ್ತದೆ. ಆದರೆ, ಸೂಕ್ತ ಕಾಲುವೆ ನಿರ್ಮಾಣ ಕಾರ್ಯ ನಡೆದಿಲ್ಲ. ಇದರಿಂದ ಮುಖ್ಯ ಸಿಸಿ ರಸ್ತೆ ಹಾಳಾಗಿದೆ. ಅಧಿಕ ಮಳೆಯಾದಾಗ ಸಂದರ್ಭದಲ್ಲಿ ಚರಂಡಿ ನೀರು ಹಾಗೂ ಅಬ್ಬಿಕೆರೆ ಕೋಡಿಬಿದ್ದ ನೀರು ರಭಸವಾಗಿ ಹರಿಯುವುದರಿಂದ ಮನೆಗಳಿಗೆ ನೀರು ನುಗ್ಗಿ ಹಾನಿ ಸಂಭವಿಸಿದ ಘಟನೆಗಳು ನಡೆದಿವೆ.'ನಿವಾಸಿಗಳ ಕುಡಿಯುವ ನೀರಿನ ಬವಣೆ ನೀಗಿಸುವ ಉದ್ದೇಶದಿಂದ ಸ್ಥಳೀಯ ಪಟ್ಟಣ ಪಂಚಾಯಿತಿ ಅನುದಾನದ 5 ಲಕ್ಷ ವೆಚ್ಚದಲ್ಲಿ 2022ರಲ್ಲಿ ಬೋರ್‌ವೆಲ್ ಹಾಗೂ ನೀರಿನ ಟ್ಯಾಂಕ್ ನಿರ್ಮಿಸಲಾಗಿದ್ದು, ಒಂದು ಟ್ಯಾಂಕ್‌ಗೆ ಮಾತ್ರ ನೀರಿನ ಸಂಪರ್ಕ ಕೊಟ್ಟಿದ್ದು, ಇನ್ನೊಂದು ಟ್ಯಾಂಕ್‌ಗೆ ಹಾಗೆ ಬಿಡಲಾಗಿದೆ. ಈ ಕುರಿತು ಸಾಕಷ್ಟು ಬಾರಿ ಪಂಚಾಯಿತಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ಸ್ಥಳೀಯ ನಿವಾಸಿ ಕೃಷ್ಣಪ್ಪ ಜಾಧವ ಆರೋಪಿಸಿದರು.

> ಪಟ್ಟಣ ಪಂಚಾಯಿತಿಗೆ ಮನೆ ತೆರಿಗೆ, ನೀರಿನ ಕರ, ಅಭಿವೃದ್ಧಿ ಶುಲ್ಕ ಕಟ್ಟಿದ್ದೇವೆ. ಆದರೂ ಸೂಕ್ತ ಚರಂಡಿ, ರಸ್ತೆ ಅಭಿವೃದ್ಧಿ ಆಗುತ್ತಿಲ್ಲ. 32 ವರ್ಷಗಳಿಂದ ಮೂಲಸೌಲಭ್ಯಗಳಿಲ್ಲದೇ ಜೀವನ ಸಾಗಿಸುತ್ತಿದ್ದೇವೆ. ಚುನಾವಣೆ ಬಂದಾಗ ಮಾತ್ರ ಜನಪ್ರತಿನಿಧಿಗಳ ಗಮನಕ್ಕೆ ಬರುತ್ತೇವೆ. ಆದರೆ, ಮನವಿಗೆ ಯಾರೂ ಸ್ಪಂದಿಸುತ್ತಿಲ -ಮೈಲಾರಪ್ಪ ಸುಣಗಾರ

## ಹಾಸನಾಂಬ ಜಾತ್ರಾ ಮಹೋತ್ಸವ ಸಿಎಂ, ಡಿಸಿಎಂಗೆ ಆಹ್ವಾನ

• ಉದಯವಾಹಿನಿ ಹಾಸನ

ಅಧಿದೇವತೆ ಹಾಸನಾಂಬ ದರ್ಶನೋತ್ಸವದಲ್ಲಿ ಪಾಲ್ಗೊಳ್ಳುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣಬೈರೇಗೌಡ ಅವರಿಗೆ ಜಿಲ್ಲಾಡಳಿತದಿಂದ ಅಧಿಕೃತ ಆಹ್ವಾನ ನೀಡಲಾಯಿತು. ಮೊದಲು ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡರನ್ನು ಆಹ್ವಾನಿಸಲಾಯಿತು. ನಂತರ ಸಚಿವರ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಆಹ್ವಾನ ನೀಡಲಾಯಿತು. ಹಾಸನಾಂಬ ಮತ್ತು ಸಿದ್ದೇಶ್ವರ ಜಾತ್ರಾ ಮಹೋತ್ಸವವು ಅಕ್ಟೋಬರ್ 9ರಿಂದ 23ರವರೆಗೆ ಜರುಗಲಿದ್ದು, ಜಿಲ್ಲಾಡಳಿತ ಹಾಗೂ ಹಾಸನಾಂಬ ದೇವಾಲಯ ಆಡಳಿತ ಮಂಡಳಿಯಿಂದ ಸಿದ್ದತೆ ಕೈಗೊಳ್ಳಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ತಿಳಿಸಿದರು.

## ಈರುಳ್ಳಿ ಬೆಳೆಗೆ ಬೆಂಬಲ ಬೆಲೆ ನಿಗದಿಪಡಿಸಿ: ರೈತರ ಪ್ರತಿಭಟನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಬೀಳಗಿ

ಪಟ್ಟಣದಲ್ಲಿ ಭಾರತೀಯ ಕಿಸಾನ್ ಸಂಘ ಕರ್ನಾಟಕ ಪ್ರದೇಶ ಉತ್ತರ ಪ್ರಾಂತ ಬಾಗಲಕೋಟ ಜಿಲ್ಲಾ ಘಟಕ ಹಾಗೂ ಬೀಳಗಿ ತಾಲ್ಲೂಕು ಘಟಕದ ಸಹಯೋಗದಲ್ಲಿ ಈರುಳ್ಳಿ ಬೆಳೆಗಾರರಿಗೆ ನ್ಯಾಯಯುತ ಬೆಂಬಲ ಬೆಲೆ ನೀಡಬೇಕೆಂದು ಆಗ್ರಹಿಸಿ ತಾಲ್ಲೂಕು ಆಡಳಿತ ಸೌಧದ ಮುಂದೆ ರೈತರು ಪ್ರತಿಭಟನೆ ನಡೆಸಿದರು. ಭಾರತೀಯ ಕಿಸಾನ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ, ಸತತ ಮಳೆಯಿಂದಾಗಿ ಈರುಳ್ಳಿ

> ಅಳಿದುಳಿದ ಈರುಳ್ಳಿ ಬೆಳೆಯನ್ನು ಮಾರಾಟ ಮಾಡಬೇಕೆಂದರೆ ಅದರ ಬೆಲೆಯೂ ಕುಸಿದಿದೆ. ರೈತರು ಮಾಡಿದ ಸಾಲ ತೀರಿಸಲಾಗದೇ ಕಂಗಾಲಾಗಿದ್ದಾರೆ. ಸರ್ಕಾರ ಈರುಳ್ಳಿ ಬೆಳೆಗೆ ಬೆಂಬಲ ಬೆಲೆ ನಿಗದಿಗೊಳಿಸಬೇಕು.-ಹಿರೇಮಠ

ಬೆಳೆಗೆ ಹಾನಿಯಾಗಿದೆ. ಬೀಜ, ರಸಗೊಬ್ಬರ, ಕೀಟನಾಶಕ ಔಷಧ, ಕಳೆ ತೆಗೆಯಲು ಸೇರಿದಂತೆ ಒಂದು ಎಕರೆ ಈರುಳ್ಳಿ ಬೆಳೆಗೆ ಕನಿಷ್ಠ 40 ಸಾವಿರ ಖರ್ಚು ಮಾಡಿದ್ದರು. ಬೆಳೆಗಳು ನೀರು ಪಾಲಾಗಿದ್ದು, ರೈತರಿಗೆ ನಷ್ಟವಾಗಿದೆ. ಕೇಂದ್ರ , ರಾಜ್ಯ ಸರ್ಕಾರ ಶೀಘ್ರ ಪರಿಹಾರ ನೀಡಬೇಕುಸ ಎಂದು ಆಗ್ರಹಿಸಿದರು.

ಉತ್ತರ ಪ್ರಾಂತ ಕಾರ್ಯಕಾರಿಣಿ ಸದಸ್ಯ ಸುಬ್ಬರಾಯಗೌಡ ಪಾಟೀಲ ಮಾತನಾಡಿ, ಬೆಳೆ ವಿಮೆ ಕಟ್ಟಿದ ರೈತರಿಗೆ ವಿಮಾ ಕಂಪನಿ, ಕೃಷಿ ಇಲಾಖೆ, ತೋಟಗಾರಿಕೆ, ರೇಷ್ಮೆ, ಕಂದಾಯ ಇಲಾಖೆಯವರು ಪರಿಶೀಲನೆ ನಡೆಸದೇ ಇರುವುದರಿಂದ ರೈತರು ವಿಮಾ ಕಂಪನಿ ನೀಡುವ ಕ್ಲೇಮ್‌ನಿಂದ ವಂಚಿತರಾಗುತ್ತಿದ್ದಾರೆ. ಸರ್ಕಾರ ರೈತರಿಗೆ ಅನ್ಯಾಯವಾಗದಂತೆ ಪರಿಶೀಲನೆ ನಡೆಸಲು ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು' ಎಂದು ತಿಳಿಸಿದರು.

## ಚಡಚಣ ಎಸ್‌ಬಿಐ ದರೋಡೆ ಪ್ರಕರಣ: ತನಿಖೆ ಚುರುಕು

• ಉದಯವಾಹಿನಿ ಚಡಚಣ

ಪಟ್ಟಣದ ಪಂಡರಾಪುರ ರಸ್ತೆಗೆ ಹೊಂದಿಕೊಂಡಿರುವ ಎಸ್ ಬಿ ಐ ಬ್ಯಾಂಕ್ ದರೋಡೆ ಪ್ರಕರಣ ತನಿಖೆ ಮುಂದು ವರೆದಿದ್ದು. ಜಿಲ್ಲಾ ವರಿಷ್ಟಧಿಕಾರಿ ಲಕ್ಷ್ಮಣ ನಿಂಬರಗಿ ಅವರು ಎಂಟು ತಂಡಗಳನ್ನು ರಚಿಸಿ ತನಿಖೆ ಚುರುಕುಗೊಳಿಸಿದ್ದಾರೆ.

ಪಟ್ಟಣದಲ್ಲಿಯೇ ಬಿಡು ಬಿಟ್ಟಿರುವ ಜಿಲ್ಲಾ ವರಿಷ್ಟಧಿಕಾರಿಗಳು ಹಾಗೂ ಅವರ ತಂಡ ಎಸ್‌ಬಿಐ ಬ್ಯಾಂಕ್ ಸಿಬ್ಬಂದಿಯನ್ನು ವಿಚಾರಗೋಳಪಡಿಸಿ ಸಂಪೂರ್ಣ ಮಾಹಿತಿ ಕಲೆಹಕಿದ್ದಾರೆ. ನಂತರ ಮಾತನಾಡಿದ ಜಿಲ್ಲಾವರೀಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ ಅವರು, ಘಟನೆ ಮಂಗಳವಾರ ಸಂಜೆ 6.30 ರಿಂದ 7.30 ಗಂಟೆಯ ಸುಮಾರು, ಬ್ಯಾಂಕ್ ಬಂದ ಮಾಡಿ ಹೋಗುವ ಸಮಯದಲ್ಲಿ ದರೋಡೆ ನಡೆದಿದೆ. ದರೋಡೆಕೋರರಲ್ಲಿ ಒಬ್ಬ ವ್ಯಕ್ತಿ ಮೊದಲೇ ಬ್ಯಾಂಕ್ ಒಳಗೆಡೆ ಬಂದು ಕುಳಿತಿದ್ದ. ಬ್ಯಾಂಕ್ ಕ್ಲೋಜಿಂಗ್ ಸಮಯದಲ್ಲಿ ಲಾಕರ್ ಓಪನ್ ಇತ್ತು. ದರೋಡೆಕೋರರು ಬ್ಯಾಂಕಿಗೆ ನುಗ್ಗಿ ಬಂದೂಕಿನಿಂದ ಬೆದರಿಸಿ, ಸಿಬ್ಬಂದಿಯನ್ನು ಕಟ್ಟಿ


ಉದಯವಾಹಿನಿ ಚಿತ್ರ

ಹಾಕಿ ದರೋಡೆ ಮಾಡಿದ್ದಾರೆ. ಬ್ಯಾಂಕದಿಂದ ಅಂದಾಜು 21 ಕೋಟಿ ಮೌಲ್ಯದ 398 ಪ್ಯಾಕ್(20ಕೆಜಿ) ಚಿನ್ನ , 1.5 ಕೋಟಿ ನಗದು ಹಣ ದರೋಡೆ ಮಾಡಿದ್ದಾರೆ. ಈ ಪ್ರಕರಣಕ್ಕೆ ಬಳಿಸಿರುವ ವಾಹನವೊಂದು ಮಹಾರಾಷ್ಟ್ರದ ಹುಲಜಂತಿಯಲ್ಲಿ ಪತ್ತೆಯಾಗಿದೆ.

ಬಿಟ್ಟು ಹೋದ ವಾಹನದಲ್ಲಿ ಸ್ವಲ್ಪ ಪ್ರಮಾಣದ ದುಡ್ಡು, ಬಂಗಾರದ ಪ್ಯಾಕೇಟ್ ಸಿಕ್ಕಿವೆ. ಈಗಾಗಲೇ ದರೋಡೆಕೋರರನ್ನು ಹಿಡಿಯಲು 8 ತನಿಖಾ ತಂಡಗಳ ರಚಿಸಿಲಾಗಿದೆ. ಶೀಘ್ರದಲ್ಲಿ ದರೋಡೆಕೋರರ ಬಂಧಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

## ಸರ್ಕಾರಿ ಸೌಲಭ್ಯಕ್ಕಾಗಿ ಅನಾಥರಿಗೆ ಆಧಾರ್

• ಉದಯವಾಹಿನಿ ನರಸಿಂಹರಾಜಪುರ

ಮಾನವೀಯತೆ ದೃಷ್ಟಿಯಿಂದ ಅನಾಥಾಶ್ರಮದಲ್ಲಿರುವ ಅನಾಥರು ಸರ್ಕಾರದಿಂದ ಸಿಗುವ ಸೌಲಭ್ಯ ಪಡೆಯಲು ಅನುಕೂಲವಾಗುವಂತೆ ಆಧಾರ್ ಕಾರ್ಡ್ ಮಾಡಿಸಲಾಗುತ್ತಿದೆ ಎಂದು ತಹಶೀಲ್ದಾರ್ ನೂರುಲ್ ಹುದಾ ಹೇಳಿದರು. ತಾಲ್ಲೂಕಿನ ಬಿ.ಎಚ್.ಕೈಮರ ಸಮೀಪದ ಮತ್ತಿಮರ ದಿವ್ಯ ಕಾರುಣ್ಯ ಆನಂದಾಶ್ರಮದಲ್ಲಿ ಅನಾಥರಿಗೆ ಆಧಾರ್ ಮಾಡಿಸುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು. ಮಾನವೀಯತೆ ದೃಷ್ಟಿಯಿಂದ ಸರ್ಕಾರದ ಅಧಿಕಾರಿಗಳು ಅನಾಥಾಶ್ರಮಕ್ಕೆ ಬಂದು ಆಧಾರ್ ಮಾಡಿಸಿಕೊಡುತ್ತಿದ್ದಾರೆ. ಇದರಿಂದ ಸರ್ಕಾರದಿಂದ ಪಿಂಚಣಿ, ಪಡಿತರ ಲಭಿಸಲಿದೆ ಎಂದರು.

ಪ. ಪಂಚಾಯಿತಿ ಅಧ್ಯಕ್ಷೆ ಜುಬೇದ ಮಾತನಾಡಿ, ಪಟ್ಟಣದ ಹಲವು ವಾರ್ಡ್ ಹಾಗೂ ತಾಲ್ಲೂಕಿನ ಅನಾಥಾ ಶ್ರಮದ ಅನೇಕರಿಗೆ ಆಧಾರ್ ಕಾರ್ಡ್ ಇಲ್ಲದೆ ಇರುವುದು ಗಮನಕ್ಕೆ ಬಂದಿತ್ತು. ಇದರಿಂದ ಅನೇಕ ವೃದ್ಧರಿಗೆ ಸರ್ಕಾರದಿಂದ ಯಾವುದೇ ಸೌಲಭ್ಯ ಸಿಗುತ್ತಿರಲಿಲ್ಲ. ಈ ಹಿನ್ನಲೆಯಲ್ಲಿ ಕೆಲ ದಿನಗಳ ಹಿಂದೆ ಚಿಕ್ಕಮಗಳೂರಿನ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ದಿಶಾ ಸಭೆಯಲ್ಲಿ ಪ್ರಸ್ತಾಪವಾಗಿತ್ತು ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ವೀರಭದ್ರಯ್ಯ, ಮಾಜಿ ಗೌಡರ್ ಮಾತನಾಡಿ, ತಾಲ್ಲೂಕಿನ 4 ಅನಾಥಾಶ್ರಮಗಳಿದ್ದು ಯಾರಿಗೂ ಆಧಾರ್ ಕಾರ್ಡ್ ಇರಲಿಲ್ಲ. ಇದರಿಂದ ಸೌಲಭ್ಯ ವಂಚಿತರಾಗಿದ್ದರು. ಅನಾಥ ವೃದ್ಧರಿಗೆ ಇಲಾಖೆ ವತಿಯಿಂದ ಆಧಾರ್ ಮಾಡಿಸಲಾಗುತ್ತಿದೆ ಎಂದರು.

# ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ರಾಷ್ಟ್ರ ಧ್ವಜಾರೋಹಣ

### ಕ.ಕರ್ನಾಟಕ ಪ್ರದೇಶ ಅಭಿವೃದ್ಧಿಗೆ ಪ್ರತ್ಯೇಕ ಸಚಿವಾಲಯ ಸ್ಥಾಪನೆಗೆ ಮಾನ್ಯ ಮುಖ್ಯಮಂತ್ರಿಗಳಿಂದ ಘೋಷಣೆ: ದರ್ಶನಾಪುರ

• ಉದಯವಾಹಿನಿ ಯಾದಗಿರಿ

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿಗಾಗಿ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪುರ ಅವರು ಹೇಳಿದರು. ಜಿಲ್ಲಾ ಕ್ರೀಡಾಂಗಣದಲ್ಲಿ ಇಂದು ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿ ಅವರು ಮಾತನಾಡಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿಗೆ ಇನ್ನಷ್ಟು ವೇಗ ನೀಡಲು, ಮೇಲುಸ್ತುವಾರಿ ನೋಡಿಕೊಳ್ಳುವ ಉದ್ದೇಶದಿಂದ, ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಂಡು,ಈ ಕುರಿತು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ ಎಂದು ಹೇಳಿದರು. ಕೃಷ್ಣ ಮೇಲ್ದಂಡೆ ಯೋಜನೆಯ (ಯುಕೆಪಿ). ಮೂರನೇ ಹಂತದ ಭೂ ಸ್ವಾಧೀನಕ್ಕೆ ರಾಜ್ಯ ಸರ್ಕಾರ ಪರಿಹಾರ ನಿಗದಿಮಾಡಿದೆ. ಅದರಂತೆ ಆಲಮಟ್ಟಿ ಜಲಾಶಯ 519 .ಮೀ ರಿಂದ 524 ಮೀ.ಗೆ


ಉದಯವಾಹಿನಿ ಚಿತ್ರ

ಎತ್ತರಿಸುವದರಿಂದ, ಎರಡೂವರೆ ಲಕ್ಷ ಎಕರೆ ಜಮೀನು ನೀರಾವರಿಗೆ ಒಳಪಡಲಿದೆ. ಮುಳುಗಡೆಯಾಗುವ 75,563 ಎಕರೆ ಪ್ರದೇಶದಲ್ಲಿ ರೈತರ ನೀರಾವರಿ ಭೂಮಿಗೆ ಕನಿಷ್ಠ 40 ಲ.ರೂ ಪ್ರತಿ ಎಕರೆಗೆ ಹಾಗೂ ಒಣ ಭೂಮಿಗೆ ಎಕರೆಗೆ 30 ಲ. ರೂ. ಪಾವತಿಸಲು ಸರ್ಕಾರ ನಿರ್ಧರಿಸಿದೆ ಎಂದು ಹೇಳಿದರು.

ಈಗಿನ ಕಲ್ಯಾಣ ಕರ್ನಾಟಕ ಭಾಗವು ಭಾರತ ಸ್ವಾತಂತ್ರ್ಯದ ನಂತರ ಒಂದು ವರ್ಷ, ಒಂದು ತಿಂಗಳು ಎರಡು ದಿನಗಳ ನಂತರ ವಿಳಂಬವಾಗಿ ಸ್ವಾತಂತ್ರ್ಯ ಪಡೆದಿದೆ.ಪ್ರಧಾನಿ ನೆಹರು ಅವರ ಸಂದರ್ಭದಲ್ಲಿ ಗೃಹ ಸಚಿವರಾಗಿದ್ದ ಸರ್ದಾರ್ ವಲ್ಲಭಭಾಯ್ ಪಟೇಲ್ ಆಪರೇಶನ್ ಪೋಲೋ ಮೂಲಕ ಭಾರತದ ಒಕ್ಕೂಟಕ್ಕೆ ಆಗಿನ ಹೈದರಾಬಾದ್ ಕರ್ನಾಟಕ ಭಾಗವನ್ನು ಸೇರಿಸಲಾಯಿತು ಎಂದರು. ಹೈದರಾಬಾದ್- ಕರ್ನಾಟಕ ವಿಮೋಚನಾ

**ಕವಾಯತು ಪಡೆಗಳಿಂದ ಗೌರವ ವಂದನೆ**

> ಈ ಭಾಗ ಹಳೆ ಮೈಸೂರು ಭಾಗದಂತೆ ಪ್ರಗತಿ ಸಾಧಿಸಬೇಕು.ಇದು ಶಿಕ್ಷಣದ ಕ್ರಾಂತಿಕಾರಿ ಬದಲಾವಣೆಯಿಂದ ಮಾತ್ರ ಸಾಧ್ಯವಿದ್ದು, ಈ ದಿಸೆಯಲ್ಲಿ ಶಿಕ್ಷಕರು ಹಾಗೂ ಪಾಲಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸಬೇಕು. ರಾಜ್ಯ ಸರ್ಕಾರವು ಕೂಡ ಶಿಕ್ಷಣ , ನೀರಾವರಿ, ಆರೋಗ್ಯ, ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಗಮನ ನೀಡಿದೆ. ಈ ದಿಸೆಯಲ್ಲಿ ಈಗ ಪ್ರತ್ಯೇಕ ಸಚಿವಾಲಯ ಸ್ಥಾಪಿಸಲು ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿದ್ದಾರೆ. -ಶ್ರೀ ಶರಣಬಸಪ್ಪ ದರ್ಶನಾಪುರ


ಉದಯವಾಹಿನಿ ಚಿತ್ರ

ಮುಂಚೂಣಿ ಹೋರಾಟಗಾರರಾಗಿದ್ದ ರಮಾನಂದ ತೀರ್ಥರು,ಶರಣಗೌಡ ಇನಾಮದಾರ,ಸಾಗರದ ಅಚ್ಚಪ್ಪಗೌಡ ಸುಬೇದಾರ್,ಸುರಪುರದ ರಾಜಾ ವೆಂಕಟಪ್ಪ ನಾಯಕ ಇತರೆ ಹೋರಾಟಗಾರರು ಸ್ಮರಣೀಯರಾಗಿದ್ದಾರೆ ಎಂದು ಹೇಳಿದರು.

ಸರ್ಕಾರವು ನಂಜುಂಡಪ್ಪ ವರದಿ ಅನ್ವಯ ಹಿಂದುಳಿದ ತಾಲ್ಲೂಕುಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ಒದಗಿಸಿದೆ. ಕಲ್ಯಾಣ ಕರ್ನಾಟಕ ಪ್ರದೇಶದ ಅಭಿವೃದ್ಧಿ ಹಾಗೂ ಸಂವಿಧಾನ ತಿದ್ದುಪಡಿ,ಕಲಂ 371 ( ಜೆ) ರನ್ವಯ ಈ ಭಾಗದ ಅಭಿವೃದ್ಧಿಗೆ 5000 ಕೋ.ರೂಗಳನ್ನು ಒದಗಿಸಿದೆ ಎಂದು ಹೇಳಿದರು.

ಸಚಿವರು ಈ ಸಂದರ್ಭದಲ್ಲಿ ಮಹಾತ್ಮ ಗಾಂಧೀಜಿ, ಡಾ..ಬಿ.ಆರ್ ಅಂಬೇಡ್ಕರ್, ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ, ಪುಷ್ಪಾರ್ಚನೆ ಮಾಡಿ ಗೌರವ ಅರ್ಪಿಸಿದರು.

ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.ಸ್ವಚ್ಛ ಭಾರತ ಹಿ ಸೇವಾ ಅಭಿಯಾನಕ್ಕೆ,ಸ್ವಸ್ಥ ನಾರಿ ಸಶಕ್ತ ಪರಿವಾರ ಅಭಿಯಾನಕ್ಕೆ ಚಾಲನೆ ನೀಡಲಾಯಿತು.ಸ್ವಚ್ಛತೆ ಕುರಿತು ಯುವ ಜನಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ ಪ್ರತಿಜ್ಞಾ ವಿಧಿ ಬೋಧಿಸಿದರು. ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು ಗಮನ ಸೆಳೆದವು.

ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ಟಿ ನಾರಾಯಣ್ ಸ್ವಾಮಿ, ಸಂಸದ ಜಿ.ಕುಮಾರ್ ನಾಯಕ್, ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ, ನಗರಸಭೆ ಅಧ್ಯಕ್ಷ ಲಲಿತಾ ಅನಪುರ್, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ್ ಕಾಡ್ಲೂರ್, ಜಿಲ್ಲಾಧಿಕಾರಿ ಹರ್ಷಲ್ ಭೋಯರ್, ಜಿ ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಉಪಸ್ಥಿತರಿದ್ದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ನಿಮ್ಮ ವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ಇಂದು ನೀವು ಯಾವುದೇ ಅಜ್ಞಾತ ಮೂಲಗಳಿಂದ ಹಣವನ್ನು ಪಡೆಯಬಹುದು, ಇದರಿಂದ ನಿಮ್ಮ ಅನೇಕ ಆರ್ಥಿಕ ಸಮಸ್ಯೆಗಳು ದೂರವಾಗುತ್ತವೆ.

**ವೃಷಭ** ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ , ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ನೀವು ಹಣಕಾಸಿನ ಲಾಭ ತರುವ ಅದ್ಭುತವಾದ ಹೊಸ ಕಲ್ಪನೆಗಳನ್ನು ಪ್ರಸ್ತುತಪಡಿಸುತ್ತೀರಿ.

**ಮಿಥುನ** ಸ್ನೇಹಿತರು ಇಂದು ರಾತ್ರಿ ರೋಮಾಂಚಕವಾದದ್ದನ್ನೇನಾದರೂ ಯೋಜಿಸಿ ನಿಮಗೆ ಆನಂದ ತರುತ್ತಾರೆ. ಪ್ರೇಮಪ್ರಯಾಣ ಮಧುರ ವಾಗಿದ್ದರೂ ಅಲ್ಪಾವಧಿಯದ್ದಾಗಿರುತ್ತದೆ.

**ಕರ್ಕಾಟಕ** ವ್ಯಾಪಾರಿಗಳಿಗೆ ಹಣದ ನಷ್ಟವಾಗುವ ಸಾಧ್ಯತೆ ಇದೆ ಆದ್ದರಿಂದ ಇಂದು ಯೋಚಿಸಿ ಅರ್ಥಮಾಡಿಕೊಂಡು ನಡೆಯಿರಿ ನೀವು ಪ್ರೀತಿಸುವವರ ಜೊತಗಿನ ತಪ್ಪು ಕಲ್ಪನೆಯನ್ನು ಪರಿಹರಿಸಲಾಗುತ್ತದೆ.

**ಸಿಂಹ** ನಿಮ ಹವ್ಯಾಸಗಳನ್ನು ಪೂರೈಸಲು ನೀವು ಈ ಸಮಯವನ್ನು ಬಳಸಬಹುದು. ನೀವು ಯಾವುದಾದರು ಪುಸ್ತಕವನ್ನು ಓದಬಹುದ್ ಅಥವಾ ನಿಮಗೆ ನೆಚ್ಚಿದ ಸಂಗೀತ ಕೇಳಬಹುದು.

**ಕನ್ಯಾ** ತಾತ್ಕಾಲಿಕವಾದ ಉದ್ವೇಗದಲ್ಲಿ ನಿರ್ಧಾರ ಕೈಗೊಳ್ಳಬೇಡಿ ಇದು ನಿಮ್ಮ ಮಕ್ಕಳ ಹಿತಾಸಕ್ತಿಗೆ ಹಾನಿ ಮಾಡಬಹುದು. ನಿಮ್ಮ ಹಣವನ್ನು ಉಳಿಸಲು ನೀವು ಇಂದು ನಿಮ್ಮ ಮನೆಯ ಜನರೊಂದಿಗೆ ಮಾತನಾಡಬೇಕು.

**ತುಲಾ** ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು.

**ವೃಶ್ಚಿಕ** ಗರ್ಭಿಣಿಯರಿಗೆ ಉತ್ತಮ ದಿನವಲ್ಲ. ನೀವು ನಡೆಯುವಾಗ ಹೆಚ್ಚು ಜಾಗರೂಕರಾಗಿರಬೇಕು. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಖರೀದಿಸಲು ಪ್ರಯತ್ನಿಸಿ.

**ಧನಸ್ಸು** ಕುಡಿಯುವ ಅಭ್ಯಾಸವನ್ನು ತೊಡೆದುಹಾಕಲು ಇದೊಂದು ಅತ್ಯಂತ ಪವಿತ್ರವಾದ ದಿನ. ವೈನ್ ಕುಡಿಯುವುದು ಆರೋಗ್ಯದ ಪ್ರಾಣಾಂತಿಕ ಶತ್ರು ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ಮಕರ** ಮನೆಯಲ್ಲಿ ಒತ್ತಡ ನಿಮಗೆ ಸಿಟ್ಟು ತರಿಸಬಹುದು. ಅವುಗಳನ್ನು ದಮನಗೊಳಿಸುವುದು ಕೇವಲ ದೈಹಿಕ ಸಮಸ್ಯೆಯನ್ನು ಹೆಚ್ಚಿಸುತ್ತದೆ. ದೈಹಿಕ ಚಟುವಟಿಕೆಯೊಂದಿಗೆ ಇದನ್ನು ತೊಡೆದುಹಾಕಿ.

**ಕುಂಭ** ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ನಿಮ್ಮ ಕುಟುಂಬದ ಜೊತೆ ಕಟ್ಟುನಿಟ್ಟಾಗಿ ವರ್ತಿಸಬೇಡಿ ಇದು ಶಾಂತಿ ಭಂಗವುಂಟುಮಾಡಬಹುದು.

**ಮೀನ** ಜೀವನದಲ್ಲಿ ಒತ್ತಡದ ಮನೋಭಾವವನ್ನು ತಪ್ಪಿಸಿ ವ್ಯಾಪಾರ ಸಾಲಕ್ಕಾಗಿ ನಿಮ್ಮ ಬಳಿ ಬರುವವರನ್ನು ನಿರ್ಲಕ್ಷಿಸಿ. ಸಂಗಾತಿಯು ಸಂತೋಷ ನೀಡಲು ಪ್ರಯತ್ನ ಮಾಡಿದಾಗಿನ ಪೂರ್ಣ ಸಂತೋಷದ ಒಂದು ದಿನ.

● ಸಂಸದ ಈ. ತುಕಾರಾಂ ಅವರು ಸಿದ್ದರಾಮಯ್ಯ ಅವರ ಕೈಗೊಂಬೆಯಾಗಿದ್ದಾರೆ ಎಂದು ಆರೋಪ

# ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿದ್ದು ರುವಾರಿ?: ತಿಮ್ಮಪ್ಪ ಜೋಳದ

• **ಉದಯವಾಹಿನಿ ಬಳ್ಳಾರಿ**

ಅಹಿಂದ ನಾಯಕ ಹೇಳಿಕೊಳ್ಳುತ್ತಿರುವ ಸಿದ್ದರಾಮಯ್ಯ ಅವರು ಕುರುಬ ಸಮುದಾಯದ ನಾಯಕರು ಮಾತ್ರವಾಗಿದ್ದಾರೆ. ರಾಜ್ಯದಲ್ಲಿ ಎಸ್ಟಿ ಸಮುದಾಯವನ್ನು ತುಳಿಯುವಂತ ಕಾರ್ಯ ಮಾಡುತ್ತಿರುವುದು ಖಂಡನೀಯ ಎಂದು ಅಖಂಡ ಕರ್ನಾಟಕ ವಾಲ್ಮೀಕಿ ನಾಯಕರ ಒಕ್ಕೂಟದ ರಾಜ್ಯಾಧ್ಯಕ್ಷ ತಿಮ್ಮಪ್ಪ ಜೋಳದರಾಶಿ ಹೇಳಿದರು. ನಗರದ ಅಖಂಡ ಕರ್ನಾಟಕ ವಾಲ್ಮೀಕಿ ನಾಯಕರ ಒಕ್ಕೂಟದ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಸಿದ್ದರಾಮಯ್ಯ ಅವರು ಪ್ರಮುಖವಾಗಿ ಎರಡು ಅಜೆಂಡಾಗಳನ್ನಿಟ್ಟುಕೊಂಡಿದ್ದಾರೆ. ಅದರಲ್ಲಿ ಒಂದು ಡಿಕೆ ಶಿವಕುಮಾರ್ ಅವರನ್ನು ರಾಜಕೀಯವಾಗಿ ನೇರವಾಗಿ ತುಳಿಯುವುದು, ಮತ್ತೊಂದು ವಾಲ್ಮೀಕಿ ಸಮುದಾಯವನ್ನು ಮೂಲೆ ಗುಂಪುಮಾಡುವುದು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಅವರೇ ರುವಾರಿಗಳಾಗಿದ್ದು, ಮಾಜಿ ಸಚಿವ ನಾಗೇಂದ್ರ ಅವರನ್ನು ಸಿಲುಕಿಸಿದ್ದಾರೆ. ಇನ್ನೊಂದಡೆ ಡಿಕೆಶಿ ವಿರುದ್ಧ ಸತೀಶ್ ಜಾರಕಿಹೊಳೆ ಅವರನ್ನು ಸಿಎಂ ಅಭ್ಯರ್ಥಿ ಎಂದು ಬಿಂಬಿಸಿ ಜಾರಕಿಹೊಳೆ ಕುಟುಂಬವನ್ನು ಮೂಲೆಗುಂಪು ಮಾಡುತ್ತಿದ್ದಾರೆ.

ಕೆ.ಎನ್.ರಾಜಣ್ಣ ಅವರನ್ನು ವಿನಾಃ ಕಾರಣ ಸಚಿವ ಸಂಪುಟದಿಂದ ಕೈ ಬಿಟ್ಟಿದ್ದಾರೆ. ಈಗ ಕುರುಬ ಸಮುದಾಯವನ್ನು ಎಸ್ಟಿಗೆ ಸೇರಿಸುವ ಪ್ರಯತ್ನಕ್ಕೆ ಕೈ ಹಾಕಿ ವಾಲ್ಮೀಕಿ ಸಮುದಾಯವಬ್ಬು ಹತ್ತಿಕ್ಕುವ ಹುನ್ನಾರ ಮಾಡುತ್ತಿದ್ದಾರೆ ಎಂದು ಗಂಭೀರವಾಗಿ ಆರೋಪಿಸಿದರು. ಬಳ್ಳಾರಿ ಜಿಲ್ಲೆಯ ಸಂಸದ ಈ.ತುಕಾರಾಂ ಅವರು ಸಿಎಂ ಸಿದ್ದರಾಮಯ್ಯ ಅವರ ಕೈಗೊಂಬೆಯಾಗಿದ್ದಾರೆ. ಸಮುದಾಯದ ಪರ ಯಾವುದೇ ಧ್ವನಿ ಎತ್ತದಿರುವುದು ಖಂಡನೀಯ. ಹೀಗಾಗಿ, ಈ ಬಗ್ಗೆ ರಾಜ್ಯದಲ್ಲಿರುವ ವಾಲ್ಮೀಕಿ ಸಮುದಾಯದ ಶಾಸಕರು, ಸಚಿವರು ಸಿಎಂ ಸಿದ್ದರಾಮಯ್ಯ ಅವರ ಮೇಲೆ ಒತ್ತಡ ಹೇರಿ ಬೇರೆ ಸಮುದಾಯವನ್ನು ಎಸ್ಟಿಗೆ ಸೇರಿಸುವುದನ್ನು ನಿಲ್ಲಿಸಬೇಕು. ಇಲ್ಲವಾದಲ್ಲಿ ಒಕ್ಕೂಟದಿಂದ ರಾಜ್ಯದ ಎಸ್ಟಿ ಸಮುದಾಯದ ಶಾಸಕರ ಮನೆ ಎದುರು ಪ್ರತಿಭಟನೆ ನಡೆಸಲಾಗುವುದು.

ಇದರೊಂದಿಗೆ ವಾಲ್ಮೀಕಿ ಸಮುದಾಯದ ಸ್ವಾಮೀಜಿ ಶ್ರೀಪ್ರಸನ್ನಾಂದ ಸ್ವಾಮೀಜಿ ಸಮುದಾಯದ ಪರ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಆಗ್ರಹಿಸಿದರು. ರಾಜ್ಯಾದ್ಯಂತ ಸೆ.22ರಿಂದ ಜಾತಿ ಸಮೀಕ್ಷೆ ನಡೆಯುತ್ತಿದ್ದು, ಧರ್ಮ ಕಾಲಂನಲ್ಲಿ ಹಿಂದೂ, ಜಾತಿ ಕಾಲಂನಲ್ಲಿ ವಾಲ್ಮೀಕಿ ಎಂದು ನಮೂದಿಸಬೇಕು. ಈ ಬಗ್ಗೆ ರಾಜ್ಯಾದ್ಯಂತ ಸಂಚರಿಸಿ ಜಾಗೃತಿ ಮೂಡಿಸಲಾಗುವುದು. ನಕಲಿ ಜಾತಿ ಪ್ರಮಾಣ ಪತ್ರ ವಿತರಣೆ ತಡೆಯುವಂತೆ ಒತ್ತಾಯಿಸಲಾಗುವುದು ಎಂದರು.



**ಸಂಕಷ್ಟ ಬಂದಾಗ ಮಾತ್ರ ಕುರುಬರ ನೆನಪು**

**ಸಿಎಂ ಸಿದ್ದರಾಮಯ್ಯಗೆ ಕಷ್ಟ ಬಂದಾಗ ಮಾತ್ರ ಕುರುಬರು ನೆನಪಾಗ್ತಾರೆ. ಈ ಸಿಎಂಗೆ ಕಷ್ಟ ಬಂದಿರಬೇಕು. ಹೀಗಾಗಿ ಕುರುಬ ಸಮುದಾಯವನ್ನು ಎಸ್ಟಿ ಸಮುದಾಯಕ್ಕೆ ಸೇರಿಸುತ್ತಿದ್ದಾರೆ ಎಂದು ಮೈಸೂರಿನಲ್ಲಿ ಎಚ್ ವಿಶ್ವನಾಥ್ ಅವರು ಹೇಳಿದರು.**

- **ಅಖಂಡ ಕರ್ನಾಟಕ ವಾಲ್ಮೀಕಿ ನಾಯಕರ ಒಕ್ಕೂಟದಿಂದ ಸಿಎಂ ವಿರುದ್ಧ ಆಕ್ರೋಶ**
- **ಸಂಸದ ಈ. ತುಕಾರಾಂ ಅವರು ಸಿದ್ದರಾಮಯ್ಯ ಅವರ ಕೈಗೊಂಬೆಯಾಗಿದ್ದಾರೆ ಎಂದು ಆರೋಪ**
- **ಧರ್ಮ ಕಾಲಮ್‌ನಲ್ಲಿ ಹಿಂದೂ ಮತ್ತು ಜಾತಿ ಕಾಲಮ್‌ನಲ್ಲಿ ವಾಲ್ಮೀಕಿ ಎಂದು ನಮೂದಿಸಲು ಜಾಗೃತಿ**

**ಚುನಾವಣೆ ಗೆಲ್ಲುವ ಕುತಂತ್ರ**

**ಎಸ್ಟಿ ಮೀಸಲು ಕ್ಷೇತ್ರವಾಗಿರುವ ಎಚ್ ಡಿ ಕೋಟೆಯಲ್ಲಿ ತಮ್ಮ ಪುತ್ರ ಯತ್ರೀಂದ್ರ ಅವರನ್ನು ಮುಂದಿನ ಚುನಾವಣೆಯಲ್ಲಿ ನಿಲ್ಲಿಸುವ ಉದ್ದೇಶದಿಂದ ಕುರುಬ ಸಮುದಾಯವನ್ನು ಎಸ್ಟಿಗೆ ಸೇರಿಸಲು ಮುಂದಾಗಿದ್ದಾರೆ. ಈ ಮೂಲಕ ಸಮುದಾಯಕ್ಕೆ ದ್ರೋಹ ಬಗೆಯುವ ಕಾರ್ಯಕ್ಕೆ ಕೈ ಹಾಕಿದ್ದಾರೆ. ಬುಡಕಟ್ಟು ಸಮುದಾಯವನ್ನು ಬದಿಗಿಟ್ಟು ಬುಡಕಟ್ಟು ಅಲ್ಲದ ಸಮುದಾಯವನ್ನು ಪಪಂಕ್ಕೆ ಸೇರಿಸುವ ಪ್ರಯತ್ನ ನಡೆಸುವ ಮೂಲಕ ಸಂವಿಧಾನದ ವಿರೋಧಿಯಾಗಿದ್ದಾರೆ.**

**ವಾಲ್ಮೀಕಿ ಸಮುದಾಯ ಮೂಲೆ ಗುಂಪು**

## ಕ.ಕರ್ನಾಟಕದ ಅಭಿವೃದ್ಧಿಗೆ ಸಾಮೂಹಿಕ ಪ್ರಯತ್ನ ಅಗತ್ಯ :ಡಿಸಿ

• **ಉದಯವಾಹಿನಿ ಹೊಸಪೇಟೆ**

ಬ್ರಿಟೀಷರ ಕುಮ್ಮಕ್ಕುನಿಂದ ಹೈದ್ರಾಬಾದ್ ಪ್ರಾಂತ್ಯವನ್ನು ತನ್ನ ಕಪಿಮುಷ್ಟಿಯಲ್ಲಿ ಇಟ್ಟುಕೊಂಡು ಆಡಳಿತ ನಡೆಸುತ್ತಿದ್ದ ನಿಜಾಮರ ವಿರುದ್ಧ ಹೋರಾಡುವ ಮೂಲಕ ಸ್ವಾತಂತ್ರ್ಯ ಭಾರತದ ಭಾಗವಾಗಿ ಮಾಡಿದ ಕಲ್ಯಾಣ ಕರ್ನಾಟಕ ಸರ್ವರ ಪ್ರಯತ್ನದಲ್ಲಿ ಮತ್ತಷ್ಟು ಅಭಿವೃದ್ಧಿ ಕಾಣಬೇಕಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ಹೇಳಿದರು. ಹೊಸಪೇಟೆಯಲ್ಲಿ ವಿಜಯನಗರ ಜಿಲ್ಲಾಡಳಿತ ಹಮ್ಮಿಕೊಂಡಿದ್ದ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಾರ್ಯಕ್ರಮದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಭಾರತದ ಉಕ್ಕಿನ ಮನುಷ್ಯ ಸರ್ದಾರ ವಲ್ಲಭಬಾಯಿ ಪಟೇಲರು, 1948 ರ ಸೆಪ್ಟೆಂಬರ್ 13 ರಂದು ದಿಟ್ಟತನದಿಂದ ಭಾರತದ ಸೇನೆಯ ಮುಖಂಡ ಜನರಲ್ ಚೌದ್ರಿ ನೇತೃತ್ವದಲ್ಲಿ ಕೈಗೊಂಡ ಪೊಲೀಸ್ ಕಾರ್ಯಚರಣೆಯಲ್ಲಿ ಹೈದ್ರಾಬಾದ್ ನಿಜಾಮರು ಶರಣಾಗಿ ಭಾರತದ ಒಕ್ಕೂಟ ವ್ಯವಸ್ಥೆಗೆ ಸೇರ್ಪಡೆಗೊಳ್ಳಲು ಒಪ್ಪಿಕೊಂಡರು. ಇದರ ಪರಿಣಾಮವಾಗಿ ಕನ್ನಡ ಭಾಷೆ, ಸಾಹಿತ್ಯ, ಸಂಸ್ಕೃತಿ, ಕಲೆ,

ಧರ್ಮ, ಮೊದಲಾದ ಕ್ಷೇತ್ರಗಳಿಗೆ ಗಮನಾರ್ಹ ಕೊಡುಗೆ ನೀಡಿ ವಿಶ್ವವೇ ನಿಬ್ಬೆರಗಾಗುವಂತಹ ಜಗಜ್ಯೋತಿ ಬಸವಣ್ಣನವರು ಸಾಮಾಜಿಕ ಪರಿವರ್ತನೆಗೆ ಬುನಾದಿ ಹಾಕಿದ ಈ ಪವಿತ್ರ ಭೂಮಿ 1948 ರ ಸೆಪ್ಟೆಂಬರ್ 17 ರಂದು ರಾಜ್ಯದ ಇತರ ಭಾಗಗಳಂತೆ ಸ್ವಾತಂತ್ರ್ಯವಾಗಿ ಉಸಿರಾಡಲು ಸಾಧ್ಯವಾಯಿತು. ಮುಂದೆ ಸರ್ಕಾರ 2013ರ ನವಂಬರ್ 6 ರಂದು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯನ್ನು ಕಲಬುರಗಿಯಲ್ಲಿ ಸ್ಥಾಪಿಸಿದ್ದು, ಇದು ಈ ಭಾಗದ 40 ವಿಧಾನಸಭಾ ಕ್ಷೇತ್ರಗಳ ಗ್ರಾಮೀಣ ಮತ್ತು ಪಟ್ಟಣ ಪ್ರದೇಶಗಳಿಗೂ ಸೇರಿದಂತೆ, ಎಲ್ಲಾ ಭಾಗಗಳ ಮೂಲಭೂತ ಸೌಕರ್ಯ,ಆರೋಗ್ಯ, ಸಾಮಾಜಿಕ, ರಸ್ತೆ ಸಂಪರ್ಕ, ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಇನ್ನಿತರೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಕ್ಕೆ ಅನುದಾನವನ್ನು ಮೀಸಲಿರಿಸಲಾಗಿದೆ.

ವಿಜಯನಗರ ಜಿಲ್ಲೆಗೆ ಸಂಬಂಧಿಸಿದಂತೆ 2025-26 ನೇ ಸಾಲಿನ ಮೈಕ್ರೋ ಕ್ರಿಯಾ ಯೋಜನೆ ಅಡಿಯಲ್ಲಿ ರೂ.22,445.34 ಲಕ್ಷಗಳು ಮತ್ತು ಮ್ಯಾಕ್ರೋ ಯೋಜನೆಯಡಿಯಲ್ಲಿ 9,464.90 ಲಕ್ಷಗಳ ಅನುದಾನ ಹಂಚಿಕೆಯಾಗಿದೆ.



ಉದಯವಾಹಿನಿ ಚಿತ್ರ

**ಕಲ್ಯಾಣ ಕರ್ನಾಟಕ ಭಾಗವಾದ ವಿಜಯನಗರ ಜಿಲ್ಲೆಯ ಸರ್ವತೋಮುಖ ಅಭಿವೃದ್ಧಿಗಾಗಿ ನಾವೆಲ್ಲರೂ ಒಟ್ಟಾಗಿ ದುಡಿಯಬೇಕೆಂದು ಪಣತೊಡುತ್ತಾ ಮುಂಬರುವ ದಿನಗಳಲ್ಲಿ ಇನ್ನೊಷ್ಟು ಅಭಿವೃದ್ಧಿ ಸಾಧಿಸೋಣ ಎಂಬ ದೃಢ ವಿಶ್ವಾಸದೊಂದಿಗೆ ಎಲ್ಲರಿಗೂ ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯ ಹಾರ್ದಿಕ ಶುಭಾಶಯಗಳನ್ನು ಕೋರಿದರು. -ಡಿಸಿ**

## ಯೋಗ್ಯತೆ ಬರುವುದು ವಯಸ್ಸಿನಿಂದ ಅಲ್ಲ ಸಂಸ್ಕಾರದಿಂದ

• **ಉದಯವಾಹಿನಿ ಧರ್ಮಸ್ಥಳ**

ಸಂಸ್ಕಾರವೆಂಬುದು ಶಿಶುವಿಗೆ ಗರ್ಭಾಂಕುರದಿಂದ ಆರಂಭವಾಗುತ್ತದೆ ಎಂದು ಉಜಿರೆಯ ಧಾರ್ಮಿಕ ವಿದ್ವಾಂಸ ಹಾಗೂ ಹವ್ಯಾಸಿ ಯಕ್ಷಗಾನ ಕಲಾವಿದ ಉಜಿರೆ ಅಶೋಕ್ ಭಟ್ ಅಭಿಪ್ರಾಯಪಟ್ಟರು. ಶ್ರೀಧರ್ಮಸ್ಥಳ ಮಂಜುನಾಥೇಶ್ವರ ಭಜನಾ ಪರಿಷತ್ ಆಯೋಜಿಸಿರುವ 2025ನೇ ಸಾಲಿನ ಸಪ್ಟೆಂಬರ್ 14 ರಿಂದ 21ರವರೆಗೆ ನಡೆಯಲಿರುವ 27ನೇ ವರ್ಷದ ಭಜನಾ ತರಬೇತಿ ಕಮ್ಮಟದ 3ನೇ ದಿನದ ಕಾರ್ಯಾಗಾರದಲ್ಲಿ 'ಯುವಕರಲ್ಲಿ ಸಂಸ್ಕಾರ ಸಂಸ್ಕೃತಿ ಅರಿವು' ಎಂಬ ವಿಚಾರದ ಕುರಿತು ಉಪನ್ಯಾಸ ನೀಡಿದರು.

ಸಂಸ್ಕಾರವೆಂಬುದು ನಾವು ಭೂಸ್ಪರ್ಶವಾಗುವ ಮುನ್ನವೇ ಆರಂಭವಾಗುತ್ತದೆ.ಗರ್ಭದಲ್ಲಿನ ಕಲಿಕೆ ಅಕ್ಷರಾಭ್ಯಾಸದ ಜೊತೆ ಮುಂದುವರಿದು ಕುಟುಂಬ ಸಂಸ್ಕಾರದ ಜೊತೆ ಬೆರೆತು ಭವಿಷ್ಯದಲ್ಲಿ ಉತ್ತಮ ವ್ಯಕ್ತಿತ್ವ ನಿರ್ಮಾಣಕ್ಕೆ ಕಾರಣವಾಗುತ್ತದೆ. ನಾವು ಸೇವಿಸುವ ಆಹಾರ, ಪಾನೀಯ,ಧರಿಸುವ ವಸ್ತ್ರದಿಂದ ಸಂಸ್ಕಾರವೆಂಬುದು ಆರಂಭವಾಗಿ ಕೌಟುಂಬಿಕ ಪ್ರಜ್ಞೆ ಮತ್ತು ಸಾಮಾಜಿಕ ಪರಿವರ್ತನೆಗೆ ದಾರಿದೀಪವಾಗುತ್ತದೆ. ವ್ಯಕ್ತಿಯಿಂದ ಕುಟುಂಬ, ಕುಟುಂಬದಿಂದ ಉತ್ತಮ ಸಮಾಜದ ನಿರ್ಮಾಣ ಮಾಡುವಲ್ಲಿ ಸಂಸ್ಕಾರದ ಪಾತ್ರ ಮಹತ್ತರವಾದುದು ಎಂದು ಹೇಳಿದರು. ಯುವಕರಲ್ಲಿ ಅಧ್ಯಾತ್ಮಿಕ,ಭೌತಿಕ ಮತ್ತು ಧಾರ್ಮಿಕ ಚಿಂತನೆಗಳು ಮುಖ್ಯ.ಇವೆಲ್ಲದರ ಬೆಳವಣಿಗೆಯ ಮೊದಲ ಹೆಜ್ಜೆಯು ನಮ್ಮ ಮನೆಯಂಗಳದಲ್ಲಿ ಆರಂಭವಾಗಬೇಕು.

'ವಸುದೈವ ಕುಟುಂಬಕಂ' ಪರಿಕಲ್ಪನೆಯು ಪರಿಪೂರ್ಣವಾಗಲು ಯುವ ಮನಸ್ಸುಗಳನ್ನು ಸದೃಢಗೊಳಿಸುವಲ್ಲಿ ಭಜನೆ, ಹಬ್ಬ,ಆಚರಣೆ, ನಂಬಿಕೆ ಮತ್ತು ಕಲಿಕೆ ಅನುಷ್ಠಾನವಾದಾಗ ಮಾತ್ರ ಸಾಧ್ಯ.ಅಲ್ಲದೆ ಇಂದಿನ ಪೀಳಿಗೆಗಳಲ್ಲಿ ಗುಣ, ಶೀಲ, ನಡತೆ ಹಾಗೂ ಸನ್ನಡತೆಯನ್ನು ಜಾಗೃತಗೊಳಿಸಿ ಸಂಸ್ಕಾರದ ಜ್ಯೋತಿ ಬೆಳಗಬೇಕಿದೆ ಎಂದರು.

ಸಂಸ್ಕಾರವೆಂಬುದು ಕಲೆ,ಯೋಗ,ಬಾಂಧವ್ಯ,ಶಿಕ್ಷಣ, ವ್ಯಕ್ತಿತ್ವ ಎಲ್ಲದರ ಮಿಶ್ರಣ.ಕಲೆ ಬದುಕನ್ನು ಕಟ್ಟಲು ಕಲಿಸುತ್ತದೆ.ಮಕ್ಕಳನ್ನು ಬೆಳೆಸುವುದು ಒಂದು ಕಲೆ,ಆ ಕಲೆಗೆ ರೂಪ ನೀಡುವುದೇ ಸಂಸ್ಕಾರ.ಮನೆಯ ಹಬ್ಬದಿಂದ ಹಿಡಿದು ಊರಿನ ಜಾತ್ರೆಗಳಿಗೂ ಮಕ್ಕಳನ್ನು ಕರೆದೊಯ್ದು ಸಂತೆ ತಿರುಗಿಸದೆ ಗರ್ಭಗುಡಿಗೆ ಪ್ರದಕ್ಷಿಣೆ ಹಾಕಿಸಿ ಸಂತರನ್ನಾಗಿ ಮಾಡುವ ಜವಾಬ್ದಾರಿ ಪೋಷಕರ ಮೇಲಿದೆ.

ಕುಟುಂಬವೆಂಬ ಪರಿಕಲ್ಪನೆ ಬಹಳ ಮೌಲ್ಯಯುತವಾದುದು,ಪ್ರಪಂಚದಲ್ಲಿ ಕುಟುಂಬದ ಪರಿಕಲ್ಪನೆ ಭಾರತವನ್ನು ಮಹತ್ತರದ ಸ್ಥಾನಕ್ಕೆ ಕೊಂಡೊಯ್ದಿದೆ. ಈ ಪರಿಕಲ್ಪನೆಯ ಮೂಲವೇ ಅವಲಂಬನೆ,ಕೌಟುಂಬಿಕ ಅವಲಂಬನೆಯಿಂದ ಸಂಸ್ಕಾರದ ಬೆಳವಣಿಗೆಯಾಗುತ್ತದೆ.ಅದರ ಬೆಳವಣಿಗೆಗೆ ನಮ್ಮ ಹಬ್ಬ,ಶಾಸ್ತ್ರೀಯ ಕಲೆಗಳ ಮೂಲಗಳನ್ನು ಕೆಡಿಸದೆ ಮುಂದಿನ ಪೀಳಿಗೆಗೆ ನೀಡಬೇಕಿದೆ ಎಂದರು.





ಉದಯವಾಹಿನಿ ಚಿತ್ರ

**ಯುವಕರಲ್ಲಿ ಸಂಸ್ಕಾರ ಸಂಸ್ಕೃತಿ ಅರಿವು'**

## ಕ. ಕರ್ನಾಟಕ ವಿಮೋಚನಾ ದಿನಾಚರಣೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಕೆಂಭಾವಿ**

ಗೃಹರಕ್ಷಕ ದಳ ಕಚೇರಿಯಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಆಚರಿಸಲಾಯಿತು. ರಕ್ಷಕ ದಳ ಘಟಕ ಅಧಿಕಾರಿಯಾದ ಮುರ್ತುಜಾ ಚಿಗರಿಹಾಳ್ ಧ್ವಜಾರೋಹಣ ನೆರವೇರಿಸಿದರು ಗೃಹ ರಕ್ಷಕ ದಳದ ಸಿಬ್ಬಂದಿಯವರಾದ ಮಹಮ್ಮದ್ ಹನೀಫ್ ಮಿಟ್ಟು ಪಟೇಲ್ ಪರಶುರಾಮ್ ದಾವಲ್ ಮಲಿಕ್ ಸಚಿನ್ ಮುರ್ತುಜಾ ಮಲ್ಲು ಸಗರ್ ಮಾಳಪ್ಪ ನಬಿ ರಸೂಲ್ ಮೇಟಿ ಗೌಡ ಭೀಮಶಂಕರ್ ಸಾಹೇಬ್ ನಿಂಗಪ್ಪ ಸಂಗಣ್ಣ ಮಕ್ತುಮ್ ಸಾಬ್ ಹಾಗೂ ಎಲ್ಲಾ ಗೃಹರಕ್ಷಕ ದಳದ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಬಿಜೆಪಿ ಕಛೇರಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ ಸಿಂಧನೂರು**

ನಗರದ ಬಿಜೆಪಿ ಪಕ್ಷದ ಕಾರ್ಯಾಲಯದಲ್ಲಿ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಕೆ ಕರಿಯಪ್ಪ ನವರು ಧ್ವಜಾರೋಹಣ ನೆರವೇರಿಸಿದರು. ನಂತರ ಕಾರ್ಯಕ್ರಮ ತಾಲ್ಲೂಕಿನ ಸಮಸ್ತ ಜನತೆಗೆ ಕಲ್ಯಾಣ ಕರ್ನಾಟಕ ವಿಮೋಚನಾ ದಿನಾಚರಣೆ ಶುಭಾಶಯಗಳು ತಿಳಿಸಿ ಮಾತನಾಡಿದರು. ಹಾಗೂ .ಭಗವಾನ್ ವಿಶ್ವಕರ್ಮ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಜಯಂತೋತ್ಸವ ಕಾರ್ಯಕ್ರಮವನ್ನು ಆಚರಣೆ ಮಾಡಲಾಯಿತು.

## ಉದ್ಯೋಗ ಮಹೋತ್ಸವ

• **ಉದಯವಾಹಿನಿ ಕಲಬುರಗಿ**

ಪ್ರಧಾನಮಂತ್ರಿ ನರೇಂದ್ರ ಮೋದಿ 75ನೇ ಜನ್ಮದಿನ ಹಾಗೂ ಕಲ್ಯಾಣ ಕರ್ನಾಟಕ ಉತ್ಸವದ ಅಂಗವಾಗಿ ಬಿಜೆಪಿ ನಗರ ಅಧ್ಯಕ್ಷ ಚಂದು ಪಾಟೀಲ ಅವರು ನಗರದ ವೀರಶೈವ ಕಲ್ಯಾಣ ಮಂಟಪದಲ್ಲಿ ಇಂದು ಆಯೋಜಿಸಿದ್ದ ಮೋದಿ 75 ಉದ್ಯೋಗ ಮಹೋತ್ಸವವನ್ನು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಉದ್ಘಾಟಿಸಿದರು. ಚೌದಾಪುರಿ ಮಠದ ಡಾ.ರಾಜಶೇಖರ ಶಿವಾಚಾರ್ಯರು ಕಾರ್ಯಕ್ರಮದ ಸಾನಿಧ್ಯವಹಿಸಿದ್ದರು.ವಿಧಾನ ಪರಿಷತ್ ಸದಸ್ಯರಾದ ಬಿ.ಜಿ.ಪಾಟೀಲ, ಶಶೀಲ ಜಿ.ನಮೋಶಿ, ಶಾಸಕರಾದ ಬಸವರಾಜ ಮತ್ತಿಮೂಡ, ಡಾ.ಅವಿನಾಶ ಜಾಧವ್, ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ ರೇವೂರ, ಸುಭಾಷ ಗುತ್ತೇದಾರ, ಮಾಜಿ ಸಚಿವ ಬಾಬುರಾವ ಚವ್ಹಾಣ್, ವಿಧಾನ ಪರಿಷತ್ ಮಾಜಿ ಸದಸ್ಯ ಅಮರನಾಥ ಪಾಟೀಲ, ಬಿಜೆಪಿ ನಗರ ಅಧ್ಯಕ್ಷ ಚಂದು ಪಾಟೀಲ, ಬಿಜೆಪಿ ಗ್ರಾಮಾಂತರ ಜಿಲ್ಲಾ ಅಧ್ಯಕ್ಷ ಅಶೋಕ ಬಗಲಿ, ಮುಖಂಡರಾದ ಶಿವರಾಜ ಪಾಟೀಲ ರದ್ದೇವಾಡಗಿ, ನಿತಿನ್ ಗುತ್ತೇದಾರ ಮೇಲಿದ್ದರು.

## ಪ್ರಧಾನಿ ನರೇಂದ್ರ ಮೋದಿ 75ನೇ ಜನ್ಮದಿನದ ನಿಮಿತ್ಯ ರಕ್ತದಾನ ಶಿಬಿರ ಹಮ್ಮಿಕೊಂಡ ಕಾರ್ಯಕರ್ತರು

• **ಉದಯವಾಹಿನಿ ಕಾರಟಗಿ**

ಪ್ರಧಾನ ಮಂತ್ರಿ ನರೇಂದ್ರ ಮೋದಿಜಿ ಅವರ 75ನೇ ಹುಟ್ಟುಹಬ್ಬದ ಪ್ರಯುಕ್ತ ಕಾರಟಗಿ ಪಟ್ಟಣದ ಶ್ರೀ ಲಕ್ಷ್ಮಿ ವೆಂಕಟೇಶ್ವರ ದೇವಸ್ಥಾನದಲ್ಲಿ ಅವರ ಹೆಸರಿನಲ್ಲಿ ಪೂಜೆ ಸಲ್ಲಿಸಿ ನಂತರ ಸಮುದಾಯ ಆರೋಗ್ಯ ಕೇಂದ್ರಕ್ಕೆ ತೆರಳಿ ಹೊರ, ಒಳ ರೋಗಿಗಳಿಗೆ ಹಾಲು ಹಣ್ಣು-ಹಂಪಲು ಮತ್ತು ಬ್ರೆಡ್ ವಿತರಿಸಿ ನಂತರ ಪಟ್ಟಣದ ಮಹಾಶಕ್ತಿ ಕೇಂದ್ರದಿಂದ ರಕ್ತದಾನ ಶಿಬಿರವನ್ನು ಹಮ್ಮಿಕೊಂಡು ಯಶಸ್ವಿಯಾಗಿ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ಮಂಜುನಾಥ ಮಸ್ಕಿ,, ಬಸವರಾಜ್ ಎತ್ತಿನಮನಿ, ಶ್ರೀಧರ್ ಸುಂಕದ, ಬಸವರಾಜ ಬೇವಿನಾಳ, ಯಮನೂರ ನಾಯಕ, ಹಾಲೇಶ್ ಕಾರಟಗಿ, ಬಸವರಾಜ ಕೊಪ್ಪದ, ಅಮರೇಶ್, ವಸಂತ ಸಿಂಗ್, ಸಂಗಮೇಶ ಬಿಂಗಿ, ಆದೀಲ್ ಪಾಷ ಮುಸ್ಟೂರು, ಮಲ್ಲಪ್ಪ ,ಮಂಜುನಾಥ ,ನಾಗರಾಜ ಪೂಜಾರಿ , ಚಂದ್ರು ಕುಂಬಾರ , ವೀರೇಶ್ ಬಿಂಗಿ , ಬಸವರಾಜ , ಬಸವರಾಜ್ ಸಿದ್ರಾಂಪುರ, ಮೌನೇಶ್ , ವಿಕ್ರಮ , ಪರಶುರಾಮ , ಯಮನೂರ್ ,ಇತರರು ರಕ್ತದಾನ ಮಾಡಿದರು.





ಉದಯವಾಹಿನಿ ಚಿತ್ರ

## ಕೆಂಪು ಕಲ್ಲು ಸಮಸ್ಯೆ ಎಲ್ಲಾ ಬಗೆಹರಿದಿದೆ: ಶೀಘ್ರದಲ್ಲೇ ಎಸ್‌ಒಪಿ ಬಿಡುಗಡೆ

• **ಉದಯವಾಹಿನಿ ಮಂಗಳೂರು**

ದೀರ್ಘಕಾಲದ ಕೆಂಪು ಕಲ್ಲಿನ ಸಮಸ್ಯೆಯನ್ನು ಪರಿಹರಿಸಲಾಗಿದೆ ಎಂದು ಸ್ಪೀಕರ್ ಯುಟಿ ಖಾದರ್ ಘೋಷಿಸಿದ್ದು, ಮುಂದಿನ ದಿನಗಳಲ್ಲಿ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನ ಬಿಡುಗಡೆಯಾಗಲಿದೆ.

ಕಳೆದ ಸಚಿವ ಸಂಪುಟ ಸಭೆಯಲ್ಲಿ, ಹಿಂದೆ ಸ್ಪಷ್ಟ ಪರವಾನಗಿಗಳ ಕೊರತೆಯಿಂದ ಉಂಟಾದ ಗೊಂದಲ, ದುರುಪಯೋಗ ಮತ್ತು ಪರಿಹರಿಸಲು ಶಾಶ್ವತ ಪರಿಹಾರವನ್ನು ರೂಪಿಸಲಾಗಿತ್ತು ಎಂದು ಹೇಳಿದರು. ಈಗ ಹೊಸ ಕಾನೂನು ಚೌಕಟ್ಟನ್ನು ಸ್ಥಾಪಿಸಲಾಗಿದ್ದು, ಕೆಂಪು ಕಲ್ಲು ಮಾರಾಟಗಾರರು ಕಾನೂನುಬದ್ಧವಾಗಿ ಕಾರ್ಯನಿರ್ವಹಿಸಲು ಅನುವು ಮಾಡಿಕೊಟ್ಟಿದೆ. ಇನ್ನೂ ಯಾರು ವ್ಯಾಪಾರ ಮಾಡಿದರು ಪರವಾನಿಗೆ ಪಡೆದು ಮಾಡಬೇಕು ಎಂದರು. ಕೆಂಪು ಕಲ್ಲಿಗೆ ದರ ನಿಗದಿ ಬಗ್ಗೆ ಚರ್ಚೆ ನಡೆಸಲಾಗುವುದು. ಜನ ಸಾಮಾನ್ಯರಿಗೆ ಸುಲಭ ಮತ್ತು ಕಡಿಮೆ ದರದಲ್ಲಿ ಸಿಗುವಂತೆ ಮಾಡಲಾಗುವುದು. ಯಾವುದೇ ಕಾರಣಕ್ಕೂ ಹಿಂದಿಗಿಂತ ಅಧಿಕ ಹಣ ಪಡೆದುಕೊಳ್ಳದಂತೆ ನೋಡಿಕೊಳ್ಳಲಾಗುವುದು ಎಂದರು. ಈಗಾಗಲೇ ಎಲ್ಲಾ ರೀತಿಯ ರಾಜ ಧನ ಮತ್ತು ತೆರಿಗೆ ವಿನಾಯಿತಿ ಕೊಟ್ಟು ಅಧಿಕ ಹಣ ಪಡೆಯುದು ಹೇಗೆ ಎಂದು ಪ್ರಶ್ನಿಸಿದರು. ಹಿಂದೆಗಿಂತ ಕಡಿಮೆ ದರದಲ್ಲಿ ಜನರಿಗೆ ಕಲ್ಲು ಸಿಗುವಂತೆ ವ್ಯವಸ್ಥೆ ಮಾಡಲಾಗುತ್ತದೆ. ಮುಂದಿನ ದಿನಗಳಲ್ಲಿ ಈ ಬಗ್ಗೆ ಕ್ರಮ ಕೈಗೊಂಡು ಸರ್ಕಾರವೇ ದರ ನಿಗದಿ ಪಡಿಸಲಿದೆ ಎಂದು ಖಾದರ್ ತಿಳಿಸಿದರು.

ಈ ವಿಷಯದ ಬಗ್ಗೆ ಪ್ರತಿಭಟಿಸುವ ಹಕ್ಕು ಪ್ರಜಾಪ್ರಭುತ್ವದಲ್ಲಿ ಇದೆ ಎಂದು ಈ ವೇಳೆ ಖಾದರ್ ಒಪ್ಪಿಕೊಂಡರು ಮತ್ತು ರಾಜಕೀಯ ಪ್ರತಿಭಟನೆಗಳು ಅರ್ಥವಾಗುವಂತಹದ್ದಾಗಿದ್ದರೂ, ಈಗ ನ್ಯಾಯಯುತ ಮತ್ತು ಕಾನೂನುಬದ್ಧ ಪರಿಹಾರವನ್ನು ನೀಡಲಾಗಿದೆ,ಎಂದರು.



**ಹೊಸ ನೀತಿಗೆ ಸಚಿವ ಸಂಪುಟ ಅನುಮೋದನೆ ನೀಡಿದ್ದು, ಮುಖ್ಯಮಂತ್ರಿ ಕೂಡ ಒಪ್ಪಿಗೆ ನೀಡಿದ್ದಾರೆ. ಕೆಂಪು ಕಲ್ಲು ವ್ಯವಹಾರಕ್ಕಾಗಿ 53 ಅರ್ಜಿಗಳಲ್ಲಿ 25 ಅರ್ಜಿದಾರರಿಗೆ ಈಗಾಗಲೇ ಹೊಸ ಕಾನೂನು ಚೌಕಟ್ಟಿನಡಿಯಲ್ಲಿ ಪರವಾನಗಿ ನೀಡಲಾಗಿದೆ. -ಯುಟಿ ಖಾದರ್**

## ರೈತರೆಲ್ಲರೂ ಒಗ್ಗೂಡಬೇಕು, ರೈತ ಸಂಘಟನೆಗಳು ಪ್ರತಿ ಗ್ರಾಮಗಳಲ್ಲಿ ಆಗಬೇಕು

• **ಉದಯವಾಹಿನಿ ವಿಜಯಪುರ**

ಈ ನಾಡಿನಲ್ಲಿ ರೈತರ ಹೆಸರಲ್ಲಿ ದಿನನಿತ್ಯ ಸುಲಿಗೆ ಮಾಡಲಾಗುತ್ತಿದೆ. ನಮ್ಮನಾಳುವ ಜನಪ್ರತಿನಿಧಿಗಳು ಕೂಡಾ ಚುನಾವಣಾ ಸಂದರ್ಭದಲ್ಲಿ ನಾವೂ ಕೂಡಾ ರೈತರ ಮಕ್ಕಳು ಎಂದು ಜಾತಿ, ಪಕ್ಷ ಎಂದು ಯಾಮಾರಿಸಿ ಹಣ, ಹೆಂಡ ಕೊಟ್ಟು ಆರಿಸಿ ಬಂದ್ದು, ತಾವು ಹೇಳಿರುವ ಎಲ್ಲಾ ಆಶ್ವಾಸನೆಗಳನ್ನು ಮರೆತು ಹಣ ಮಾಡುವುದರಲ್ಲಿ ತೊಡಗುತ್ತಾರೆ, ಆದ್ದರಿಂದ ರೈತರಿಗೆ ನಿಜವಾಗಲೂ ನ್ಯಾಯ ಸಿಗಬೇಕಾದರೆ ಎಲ್ಲಾ ರೈತರು ಒಗ್ಗೂಡಬೇಕು. ಹಾಗೆ ಈ ದೇಶದ ಪ್ರತಿ ಗ್ರಾಮಗಳಲ್ಲಿ ರೈತ ಸಂಘಟನೆಗಳಾಗಬೇಕು. ಎಲ್ಲಾ ಮಹಿಳೆಯರು, ಪುರುಷರು ಹಾಗೂ ಯುವಕರು ಪಕ್ಷಾತೀತವಾಗಿ, ಜಾತ್ಯಾತೀತವಾಗಿ ಸಂಘಟನೆ ಮಾಡಿದಾಗ ಮಾತ್ರ ರೈತರ ಉದ್ಧಾರವಾಗಲಿದೆ ಎಂದು ಚೂನಪ್ಪ ಪೂಜೇರಿ ಮಾತನಾಡಿದರು

ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ದೇವರ ಹಿಪ್ಪರಗಿ ತಾಲೂಕಿನ ಹಿಟ್ನಳ್ಳಿ ಗ್ರಾಮ ಘಟಕದ ಉದ್ಘಾಟನಾ ಸಮಾರಂಭ ಉದ್ಘಾಟಿಸಿ ಮಾತನಾಡಿದರು. ಕಳೆದ 30 ವರ್ಷಗಳಿಂದ ಕೃಷಿ ಚಟುವಟಿಕೆಗಳ ವೆಚ್ಚಗಳು 10 ಪಟ್ಟು ಹೆಚ್ಚುತ್ತಲಿವೆ. ಆದರೆ ರೈತರು ಬೆಳೆದ ಎಲ್ಲಾ ಬೆಳೆಗಳಿಗೆ ಯೋಗ್ಯ ಬೆಲೆಗಳಿಲ್ಲದೇ ಮಾಡಿರುವ ಖರ್ಚು ಸಾಲದೇ ಸಾಲದ ಸುಳಿಯಿಂದ ಎದ್ದು ಬರದಾಗದೇ ಪ್ರತಿ ಅರ್ಧಗಂಟೆಗೆ ಒಬ್ಬ ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿದ್ದಾರೆ. ಇದು ನಿಲ್ಲ ಬೇಕಾದರೆ ರೈತರೆಲ್ಲರೂ ಒಂದುಗೂಡಬೇಕು. ಕೃಷಿಯ ಜೊತೆಗೆ ಉಪ ಕಸಬುಗಳನ್ನು ಮಾಡಿ ದಿನನಿತ್ಯ ಆದಾಯ ಬರುವ ಹಾಗೆ ಮಾಡಿಕೊಳ್ಳಬೇಕು. ಅಂದಾಗ ರೈತರು ಸಾಲದಿಂದ ಮುಕ್ತರಾಗುತ್ತಾರೆ ಎಂದರು.



**ಈ ದೇಶದಲ್ಲಿ ಪ್ರತಿಯೊಬ್ಬರು ತುತ್ತು ಅನ್ನ ತಿನ್ನುವ ಮುಂಚೆ ಅನ್ನದಾತನನ್ನು ನೆನೆಯಬೇಕು. ಈ ನಾಡಿನಲ್ಲಿ ಯಾವುದೇ ಫಲಾಪೇಕ್ಷೆ ಇಲ್ಲದೇ ಬೆವರು ಸುರಿಸಿ ಈ ದೇಶದ ಭದ್ರತೆಗೆ, ಅನ್ನವನ್ನು ಬೆಳೆಯುತ್ತಿರುವ ರೈತರನ್ನು ಪೂಜಿಸಬೇಕು. ರೈತರಿಗೆ ಆಗುತ್ತಿರುವ ಅನ್ಯಾಯವನ್ನು ಹೋಗಲಾಡಿಸಬೇಕಾದರೆ ಸಂಘಟಿತರಾಗಬೇಕು**

**-ಡಾ. ಪ್ರಭುಗೌಡ ಪಾಟೀಲ**

## ಶಿಲ್ಪಕಲೆಗೆ ವಿಶ್ವಕರ್ಮರ ಕೊಡುಗೆ ಸ್ಮರಣೀಯ

• **ಉದಯವಾಹಿನಿ ಇಂಡಿ**

ಐಇಂಡಿ ವಿಶ್ವ ಕರ್ಮ ಎಂದರೆ ವಿಶ್ವದ ಸೃಷ್ಟಿಕರ್ತ, ಭಾರತದ ಕಲೆ ಸಂಸ್ಕೃತಿ ಪರಂಪರೆ ಶ್ರೀಮಂತವಾಗಲು ವಿಶ್ವಕರ್ಮ ಸಮುದಾಯದ ಕೊಡುಗೆ ಅಪಾರ ವಿಶ್ವಕರ್ಮ ಉಳಿದರೆ ಸಂಸ್ಕೃತಿ ಕಲೆ ಪರಂಪರೆ ಉಳಿಯಲಿದೆ ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಸಮಾಜದ ಪ್ರಧಾನ ಕಾರ್ಯದರ್ಶಿ ಸುಜೀತ ಲಾಳಸಂಗಿ ಹೇಳಿದರು. ಪಟ್ಟಣದ ಅಗಸಿಯ ಹನುಮಾನ ದೇವಸ್ಥಾನ ಹತ್ತಿರ ವಿಶ್ವಕರ್ಮ ಸಮುದಾಯದಿಂದ ನಡೆದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ವಿಶ್ವಕರ್ಮ ಸಮಾಜದ ಅಧ್ಯಕ್ಷ ರಮೇಶ ಪೊದ್ದಾರ ಮಾತನಾಡಿ ವಸ್ತುವಿಗೆ ಆಕೃತಿ ರೂಪವನ್ನು ನೀಡಿ ವಿಶ್ವವೇ ನೋಡುವಂತೆ ಮಾಡಿ ವಿಶ್ವಕ್ಕೆ ಸುಂದರ ರೂಪ ಕೊಟ್ಟ ಕೀರ್ತಿ ವಿಶ್ವಕರ್ಮ ಸಮಾಜಕ್ಕೆ ಸಲ್ಲುತ್ತದೆ ಎಂದರು.

ಬೇಲೂರ ಹಳೆಬಿಡು ಪಟ್ಟದಕಲ್ಲು ಬದಾಮಿಯಲ್ಲಿನ ಅನೇಕ ದೇವಸ್ಥಾನಗಳ ಕೆತ್ತನೆಯಲ್ಲಿ ವಿಶ್ವಕರ್ಮ ಜನಾಂಗದ ಸೇವೆ ಅಸ್ಮರಣೀಯ ಎಂದರು.

ಬಂಗಾರ ವ್ಯಾಪಾರಸ್ಥ ಸಂಘದ ಅಧ್ಯಕ್ಷ ಸೋಮಶೇಖರ ಬಿರಾದಾರ ಮಾತನಾಡಿದರು. ಸಮಿತಿಯ ಸದಸ್ಯರಾದ ಸಂದೀಪ ಧನಶೆಟ್ಟಿ, ಶ್ರೀಶೈಲ ಅರ್ಜುಣಗಿ, ವಿಜಯಕುಮಾರ ಮಹೀಂದ್ರಕರ, ದೀಲಿಪ ಪತ್ತಾರ, ಬನ್ನಪ್ಪ ಸಾತಲಗಾಂವ, ಚಂದ್ರು ಡಾಂಗೆ ಶಶಿಧರ ಕೊಪ್ಪ ಸಂಜು ಪತ್ತಾರ ಇವರನ್ನು ಸನ್ಮಾನಿಸಲಾಯಿತು.



ಉದಯವಾಹಿನಿ ಚಿತ್ರ

## ಶೈಕ್ಷಣಿಕ ಪ್ರಗತಿ ಪರಿಣಾಮಕಾರಿ ಆಗಲಿ: ಶಾಸಕ ಭರಮಗೌಡ ಕಾಗೆ

### ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಅಧಿಕಾರಿಗಳು ನಿರಂತರ ಸಭೆ, ಶಾಲಾ ಸಂದರ್ಶನ ನಡೆಸಬೇಕು

• **ಉದಯವಾಹಿನಿ ಬೆಳಗಾವಿ**

ಈ ಬಾರಿ ಶೈಕ್ಷಣಿಕ ಸುಧಾರಣೆಗೆ ಪರಿಣಾಮಕಾರಿಯಾಗಿ ಕೆಲಸ ಮಾಡಬೇಕು. ಸಬೂಬು ಹೇಳಿ ವ್ಯವಸ್ಥೆ ಹಾಳು ಮಾಡುವ ಅಧಿಕಾರಿಗಳು, ಸೋಮಾರಿಗಳನ್ನು ಗುರುತಿಸಿ ತಕ್ಕ ಶಾಸ್ತಿ ಮಾಡಬೇಕು' ಎಂದು ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷ, ಶಾಸಕ ಭರಮಗೌಡ (ರಾಜು) ಕಾಗೆ ಅವರು ಹಿರಿಯ ಅಧಿಕಾರಿಗಳಿಗೆ ತಾಕೀತು ಮಾಡಿದರು.

ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರ ನಿರ್ದೇಶನದ ಮೇರೆಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜರುಗಿದ ಪ್ರತ್ಯೇಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು.

'ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ ಅಧಿಕಾರಿಗಳು ನಿರಂತರ ಸಭೆ, ಶಾಲಾ ಸಂದರ್ಶನ ನಡೆಸಬೇಕು. ವಿಶೇಷ ತರಗತಿಗಳ ಆಯೋಜನೆ ಮೂಲಕ ಕಲಿಕಾ ಕೊರತೆ ಗುರುತಿಸಿ, ಸೂಕ್ತ ಮಾರ್ಗದರ್ಶನ ನೀಡಬೇಕು. ಶಾಲೆಗಳಿಗೆ ತ್ವರಿತ ಗತಿಯಲ್ಲಿ ಬೆಂಚು ಒದಗಿಸಲು ಗುತ್ತಿಗೆದಾರರಿಗೆ ಸೂಚನೆ ನೀಡಬೇಕು. ಶಾಲೆಗಳ ಹೊಸ ಕೊಠಡಿಗಳಲ್ಲಿ ಎಲ್ಲಾ ದಿನಗಳಲ್ಲಿ ಸಮರ್ಪಕ ಬೆಳಕು ಇರುವಂತೆ ನೀಲನಕ್ಷೆ ತಯಾರಿಸಬೇಕು. ಚಿಕ್ಕೋಡಿ ಶೈಕ್ಷಣಿಕ ಜಿಲ್ಲಾ ವ್ಯಾಪ್ತಿಯಲ್ಲಿ ಉತ್ತಮವಾಗಿ ಕಾರ್ಯನಿರ್ವಹಿಸದ ಶಿಕ್ಷಕರ ವಿರುದ್ಧ ಕ್ರಮ ವಹಿಸಬೇಕು' ಎಂದು ಸೂಚಿಸಿದರು.

ರಾಜ್ಯ ಸರ್ಕಾರದ ದೆಹಲಿಯ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ ಮಾತನಾಡಿ, ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಬಿಡುಗಡೆ ಆಗುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು, ಔಷಧಗಳ ಕೊರತೆ ಆಗದಂತೆ ನಿಗಾವಹಿಸಬೇಕು. ಯಕ್ಸಂಬ ಪ್ರಾಥಮಿಕ ಆರೋಗ್ಯ ಕೇಂದ್ರ ದುರಸ್ತಿಗೆ ಕೂಡಲೇ ಕ್ರಮ ವಹಿಸಬೇಕು. ಗ್ರಾಮೀಣ ಭಾಗದ ಚಿಕ್ಕ ಮಕ್ಕಳಲ್ಲಿ ಜ್ವರ ಹಾಗೂ ಕೆಮ್ಮು ಕಂಡುಬರುತ್ತಿದ್ದು, ಯಕ್ಸಂಬ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ನುರಿತ ವೈದ್ಯರ ಜೊತೆಗೆ ಮಕ್ಕಳ ತಜ್ಞರನ್ನು ಶೀಘ್ರವೇ ನಿಯೋಜಿಸಬೇಕು. ತಜ್ಞ ವೈದ್ಯರ ವೇತನಕ್ಕೆ ಸಂಬಂಧಿಸಿದಂತೆ ವೈಯಕ್ತಿಕವಾಗಿ ಅಗತ್ಯದ ಅನುದಾನವನ್ನು ನೀಡುತ್ತೇನೆ' ಎಂದು ತಿಳಿಸಿದರು.

'ಚಿಕ್ಕೋಡಿ ಶೈಕ್ಷಣಿಕ ಜಿಲ್ಲೆಯ ಪದವಿಪೂರ್ವ ಶಿಕ್ಷಣ ಇಲಾಖೆ ಕಚೇರಿಯ ಕಟ್ಟಡ ನಿರ್ಮಾಣಕ್ಕೆ ಅನುದಾನ ನೀಡಲಾಗಿದ್ದು, ಶೀಘ್ರ ಕಾಮಗಾರಿ ಪ್ರಾರಂಭಿಸಬೇಕು. ಸದಲಗಾದ ಕೇಂದ್ರೀಯ ವಿದ್ಯಾಲಯದಲ್ಲಿ ಮಕ್ಕಳ ಹಾಜರಾತಿ ಹೆಚ್ಚಿಸಲು ಕ್ರಮ ವಹಿಸಬೇಕು' ಎಂದರು. ಎಲ್ಲಾ ತಾಲ್ಲೂಕುಗಳಲ್ಲಿ ಅಕ್ಕ ಕೆಫೆ ಪ್ರಾರಂಭಿಸಲು ಕ್ರಮವಹಿಸಲಾಗುತ್ತಿದೆ. ದಸರಾ ಕ್ರೀಡಾಕೂಟಗಳನ್ನು ವ್ಯವಸ್ಥಿತವಾಗಿ ಆಯೋಜನೆ ಮಾಡಲಾಗುತ್ತಿದೆ' ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ ಶಿಂಧೆ ತಿಳಿಸಿದರು.

ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷ, ಶಾಸಕ ಮಹಾಂತೇಶ ಕೌಜಲಗಿ, ಶಾಸಕ ಆಸೀಫ್ ಸೇಠ್, ನಗರ ಪೊಲೀಸ್ ಕಮಿಷನರ್ ಭೂಷಣ ಬೊರಸೆ, ನಾಮನಿರ್ದೇಶಿತ ಸದಸ್ಯರು ಚರ್ಚೆಯಲ್ಲಿ ಪಾಲ್ಗೊಂಡರು.

ಸಭೆಯ ಬಳಿಕ, ಅನುಕಂಪದ ಆಧಾರದಲ್ಲಿ ಗ್ರಾಮ ಪಂಚಾಯತಿಗಳಿಗೆ ನೇಮಕಗೊಂಡ ಫಲಾನುಭವಿಗಳು ನೇಮಕಾತಿ ಆದೇಶ ಪತ್ರ ಹಾಗೂ ತಾಲ್ಲೂಕು ಸಂಜೀವಿನಿ ಯೋಜನೆಯಡಿ ಎನ್.ಆರ್.ಎಲ್.ಎಂ ಸಿಬ್ಬಂದಿಗೆ ಲ್ಯಾಪ್‌ಟಾಪ್ ಗಳನ್ನು ವಿತರಿಸಲಾಯಿತು.

**ಪ್ರಗತಿ ಪರಿಶೀಲನಾ ಸಭೆ**



ಉದಯವಾಹಿನಿ ಚಿತ್ರ

**ಜಿಲ್ಲೆಯಲ್ಲಿ ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆಯರು ಸಹಾಯಕಿಯರ ಹುದ್ದೆಗಳ ಭರ್ತಿಗೆ ತ್ವರಿತವಾಗಿ ಕ್ರಮ ವಹಿಸಬೇಕು.**

**-ಮಹಾಂತೇಶ ಕೌಜಲಗಿ ಅಧ್ಯಕ್ಷ ರಾಜ್ಯ ಹಣಕಾಸು ಸಂಸ್ಥೆ**



# ಪಾದರಸದಂತ ವ್ಯಕ್ತಿತ್ವ

## ದಣಿವರಿಯದ ನಾಯಕ ಪ್ರಧಾನಿ ಮೋದಿ ಅವರಿಗೆ ಜನ್ಮದಿನ ಶುಭಾಶಯ ಕೋರುತ್ತಿರುವ ಅಭಿಮಾನಿಗಳು.

**ಮೋದಿ 75ನೇ ವಸಂತಕ್ಕೆ**

**ಹೊಸದಿಲ್ಲಿ:** ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬುಧವಾರ ತಮ್ಮ 75ನೇ ಜನ್ಮದಿನವನ್ನು ಆಚರಿಸಿಕೊಳ್ಳುತ್ತಿದ್ದಾರೆ. ಪ್ರಧಾನಿ ಮೋದಿ ಅವರಿಗೆ ಆಡಳಿತ ಪಕ್ಷ ಮತ್ತು ವಿಪಕ್ಷ ನಾಯಕರು ಜನ್ಮದಿನದ ಶುಭಾಶಯ ತಿಳಿಸಿದ್ದಾರೆ.

ಸೈದ್ಧಾಂತಿಕ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟ, ರಾಜಕೀಯ ನಾಯಕರು ಪ್ರಧಾನಿ ಮೋದಿ ಅವರಿಗೆ ಜನ್ಮದಿನದ ಶುಭಾಶಯ ಸಂದೇಶ ಕಳುಹಿಸಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರಧಾನಿ ಮೋದಿ ಅವರಿಗೆ ಜನ್ಮದಿನದ ಶುಭಾಶಯ ತಿಳಿಸಿದ್ದು, ಜಾಗತಿಕ ನಾಯಕರೂ ಶುಭಾಶಯ ಸಂದೇಶಗಳನ್ನು ಕಳುಹಿಸಿದ್ದಾರೆ. ಭೌಗೋಳಿಕ ರಾಜಕಾರಣದ ಭೂಪಟದಲ್ಲಿ ಭಾರತಕ್ಕೆ ಮಹತ್ವದ ಸ್ಥಾನ ಲಭಿಸುವಲ್ಲಿ ಪ್ರಧಾನಿ ಮೋದಿ ಅವರ ಪಾತ್ರವನ್ನು, ಜಾಗತಿಕ ನಾಯಕರು ಕೊಂಡಾಡುತ್ತಿದ್ದಾರೆ. ಪ್ರಧಾನಿ ಮೋದಿ 75ನೇ ವಸಂತಕ್ಕೆ ಕಾಲಿಟ್ಟಿದ್ದಾರೆ. ಆದರೆ ಅವರ ದಣಿವರಿಯದ ಕಾರ್ಯವೈಖರಿ ಅವರ ಪ್ರಶಂಸಕರನ್ನು ಮಾತ್ರವಲ್ಲದೇ ವಿರೋಧಿಗಳನ್ನೂ ಆಶ್ಚರ್ಯಚಕಿತಗೊಳಿಸುತ್ತದೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ ಪ್ರಚಾಕರಾಗಿ ಕಾಲಿಗೆ ಚಕ್ರ ಕಟ್ಟಿಕೊಂಡವಂತೆ ದೇಶ ಸುತ್ತುತ್ತಿದ್ದ ನರೇಂದ್ರ ಮೋದಿ, ಭಾರತದ ಪ್ರಧಾನಿಯಾದ ಬಳಿಕವೂ ಅದೇ ಹುಮ್ಮಸ್ಸಿನಲ್ಲಿ ಕರ್ತವ್ಯ ನಿಭಾಯಿಸುತ್ತಿದ್ದಾರೆ. ಅದು ಚುನಾವಣಾ ಪ್ರಚಾರವಾಗಿರಲಿ, ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆಯಾಗಿರಲಿ, ಪ್ರಧಾನಿ ಮೋದಿ ಅವರು ದೇಶದ್ಯಾಂತ ಪ್ರವಾಸ ಮಾಡಿ ತಮ್ಮ ಉಪಸ್ಥಿತಿಯನ್ನು ಖಾತರಿಪಡಿಸುತ್ತಾರೆ. 75ನೇ ವಯಸ್ಸಿನಲಿ ಅವರು ತೋರುವ ಈ ಉತ್ಸಾಹ, ಪ್ರಧಾನಿ ಮೋದಿ ನಿವೃತ್ತಿ ಕುರಿತ ಚರ್ಚೆಗಳಿಗೆ ಯಾವುದೇ ಮಾನ್ಯತೆ ಇಲ್ಲ ಎಂಬುದನ್ನು ಸಾಬೀತುಪಡಿಸುತ್ತವೆ.

ಹಾಗೆ ನೋಡಿದರೆ ಪ್ರಧಾನಿ ಮೋದಿ ಅವರ ವಿದೇಶ ಪ್ರವಾಸಗಳನ್ನು ಅವರ ರಾಜಕೀಯ ವಿರೋಧಿಗಳು ಟೀಕಿಸುವುದುಂಟು.

ಆದರೆ ಅವರ ವಿದೇಶ ಪ್ರವಾಸಗಳು ಜಾಗತಿಕ ವೇದಿಕೆಯಲ್ಲಿ ಭಾರತವನ್ನು ಸಮರ್ಥವಾಗಿ ಪ್ರತಿನಿಧಿಸಲು ಸಹಕಾರಿಯಾಗಿವೆ ಎಂಬುದು ಕೂಡ ಸತ್ಯ. ಜಾಗತಿಕ ವೇದಿಕೆಯಲ್ಲಿಭಾರತದ ಧ್ವನಿ ಈಗ ಹಿಂದೆಂದಿಗಿಂತಲೂ ಗಟ್ಟಿಯಾಗುತ್ತಿದ್ದು, ಇದಕ್ಕೆ ಪ್ರಧಾನಿ ಮೋದಿ ಅವರು ನೀಡಿದ ನಾಯಕತ್ವ ಪ್ರಮುಖ ಕಾರಣವಾಗಿದೆ. ತಮ್ಮ ರಾಜಕೀಯದ ಆರಂಭದ ದಿನಗಳಿಂದಲೂ ಪ್ರಧಾನಿ ಮೋದಿ ಅವರು ಪಾದರಸದಂತೆ ಕೆಲಸ ಮಾಡುತ್ತಾ ಬಂದಿರುವುದನ್ನು ಕಾಣಬಹುದು. 1990ರಲ್ಲಿ ಅವರು ಗುಜರಾತ್‌ನಿಂದ ಸೋಮನಾಥ-ಅಯೋಧ್ಯೆ ರಥಯಾತ್ರೆಯನ್ನು ಆಯೋಜಿಸುವಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದ್ದರು. ದೇಶದ ಪ್ರಧಾನಿ ಆಗಿ ಕಳೆದ 11 ವರ್ಷಗಳಲ್ಲಿ ಪ್ರಧಾನಿ ಮೋದಿ ಅನೇಕ ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದಾರೆ. ಅಲ್ಲದೇ ಈ ಕಾರ್ಯಕ್ರಮಗಳ ಪ್ರಯೋಜನ ಜನರಿಗೆ ತಲುಪಿದೆ ಎಂಬುದನ್ನು ಖಾತರಿ ಪಡಿಸಿಕೊಳ್ಳಲು ಖುದ್ದು ದೇಶಾದ್ಯಂತ ಪ್ರವಾಸ ಮಾಡಿದ್ದಾರೆ.

ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಹೀಗೆ ಭಾರತದ ಮೂಲೆ ಮೂಲೆಯನ್ನೂ ತಲುಪಿರುವ ಪ್ರಧಾನಿ ಮೋದಿ, ಜನನಾಯಕನಾಗಿ ಬೆಳೆದು ಬಂದ ಪರಿ ಅನನ್ಯ. ತಮ್ಮ ಕಾರ್ಯವೈಖರಿಯಿಂದ ರಾಜಕೀಯ ವಿರೋಧಿಗಳಿಗೂ ಇಷ್ಟವಾಗುವ ಪ್ರಧಾನಿ ಮೋದಿ, ಇದೇ ಕಾರಣಕ್ಕೆ ಇಂದು ಎಲ್ಲಾ ರಾಜಕೀಯ ನಾಯಕರಿಂದಲೂ ಜನ್ಮದಿನದ ಶುಭಾಶಯಗಳನ್ನು ಸ್ವೀಕರಿಸುತ್ತಿದ್ದಾರೆ. ಪ್ರಧಾನಿ ಮೋದಿ ಅವರ ಜನ್ಮದಿನ ವೈಶಿಷ್ಟ್ಯಪೂರ್ಣವಾಗಿ ಆಚರಿಸಲಾಗುತ್ತಿದೆ.

**ದಣಿವರಿಯದ ನಾಯಕತ್ವ**

**ಆರ್‌ಎಸ್‌ಎಸ್ ಪ್ರಚಾಕರಾಗಿ ಪ್ರಧಾನಿ ಮೋದಿ ತೋರುತ್ತಿದ್ದ ಉತ್ಸಾಹ, ಈಗಲೂ ಎಳ್ಳಷ್ಟು ಕಡಿಮೆ ಆಗದಿರುವುದು ವಿಶೇಷ ಸಂಗತಿ. ನಿರಂತರ ಪ್ರಯಾಣಗಳಿಂದಲೂ ದಣಿವರಿಯದೇ ಪ್ರಧಾನಿ ಮೋದಿ ಭಾರತಕ್ಕಾಗಿ ಕೆಲಸ ಮಾಡುತ್ತಿರುವುದನ್ನು ಅವರ ವಿರೋಧಿಗಳೂ ಒಪ್ಪುತ್ತಾರೆ. ನಿರಂತರ ಪ್ರಯಾಣ ಪ್ರಧಾನಿ ಮೋದಿ ಅವರ ರಾಜಕೀಯದ ಅವಿಭಾಜ್ಯ ಅಂಗ. ಆರ್‌ಎಸ್‌ಎಸ್ ಪ್ರಚಾರಕರಾಗಿ, ದೇಶದ ಪ್ರಧಾನಿಯಾಗಿ ಅವರು ಭಾರತದ ಮೂಲೆ ಮೂಲೆಯನ್ನೂ ತಲುಪಿದ್ದಾರೆ. ಈಗಲೂ ಅವರು ದೇಶಾದ್ಯಂತ ಪ್ರವಾಸ ಮಾಡುವಲ್ಲಿ ದೇಶದ ಇತರ ರಾಜಕೀಯ ನಾಯಕರಿಗಿಂತ ಒಂದು ಹೆಜ್ಜೆ ಮುಂದಿದ್ದಾರೆ.**

**ದೇಶದ ನಾಗಾಲೋಟಕ್ಕೆ ಮುನ್ನುಡಿ**

**1991-92ರಲ್ಲಿ ಏಕತಾ ಯಾತ್ರೆ ನೇತೃತ್ವವಹಿಸಿದ್ದ ಪ್ರಧಾನಿ ಮೋದಿ, ಶ್ರೀನಗರದ ಲಾಲ್‌ಚೌಕ್‌ನಲ್ಲಿ ಭಾರತದ ತ್ರಿವರ್ಣ ಧ್ವಜ ಹಾರಿಸುವಲ್ಲಿ ಯಶಸ್ವಿಯಾಗಿದ್ದರು. ಅದೇ ರೀತಿ 2002ರಲ್ಲಿ ಮೊದಲ ಬಾರಿಗೆ ಗುಜರಾತ್ ಸಿಎಂಆದಾಗ, ಗುಜರಾತ್ ಗೌರವ ಯಾತ್ರೆಯನ್ನು ಆರಂಭಿಸಿ, ಭೂಕಂಪನದಿಂದ ಜರ್ಜರಿತವಗಿದ್ದ ರಾಜ್ಯದ ಮನೋಬಲವನ್ನು ಹೆಚ್ಚಿಸಿದ್ದರು. 2010ರಲ್ಲಿ ಮುಖ್ಯಮಂತ್ರಿಯಾಗಿ ಪ್ರಧಾನಿ ಮೋದಿ ಅವರು ಗುಜರಾತ್ ಸ್ವರ್ಣಿಮ್ ಯಾತ್ರೆಯ ನೇತೃತ್ವವಹಿಸಿದ್ದ ನರೇಂದ್ರ ಮೋದಿ, ಗುಜರಾತ್ ಅಭಿವೃದ್ಧಿ ಮಾದರಿಯನ್ನು ದೇಶಕ್ಕೆ ಪರಿಚಯಿಸಿದ್ದರು. ಭಾರತದ ಪ್ರಧಾನಮಂತ್ರಿಯಾದ ಬಳಿಕವೂ ನರೇಂದ್ರ ಮೋದಿ ಅವರು ದೇಶಾದ್ಯಂತ ಪ್ರವಾಸ ಕೈಗೊಳ್ಳುತ್ತಿದ್ದು, ಅಭಿವೃದ್ಧಿ ಯೋಜನೆಗಳ ಮೂಲಕ ದೇಶದ ನಾಗಾಲೋಟಕ್ಕೆ ಮುನ್ನುಡಿ ಬರೆಯುತ್ತಿದ್ದಾರೆ.**

## ಮಿನಿ ನ್ಯೂಸ್

### ಮಲಪ್ಪುರಂನ ಮನೆಯೊಂದರಲ್ಲಿ ಸಂಗ್ರಹಿಸಲಾಗಿದ್ದ ಶಸ್ತ್ರಾಸ್ತ್ರ ವಶ

**ಮಳ್ಳಾಪುರ:** ಇಲ್ಲಿನ ಮನೆಯೊಂದರ ಮೇಲೆ ಪೊಲೀಸರು ದಾಳಿ ನಡೆಸಿ ಅಪಾರ ಪ್ರಮಾಣದ ಶಸ್ತ್ರಾಸ್ತ್ರಗಳ ಸಂಗ್ರಹವನ್ನು ಪತ್ತೆಮಾಡಿದ್ದಾರೆ. ಮನೆಯ ಮಾಲೀಕ ಉನ್ನಿಕಮದ್(65)ನನ್ನುಬಂಧಿಸಲಾಗಿದ್ದು ಬೃಹತ್ ಪ್ರಮಾಣದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಪೊಲೀಸರು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಎಡವಣ್ಣ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಗೌಪ್ಯ ಮಾಹಿತಿಯ ಆಧಾರದ ಮೇಲೆ ದಾಳಿ ನಡೆಸಿದ ಪೊಲೀಸರು ಆರೋಪಿಯ ನಿವಾಸದಿಂದ 20 ಏರ್ ಗನ್‌ಗಳು, ಮೂರು ರೈಫಲ್‌ಗಳು, ಸುಮಾರು 200 ಗುಂಡುಗಳು, 40 ಪೆಲೆಟ್ ಬಾಕ್ಸ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಘಟನೆಗೆ ಸಂಬಂಧಿಸಿದಂತೆ ತನಿಖೆ ಆರಂಭಿಸಲಾಗಿದ್ದು, ಆ ಶಸ್ತ್ರಾಸ್ತ್ರಗಳು ಮಾರಾಟಕ್ಕೆ ಅಥವಾ ವೈಯಕ್ತಿಕ ಬಳಕೆಗೆ ಉದ್ದೇಶಿಸಲಾಗಿದೆಯೇ, ಆರೋಪಿ ಬಂದೂಕುಗಳು, ಮದ್ದುಗುಂಡುಗಳನ್ನು ಎಲ್ಲಿಂದ ಖರೀದಿಸಿದ್ದಾನೆ ಎಂಬುದನ್ನು ಕಂಡುಹಿಡಿಯಬೇಕಿದೆ ಎಂದು ಪೊಲೀಸರು ತಿಳಿಸಿದ್ದಾರೆ.

### ಗಡ್ಚಿರೋಲಿ ಎನ್‌ಕೌಂಟರ್‌ನಲ್ಲಿ ಇಬ್ಬರು ಮಹಿಳಾ ನಕ್ಸಲರು ಬಲಿ

**ಮುಂಬೈ:** ಮಹಾರಾಷ್ಟ್ರದ ಗಡ್ಚಿರೋಲಿಯಲ್ಲಿ ಭದ್ರತಾ ಪಡೆ ಹಾಗೂ ಮಹಿಳಾ ನಕ್ಸಲರ ನಡುವೆ ನಡೆದ ಗುಂಡಿನ ಚಕಮಕಿಯಲ್ಲಿ ಇಬ್ಬರು ಮಹಿಳಾ ನಕ್ಸಲರು ಸಾವನ್ನಪ್ಪಿದ್ದಾರೆ. ಮಹಾರಾಷ್ಟ್ರದ ಎಟಪಲ್ಲಿ ತಾಲ್ಲೂಕಿನ ಮೋಡಸ್ಕೆ ಗ್ರಾಮದ ಪಕ್ಕದಲ್ಲಿರುವ ಕಾಡಿನಲ್ಲಿ ಬುಧವಾರ ಬೆಳಗ್ಗೆ ಎನ್‌ಕೌಂಟರ್ ನಡೆದಿದೆ. ಅಧಿಕಾರಿಗಳ ಮಾಹಿತಿ ಪ್ರಕಾರ, ಮೋಡಸ್ಕೆ ಗ್ರಾಮದ ಪಕ್ಕದಲ್ಲಿರುವ ಕಾಡಿನಲ್ಲಿ ಮಾವೋವಾದಿಗಳ ಗಟ್ಟಾ ಲಾಸ್ ಎಂಬ ಸ್ಥಳೀಯ ಸಂಘಟನಾ ತಂಡದ ಕೆಲವು ಸದಸ್ಯರು ಬೀಡುಬಿಟ್ಟಿದ್ದ ಬಗ್ಗೆ ಪೊಲೀಸರಿಗೆ ಮಾಹಿತಿ ಬಂದಿತ್ತು.

ಮಾಹಿತಿ ಆಧಾರದ ಮೇಲೆ ಗಡ್ಚಿರೋಲಿ ಪೊಲೀಸರ ವಿಶೇಷ ನಕ್ಸಲ್ ವಿರೋಧಿ ಕಮಾಂಡೋ ಸ್ಕ್ವಾಡ್, ಅ-60ಯ ಐದು ಘಟಕಗಳೊಂದಿಗೆ ಪೊಲೀಸರು ಅಹೇರಿ ಗ್ರಾಮದಿಂದ ಕಾರ್ಯಾಚರಣೆ ಪ್ರಾರಂಭಿಸಿದರು. ಜೊತೆಗೆ ಸಿಆರ್‌ಪಿಎಫ್ ಈ ಕಾರ್ಯಾಚರಣೆಗೆ ಸಹಾಯ ಮಾಡಿತು. ಈ ವೇಳೆ ನಕ್ಸಲರು ಹಾಗೂ ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ನಡೆದಿದೆ ಎಂದು ತಿಳಿಸಿದ್ದಾರೆ. ಎನ್‌ಕೌಂಟರ್ ಬಳಿಕ ನಡೆದ ಶೋಧ ಕಾರ್ಯಾಚರಣೆಯಲ್ಲಿ ಇಬ್ಬರು ಮಹಿಳಾ ನಕ್ಸಲರ ಶವ ಪತ್ತೆಯಾಗಿದೆ. ಜೊತೆಗೆ ಸ್ವಯಂಚಾಲಿತ ಎಕೆ-47 ರೈಫಲ್, ಪಿಸ್ತೂಲ್, ಜೀವಂತ ಮದ್ದುಗುಂಡುಗಳು ಸೇರಿದಂತೆ ಕೆಲವು ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

### ಪ್ರಧಾನಿ ತಾಯಿಯ ಎಐ ವಿಡಿಯೋ ತೆಗೆದುಹಾಕಿ: ಹೈಕೋರ್ಟ್ ಸೂಚನೆ

**ಪಾಟ್ನಾ:** ಪ್ರಧಾನಿ ನರೇಂದ್ರ ಮೋದಿಯವರ ದಿವಂಗತ ತಾಯಿ ಹೀರಾಬೆನ್ ಮೋದಿ ಅವರ ಕುರಿತಾದ ಎಐ ಆಧಾರಿತ ವಿಡಿಯೋವನ್ನು ಎಲ್ಲಾ ಸಾಮಾಜಿಕ ಮಾಧ್ಯಮ ವೇದಿಕೆಗಳಿಂದ ತೆಗೆದುಹಾಕುವಂತೆ ಪಾಟ್ನಾ ಹೈಕೋರ್ಟ್ ಕಾಂಗ್ರೆಸ್‌ಗೆ ಸೂಚಿಸಿದೆ. ಬಿಹಾರ ಕಾಂಗ್ರೆಸ್ ಪೋಸ್ಟ್ ಮಾಡಿದ ಕೃತಕ ಬುದ್ಧಿಮತ್ತೆ ಆಧಾರಿತ ವಿಡಿಯೋ ಭಾರೀ ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು. ಪ್ರಕರಣದ ವಿಚಾರಣೆ ನಡೆಸಿದ ಕೋರ್ಟ್, ಕಾಂಗ್ರೆಸ್‌ಗೆ ಸೂಚನೆ ನೀಡಿದೆ. ವಿರೋಧ ಪಕ್ಷವು ಪ್ರಧಾನಿಯವರ ದಿವಂಗತ ತಾಯಿಗೆ ಅಗೌರವ ತೋರಿದೆ ಎಂದು ಬಿಜೆಪಿ ಆರೋಪಿಸಿತ್ತು. ವಿಡಿಯೋದಲ್ಲಿ ಎಲ್ಲಿಯೂ ಹೀರಾಬೆನ್ ಮೋದಿಗೆ ಅಗೌರವ ತೋರಿಲ್ಲ ಎಂದು ಕಾಂಗ್ರೆಸ್ ಸಮರ್ಥಿಸಿಕೊಂಡಿತ್ತು.

### ಒಳನುಸುಳುಕೋರರನ್ನು ರಕ್ಷಿಸಲು ಕೈ ಮತದಾರರ ಅಧಿಕಾರ ಯಾತ್ರೆ ನಡೆಸಿತು

**ನವದೆಹಲಿ:** ಬಿಹಾರದಲ್ಲಿ ಕಾಂಗ್ರೆಸ್ ನಡೆಸಿದ ಮತದಾರರ ಅಧಿಕಾರ ಯಾತ್ರೆಯನ್ನು ಟೀಕಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ವಿರೋಧ ಪಕ್ಷವು ನುಸುಳುಕೋರರ ರಕ್ಷಣೆಗಾಗಿ ರ್‍ಯಾಲಿ ನಡೆಸಿತು. ಅವರ ಸಹಾಯದಿಂದ ಚುನಾವಣೆ ಗೆಲ್ಲಲು ಅದು ಬಯಸುತ್ತಿದೆ ಎಂದಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ 75ನೇ ಹುಟ್ಟುಹಬ್ಬದ ಸಂದರ್ಭದಲ್ಲಿ ದೆಹಲಿ ಸರ್ಕಾರದ 17 ಸಾರ್ವಜನಿಕ ಕಲ್ಯಾಣ ಯೋಜನೆಗಳನ್ನು ಅವರು ಉದ್ಘಾಟಿಸಿದರು. ರಾಹುಲ್ ಬಾಬಾ ಮತ್ತು ಕಾಂಗ್ರೆಸ್ ಪಕ್ಷವು ಒಳನುಸುಳುಕೋರರನ್ನು ರಕ್ಷಿಸಲು ಯಾತ್ರೆ ನಡೆಸಿತು. ಭಾರತದ ಜನರನ್ನು ನಂಬದ ಕಾರಣ ಅವರು ಒಳನುಸುಳುಕೋರರು ನಮ್ಮ ಮತದಾರರ ಪಟ್ಟಿಯಲ್ಲಿ ಉಳಿಯಬೇಕೆಂದು ಬಯಸುತ್ತಾರೆ. ಕಾಂಗ್ರೆಸ್ಸಿಗರು ಒಳನುಸುಳುಕೋರರ ಸಹಾಯದಿಂದ ಚುನಾವಣೆಗಳನ್ನು ಗೆಲ್ಲಲು ಬಯಸುತ್ತಾರೆ. ಮತದಾರರ ಪಟ್ಟಿಯನ್ನು ಶುದ್ಧೀಕರಿಸಲು ಬಿಜೆಪಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಯನ್ನು ಬೆಂಬಲಿಸುತ್ತದೆ ಎಂದಿದ್ದಾರೆ.

ಈ ವರ್ಷ ಚುನಾವಣೆ ನಡೆಯಲಿರುವ ಬಿಹಾರದಲ್ಲಿ ಚುನಾವಣಾ ಆಯೋಗ ನಡೆಸಿದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ವಿರುದ್ಧದ ಪ್ರತಿಭಟನೆಯನ್ನು ಗುರುತಿಸಲು ಕಾಂಗ್ರೆಸ್ ಬಿಹಾರದಲ್ಲಿ 14 ದಿನಗಳು ಮತ್ತು 1,300 ಕಿಮೀ ಮತದಾರರ ಅಧಿಕಾರ ಯಾತ್ರೆಯನ್ನು ನಡೆಸಿತು. ಜನರ ಮತದಾನದ ಹಕ್ಕನ್ನು ಕಸಿಯುವ ದುರುದ್ದೇಶದಿಂದ ಚುನಾವಣಾ ಆಯೋಗ ಈ ಪರಿಷ್ಕರಣೆ ನಡೆಸಿದೆ ಎಂದು ಕಾಂಗ್ರೆಸ್ ಆರೋಪಿಸಿತ್ತು. ಇದೇ ವೇಳೆ, ಮೋದಿ ಸರ್ಜಿಕಲ್ ಸ್ಟ್ರೈಕ್, ವಾಯುದಾಳಿ ಮೂಲಕ ದೇಶದ ಭದ್ರತೆಯನ್ನು ಖಚಿತಪಡಿಸಿದ್ದಾರೆ. ಆಪರೇಷನ್ ಸಿಂಧೂರ ಮೂಲಕ ಪಾಕಿಸ್ತಾನಕ್ಕೆ ತಕ್ಕ ಉತ್ತರ ನೀಡಿದ್ದಾರೆ ಎಂದು ಅಮಿತ್ ಶಾ ಹೇಳಿದ್ದಾರೆ.

### ಮೇಘಸ್ಫೋಟ; ಸಾವಿನ ಸಂಖ್ಯೆ 21ಕ್ಕೆ ಏರಿಕೆ, 14 ಮಂದಿ ನಾಪತ್ತೆ

**ಲಖನೌ:** ಉತ್ತರಾಖಂಡಲ್ಲಿ ಸಂಭವಿಸಿದ ಮೇಘಸ್ಫೋಟ ಮತ್ತು ಭಾರಿ ಮಳೆಯಿಂದಾಗಿ ಮೃತಪಟ್ಟವರ ಸಂಖ್ಯೆ ಬುಧವಾರ 21ಕ್ಕೆ ಏರಿಕೆಯಾಗಿದೆ. 14 ಮಂದಿ ನಾಪತ್ತೆಯಾಗಿದ್ದಾರೆ. ರಾಯಪುರದ ಸಂಗ್ ನದಿಯಲ್ಲಿ ಎರಡು ಮೃತದೇಹ ಮತ್ತು ಅಸನ್ ನದಿಯಲ್ಲಿ ಒಂದು ಮೃತದೇಹ ಪತ್ತೆಯಾಗಿದೆ ಎಂದು ವರದಿಗಳು ತಿಳಿಸಿವೆ. ಸಹಸ್ತ್ರಧಾರ ಬಳಿಯ ಫುಲೆಟ್ ಗ್ರಾಮದಲ್ಲಿ ಆರು ಮಂದಿ ಅವಶೇಷಗಳಡಿ ಸಿಲುಕಿದ್ದಾರೆ. ಪ್ರವಾಹ ಪೀಡಿತ ಗ್ರಾಮಗಳಾದ ಮಜಡಾ, ಚಹಮ್ ಸರಿ ಮತ್ತು ಜಮಡಾದಲ್ಲಿನ ನಿವಾಸಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಹಲವಾರು ಕಡೆ ಭೂಕುಸಿತ ಸಂಭವಿಸಿ, ರಸ್ತೆಗಳಿಗೆ ಅಪಾರ ಹಾನಿಯಾಗಿರುವುದರಿಂದ ಡೆಹ್ರಾಡೂನ್‌ನಿಂದ ಪ್ರಸಿದ್ಧ ಪ್ರವಾಸಿತಾಣಗಳಾದ ಮುಸ್ಸೋರಿ, ಸಹಸ್ತ್ರಧಾರಕ್ಕೆ ಬುಧವಾರವೂ ವಾಹನ ಸಂಚಾರ ಸ್ಥಗಿತಗೊಂಡಿದೆ.


ಬದರೀನಾಥ ಹೆದ್ದಾರಿಯಲ್ಲಿ ವಾಹನವೊಂದು ಮಗುಚಿಬಿದ್ದ ಪರಿಣಾಮ ಏಳು ಮಂದಿಗೆ ಗಾಯಗಳಾಗಿದ್ದು, ಒಬ್ಬರು ನಾಪತ್ತೆಯಾಗಿದ್ದಾರೆ. ಮುಂಜಾನೆ ಸಂಭವಿಸಿದ ಮೇಘಸ್ಫೋಟ, ಮಳೆಯಿಂದಾಗಿ ಡೆಹ್ರಾಡೂನ್ ಮತ್ತು ಸುತ್ತಮುತ್ತಲಿನ ಸ್ಥಳಗಳಲ್ಲಿ ಭಾರಿ ಹಾನಿಯಾಗಿದೆ.

## ಬಂದೂಕುಗಳು, ಮದ್ದುಗುಂಡುಗಳ ತಪಾಸಣೆ ವಿಳಂಬ

**ಪುಣೆ:** ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಸ್ಪರ್ಧಿಸಲು ಗೋವಾಕ್ಕೆ ತೆರಳಲು ಪುಣೆಯ ಆರು ರೈಫಲ್, ಪಿಸ್ತೂಲ್ ಶೂಟರ್‌ಗಳು ಇಲ್ಲಿನ ಪುಣೆ ವಿಮಾನ ನಿಲ್ದಾಣದಲ್ಲಿ ಭದ್ರತಾ ತಪಾಸಣೆಯ ಸಮಯದಲ್ಲಿ ತಮ್ಮ ಬಂದೂಕುಗಳು, ಮದ್ದುಗುಂಡುಗಳ ತಪಾಸಣೆ ವಿಳಂಬವಾದ ಕಾರಣ ತಮ ವಿಮಾನ ಪ್ರಯಾಣ ತಪ್ಪಿಸಿಕೊಂಡಿದ್ದಾರೆ. 18 ವರ್ಷದೊಳಗಿನ ಶೂಟರ್‌ಗಳೆಲ್ಲರೂ ಗೋವಾದಲ್ಲಿ ನಡೆಯಲಿರುವ 12ನೇ ಪಶ್ಚಿಮ ವಲಯ ಶೂಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಭಾಗವಹಿಸಲು ಅಕಾಸಾ ಏರ್ ವಿಮಾನದಲ್ಲಿ ಹಾರಾಟ ನಡೆಸಬೇಕಿತ್ತು.

ಈ ಸಂಚಿಕೆಗೆ ಪ್ರತಿಕ್ರಿಯಿಸಿದ ಅಕಾಸಾ ಏರ್ ವಿಶೇಷ ಶೂಟಿಂಗ್ ಉಪಕರಣಗಳನ್ನು ಒಳಗೊಂಡಿರುವ ಅವರ ಸಾಮಾನುಗಳನ್ನು ಒಳಗೊಂಡ ವಿಸ್ತೃತ ಭದ್ರತಾ ಕಾರ್ಯವಿಧಾನಗಳು ಕಾರಣ ಶೂಟರ್‌ಗಳು ವಿಮಾನ ಹತ್ತಲು ಸಾಧ್ಯವಾಗಲಿಲ್ಲ ಎಂದು ಹೇಳಿದೆ. ಅದರ ವಿಮಾನಯಾನ ಸಿಬ್ಬಂದಿ ಅಗತ್ಯ ಸಹಾಯವನ್ನು ನೀಡುತ್ತಿವೆ, ಪರ್ಯಾಯ ಪ್ರಯಾಣ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ ಎಂದು ಹೇಳಿದರು.

ಕ್ರೀಡಾಪಟುಗಳು ಒಲಿಂಪಿಯನ್ ಗಗನ್ ನಾರಂಗ್ ಸ್ಥಾಪಿಸಿದ ಶೂಟಿಂಗ್ ಅಕಾಡೆಮಿಯಾದ ಗನ್ ಫಾರ್ ಗ್ಲೋರಿಯಿಂದ ಬಂದಿದ್ದರು. ಸ್ಪರ್ಧಿಯೊಬ್ಬರ ತಂದೆ ಅತುಲ್ ಕ್ಷೀರಸಾಗರ್ ಮಾಧ್ಯಮದ ಜೊತೆ ಮಾತನಾಡಿ ವಿಮಾನ ಸಂಜೆ 5.30 ಕ್ಕೆ ಹೊರಡಬೇಕಿತ್ತು ಮತ್ತು



ಏಳು ಶೂಟರ್‌ಗಳು ಮತ್ತು ನಾಲ್ವರು ಕುಟುಂಬ ಸದಸ್ಯರು ಮಧ್ಯಾಹ್ನ 2.30 ರಿಂದ 3.30 ರ ನಡುವೆ ವಿಮಾನ ನಿಲ್ದಾಣ ತಲುಪಿದರು ಎಂದು ಹೇಳಿದರು. ಆದಾಗ್ಯೂ, ವಿಮಾನ ನಿಲ್ದಾಣದ ಸಿಬ್ಬಂದಿ ಸಂಜೆ 5 ಗಂಟೆಯವರೆಗೆ ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳ ತಪಾಸನೆ ವಿಳಂಬಗೊಳಿಸಿದರು ಇದರಿಂಸ ಸ್ಪರ್ಧಿಗಳು ತಮೊಂದಿಗೆ ಮದ್ದುಗುಂಡುಗಳನ್ನು ಕೊಂಡೊಯ್ಯಲು ಸಾಧ್ಯವಿಲ್ಲ ಎಂದು ಹೇಳಿದರು. ವಾಸ್ತವದಲ್ಲಿ, ಯಾವುದೇ ಶೂಟರ್ ಗನ್ ಮತ್ತು ಮದ್ದುಗುಂಡುಗಳನ್ನು ಒಟ್ಟಿಗೆ ಕೊಂಡೊಯ್ಯುವುದಿಲ್ಲ.

ಒಬ್ಬ ಹುಡುಗಿ ಶೂಟರ್ ತನ್ನ ಕಿಟ್ ಇಲ್ಲದೆ ವಿಮಾನ ಹತ್ತುವಲ್ಲಿ ಯಶಸ್ವಿಯಾದರು, ಆದರೆ ಇತರ ಆರು ಜನರನ್ನು ತಡೆಹಿಡಿಯಲಾಯಿತು. ನಂತರ ವಿಮಾನವು ಅವರಿಲ್ಲದೆ ವಿಮಾನ ಹೊರಟಿತು ಎಂದು ಅವರು ಹೇಳಿದರು. ಸುಗಮ ಸೌಲಭ್ಯದ ಬದಲು, ಸಿಬ್ಬಂದಿ ಪ್ರಕ್ರಿಯೆಯನ್ನು ವಿಳಂಬ ಮಾಡಿದರು, ಕೌಂಟರ್‌ನಲ್ಲಿ ಸಹಕರಿಸಲಿಲ್ಲ, ಅಂತಿಮವಾಗಿ ಕ್ರೀಡಾಪಟುಗಳು, ತರಬೇತುದಾರರು ಮತ್ತು ಪೋಷಕರಿಗೆ ಬೋರ್ಡಿಂಗ್ ನಿರಾಕರಿಸಿದರು ಎಂದು ಅದು ಹೇಳಿದೆ. ಸರಿಯಾದ ಚೆಕ್-ಇನ್ ಹೊರತಾಗಿಯೂ ಆಕಾಶ ಸಿಬ್ಬಂದಿ ವಿಮಾನ ಹತ್ತಿದ ಒಬ್ಬ ಕ್ರೀಡಾಪಟುವಿನ ರೈಫಲ್ ಅನ್ನು ಪುಣೆ ವಿಮಾನ ನಿಲ್ದಾಣದಲ್ಲಿ ತಡೆಹಿಡಿದಿದ್ದಾರೆ ಎಂದು ಶೂಟಿಂಗ್ ಅಕಾಡೆಮಿ ಆರೋಪಿಸಿದೆ. ಪರ್ಯಾಯ ಪ್ರಯಾಣ ವ್ಯವಸ್ಥೆಗಳನ್ನು ಆಯೋಜಿಸಲಾಗುತ್ತಿದೆ. ಉಂಟಾದ ಅನಾನುಕೂಲತೆಗೆ ನಾವು ಪ್ರಾಮಾಣಿಕವಾಗಿ ವಿಷಾದಿಸುತ್ತೇವೆ ಎಂದು ಅಕಾಸಾ ಏರ್ ತಿಳಿಸಿದೆ.

ಪ್ರಯಾಣಿಕರ ಯೋಗಕ್ಷೇಮವು ನಮ ಪ್ರಮುಖ ಆದ್ಯತೆಯಾಗಿದೆ ಅಗತ್ಯ ಪ್ರೋಟೋಕಾಲ್‌ಗಳು ಸುಗಮ ಮತ್ತು ವಿಶ್ವಾಸಾರ್ಹ ಪ್ರಯಾಣದ ಖಚಿತಪಡಿಸಿಕೊಳ್ಳಲು ನಾವು ಕೆಲಸ ಮಾಡುವುದನ್ನು ಮುಂದುವರಿಸುತ್ತೇವೆ ಎಂದು ವಿಮಾನಯಾನ ಸಂಸ್ಥೆ ತಿಳಿಸಿದೆ.

**ಎರಡನ್ನೂ ಪ್ರತ್ಯೇಕವಾಗಿ ಪ್ಯಾಕ್ ಮಾಡಲಾಗುತ್ತದೆ ಮತ್ತು ಕ್ಲಿಯರೆನ್ಸ್ ಸಮಯದಲ್ಲಿ, ವಿಮಾನಯಾನ ಸಂಸ್ಥೆಯು ಶೂಟಿಂಗ್ ಕಿಟ್ ಅನ್ನು ವಶಕ್ಕೆ ತೆಗೆದು ಕೊಳ್ಳುತ್ತದೆ, ರಶೀದಿಯನ್ನು ನೀಡುತ್ತದೆ ಮತ್ತು ರಶೀದಿಯ ವಿರುದ್ಧ ಗಮ್ಯಸ್ಥಾನದಲ್ಲಿ ಕಿಟ್ ಅನ್ನು ಹಿಂತಿರುಗಿಸಲಾಗುತ್ತದೆ ಎಂದರು.**

## ವಿಮಾನ ದುರಂತದ ಬಗ್ಗೆ ಮತ್ತೊಂದು ತನಿಖೆ ಮಾಡಿ

**ಮುಂಬೈ:** ಅಹಮದಾಬಾದ್ ಏರ್ ಇಂಡಿಯಾ ವಿಮಾನ ದುರಂತಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವೇ ಮತ್ತೊಂದು ತನಿಖೆ ನಡೆಸಬೇಕೆಂದು ಮೃತ ಪೈಲಟ್ ಕ್ಯಾಪ್ಟನ್ ಸುಮೀತ್ ಸಭರ್ವಾಲ್ ಅವರ ತಂದೆ ಪುಷ್ಕರಾಜ್ ಸಭರ್ವಾಲ್ ಒತ್ತಾಯಿಸಿದ್ದಾರೆ. ವಿಮಾನ ದುರಂತದ ಬಗ್ಗೆ ತನಿಖೆ ನಡೆಸಿದ ವಿಮಾನ ಅಪಘಾತ ತನಿಖಾ ಬ್ಯೂರೊದ ವರದಿ ಸೋರಿಕೆಯಾದ ಬೆನ್ನಲ್ಲೇ ನಾಗರಿಕ ವಿಮಾನಯಾನ ಕಾರ್ಯದರ್ಶಿ ಮತ್ತು AAIB ಮಹಾನಿರ್ದೇಶಕರಿಗೆ 91 ವರ್ಷದ ಪುಷ್ಕರಾಜ್ ಸಭರ್ವಾಲ್ ಪತ್ರ ಬರೆದಿದ್ದಾರೆ. ನನ್ನ 56 ವರ್ಷದ ಪುತ್ರ ಮಾನಸಿಕ ಒತ್ತಡದಲ್ಲಿದ್ದ. ಹೀಗಾಗಿ ಆತ್ಮಹತ್ಯೆ ಮಾಡಿಕೊಳ್ಳಲು ಯೋಚಿಸುತ್ತಿದ್ದ ಎಂಬ ಅಂಶಗಳು ಸೋರಿಕೆಯಾಗಿದ್ದು ಇದು ಹಲವು ಊಹಾಪೋಹಗಳಿಗೆ ಕಾರಣವಾಗಿದೆ. ವರದಿ ಸೋರಿಕೆಯಿಂದ ನನ್ನ ಮಗನ ಪ್ರತಿಷ್ಠೆಗೆ ಧಕ್ಕೆಯಾಗಿದ್ದು ಕೇಂದ್ರ ಸರ್ಕಾರ ಮತ್ತೊಂದು ತನಿಖೆ ನಡೆಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಸಭರ್ವಾಲ್ ಸುಮಾರು 15 ವರ್ಷಗಳ ಹಿಂದೆ ವಿಚ್ಛೇದನ ಪಡೆದಿದ್ದರೆ ತಾಯಿ 3 ವರ್ಷಗಳ ಹಿಂದೆ ಮೃತಪಟ್ಟಿದ್ದಾರೆ. ಈ ಎರಡು ಘಟನೆ ನಡೆದ ಬಳಿಕವೂ ಪುತ್ರ ಅಪಘಾತವಿಲ್ಲದೆ 100 ಕ್ಕೂ ಹೆಚ್ಚು ವಿಮಾನಗಳನ್ನು ನಿರ್ವಹಿಸಿದ್ದಾನೆ ಮತ್ತು ಯಾವುದೇ ಅಪಘಾತವನ್ನು ಮಾಡಿಲ್ಲ. ವಿಮಾನ ಹಾರಾಟ ಅನುಭವದಲ್ಲಿ ಉತ್ತಮ ಟ್ರ್ಯಾಕ್ ರೆಕಾರ್ಡ್ ಹೊಂದಿದ್ದಾನೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ. ಏರ್ ಇಂಡಿಯಾದ




ಬೋಯಿಂಗ್ 787-8 ವಿಮಾನವು ಜೂನ್ 12 ರಂದು ಅಹಮದಾಬಾದ್‌ನಿಂದ ಲಂಡನ್ ಗ್ಯಾಟ್ವಿಕ್‌ಗೆ ಹೋಗಲು ಟೇಕಾಫ್ ಆಗಿತ್ತು. ಟೇಕಾಫ್ ಆದ ಕೆಲವೇ ಕ್ಷಣಗಳಲ್ಲಿ ವಿಮಾನ ಪತನಗೊಂಡು ಸಮೀಪದದಲ್ಲಿದ್ದ ಮೆಡಿಕಲ್ ಕಾಲೇಜ್ ಹಾಸ್ಟೆಲಿನ ಮೆಸ್ ಮೇಲೆ ಬಿದ್ದಿತ್ತು. ಪರಿಣಾಮ ವಿಮಾನದಲ್ಲಿದ್ದ 241 ಪ್ರಯಾಣಿಕರು ಸೇರಿದಂತೆ ಒಟ್ಟು 260 ಜನರು ಮೃತಪಟ್ಟಿದ್ದರು.

ನಿಯಮ 12 ರ ಅಡಿಯಲ್ಲಿ ಕೇಂದ್ರ ಸರ್ಕಾರವು ಯಾವುದೇ ಭಾರತೀಯ-ನೋಂದಾಯಿತ ವಿಮಾನ ಅಪಘಾತದ ತನಿಖೆ ಅಗತ್ಯವೆಂದು ಭಾವಿಸಿದರೆ ಅದರ ಔಪಚಾರಿಕ ತನಿಖೆಗೆ ಆದೇಶಿಸಬಹುದು. ಈ ಪತ್ರದ ಬಗ್ಗೆ ನಾಗರಿಕ ವಿಮಾನಯಾನ ಸಚಿವಾಲಯ ಮತ್ತು ವಿಮಾನ ಅಪಘಾತ ತನಿಖಾ ಬ್ಯೂರೋದಿಂದ ತಕ್ಷಣದ ಯಾವುದೇ ಪ್ರತಿಕ್ರಿಯೆಗಳು ಬಂದಿಲ್ಲ. ತನ್ನ ಪ್ರಾಥಮಿಕ ವರದಿಯನ್ನು ಜುಲೈ 12 ರಂದು ಬಿಡುಗಡೆ ಮಾಡಿದ ನಂತರ AAIB ದುರಂತಕ್ಕೆ ಯಾವುದೇ ನಿರ್ದಿಷ್ಟ ಕಾರಣ ನೀಡಿರಲಿಲ್ಲ. ತನಿಖೆ ಮುಂದುವರಿದಿದೆ ಎಂದಷ್ಟೇ ಹೇಳಿತ್ತು.

## ಪ್ರಧಾನಿ ಮೋದಿಗೆ ದೊರಕಿದ 1,300ಕ್ಕೂ ಹೆಚ್ಚು ಉಡುಗೊರೆಗಳ ಇ-ಹರಾಜು

**ನವದೆಹಲಿ:** ಪ್ರಧಾನಿ ಮೋದಿಯವರಿಗೆ ಉಡುಗೊರೆಯಾಗಿ ದೊರಕಿದ 1,300ಕ್ಕೂ ಹೆಚ್ಚು ವಸ್ತುಗಳನ್ನು ಬುಧವಾರ ಪ್ರಾರಂಭಗೊಂಡ ಇ-ಹರಾಜಿನಲ್ಲಿ ಇಡಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಅಯೋಧ್ಯಾ ರಾಮ ಮಂದಿರ ಮಾದರಿ, ಭವಾನಿ ದೇವಿಯ ವಿಗ್ರಹ, 2024ರ ಒಲಿಂಪಿಕ್ಸ್ ಕ್ರೀಡಾಕೂಟದ ಸ್ಮರಣಿಕೆಗಳು ಸೇರಿದಂತೆ 1,300ಕ್ಕೂ ಹೆಚ್ಚು ಉಡುಗೊರೆಗಳನ್ನು ಹರಾಜಿಗಿಡಲಾಗಿದೆ. ಮೋದಿಯವರ ಜನ್ಮದಿನವಾದ ಬುಧವಾರ ಇ-ಹರಾಜು ಪ್ರಕ್ರಿಯೆ ಆರಂಭಗೊಂಡಿದ್ದು, ಅ.2ರವರೆಗೆ ಹರಾಜು ನಡೆಯಲಿದೆ.


ಪಿಎಂ ಮೊಮೆಂಟೋಸ್ ವೆಬ್‌ಸೈಟ್ ಪ್ರಕಾರ, ಭವಾನಿ ದೇವಿಯ ಪ್ರತಿಮೆಯ ಬೆಲೆ 1,03,95,000 ರೂ. ಆಗಿದ್ದು, ರಾಮ ಮಂದಿರ ದೇವಾಲಯದ ಮಾದರಿ 5.5 ಲಕ್ಷ ರೂ. ಮೌಲ್ಯವನ್ನು ಹೊಂದಿದೆ. ಇನ್ನು ಪ್ಯಾರಾ ಒಲಿಂಪಿಕ್ಸ್ ನಲ್ಲಿ ಪದಕ ಗೆದ್ದ ಕ್ರೀಡಾಪಟುಗಳ ಮೂರು ಜೊತೆ ಶೂಗಳನ್ನು ಕೂಡ ಹರಾಜಿಗಿಡಲಾಗಿದ್ದು, ಪ್ರತಿ ಶೂ ಬೆಲೆ 7.7 ಲಕ್ಷ ರೂ. ಇರಲಿದೆ ಎಂದು ಸಂಸ್ಕೃತಿ ಸಚಿವಾಲಯದ ಅಧಿಕಾರಿಗಳು ತಿಳಿಸಿದ್ದಾರೆ. 2019ರ ಜನವರಿಯಲ್ಲಿ ಮೊದಲ ಬಾರಿಗೆ ಪ್ರಧಾನಿ ಮೋದಿಯವರಿಗೆ ನೀಡಿದ್ದ ಉಡುಗೊರೆಗಳ ಇ-ಹರಾಜನ್ನು ನಡೆಸಲಾಗಿತ್ತು. ಜಮ್ಮು ಮತ್ತು ಕಾಶ್ಮೀರದ ಕಸೂತಿ ಮಾಡಿದ ಪಶ್ಮಿನಾ ಶಾಲು, ರಾಮ ದರ್ಬಾರ್‌ನ ತಂಜಾವೂರಿನ ಚಿತ್ರಕಲೆ, ಲೋಹದ ನಟರಾಜ ಪ್ರತಿಮೆ, ಗುಜರಾತ್‌ನ ರೋಗನ್ ಕಲೆ ಮತ್ತು ಕೈಯಿಂದ ನೇಯ್ದ ನಾಗಾ ಶಾಲು ಕೂಡ ಇ-ಹರಾಜಿನಲ್ಲಿ ಇಡಲಾಗಿದೆ.



ಈವರೆಗೂ ಹರಾಜಿನಲ್ಲಿ 50 ಕೋಟಿ. ರೂಗೂ ಹೆಚ್ಚು ಹಣ ಸಂಗ್ರಹವಾಗಿದ್ದು, ಈ ಹಣವನ್ನು ನಮಾಮಿ ಗಂಗೆ ಯೋಜನೆಗೆ ವಿನಿಯೋಗಿಸಲಾಗುತ್ತದೆ ಎಂದು ಸಂಸ್ಕೃತಿ ಸಚಿವಾಲಯ ತಿಳಿಸಿದೆ.

## ತೆರಿಗೆ ಪ್ರಸ್ತಾಪ ಮುಂದಿರಿಸಿ ಏಳು ಯುದ್ಧ ಕೊನೆಗೊಳಿಸಿದ್ದೇನೆ: ಟ್ರಂಪ್

**ವಾಷಿಂಗ್ಟನ್:** ತೆರಿಗೆ ವಿಷಯವನ್ನು ಮುಂದಿರಿಸಿ ಏಳು ಯುದ್ಧಗಳನ್ನು ಕೊನೆಗೊಳಿಸಿದ್ದೇನೆ' ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪುನರುಚ್ಚರಿಸಿದ್ದಾರೆ. ಈ ಸಂಬಂಧ ಟ್ರಂಪ್ ಅವರ ಹೇಳಿಕೆಯನ್ನು ಪಿಟಿಐ ಹಂಚಿಕೊಂಡಿದೆ.



ವಾಷಿಂಗ್ಟನ್ ಡಿಸಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಸಂಧಾನ ನಡೆಸಲು ನಮಗೆ ಅಪಾರ ಶಕ್ತಿ ಇದೆ.

ತೆರಿಗೆ ಪ್ರಸ್ತಾಪ ಮುಂದಿರಿಸಿ ಏಳು ಯುದ್ಧಗಳನ್ನು ಇತ್ಯರ್ಥಗೊಳಿಸಿದ್ದೇನೆ. ಅವುಗಳಲ್ಲಿ ಸುಂಕ ವಿಧಿಸಿದ್ದ ಕಾರಣ ನಾಲ್ಕು ಯುದ್ಧಗಳನ್ನು ಕೊನೆಗೊಳಿಸಲು ಸಾಧ್ಯವಾಯಿತು ಎಂದು ಹೇಳಿದ್ದಾರೆ. ಭಾರತ, ಪಾಕಿಸ್ತಾನ ನಡುವಣ ಯುದ್ಧವನ್ನು ಕೊನೆಗೊಳಿಸಿರುವುದಾಗಿ ಟ್ರಂಪ್ ಪದೇ ಪದೇ ಹೇಳಿಕೆ ನೀಡುತ್ತಲೇ ಬಂದಿದ್ದರು.

ಆದರೆ ಮೂರನೇ ರಾಷ್ಟ್ರದ ಮಧ್ಯ ಪ್ರವೇಶವನ್ನು ಭಾರತ ನಿರಾಕರಿಸುತ್ತಲೇ ಬಂದಿತ್ತು.

## ಮುಕ್ಕಾಲು ಪಾಲು ಗಾಜಾನಗರ ಸುತ್ತುವರಿದ ಇಸ್ರೇಲ್

**ಜೆರುಸಲೇಂ:** ಗಾಜಾ ನಗರದ ಕರಾವಳಿ ಭಾಗದ ದೊಡ್ಡ ಪ್ರದೇಶವೊಂದನ್ನು ಹೊರತುಪಡಿಸಿ ಉಳಿದ ಬಹುಭಾಗವನ್ನು ಇಸ್ರೇಲ್ ಸೇನೆಯು ಸುತ್ತುವರಿದಿದೆ. ಒಂದೆಡೆ, ಸಾವಿರಾರು ಪ್ಯಾಲೆಸ್ಟೀನಿಯನ್ನರು ನಗರವನ್ನು ತೊರೆಯುತ್ತಿದ್ದರೆ ಇನ್ನೊಂದೆಡೆ, ಇಸ್ರೇಲ್ ಭೂಸೇನೆಯು ಎರಡನೇ ದಿನವೂ ತನ್ನ ದಾಳಿಯನ್ನು ಮುಂದುವರಿಸಿದೆ. ಇಸ್ರೇಲ್‌ನ ಭೂಸೇನೆಯು ಗಾಜಾ ನಗರದ ಮೇಲೆ ನಡೆಸುತ್ತಿರುವ ತೀವ್ರ ದಾಳಿಗೆ ಕನಿಷ್ಠ 16 ಮಂದಿ ಮೃತಪಟ್ಟಿದ್ದಾರೆ. ಇದರಲ್ಲಿ ಅರ್ಧದಷ್ಟು ಜನರು ಮಹಿಳೆಯರು ಮತ್ತು ಮಕ್ಕಳಾಗಿದ್ದಾರೆ. ಗಾಜಾದ ಆಸ್ಪತ್ರೆಯಲ್ಲಿದ್ದ 80 ರೋಗಿಗಳಿಗೆ ಈ ದಾಳಿಯ ಕಾರಣದಿಂದ ಹೊರಹೋಗುವಂತೆ ಹೇಳಲಾಗಿದೆ.

ಆಹಾರ, ನೀರು, ಔಷಧ ಸೇರಿದಂತೆ ಗಾಜಾ ಜನರಿಗೆ ಮೂಲಸೌಲಭ್ಯ, ನೆರವು ಒದಗಿಸುತ್ತಿರುವ ಅಂತರರಾಷ್ಟ್ರೀಯ ಮಟ್ಟದ ಸುಮಾರು 20 ಸಂಸ್ಥೆಗಳು ದಾಳಿಯನ್ನು ಕಟು ಮಾತುಗಳಲ್ಲಿ ಖಂಡಿಸಿವೆ. ಭೂಸೇನೆಯ ಕಾರ್ಯಾಚರಣೆಯು ನರಮೇಧದ ಯುದ್ಧವನ್ನು ವಿಸ್ತರಿಸಿದಂತೆ ಎಂದಿರುವ ಕತಾರ್, ಇಸ್ರೇಲ್ ಮೇಲೆ ತೀವ್ರ ವಾಗ್ದಾಳಿ ನಡೆಸಿದೆ. ಕಳೆದ ಕೆಲವು ದಿನಗಳಲ್ಲಿ ಗಾಜಾ ನಗರದ ಎತ್ತರದ ಕಟ್ಟಡಗಳನ್ನು ಗುರಿಯಾಗಿಸಿ ಸುಮಾರು 150ಕ್ಕೂ ಹೆಚ್ಚು ದಾಳಿಗಳನ್ನು ನಡೆಸಿದ್ದೇವೆ ಎಂದು ಇಸ್ರೇಲ್



ಹೇಳಿಕೊಂಡಿದೆ. ಈ ಕಟ್ಟಡಗಳಲ್ಲಿ ಸಾವಿರಾರು ಪ್ಯಾಲೆಸ್ಟೀನಿಯನ್ನರು ಆಶ್ರಯ ಪಡೆದುಕೊಂಡಿದ್ದರು. ಕಣ್ಗಾವಲು ನಡೆಸಲು ಹಮಾಸ್ ಬಂಡುಕೋರರು ಇಂಥ ಕಟ್ಟಡಗಳನ್ನು ಬಳಸಿಕೊಳ್ಳುತ್ತಾರೆ ಎಂದು ಇಸ್ರೇಲ್ ದೂರಿದೆ.

**ದಕ್ಷಿಣಕ್ಕೆ ತೆರಳಲು ಎಚ್ಚರಿಕೆ:** ಉತ್ತರ ಗಾಜಾದಿಂದ ದಕ್ಷಿಣ ಗಾಜಾಗೆ ತೆರಳುವಂತೆ ಇಸ್ರೇಲ್ ಸೇನೆ ಈಗಾಗಲೇ ಎಚ್ಚರಿಕೆ ನೀಡಿದೆ. ಇದಕ್ಕಾಗಿ ಇನ್ನೊಂದು ಹೊಸ ಮಾರ್ಗವನ್ನು ತೆರೆದಿದೆ. ಈ ಮಾರ್ಗವು ಬುಧವಾರ ಸಂಜೆಯಿಂದ ಆರಂಭಗೊಂಡು ಎರಡು ದಿನ ತೆರೆದಿರಲಿದೆ ಎಂದು ಇಸ್ರೇಲ್ ತಿಳಿಸಿದೆ. **ದೂರಸಂಪರ್ಕ ಸಂಪೂರ್ಣ ಕಡಿತ:** ಉತ್ತರ ಗಾಜಾದ ಮುಖ್ಯ ದೂರಸಂಪರ್ಕ ಮೂಲಸೌಕರ್ಯದ ಮೇಲೆ ಇಸ್ರೇಲ್ ಸೇನೆಯು ನಿರಂತರವಾಗಿ ದಾಳಿ ನಡೆಸುತ್ತಿದೆ. ಇದರಿಂದಾಗಿ ಬುಧವಾರ ಬೆಳಿಗ್ಗೆಯಿಂದ ಇಲ್ಲಿನ ದೂರವಾಣಿ ಸಂಪರ್ಕ ಮತ್ತು ಅಂತರ್ಜಾಲ ಸಂಪರ್ಕ ಸಂಪೂರ್ಣ ಕಡಿತಗೊಂಡಿದೆ' ಎಂದು ಪ್ಯಾಲೆಸ್ಟೀನ್ ದೂರಸಂಪರ್ಕ ಪ್ರಾಧಿಕಾರ ಹೇಳಿದೆ.

**ಕೇವಲ ಹೇಳಿಕೆಯಿಂದ ಪ್ರಯೋಜನವಿಲ್ಲ:** ಗಾಜಾದಲ್ಲಿ ನಡೆಯುತ್ತಿರುವ ಅತ್ಯಂತ ದೊಡ್ಡ ಮಾನವೀಯ ದುರಂತವನ್ನು ತಡೆಯಲು ಇತರ ದೇಶಗಳು ತಮ್ಮೆಲ್ಲಾ ರಾಜಕೀಯ ಆರ್ಥಿಕ ಮತ್ತು ಕಾನೂನಾತ್ಮಕ ತಂತ್ರವನ್ನು ಬಳಸಿಕೊಳ್ಳಬೇಕು. ದಾಳಿ ಖಂಡಿಸಿ ಹೇಳಿಕೆ ಕೊಡುವುದರಿಂದ ಅರ್ಥಂಬರ್ಥ ಪರಿಣಾಮ ಬೀರುವ ಕ್ರಮಗಳಿಂದ ಪ್ರಯೋಜನವಿಲ್ಲ. ಇದಕ್ಕೊಂದು ನಿರ್ಣಾಯಕ ಕ್ರಮದ ಅಗತ್ಯವಿದೆ ಮಾನವೀಯ ಸಹಕಾರ ಒದಗಿಸುವ ಸಂಸ್ಥೆಗಳು

**ಹುಥಿ ವಾಯು ಪ್ರದೇಶ ಸನ್ನದ್ಧ:** ಇರಾನ್ ಬೆಂಬಲಿತ ಹುಥಿ ಬಂಡುಕೋರರು ಸಕ್ರಿಯವಾಗಿರುವ ಬಂದರಿನ ಮೇಲೆ ಇಸ್ರೇಲ್ ಮಂಗಳವಾರ ದಾಳಿ ನಡೆಸಿತ್ತು. ಬಳಿಕ ಬಂಡುಕೋರರು ತಮ್ಮ ವಾಯು ರಕ್ಷಣಾ ವ್ಯವಸ್ಥೆಯನ್ನು ಸನ್ನದ್ದ ಸ್ಥಿತಿಯಲ್ಲಿ ಇರಿಸಿದ್ದಾರೆ. ಹೊಡೇಡ ಬಂದರಿನಲ್ಲಿ ಬಂಡುಕೋರರು ಸೇನಾ ಮೂಲಸೌಕರ್ಯವೊಂದನ್ನು ಸ್ಥಾಪಿಸಿಕೊಂಡಿದ್ದರು. ನಾವು ಇದರ ಮೇಲೆ ದಾಳಿ ನಡೆಸಿದ್ದೇವೆ. ಇದೇ ಬಂದರಿನ ಮೂಲಕ ಇರಾನ್‌ನಿಂದ ಶಸ್ತ್ರಾಸ್ತ್ರಗಳು ಬಂಡುಕೋರರನ್ನು ತಲುಪುತ್ತಿವೆ.

## ಕೇಂದ್ರ ಮಾಹಿತಿ, ಪ್ರಸಾರ ಸಚಿವಾಲಯದಿಂದ ಟೇಕ್‌ಡೌನ್ ನೋಟಿಸ್ ಜಾರಿ


### ಅದಾನಿ ಎಂಟರ್‌ಪ್ರೈಸಸ್ ಕುರಿತ 138 ಯೂಟ್ಯೂಬ್ ವಿಡಿಯೋ, 83 ಇನ್ಸ್ಟಾಗ್ರಾಮ್ ಪೋಸ್ಟ್ ಡಿಲೀಟ್ ಮಾಡಲು ಕೇಂದ್ರದ ಆದೇಶ

**ಹೊಸದಿಲ್ಲಿ:** ಅದಾನಿ ಎಂಟರ್‌ಪ್ರೈಸಸ್ ಲಿಮಿಟೆಡ್ ಸಲ್ಲಿಸಿದ ಮಾನನಷ್ಟ ಮೊಕದ್ದಮೆಗೆ ಸಂಬಂಧಿಸಿದಂತೆ ದೆಹಲಿ ನ್ಯಾಯಾಲಯದ ಆದೇಶದನ್ವಯ, ರವೀಶ್ ಕುಮಾರ್, ಧ್ರುವ್ ರಾಠಿ, ನ್ಯೂಸ್ ಲಾಂಡ್ರಿ, ದಿ ವೈರ್, ಊಘ ನ್ಯೂಸ್ ಮತ್ತು ಆಕಾಶ್ ಬ್ಯಾನರ್ಜಿ ಅವರ ದಿ ದೇಶಭಕ್ತ್ ಸೇರಿದಂತೆ ಹಲವಾರು ಪತ್ರಕರ್ತರು, ಮಾಧ್ಯಮ ಸಂಸ್ಥೆಗಳು, ಯ್ಯೂಟ್ಯೂಬ್ ಚಾನೆಲ್‌ಗಳಿಗೆ, ಕೇಂದ್ರ ಮಾಹಿತಿ, ಪ್ರಸಾರ ಸಚಿವಾಲಯ, ಟೇಕ್‌ಡೌನ್ ನೋಟಿಸ್‌ಗಳನ್ನು ಜಾರಿ ಮಾಡಿದೆ. ನೋಟಿಸ್‌ನಲ್ಲಿ 138 ಯೂಟ್ಯೂಬ್ ಲಿಂಕ್‌ಗಳು, 83 ಇನ್‌ಸ್ಟಾಗ್ರಾಮ್ ಪೋಸ್ಟ್‌ಗಳ ಪಟ್ಟಿಯನ್ನು ಉಲ್ಲೇಖಿಸಲಾಗಿದ್ದು, ಅವುಗಳಲ್ಲಿ 42 ವಿಡಿಯೋಗಳನ್ನು ತನ್ನ ಯೂಟ್ಯೂಬ್ ಚಾನೆಲ್‌ನಿಂದ ತೆಗೆದುಹಾಕುವಂತೆ ನ್ಯೂಸ್‌ಲಾಂಡ್ರಿಗೆ ಸೂಚನೆ ನೀಡಲಾಗಿದೆ.

ಕಳೆದ ಸೆ.6ರಂದೇ ಈ ಕುರಿತು ದೆಹಲಿ ನ್ಯಾಯಾಲಯ ಆದೇಶ ನೀಡಿದ್ದರೂ, ಮಾಧ್ಯಮ ಸಂಸ್ಥೆಗಳು ಲಿಂಕ್‌ಗಳನ್ನು ತೆಗೆದುಹಾಕದಿರುವುದಕ್ಕೆ ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯ ಅಸಮಧಾನ ವ್ಯಕ್ತಪಡಿಸಿದೆ.

ಸಂಸ್ಥೆಯ ವಿರುದ್ಧ ಕೆಲವು ಮಾಧ್ಯಮ ಸಂಸ್ಥೆಗಳು ಮತ್ತು ಯ್ಯೂಟ್ಯೂಬ್ ಚಾನೆಲ್‌ಗಳು ಉದ್ದೇಶಪೂರ್ವಕವಾಗಿ ಸುಳ್ಳು ಪ್ರಚಾರ ನಡೆಸುತ್ತಿವೆ. ಅಲ್ಲದೇ ಈ ವಿಡಿಯೋಗಳಲ್ಲಿ ತಮ್ಮ ಆರೋಪಕ್ಕೆ ಯಾವುದೇ ಸೂಕ್ತ ದಾಖಲೆಗಳನ್ನು ಪ್ರದರ್ಶಿಸದೇ, ಕೇವಲ ವಿಡಂಬನಾತ್ಮಕ ವಿಮರ್ಶೆಗಳನ್ನು ಮಾಡಲಾಗಿದೆ ಎಂದು ಆರೋಪಿಸಿ, ಅದಾನಿ ಎಂಟರ್‌ಪ್ರೈಸಸ್ ಲಿಮಿಟೆಡ್ ದೆಹಲಿ ನ್ಯಾಯಾಲಯದಲ್ಲಿ ಮಾನನಷ್ಟ ಮೊಕದ್ದಮೆ ಸಲ್ಲಿಸಿತ್ತು. ಹಿಂಡನ್‌ಬರ್ಗ್ ವರದಿ ವಿವಾದ ಇದಕ್ಕೆಲ್ಲಾ ಮೂಲ ಕಾರಣವಾಗಿದೆ. ದೆಹಲಿ ನ್ಯಾಯಾಲಯವು ಅದಾನಿ ಎಂಟರ್‌ಪ್ರೈಸಸ್ ಲಿಮಿಟೆಡ್ ವಾದವನ್ನು ಪುರಸ್ಕರಿಸಿ, ಈ ವಿಡಿಯೋಗಳನ್ನು ಮತ್ತು ಇನ್ಸ್ಟಾಗ್ರಾಮ್ ಪೋಸ್ಟ್‌ಗಳನ್ನು ತೆಗೆದುಹಾಕಲಾಗಿತ್ತು. ಆದಾಗ್ಯೂ ನ್ಯೂಸ್ ಲಾಂಡ್ರಿ ಈ ವಿಡಿಯೋ, ಪೋಸ್ಟ್‌ಗಳನ್ನು ಡಿಲೀಟ್ ಮಾಡಿರಲಿಲ್ಲ. ಈ ಹಿನ್ನೆಲೆಯಲ್ಲಿ ಕೇಂದ್ರ, ಮಾಹಿತಿ ಪ್ರಸಾರ ಪ್ರಕಾಶಕರು ನಿಗದಿತ ಸಮಯದೊಳಗೆ ಕಾರ್ಯನಿರ್ವಹಿಸಲು ವಿಫಲರಾಗಿದ್ದಾರೆ ಎಂದು ಅಸಮಾಧಾನ ಹೊರಹಾಕಿದೆ. ಅದಾನಿ ಪರ ಹಿರಿಯ ವಕೀಲ ಜಗದೀಪ್ ಶರ್ಮಾ, ಆಧಾರರಹಿತ ಮತ್ತು ದುರುದ್ದೇಶಪೂರಿತ ವರದಿಗಳನ್ನು ಪದೇ ಪದೇ ಪ್ರಕಟಿಸುವುದರಿಂದ ಅದರ ಬ್ರ್ಯಾಂಡ್ ಇಕ್ವಿಟಿಗೆ ಹಾನಿಯಾಗಿದೆ. ಅಲ್ಲದೇ ಯೋಜನೆಗಳು ವಿಳಂಬ ಆಗಿವ ಹೂಡಿಕೆದಾರರ ವಿಶ್ವಾಸ ಕುಗ್ಗಿದೆ ಎಂದು ದೆಹಲಿ ನ್ಯಾಯಾಲಯದಲ್ಲಿ ವಾದಿಸಿದ್ದರು. ಹಣಕಾಸಿನ ಅಕ್ರಮಗಳನ್ನು ಆರೋಪಿಸಿದ 2023ರ ಹಿಂಡೆನ್‌ಬರ್ಗ್ ಸಂಶೋಧನಾ ವರದಿ ಪುನರಾವರ್ತಿತ ಉಲ್ಲೇಖಗಳನ್ನು, ಸಂಸ್ಥೆಯ ಖ್ಯಾತಿಗೆ ಹಾನಿ ಮಾಡುವ ಅಭಿಯಾನದ ಭಾಗವಾಗಿ ಬಳಸಿಕೊಳ್ಳಲಾಗಿದೆ. ಈ ಪರಿಶೀಲಿಸದ ವರದಿಗಳು ಹೂಡಿಕೆದಾರರ ಶತಕೋಟಿ ಮೌಲ್ಯದ ಹಣವನ್ನು ಅಳಿಸಿಹಾಕಬಹುದು, ಮಾರುಕಟ್ಟೆಯಲ್ಲಿ ಭೀತಿಯನ್ನು ಉಂಟುಮಾಡಬಹುದು, ಜಾಗತಿಕ ಮಟ್ಟದಲ್ಲಿ ಸಂಸ್ಥೆಯ ಮೇಲಿನ ಸದ್ಭಾವನೆ ಮತ್ತು ಖ್ಯಾತಿಯನ್ನು ಕಸಿದುಕೊಳ್ಳಬಹುದು ಎಂಬ ವಾದವನ್ನು ದೆಹಲಿ ನ್ಯಾಯಾಲಯ ಒಪ್ಪಿಕೊಂಡಿತ್ತು.

**ವರದಿ ದುರ್ಬಳಕೆ ಆರೋಪ**



ಈ ಹಿನ್ನೆಲೆಯಲ್ಲಿ ರವೀಶ್ ಕುಮಾರ್, ಧ್ರುವ್ ರಾಠಿ, ನ್ಯೂಸ್ ಲಾಂಡ್ರಿ, ದಿ ವೈರ್, HW ನ್ಯೂಸ್, ಆಕಾಶ್ ಬ್ಯಾನರ್ಜಿ ಅವರ ದಿ ದೇಶಭಕ್ತ್ ಸೇರಿದಂತೆ ಹಲವಾರು ಪತ್ರಕರ್ತರು, ಮಾಧ್ಯಮ ಸಂಸ್ಥೆಗಳು, ಯ್ಯೂಟ್ಯೂಬ್ ಚಾನೆಲ್‌ಗಳಿಗೆ, ಕೇಂದ್ರ, ಮಾಹಿತಿ ಪ್ರಸಾರ ಇಲಾಖೆಯು ನೋಟಿಸ್ ಜಾರಿ ಮಾಡಿ, ಅದಾನಿ ಸಂಸ್ಥೆ ವಿರುದ್ಧದ ವಿಡಿಯೋ ಮತ್ತು ಪೋಸ್ಟ್‌ಗಳನ್ನು ತೆಗೆದುಹಾಕುವಂತೆ ಸೂಚನೆ ನೀಡಿದೆ. 2017ರಿಂದ ಅದಾನಿ ಸಮೂಹ ಸಂಸ್ಥೆಯು ಮೇಲ್ಪಾಂಕಿಸಿದವರ ವಿರುದ್ಧ ದಾಖಲಿಸಿದ ಏಳನೇ ಮಾನನಷ್ಟ ಪ್ರಕರಣ ಇದಾಗಿದೆ ಎಂಬುದು ಇಲ್ಲಿ ಉಲ್ಲೇಖನೀಯ. ಗೌತಮ್ ಅದಾನಿ ಅವರು ಈ ಹಿಂದೆ ಪಟ್ಟಭದ್ರ ಹಿತಾಸಕ್ತಿಗಳಿಂದ ಹಿಂಡನ್ ಬರ್ಗ್ ವರದಿ ದುರ್ಬಳಕೆ ಆರೋಪ ಮಾಡಿದ್ದರು.

**ನೋಟಿಸ್‌ನ್ನು ಎಂಐಬಿ ಜಾರಿ**

**ಸಂಸ್ಥೆಯ ವಿರುದ್ಧ ಸುಳ್ಳು ಪ್ರಸಾರ ಮಾಡಲಾಗುತ್ತಿದೆ ಎಂದು ಆರೋಪಿಸಿ ಅದಾನಿ ಎಂಟರ್‌ಪ್ರೈಸಸ್ ಲಿಮಿಟೆಡ್ ಹೂಡಿದ್ದ ಮಾನನಷ್ಟ ಮೊಕದ್ದಮೆಗೆ ಸಂಬಂಧಿಸಿದಂತೆ, ದೆಹಲಿ ನ್ಯಾಯಾಲಯ ನೀಡಿರುವ ತೀರ್ಪಿನ ಹಿನ್ನೆಲೆಯಲ್ಲಿ, ಕೇಂದ್ರ, ಮಾಹಿತಿ ಪ್ರಸಾರ ಸಚಿವಾಲಯವು ಕೆಲವು ಮಾಧ್ಯಮ ಸಂಸ್ಥೆಗಳು, ಯ್ಯೂಟ್ಯೂಬ್ ಚಾನೆಲ್‌ಗಳಿಗೆ ತಮ್ಮ ವಿಡಿಯೋ, ಇನ್ಸ್ಟಾಗ್ರಾಮ್ ಪೋಸ್ಟ್‌ಗಳನ್ನು ಡಿಲೀಟ್ ಮಾಡುವಂತೆ ನೋಟಿಸ್ ಜಾರಿ ಮಾಡಿದೆ. ರವೀಶ್ ಕುಮಾರ್, ಧ್ರುವ್ ರಾಠಿ ಮತ್ತಿತರ ಪತ್ರಕರ್ತರಿಗೆ ಇಂತದ್ದೊಂದು ನೋಟಿಸ್‌ನ್ನು ಎಂಐಬಿ ಜಾರಿ ಮಾಡಿದೆ.**

# 1.65 ಕೋಟಿ ರೂ. ತಿರಸ್ಕರಿಸಿದ ತನುಶ್ರೀ



ಬಾಲಿವುಡ್ ನಟಿ ತನುಶ್ರೀ ದತ್ತಾ ತಾನು 1.65 ಕೋಟಿ ರೂಪಾಯಿಯ ಬಿಗ್ ಬಾಸ್ ಆಫರ್ ತಿರಸ್ಕರಿಸಿದೆ ಎಂದು ಹೇಳಿದ್ದಾರೆ. ಪುರುಷನೊಂದಿಗೆ ಒಂದೇ ಹಾಸಿಗೆಯ ಮೇಲೆ ಮಲಗಲು ನಾನು ಅಗ್ಗದ ವಸ್ತುವಲ್ಲ ಎಂದು ತನುಶ್ರೀ ದತ್ತಾ ನೇರವಾಗಿ ಸಂದರ್ಶನದಲ್ಲಿ ಹೇಳಿದ್ದಾರೆ. ಹಾಸಿಕೂ ಬನಾಯಾ ಅಪ್ನೇ ಹಾಡಿನ ಮೂಲಕ ಯುವಕರ ಎದೆಯಲ್ಲಿ ಕಿಚ್ಚು ಹಚ್ಚಿದವರು ನಟಿ ತನುಶ್ರೀ ದತ್ತಾ. ಇದೇ ತನುಶ್ರೀ ದತ್ತಾ 2 ತಿಂಗಳ ಹಿಂದೆ ಅಳುವ ವಿಡಿಯೋ ಮಾಡಿ ಸುದ್ದಿಯಾಗಿದ್ದರು. ಈಗ ಬಿಗ್ ಬಾಸ್‌ನ 1.65 ಕೋಟಿ ರೂ.ಆಫರ್ ಅನ್ನು ನಾನು ತಿರಸ್ಕರಿಸಿದ್ದೆ ಎಂದು ಹೇಳಿದ್ದಾರೆ.

ಒಬ್ಬ ಪುರುಷನೊಂದಿಗೆ ಒಂದೇ ಹಾಸಿಗೆಯ ಮೇಲೆ ಮಲಗಲು ನಾನು ಅಗ್ಗದ ವಸ್ತುವಲ್ಲ ಎಂದಿದ್ದಾರೆ. ತನುಶ್ರೀ ದತ್ತಾ ಹೇಳಿಕೆ ಸಂಚಲನಕ್ಕೆ ಕಾರಣವಾಗಿದೆ. ಇತ್ತೀಚಿನ ಸಂದರ್ಶನವೊಂದರಲ್ಲಿ ಕಳೆದ 11 ವರ್ಷಗಳಿಂದ ತನಗೆ ಬಿಗ್ ಬಾಸ್ ಆಫರ್ ಬರುತ್ತಿದೆ ಎಂದು ಹೇಳಿಕೊಂಡಿದ್ದಾರೆ. ಚಾಕೊಲೇಟ್ ನಟಿ ಈ ಬಾರಿ ಬಿಗ್ ಬಾಸ್ ಗಾಗಿ 1.65 ಕೋಟಿ ರೂ.ಗಳ ಆಫರ್ ತಿರಸ್ಕರಿಸಿದ್ದಾಗಿ ಬಹಿರಂಗಪಡಿಸಿದ್ದಾರೆ. ನಿರಾಕರಿಸಿದ್ದಕ್ಕೆ ಕಾರಣವನ್ನು ಉಲ್ಲೇಖಿಸಿದ ತನುಶ್ರೀ, ರಿಯಾಲಿಟಿ ಶೋಗಾಗಿ ಒಬ್ಬ ಪುರುಷನೊಂದಿಗೆ ಒಂದೇ ಹಾಸಿಗೆಯ ಮೇಲೆ ಮಲಗಲು ತಾನು ಅಗ್ಗದ ವಸ್ತು ಅಲ್ಲ ಎಂದು ಹೇಳಿದ್ದಾರೆ. ಬಾಲಿವುಡ್ ಥಿಕಾನಾಗೆ ನೀಡಿದ ಸಂದರ್ಶನದಲ್ಲಿ, ತನುಶ್ರೀ ದತ್ತಾ, ನಾನು ಅಂತಹ ಕಾರ್ಯಕ್ರಮಕ್ಕೆ ಹೋಗುತ್ತೇನೆ ಎಂದು ನೀವು ನಿಜವಾಗಿಯೂ ಭಾವಿಸುತ್ತೀರಾ ಅಂತಹ ಸ್ಥಳದಲ್ಲಿ ಉಳಿಯಲು ಸಾಧ್ಯವಿಲ್ಲ. ನಾನು ನನ್ನ ಸ್ವಂತ ಕುಟುಂಬದೊಂದಿಗೆ ಸಹ ಇರುವುದಿಲ್ಲ.

# ಉಪೇಂದ್ರ ಸಿನಿಮಾಗೆ ಓಂಪ್ರಕಾಶ್ ನಿರ್ದೇಶನ




ಹುಚ್ಚ ಸೇರಿದಂತೆ ಸಾಕಷ್ಟು ಜನಪ್ರಿಯ ಚಿತ್ರಗಳನ್ನು ನಿರ್ದೇಶಿಸಿರುವ ಹಿರಿಯ ನಿರ್ದೇಶಕ ಓಂಪ್ರಕಾಶ್ ರಾವ್ ನಿರ್ದೇಶನದ 50ನೇ ಚಿತ್ರ 'ಗೆರಿಲ್ಲಾ war'. ಈ ಚಿತ್ರದ ನಾಯಕರಾಗಿ ರಿಯಲ್ ಸ್ಟಾರ್ ಉಪೇಂದ್ರ ಅಭಿನಯಿಸುತ್ತಿದ್ದಾರೆ. ಸೆ.18 ಉಪೇಂದ್ರ ಅವರ ಹುಟ್ಟುಹಬ್ಬ. ಈ ಸಂದರ್ಭದಲ್ಲಿ ವಿಶೇಷ ಪೋಸ್ಟರ್ ಬಿಡುಗಡೆ ಮಾಡಿ 'ಗೆರಿಲ್ಲಾ war' ಚಿತ್ರತಂಡ ಉಪೇಂದ್ರ ಅವರಿಗೆ ಹುಟ್ಟುಹಬ್ಬದ ಶುಭಾಶಯ ತಿಳಿಸಿದೆ.

ಪ್ರಸ್ತುತ ಓಂಪ್ರಕಾಶ್ ರಾವ್ ನಿರ್ದೇಶನದ ಬಹು ನಿರೀಕ್ಷಿತ ತ್ರಿಶೂಲಂ ಚಿತ್ರದಲ್ಲೂ ಉಪೇಂದ್ರ ಅವರು ನಟಿಸಿದ್ದು, ಇದು ಇವರಿಬ್ಬರ ಕಾಂಬಿನೇಶನ್ ಮೂಡಿಬರುತ್ತಿರುವ ಎರಡನೇ ಚಿತ್ರವಾಗಿದೆ. ಬೇಬಿ ಇಂಚರ ಅರ್ಪಿಸುವ, ಎನ್‌ಎಸ್ ರಾವ್ ಸಿನಿ ಕ್ರಿಯೇಷನ್ಸ್ ಲಾಂಛನದಲ್ಲಿ ಓಂಪ್ರಕಾಶ್ ರಾವ್ ಹಾಗೂ ಆರ್ ವಾಸುದೇವ ರೆಡ್ಡಿ ಅವರು ನಿರ್ಮಿಸುತ್ತಿರುವ ಈ ಚಿತ್ರದ ಚಿತ್ರೀಕರಣ ಸದ್ಯದಲ್ಲೇ ಆರಂಭವಾಗಲಿದೆ.

ಡೆನ್ನಿಸಾ ಪ್ರಕಾಶ್ ಅವರು ಬರೆದಿರುವ ಕಥೆಗೆ ಓಂಪ್ರಕಾಶ್ ರಾವ್ ಅವರೇ ಚಿತ್ರಕಥೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. ಖ್ಯಾತ ಸಾಹಿತಿ ಹಾಗೂ ಸಂಗೀತ ನಿರ್ದೇಶಕ ಹಂಸಲೇಖ ಅವರು ಹಾಡುಗಳನ್ನು ಬರೆದು ಸಂಗೀತ ಸಂಯೋಜಿಸುತ್ತಿದ್ದಾರೆ. ರವಿಕುಮಾರ್ ಛಾಯಾಗ್ರಹಣ, ಲಕ್ಷ್ಮಣ್ ರೆಡ್ಡಿ ಸಂಕಲನ ಹಾಗೂ ರವಿವರ್ಮ ಅವರ ಸಾಹಸ ನಿರ್ದೇಶನವಿರುವ 'ಗೆರಿಲ್ಲಾ ವಾರ್' ಎಂಬ ಚಿತ್ರಕ್ಕೆ ದೀಪು ಪಿ.ಆರ್ ಸಂಭಾಷಣೆ ಬರೆಯುತ್ತಿದ್ದಾರೆ.

ಉಪೇಂದ್ರ ಅವರಿಗೆ ನಾಯಕಿಯಾಗಿ ನಿಮಿಕಾ ರತ್ನಾಕರ್ ನಟಿಸುತ್ತಿದ್ದಾರೆ. ರಂಗಾಯಣ ರಘು, ಸ್ವಸ್ತಿಕ್ ಶಂಕರ್, ಅಚ್ಯುತ್ ರಾವ್, ಭಾಸ್ಕರ್ ಶೆಟ್ಟಿ, ಆರಾಧ್ಯ, ಶ್ವೇತ ವೀರೇಶ್ ಮುಂತಾದವರು ತಾರಾ ಬಳಗದಲ್ಲಿದ್ದಾರೆ. ಈ ಚಿತ್ರವು ಒಂದು ರೀತಿಯ ಯುದ್ಧವಾಗಿದ್ದು, ಅಲ್ಲಿ ಒಂದು ಸಣ್ಣ ಗುಂಪು ದೊಡ್ಡ ಸಂಖ್ಯೆಯ ಶತ್ರುಗಳೊಂದಿಗೆ ವ್ಯವಹರಿಸುವಾಗ ಅಸಾಂಪ್ರದಾಯಿಕ ತಂತ್ರಗಳನ್ನು ಬಳಸುತ್ತದೆ.

# ಹೂಬಾಣದ ವೈರಲ್ ಹುಡ್ಗಿಗೆ ಬಂತು ಸಿನಿಮಾ ಆಫರ್



ಅಪಸ್ವರದಲ್ಲಿ ಹಾಡಿ ತಪ್ಪು ಮಾಡ್ದೆ ಅಂತ ಕಣ್ಣೀರಿಟ್ಟ ಕೆ.ಆರ್ ಪೇಟೆ ಹುಡುಗಿ ಬಿರುಗಾಳಿ ಸಿನಿಮಾದ ಹೂವಿನ ಬಾಣದಂತೆ ಯಾರಿಗೂ ಕಾಣದಂತೆ ಹಾಡನ್ನ ತನ್ನದೇ ದಾಟಿಯಲ್ಲಿ ಹಾಡಿ ರಾತ್ರೋರಾತ್ರಿ ಸೋಷಿಯಲ್ ಮೀಡಿಯಾದಲ್ಲಿ ಟ್ರೆಂಡ್ ಕ್ರಿಯೆಟ್ ಮಾಡಿದ ಯುವತಿ ನಿತ್ಯಶ್ರೀಗೆ ಈಗ ಸಿನಿಮಾ ಆಫರ್ ಕೂಡ ಬಂದಿದೆಯಂತೆ. ಒಂದಿಬ್ಬರು ನಿರ್ದೇಶಕರು ತಮ್ಮ ಸಿನಿಮಾದಲ್ಲಿ ನಟಿಸುವಂತೆ ಯುವತಿಯನ್ನ ಸಂಪರ್ಕಿಸಿದ್ದಾರಂತೆ. ಆದ್ರೀಗ ಒಳ್ಳೆಯ ಹಾಡನ್ನ ಅಪಸ್ವರದಲ್ಲಿ ಹಾಡಿ ತಪ್ಪು ಮಾಡಿಬಿಟ್ಟೆ ಅಂತ ಆಕೆಗೆ ಗಿಲ್ಟ್ ಕಾಡೋಕೆ ಶುರುವಾಗಿದೆ ಅಂತ ಮಾತನಾಡ್ತಾ ಕಣ್ಣೀರಿಟ್ಟಿದ್ದಾಳೆ. ಕಳೆದ ನಾಲ್ಕೈದು ದಿನಗಳಿಂದ ಸೋಷಿಯಲ್ ಮೀಡಿಯಾದ ಸೇರಿದಂತೆ ಎಲ್ಲರ ಬಾಯಲ್ಲಿ 'ಹೂವಿನ ಬಾಣದಂತೆ' ಹಾಡು ಕೇಳಿಬರುತ್ತಿದೆ. 'ಬಿರುಗಾಳಿ' ಚಿತ್ರದ ಈ ಹಾಡು ಸದ್ಯ ಸೋಶಿಯಲ್ ಮೀಡಿಯಾದಲ್ಲಿ ಸಖತ್ ಸದ್ದು ಮಾಡುತ್ತಿದೆ. ಯುವಕ, ಯುವತಿಯರಂತೂ ಈ ಹಾಡಿಗೆ ತಮ್ಮದೇ ರೀತಿಯಲ್ಲಿ ಸ್ಟೆಪ್ ಹಾಕಿ ರೀಲ್ಸ್ ಮಾಡೋಕೆ ಶುರು ಮಾಡಿದ್ದಾರೆ.



# ಮುಖವಾಡ ಹಾಕಿದ ಫ್ಯಾನ್ಸ್‌ಗೆ ಅನಿರುದ್ಧ್ ಎಚ್ಚರಿಕೆ



ವಿಷ್ಣುವರ್ಧನ್ ಅವರ 75ನೇ ಜನ್ಮದಿನಾಚರಣೆಯ ಸಮೀಪದಲ್ಲಿ ಹಲವಾರು ವಿವಾದಗಳು ಉದ್ಭವಿಸಿವೆ. ಅವರ ಸಮಾಧಿ ಸ್ಥಳದ ವಿವಾದ ಇನ್ನೂ ಬಗೆಹರಿದಿಲ್ಲ. ಸಾಮಾಜಿಕ ಜಾಲತಾಣದಲ್ಲಿ ನಕಾರಾತ್ಮಕ ಕಾಮೆಂಟ್‌ಗಳು ಕುಟುಂಬಕ್ಕೆ ಕಳವಳ ಉಂಟುಮಾಡಿವೆ. ಅನಿರುದ್ಧ್ ಅವರು ಸಾಮಾಜಿಕ ಜಾಲತಾಣದಲ್ಲಿ ನಕಾರಾತ್ಮಕ ಕಾಮೆಂಟ್‌ಗಳನ್ನು ನಿಲ್ಲಿಸುವಂತೆ ಎಚ್ಚರಿಕೆ ನೀಡಿದ್ದಾರೆ. ವಿಷ್ಣುವರ್ಧನ್ ಜನ್ಮದಿನ ಸಮೀಪಿಸುತ್ತಿದ್ದಂತೆ ಹಲವು ವಿವಾದಗಳು ಕೂಡ ಸೃಷ್ಟಿ ಆಗಿವೆ. ಈ ಮೊದಲು ಅಭಿಮಾನ್ ಸ್ಟುಡಿಯೋದಲ್ಲಿರುವ ವಿಷ್ಣು ಸಮಾಧಿಯನ್ನು ನೆಲಸಮ ಮಾಡುವ ಕೆಲಸ ಮಾಡಲಾಯಿತು. ಆ ಬಳಿಕ ವಿಷ್ಣು ಸಮಾಧಿ ಜಾಗವನ್ನು ತಮಗೆ ನೀಡುವಂತೆ ಅಭಿಮಾನಿಗಳು ಬೇಡಿಕೆ ಇಟ್ಟರೂ ಯಾವುದೇ ಪ್ರಯೋಜನ ಆಗಿಲ್ಲ. ಮತ್ತೊಂದು ಕಡೆ ಸಮಾಧಿ ಜಾಗದಲ್ಲಿ ಬರ್ತ್‌ಡೇ ಆಚರಿಸಬಾರದು ಎಂದು ಸ್ವತಃ ಕೋರ್ಟ್ ಆದೇಶ ನೀಡಿದೆ. ಹೀಗಿರುವಾಗಲೇ ಅನಿರುದ್ಧ್ ಅವರು ಒಂದು ಎಚ್ಚರಿಕೆ ನೀಡಿದ್ದಾರೆ.

'ಇತ್ತೀಚೆಗೆ ಸಾಮಾಜಿಕ ಜಾಲತಾಣದಲ್ಲಿ ನಮ್ಮ ಕುಟುಂಬದ ವಿರುದ್ಧ ನಕಾರಾತ್ಮಕ ಕಾಮೆಂಟ್‌ಗಳು ಬರುತ್ತಿವೆ. ನಾನು ಹಿಂದೆ ಕೂಡ ಅಭಿಮಾನಿಗಳ ಸಮ್ಮುಖದಲ್ಲಿ, ಮಾಧ್ಯಮದ ಎದುರು ಎಚ್ಚರಿಕೆ ನೀಡಿದ್ದೆ. ಇದೇ ತರಹದ ಕಾಮೆಂಟ್‌ಗಳು ಬರುತ್ತಿದ್ದರೆ ಅಂಥವರ ವಿರುದ್ಧ ದೂರು ದಾಖಲಿಸುತ್ತೇನೆ ಎಂದಿದ್ದೆ. ಆದರೂ ಕೂಡ ಈ ಕಾಮೆಂಟ್‌ಗಳು ನಿಲ್ಲುತ್ತಿಲ್ಲ' ಎಂದು ಅನಿರುದ್ಧ್ ಹೇಳಿದ್ದಾರೆ.

'ಸೆಪ್ಟೆಂಬರ್ 16ರಂದು ಪೊಲೀಸ್ ಠಾಣೆಯಲ್ಲಿ ದೂರು ದಾಖಲು ಮಾಡಿದ್ದೇನೆ. ಇದನ್ನು ಮತ್ತೆ ಮುಂದುವರಿಸಿದರೆ ಅಂಥವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕಾಗುತ್ತದೆ. ಇನ್ನೊಂದು ಬಾರಿ ಕೈ ಮುಗಿದು ಕಳಕಳಿಯಿಂದ ಕೇಳಿಕೊಳ್ಳುತ್ತೇನೆ. ಸಾಮಾಜಿಕ ಜಾಲತಾಣದಲ್ಲಿ, ವೇದಿಕೆ ಮೇಲೆ ಈ ರೀತಿ ಕಮೆಂಟ್ ಮಾಡಿ ಸಮಸ್ಯೆ ತಂದುಕೊಳ್ಳಬೇಡಿ' ಎಂದು ಅವರು ಕೋರಿದ್ದಾರೆ.

# ಕೊತ್ತಲವಾಡಿ ನಿರ್ಮಾಪಕರಿಗೆ ಅನ್ಯಾಯ

**ಗೊತ್ತಾಗ್ಲಿ ಅಂದೇ ಇಷ್ಟೆಲ್ಲಾ ಮಾಡಿದ್ದು**

ಕೊತ್ತಲವಾಡಿ ಚಿತ್ರದ ಕಲಾವಿದರಿಗೆ ಸಂಭಾವನೆ ನೀಡದ ವಿಚಾರ ಈಗ ವಿವಾದಕ್ಕೆ ಕಾರಣವಾಗಿದೆ. ನಿರ್ದೇಶಕರ ಮೇಲೆ ಸಹ ನಟ, ನಟಿಯರು ಆರೋಪ ಮಾಡಿದ್ದಾರೆ. ಸಹ ನಟಿ ಸ್ವರ್ಣ ಅವರಿಗೆ ಪೇಮೆಂಟ್ ಕ್ಲೀಯರ್ ಆಗಿಲ್ಲ ಎಂದು ಆಕೆಯ ತಾಯಿ ನಿರ್ದೇಶಕರ ಜೊತೆ ಮಾತನಾಡಿದ್ದ ಆಡಿಯೋ ವೈರಲ್ ಆಗಿತ್ತು. ಇದರ ಬೆನ್ನಲ್ಲೇ ಯೂಟ್ಯೂಬ್‌ನಲ್ಲಿ ಸ್ವರ್ಣ ವಿಡಿಯೋ ಮಾಡಿ ಹಲವಾರು ವಿಚಾರವನ್ನು ಬಹಿರಂಗ ಪಡಿಸಿದ್ದಾರೆ.

ವಿಡಿಯೋದಲ್ಲಿ ನಿರ್ದೇಶಕ ಶ್ರೀರಾಜ್ ಬಗ್ಗೆ ಮಾತನಾಡಿರುವ ಸ್ವರ್ಣ, ಸಿನಿಮಾದಲ್ಲಿ ಕಷ್ಟ ಪಟ್ಟು ನಟಿಸಿದ್ದೇನೆ. ಸಂಭಾವನೆಯ ಬಗ್ಗೆ ಮಾತನಾಡಿರುವಷ್ಟು ಅವರು ಹಣ ಕೊಟ್ಟಿಲ್ಲ. ಹಣವನ್ನೇ ಕೊಟ್ಟಿಲ್ಲ ಎಂದಿಲ್ಲ.

35 ಸಾವಿರ ರೂ. ಮಾತ್ರವೇ ಪೇಮೆಂಟ್ ಬಂದಿದೆ. ಅದೂ ಗೋಳಾಡಿದ ಮೇಲೆ ಬಂದಿರುವ ಹಣ. 48 ಸಾವಿರ ರೂ.ಗೆ ನಟಿಸಲು ಒಪ್ಪಿಕೊಂಡಿದ್ದೆ, ಬಾಕಿ ಇರುವ ಹಣ ಬಂದಿಲ್ಲ ಎಂದು ತಿಳಿಸಿದ್ದಾರೆ. ಯಶ್ ತಾಯಿ ನಿರ್ಮಾಪಕಿ ಎಂಬ ಕಾರಣಕ್ಕೆ ಕಲಾವಿದರು ದುರಾಸೆಗೆ ಬಿದ್ದಿದ್ದಾರೆ ಎಂದು ಶ್ರೀರಾಜ್ ಹೇಳುತ್ತಾರೆ. ನಾನು ದುರಾಸೆಗೆ ಬಿದ್ದಿದ್ರೆ ಲಕ್ಷಲಕ್ಷ ಕೇಳಬಹುದಿತ್ತು. ನಾನು ಸಿಂಗಲ್ ಪೇರೆಂಟ್ ಮಗಳು. ಮೊದಲು ಮಾತನಾಡಿದ್ದಷ್ಟು ಹಣವನ್ನಾದರೂ ಕಳುಹಿಸಿಕೊಡಿ ಎಂದಿದ್ದೇನೆ ಅಷ್ಟೇ. ಈಗ ತಾಯಿ ಮಾತನಾಡಿರುವ ವೈರಲ್ ಆಗಿರುವ ಆಡಿಯೋ ಹಳೆಯದ್ದು ಎಂದು ಸ್ವರ್ಣ ಹೇಳಿದರು. ಮುಖ್ಯವಾಗಿ ಯಶ್ ತಾಯಿ, ನಿರ್ಮಾಪಕಿ ಪುಷ್ಪ ಕುರಿತು ಮಾತನಾಡಿರುವ ಸ್ವರ್ಣ, ನಮ್ಮ ಚಿತ್ರದ ಪ್ರೊಡ್ಯೂಸರ್‌ಗೆ ಅನ್ಯಾಯವಾಗಿದೆ. ಅದು ಗೊತ್ತಾಗಲಿದ ಎಂದೇ ಇಷ್ಟೆಲ್ಲಾ ಮಾಡುತ್ತಿದ್ದೇನೆ.

# ಟೀಂ ಇಂಡಿಯಾ ನಾಯಕನನ್ನು ಹಂದಿ ಕರೆದ

**ತನ್ನದೇ ಕಾರಣ ನೀಡಿದ ಪಾಕ್ ಆಟಗಾರ**

ಏಷ್ಯಾಕಪ್ ಪಂದ್ಯದ ನಂತರ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಮೊಹಮ್ಮದ್ ಯೂಸುಫ್ ಅವರು ಸೂರ್ಯಕುಮಾರ್ ಯಾದವ್ ಅವರನ್ನು ಅವಮಾನಿಸಿದ್ದು ವಿವಾದಕ್ಕೆ ಕಾರಣವಾಗಿದೆ. ಭಾರತದ ಮೇಲೆ ಸುಳ್ಳು ಆರೋಪಗಳನ್ನು ಹೊರಿಸಿದ ಯೂಸುಫ್ ಅವರ ಹೇಳಿಕೆಗೆ ಭಾರತೀಯರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಪಾಕಿಸ್ತಾನ ಕ್ರಿಕೆಟ್ ಮಂಡಳಿಯ ವರ್ತನೆಯೂ ವಿವಾದವನ್ನು ಹೆಚ್ಚಿಸಿದೆ. ಯೂಸುಫ್ ಅವರ ಕ್ಷಮೆಯಾಚನೆಗೆ ಒತ್ತಾಯವಿದೆ. ಭಾರತ ಮತ್ತು ಪಾಕಿಸ್ತಾನ ನಡುವಿನ ಏಷ್ಯಾಕಪ್ ಪಂದ್ಯ ಮುಗಿದು ನಾಲ್ಕು ದಿನಗಳು ಕಳೆದರೂ ಈ ಪಂದ್ಯದ ವೇಳೆ ಹುಟ್ಟಿಕೊಂಡ ವಿವಾದಕ್ಕೆ ಮಾತ್ರ ಇನ್ನು ತೆರೆ ಬಿದ್ದಿಲ್ಲ. ಪಾಕಿಸ್ತಾನ ಕ್ರಿಕೆಟ್ ಮಂಡಳಿ ಇಲ್ಲಸಲ್ಲದ ಆರೋಪಗಳನ್ನು ಮಾಡುತ್ತ ವಿವಾದವನ್ನು ತಮ್ಮ ಮೈಮೇಲೆಯೇ ಎಳೆದುಕೊಳ್ಳುತ್ತಿದೆ. ಇದೆಲ್ಲದರ ಪಾಕಿಸ್ತಾನದ ಮಾಜಿ ಆಟಗಾರರು ತಮ್ಮ ನಾಲಿಗೆಯನ್ನ ಹರಿಬಿಡುವ ಮೂಲಕ ಭಾರತೀಯರ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಮೊಹಮ್ಮದ್ ಯೂಸುಫ್ ಟಿವಿ ಕಾರ್ಯಕ್ರಮವೊಂದರಲ್ಲಿ ಟೀಂ ಇಂಡಿಯಾ ನಾಯಕ ಸೂರ್ಯಕುಮಾರ್ ಯಾದವ್ ಅವರನ್ನು ಹಂದಿ ಎಂದು ಕರೆದಿದ್ದು, ಭಾರತದ ವಿರುದ್ಧವೂ ಸುಳ್ಳು ಆರೋಪಗಳನ್ನು ಹೊರಿಸಿದ್ದಾರೆ. ಭಾರತವು ಅಂಪೈರ್‌ಗಳು ಮತ್ತು ಮ್ಯಾಚ್ ರೆಫರಿಗಳನ್ನು ಬಳಸಿಕೊಂಡು ಪಾಕಿಸ್ತಾನಕ್ಕೆ ಅವಮಾನ ಮಾಡುತ್ತಿದೆ ಎಂದು ಯೂಸುಫ್ ಆರೋಪಿಸಿದ್ದಾರೆ. ನಾಲಿಗೆ ಹರಿಬಿಟ್ಟ ಮೊಹಮ್ಮದ್ ಯೂಸುಫ್ ಪಾಕಿಸ್ತಾನದ ಮಾಜಿ ಕ್ರಿಕೆಟಿಗ ಮೊಹಮ್ಮದ್ ಯೂಸುಫ್ ಟಿವಿ ಕಾರ್ಯಕ್ರಮವೊಂದರಲ್ಲಿ ಉದ್ದೇಶಪೂರ್ವಕವಾಗಿ ಸೂರ್ಯಕುಮಾರ್ ಯಾದವ್ ಅವರ ಹೆಸರನ್ನು ತಪ್ಪಾಗಿ ತೆಗೆದುಕೊಂಡು ಅವರನ್ನು ಹಂದಿ ಎಂದು ಕರೆದಿದ್ದಾರೆ. ಹಾಗೆಯೇ ಭಾರತದ ಮೇಲೂ ಆರೋಪಗಳನ್ನು ಹೊರಿಸಿರುವ ಯೂಸುಫ್, ಟೀಂ ಇಂಡಿಯಾ ಪಂದ್ಯವನ್ನು ಗೆಲ್ಲಲು ಪ್ರಯತ್ನಿಸುತ್ತಿರುವ ರೀತಿ, ಅಂಪೈರ್‌ಗಳನ್ನು ಬಳಸಿಕೊಂಡು, ಮ್ಯಾಚ್ ರೆಫರಿಗಳ ಮೂಲಕ ಪಾಕಿಸ್ತಾನಕ್ಕೆ ಅವಮಾನ ಮಾಡುತ್ತಿದೆ. ಇದಕ್ಕಾಗಿ ಭಾರತ ನಾಚಿಕೆಪಡಬೇಕು ಎಂದಿದ್ದಾರೆ. ಈ ಹೇಳಿಕೆಯ ನಂತರ ಮೊಹಮ್ಮದ್ ಯೂಸುಫ್‌ಗೆ ಭಾರತದಲ್ಲಿ ಛೀಮಾರಿ ಹಾಕಲಾಗುತ್ತಿದೆ. ಅಲ್ಲದೆ ಯೂಸುಫ್, ಸೂರ್ಯ ಅವರ ಕ್ಷಮೆಯಾಚಿಸಬೇಕು ಎಂಬ ಒತ್ತಾಯ ಹೆಚ್ಚಾಗಿದೆ. ಇದೀಗ ಕ್ಷಮೆಯಾಚಿಸುವ ಬಗ್ಗೆಯೂ ಉದ್ಧಟತನ ತೋರಿರುವ ಯೂಸುಫ್, 'ತನ್ನ ದೇಶಕ್ಕಾಗಿ ಉತ್ಸಾಹ ಮತ್ತು ಔದಾರ್ಯದಿಂದ ಆಡುವ ಯಾವುದೇ ಕ್ರೀಡಾಪಟುವಿಗೆ ಅಗೌರವ ತೋರುವ ಉದ್ದೇಶ ನನಗಿಲ್ಲ.




# 3 ಸ್ಥಾನಗಳಿಗೆ 5 ತಂಡಗಳ ಹೋರಾಟ

2025 ರ ಏಷ್ಯಾಕಪ್‌ನಲ್ಲಿ ಪ್ರತಿದಿನ ರಣರೋಚಕ ಪಂದ್ಯಗಳು ನಡೆಯುತ್ತಿವೆ. ಬಾಂಗ್ಲಾದೇಶ ತಂಡವು ಅಫ್ಘಾನಿಸ್ತಾನವನ್ನು ಸೋಲಿಸಿ ಬಿ ಗುಂಪಿನಲ್ಲಿ ಹೊರಗುಳಿಯದಂತೆ ತನ್ನನ್ನು ತಾನು ರಕ್ಷಿಸಿಕೊಂಡಿತು. ಈ ಮೂಲಕ ಏಷ್ಯಾಕಪ್‌ನಲ್ಲಿ ಇನ್ನೂ ಸೂಪರ್ 4 ರೇಸ್‌ನಲ್ಲಿ ಜೀವಂತವಾಗಿದೆ. ಅಂತಹ ಪರಿಸ್ಥಿತಿಯಲ್ಲಿ, ಇಲ್ಲಿಯವರೆಗೆ ಟೀಮ್ ಇಂಡಿಯಾ ಮಾತ್ರ ಏಷ್ಯಾಕಪ್‌ನ ಸೂಪರ್ 4 ಹಂತಕ್ಕೆ ಅರ್ಹತೆ ಪಡೆದಿದೆ. ಉಳಿದ ತಂಡಗಳ ನಿರ್ಧಾರ ಇನ್ನೂ ಅಂತಿಮವಾಗಿಲ್ಲ. ಬಿ ಗುಂಪಿನಿಂದ ಯಾರು ಸೂಪರ್ 4 ಹಂತಕ್ಕೆ ಬಾಂಗ್ಲಾದೇಶದ ಗೆಲುವಿನ ನಂತರ, ಗ್ರೂಪ್ ಬಿ ಯಿಂದ ಯಾವ ತಂಡ ಸೂಪರ್ 4 ತಲುಪಲಿದೆ ಎಂಬುದು ಇನ್ನೂ ನಿರ್ಧರಿಸಲಾಗಿಲ್ಲ. ಶ್ರೀಲಂಕಾ ತಂಡವು ತನ್ನ ಎರಡೂ ಪಂದ್ಯಗಳನ್ನು ಗೆದ್ದು ನಾಲ್ಕು ಅಂಕಗಳನ್ನು ಹೊಂದಿದೆ. ಈಗ ಶ್ರೀಲಂಕಾ ಅಫ್ಘಾನಿಸ್ತಾನವನ್ನು ಎದುರಿಸಲಿದೆ. ಬಾಂಗ್ಲಾದೇಶ ತಂಡವು ತನ್ನ ಎಲ್ಲಾ ಮೂರು ಪಂದ್ಯಗಳನ್ನು ಆಡಿದೆ ಮತ್ತು 2 ಗೆಲುವುಗಳೊಂದಿಗೆ 4 ಅಂಕಗಳನ್ನು ಹೊಂದಿದೆ. ಈಗ ಶ್ರೀಲಂಕಾ ಅಫ್ಘಾನಿಸ್ತಾನವನ್ನು ಸೋಲಿಸಿದರೆ, ಅದು ಸೂಪರ್ ಫೋರ್‌ನಲ್ಲಿ ತನ್ನ ಮತ್ತು ಬಾಂಗ್ಲಾದೇಶದ ಸ್ಥಾನವನ್ನು ಖಚಿತಪಡಿಸಿಕೊಳ್ಳುತ್ತದೆ. ಇದಕ್ಕೆ ವಿರುದ್ಧವಾಗಿ, ಶ್ರೀಲಂಕಾ ಸೋತರೆ, ಎಲ್ಲಾ ಮೂರು ತಂಡಗಳು ತಲಾ ನಾಲ್ಕು ಅಂಕಗಳನ್ನು ಹೊಂದಿರುತ್ತವೆ ಮತ್ತು ಅಗ್ರ ಎರಡು ತಂಡಗಳನ್ನು ನಿವ್ವಳ ರನ್-ರೇಟ್ ಆಧಾರದ ಮೇಲೆ ನಿರ್ಧರಿಸಲಾಗುತ್ತದೆ. ಟೀಮ್ ಇಂಡಿಯಾ ಸೂಪರ್- 4ಗೆ ಅರ್ಹತೆ ಪಡೆದಿದೆಯೇ ಗ್ರೂಪ್ ಎ ಬಗ್ಗೆ ಹೇಳುವುದಾದರೆ, ಭಾರತ ಸೂಪರ್ ಫೋರ್ ತಲುಪಿದ ಮೊದಲ ತಂಡವಾಗಿದೆ. ಟೂರ್ನಿಯಿಂದ ಹೊರಬಿದ್ದ ಮೊದಲ ತಂಡ ಓಮನ್. ಈಗ ಸೂಪರ್ ಫೋರ್ ತಲುಪಲು ಪಾಕಿಸ್ತಾನ ಮತ್ತು ಯುಎಇ ನಡುವಿನ ಪಂದ್ಯ ನಿರ್ಣಾಯಕವಾಗಲಿದೆ. ಅದೇ ಸಮಯದಲ್ಲಿ, ಗ್ರೂಪ್ ಬಿ ಯಲ್ಲಿ ಶ್ರೀಲಂಕಾ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನ ನಡುವಿನ ಪಂದ್ಯ ಆಸಕ್ತಿದಾಯಕವಾಗಲಿದೆ. ಭಾರತ ಪಾಕಿಸ್ತಾನವನ್ನು 7 ವಿಕೆಟ್‌ಗಳಿಂದ ಸೋಲಿಸಿತು.











# ರಾಹುಲ್ ಆನೆ ಉಡುಗೊರೆ!



ಟೀಮ್ ಇಂಡಿಯಾದ ಬಹುತೇಕ ಆಟಗಾರರು ದೈವಭಕ್ತರು. ಕನ್ನಡಿಗ ಕೆ.ಎಲ್.ರಾಹುಲ್ ಕೂಡ ಹೊರತಾಗಿಲ್ಲ. ಇದೀಗ ಅವರು ದೈವಭಕ್ತಿ ಮೆರೆದು ಸುದ್ದಿಯಾಗಿದ್ದಾರೆ. ಮಹಾವಿಷ್ಣುವಿನ ದೇವಸ್ಥಾನಕ್ಕೆ ಆನೆಯೊಂದನ್ನ ದೇಣಿಗೆ ನೀಡಿದ್ದಾರೆ. ಇದು ದೈವಭಕ್ತಿಯ ವಿಚಾರ ಮಾತ್ರವಲ್ಲ. ಇದ್ರ ಹಿಂದೆ ಸಾಮಾಜಿಕ ಕಳಕಳಿಯೂ ಕತೆಯೂ ಇದೆ.

ಕನ್ನಡಿಗ ಕೆ.ಎಲ್.ರಾಹುಲ್ ಮತ್ತೊಮ್ಮೆ ತನ್ನ ದೈವಭಕ್ತಿ ಮೆರೆದಿದ್ದಾರೆ. ಕೇರಳದ ಗುರುವಾಯುರ್ ಬಳಿಕ ಪುರಾತನ ಶ್ರೀ ಪದ್ಮನಾಭಪುರಂ ಮಹಾವಿಷ್ಣು ಕೀರಮ್ ದೇವಸ್ಥಾನಕ್ಕೆ ಕೆ.ಎಲ್ ರಾಹುಲ್, ಆನೆಯೊಂದನ್ನ ದೇಣಿಗೆ ನೀಡಿದ್ದಾರೆ. ಇದು ಜೀವಂತವಾದ ಆನೆಯಲ್ಲ. ಇದೊಂದು ಯಾಂತ್ರಿಕ ಆನೆ. ಪೇಟಾ ಇಂಡಿಯಾ ಸಂಸ್ಥೆಯಿದ್ಯಲ್ಲ. ಅದ್ರ ಜೊತೆಗೂಡಿ ಯಾಂತ್ರಿಕವಾದ ಆನೆಯನ್ನ ದೇವಸ್ಥಾನಕ್ಕೆ ರಾಹುಲ್ ಉಡುಗೊರೆಯಾಗಿ ನೀಡಿದ್ದಾರೆ. ಕೃಷ್ಣ ಜಯಂತಿಯಂದು ಈ ಆನೆಯನ್ನ ಉಡುಗೊರೆಯಾಗಿ ನೀಡಿದ್ದು ಇದಕ್ಕೆ ಪದ್ಮನಾಭಪುರಂ ಪದ್ಮನಾಭನ್ ಎಂದು ಹೆಸರಿಡಲಾಗಿದೆ. ದೇವರ ಮುಂದಿನ ಉತ್ಸವಗಳಲ್ಲಿ ಜೀವಂತ ಆನೆಯ ಬದಲು ಈ ಯಾಂತ್ರಿಕ ಆನೆಯನ್ನ ದೇವಸ್ಥಾನದ ಆಡಳಿತ ಮಂಡಳಿ ಬಳಸಲಿದೆ.

'ಆನೆ' ದೇಣಿಗೆ ಹಿಂದಿದೆ ಸಾಮಾಜಿಕ ಕಳಕಳಿ.! ಆನೆಯನ್ನ ದೇಣಿಗೆ ನೀಡೋ ಪೇಟಾ ನಿರ್ಧಾರಕ್ಕೆ ಕೈ ಜೋಡಿಸಿ ರಾಹುಲ್ ದೈವಭಕ್ತಿಯ ಜೊತೆಗೆ ಸಾಮಾಜಿಕ ಕಳಕಳಿ ಮೆರೆದಿದ್ದಾರೆ. ಧಾರ್ಮಿಕ ಆಚರಣೆಗಳ ವೇಳೆ ಆನೆಗಳು ಕೆರಳಿ ಭಕ್ತರು ಅಸುನೀಗಿದ, ಗಾಯಗೊಂಡ ಸಾಕಷ್ಟು ಪ್ರಕರಣಗಳು ಕೇಳದಲ್ಲಿ ಸಂಭವಿಸಿವೆ. ಇದೇ ವರ್ಷದ ಜನವರಿಯಲ್ಲಿ ಮಲಪ್ಪುರಂನ ತಿರೂರ್‌ನಲ್ಲಿ ಹಬ್ಬದ ಸಂದರ್ಭದಲ್ಲಿ ಆನೆ ದಾಳಿಗೆ ಒಬ್ಬ ಅಸುನೀಗಿದ್ರೆ, 17 ಮಂದಿ ಗಾಯಗೊಂಡಿದ್ರು. ಫೆಬ್ರವರಿಯಲ್ಲಿ 13 2025ರಲ್ಲಿ ಕುರುವಂಗಡ್‌ನ ಮಣಕುಲಂಗರನ ಭಗವತಿ ದೇವಸ್ಥಾನದ ಹಬ್ಬದ ಸಂದರ್ಭದಲ್ಲಿ ಆನೆ ದಾಳಿಗೆ ಮೂವರು ಭಕ್ತರು ಮರಣ ಹೊಂದಿದ್ರೆ, 30ಕ್ಕೂ ಹೆಚ್ಚು ಜನರಿಗೆ ಗಾಯಗೊಂಡಿದ್ರು. ಯಾಂತ್ರಿಕ ಆನೆಯನ್ನ ದೇವಸ್ಥಾನಗಳು ಬಳಸಿದ್ರೆ, ಸಾಂಸ್ಕೃತಿಕ ಆಚರಣೆಯೂ ಉಳಿಯುತ್ತೆ. ಮತ್ತು ಭಕ್ತರಿಗೂ ಯಾವುದೇ ಅಪಾಯವಿಲ್ಲ ಅನ್ನೋದು ಆನೆ ದೇಣಿಗೆ ಹಿಂದಿನ ಉದ್ದೇಶವಾಗಿದೆ.

# ಭಾರತ-ಪಾಕಿಸ್ತಾನ ಹ್ಯಾಂಡ್‌ಶೇಕ್ ವಿವಾದದಲ್ಲಿ ಹೊಸ ತಿರುವು


**ಮ್ಯಾಚ್ ರೆಫರಿ ಆಂಡಿ ಪೈಕ್ರಾಫ್ಟ್‌ಗೆ ವಿಶ್ರಾಂತಿ**

2025 ರ ಏಷ್ಯಾಕಪ್‌ನ ಆರನೇ ಪಂದ್ಯದಲ್ಲಿ ಕಳೆದ ಭಾರತ ತಂಡ ಪಾಕಿಸ್ತಾನವನ್ನು ಎದುರಿಸಿತು. ಆ ಪಂದ್ಯದಲ್ಲಿ, ಭಾರತೀಯ ತಂಡದ ಆಟಗಾರರು ಪಾಕಿಸ್ತಾನಿ ಆಟಗಾರರೊಂದಿಗೆ ಕೈಕುಲುಕಲಿಲ್ಲ. ಪಂದ್ಯ ಪ್ರಾರಂಭವಾಗುವ ಮೊದಲು ಟಾಸ್ ಸಮಯದಲ್ಲಿ ಎರಡೂ ತಂಡಗಳ ನಾಯಕರ ನಡುವೆ ಯಾವುದೇ ಹಸ್ತಲಾಘವ ಇರಲಿಲ್ಲ. ಪಂದ್ಯ ಮುಗಿದ ಬಳಿಕವೂ ಇದು ನಡೆಯಲಿಲ್ಲ. ಇದರ ನಂತರ, ಪಿಸಿಬಿ ಮ್ಯಾಚ್ ರೆಫರಿ ಆಂಡಿ ಪೈಕ್ರಾಫ್ಟ್ ಅವರನ್ನು ಏಷ್ಯಾಕಪ್‌ನಿಂದ ತೆಗೆದುಹಾಕಲು ಐಸಿಸಿಯನ್ನು ಸಂಪರ್ಕಿಸಿತು. ಆದರೆ, ಐಸಿಸಿ ಅವರ ಬೇಡಿಕೆಯನ್ನು ತಿರಸ್ಕರಿಸಿದೆ. ಯುಎಇ-ಪಾಕಿಸ್ತಾನ ಪಂದ್ಯದಲ್ಲಿ ಪೈಕ್ರಾಫ್ಟ್ ಇರುತ್ತಾರೆಯೇ ಪಾಕಿಸ್ತಾನದ ಮುಂದಿನ ಪಂದ್ಯಕ್ಕೆ ಜಿಂಬಾಬ್ವೆಯ ಆಂಡಿ ಪೈಕ್ರಾಫ್ಟ್ ಕೂಡ ರೆಫರಿ. ಪಾಕಿಸ್ತಾನದ ಮುಂದಿನ ಪಂದ್ಯ ಇಂದು ಯುಎಇ ವಿರುದ್ಧ ನಡೆಯಲಿದೆ. ಹೀಗಿರುವಾಗ ಈ ಪಂದ್ಯದಲ್ಲಿ ಪೈಕ್ರಾಫ್ಟ್ ರೆಫರಿಯ ಪಾತ್ರವನ್ನು ನಿರ್ವಹಿಸುವುದಿಲ್ಲ ಎಂಬ ವರದಿಗಳು ಬರುತ್ತಿವೆ. ಟೈಮ್ಸ್ ಆಫ್ ಇಂಡಿಯಾ ವರದಿಯನ್ನು ನಂಬುವುದಾದರೆ, ಅವರಿಗೆ ವಿಶ್ರಾಂತಿ ನೀಡಲಾಗಿದೆ. ಪಾಕಿಸ್ತಾನ ಬುಧವಾರ ನಿಗದಿಯಾಗಿದ್ದ ತನ್ನ ಪಂದ್ಯಪೂರ್ವ ಪತ್ರಿಕಾಗೋಷ್ಠಿಯನ್ನು ಸಹ ರದ್ದುಗೊಳಿಸಿದೆ. ಪಾಕಿಸ್ತಾನ ಈ ಪಂದ್ಯಾವಳಿಯಲ್ಲಿ ಆಡಲಿದೆ ಆದರೆ ಯುಎಇ ವಿರುದ್ಧದ ಪಂದ್ಯದಲ್ಲಿ ಆಂಡಿ ಪೈಕ್ರಾಫ್ಟ್ ರೆಫರಿಯಾಗಿರುವುದಿಲ್ಲ ಎಂದು ಪಿಸಿಬಿ ಮೂಲಗಳು ತಿಳಿಸಿವೆ.

ಪಾಕಿಸ್ತಾನದ ಉಳಿದ ಪಂದ್ಯಗಳಲ್ಲಿ ಪೈಕ್ರಾಫ್ಟ್ ರೆಫರಿಯಾಗುತ್ತಾರೋ ಇಲ್ಲವೋ ಎಂಬುದು ಇನ್ನೂ ಸ್ಪಷ್ಟವಾಗಿಲ್ಲ. ಪಿಸಿಬಿ ಮತ್ತು ಎಸಿಸಿ ಅಧ್ಯಕ್ಷ ಮೊಹ್ಸಿನ್ ನಖ್ವಿ ಅವರು ಎಂಸಿಸಿ ಕಾನೂನುಗಳನ್ನು ಉಲ್ಲಂಘಿಸಿದ್ದಕ್ಕಾಗಿ ಪಿಸಿಬಿ ಐಸಿಸಿಗೆ ಮ್ಯಾಚ್ ರೆಫರಿಯ ವಿರುದ್ಧ ದೂರು ದಾಖಲಿಸಿದೆ ಎಂದು ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಏಷ್ಯಾ ಕಪ್‌ನಿಂದ ಮ್ಯಾಚ್ ರೆಫರಿಯನ್ನು ತಕ್ಷಣ ತೆಗೆದುಹಾಕಬೇಕೆಂದು ಪಿಸಿಬಿ ಒತ್ತಾಯಿಸಿದೆ.

ಆದಾಗ್ಯೂ, ನಂತರ ಅವರು ಈ ಪೋಸ್ಟ್ ಅನ್ನು ತೆಗೆದುಹಾಕಿದರು. ಸೂಪರ್-4 ಹಂತಕ್ಕೆ ತಲುಪಲು ಪಾಕಿಸ್ತಾನ ಇಂದಿನ ಪಂದ್ಯ ಗೆಲ್ಲಬೇಕೇ ಐಸಿಸಿ ಅಕಾಡೆಮಿಯಲ್ಲಿ ಭಾರತ ಮತ್ತು ಪಾಕಿಸ್ತಾನ ತಂಡಗಳು ಅಭ್ಯಾಸ ನಡೆಸಿದವು. ಎರಡೂ ತಂಡಗಳ ಸಮಯ ವಿಭಿನ್ನವಾಗಿದ್ದರೂ ಸುಮಾರು ಒಂದು ಗಂಟೆ ಒಂದೇ ಸ್ಥಳದಲ್ಲಿತ್ತು. ಭಾರತ ಈಗಾಗಲೇ ಸೂಪರ್ ಫೋರ್‌ನಲ್ಲಿ ತನ್ನ ಸ್ಥಾನವನ್ನು ಖಚಿತಪಡಿಸಿದೆ.

ಮತ್ತೊಂದೆಡೆ, ಪಾಕಿಸ್ತಾನವು ಯಾವುದೇ ಬೆಲೆ ತೆತ್ತಾದರೂ ತನ್ನ ಕೊನೆಯ ಪಂದ್ಯವನ್ನು ಗೆಲ್ಲಲೇಬೇಕಾಗಿದೆ. ಯುಎಇಯನ್ನು ಸೋಲಿಸುವಲ್ಲಿ ಪಾಕ್ ಯಶಸ್ವಿಯಾದರೆ, ಮುಂದಿನ ಭಾನುವಾರ ಮತ್ತೊಮ್ಮೆ ಭಾರತ ತಂಡವನ್ನು ಎದುರಿಸಬೇಕಾಗುತ್ತದೆ.



Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966